ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 19 ಗುರುವಾರ 2024

ಸಂಪುಟ: 45 | ಸಂಚಿಕೆ: 154 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

‘ಒಂದು ದೇಶ, ಒಂದು ಚುನಾವಣೆ’
ಪ್ರಧಾನಿ ಮೋದಿ ಸಂಪುಟ ಅನುಮೋದನೆ

- ಹಣ, ಸಮಯ ಉಳಿತಾಯದ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ
- ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಉನ್ನತ ಸಮಿತಿ ಮಾರ್ಚ್‌ನಲ್ಲಿ ವರದಿ ಸಲ್ಲಿಸಿತ್ತು
- ಚಳಿಗಾಲದ ಅಧಿವೇಶನದಲ್ಲಿ ಸಂಸತ್‌ನಲ್ಲಿ ಮಸೂದೆ ಮಂಡನೆ
- ಮೊದಲ ಹಂತದಲ್ಲಿ ಲೋಕಸಭೆ, ವಿಧಾನಸಭೆ ಚುನಾವಣೆ; 100 ದಿನದ ನಂತರ ಸ್ಥಳೀಯ ಸಂಸ್ಥೆ ಚುನಾವಣೆ

ನವದೆಹಲಿ,ಸೆ.18– ಚಳಿಗಾಲದ ಅಧಿವೇಶನದಲ್ಲಿ ಮಂಡಿಸಲಿರುವ ಒನ್ ನೇಷನ್–ಒನ್ ಎಲೆಕ್ಷನ್ (ಒಂದು ರಾಷ್ಟ್ರ–ಒಂದು ಚುನಾವಣೆ) ಮಸೂದೆಗೆ ಪ್ರಧಾನಮಂತ್ರಿ ನರೇಂದ್ರ ಮೋದಿ ಅಧ್ಯಕ್ಷತೆಯ ಕೇಂದ್ರ ಸಂಪುಟ ಅನುಮೋದನೆ ನೀಡಿದೆ.

ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯು ಮಾರ್ಚ್‌ನಲ್ಲಿ ಒಂದು ರಾಷ್ಟ್ರ ಒಂದು ಚುನಾವಣೆಯ ಸಾಧ್ಯತೆಗಳ ಕುರಿತು ತನ್ನ ವರದಿಯನ್ನು ಸಲ್ಲಿಸಿತ್ತು. ಈ ವರದಿಗೆ ಈಗ ಮೋದಿ ಸಂಪುಟ ಒಪ್ಪಿಗೆ ನೀಡಿದೆ. ಈ ವರದಿಯಲ್ಲಿ ನೀಡಿರುವ ಸಲಹೆಗಳ ಪ್ರಕಾರ ಮೊದಲ ಹಂತವಾಗಿ ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲಕ್ಕೆ ಚುನಾವಣೆ ನಡೆಸಬೇಕು. ಲೋಕಸಭೆ ಮತ್ತು ರಾಜ್ಯ ವಿಧಾನಸಭೆ ಚುನಾವಣೆಗಳು ಏಕಕಾಲದಲ್ಲಿ ನಡೆದ 100 ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯನ್ನೂ ನಡೆಸಬೇಕು ಎಂದು ಸಮಿತಿ ಶಿಫಾರಸು ಮಾಡಿದೆ. ಇದರೊಂದಿಗೆ, ಎಲ್ಲಾ ಹಂತದ ಚುನಾವಣೆಗಳನ್ನು ಇಡೀ ದೇಶದಲ್ಲಿ ನಿಗದಿತ ಅವಧಿಯಲ್ಲಿ ನಡೆಸಬಹುದು. ಪ್ರಸ್ತುತ, ರಾಜ್ಯ ವಿಧಾನಸಭೆ ■ 6ನೇ ಪುಟಕ್ಕೆ



ಪ್ರಧಾನಮಂತ್ರಿ ನರೇಂದ್ರ ಮೋದಿ

‘ಒಂದು ರಾಷ್ಟ್ರ, ಒಂದು ಚುನಾವಣೆ’ ಕಾರ್ಯಸಾಧುವಲ್ಲ



ಖರ್ಗೆ

ನವದೆಹಲಿ: ‘ಒಂದು ರಾಷ್ಟ್ರ, ಒಂದು ಚುನಾವಣೆ’ ಪ್ರಾಯೋಗಿಕವಲ್ಲ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಬುಧವಾರ ಹೇಳಿದ್ದಾರೆ. ಚುನಾವಣೆ ಸಮೀಪಿಸುತ್ತಿರುವಾಗ ನೈಜ ಸಮಸ್ಯೆಗಳಿಂದ ಗಮನ ಬೇರೆಡೆ ಸೆಳೆಯಲು ಬಿಜೆಪಿ ಇಂತಹ ವಿಷಯ ಮುಂದಿಡುತ್ತಿದೆ ಎಂದು ಆರೋಪಿಸಿದ್ದಾರೆ. ‘ಒಂದು ರಾಷ್ಟ್ರ, ಒಂದು ಚುನಾವಣೆ’ ಪ್ರಸ್ತಾವನೆಗೆ ಕೇಂದ್ರ ಸಚಿವ ಸಂಪುಟ ಬುಧವಾರ ಅನುಮೋದನೆ ನೀಡಿದ ಬೆನ್ನಲ್ಲೇ ರಾಜ್ಯಸಭೆ ವಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಈ ಹೇಳಿಕೆ ನೀಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಖರ್ಗೆ, ಇದು ಕಾರ್ಯಸಾಧುವಲ್ಲ. ಚುನಾವಣೆಗಳು ಬಂದಾಗ, ಬಿಜೆಪಿಯವರು ಪ್ರಸ್ತಾಪಿಸಲು ಯಾವುದೇ ವಿಚಾರಗಳಿಲ್ಲದಿದ್ದರೆ ನೈಜ ಸಮಸ್ಯೆಗಳಿಂದ ಜನರ ಗಮನವನ್ನು ಬೇರೆಡೆಗೆ ತಿರುಗಿಸುತ್ತಾರೆ ಎಂದರು.

HSRP ನಂಬರ್ ಪ್ಲೇಟ್ ಅಳವಡಿಕೆಗೆ ನ.20ರವರೆಗೆ ಕಾಲಾವಕಾಶ

ಬೆಂಗಳೂರು, ಸೆ.18– ಹೈಕೋರ್ಟ್ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಗಡುವನ್ನು ನ.20ರವರೆಗೆ ವಿಸ್ತರಣೆ ಮಾಡಿದೆ. ರಾಜ್ಯ ಸರ್ಕಾರ ಈಗಾಗಲೇ ಎಲ್ಲ ಮೋಟಾರು ವಾಹನಗಳಿಗೆ ಹೈ ಸೆಕ್ಯುರಿಟಿ ರಿಜಿಸ್ಟ್ರೇಷನ್ ಪ್ಲೇಟ್ (ಹೆಚ್‌ಎಸ್‌ಆರ್‌ಪಿ) ಅಳವಡಿಕೆ ಮಾಡಿಸಿಕೊಳ್ಳಲು ನಾಲ್ಕು ಬಾರಿ ಗಡುವು ನೀಡಿತ್ತು. ಕೊನೆಯ ಬಾರಿ ಸೆ.14, ಈ ನಂಬರ್ ಪ್ಲೇಟ್ ಅಳವಡಿಕೆಗೆ ಕೊನೆಯ ದಿನ ಎಂದು ಗಡುವು ನೀಡಿತ್ತು. ಆದರೆ, ಈ ಬಗ್ಗೆ ಸೆ.18ರಂದು ವಿಚಾರಣೆ ಇದ್ದ ಹಿನ್ನೆಲೆಯಲ್ಲಿ ಕಳೆದ ನಾಲ್ಕು ದಿನಗಳಿಂದ ದಂಡವನ್ನು ವಿಧಿಸಿರಲಿಲ್ಲ. ಇಂದು ವಿಚಾರಣೆ ಕೈಗೆತ್ತಿಕೊಂಡ ನ್ಯಾಯಾಲಯ ವಕೀಲರ ಮನವಿ ಮೇರೆಗೆ ಹೆಚ್‌ಎಸ್‌ಆರ್‌ಪಿ ನಂಬರ್ ■ 6ನೇ ಪುಟಕ್ಕೆ

ಡ್ರಗ್ಸ್ ಮಾರಾಟ, ಕಳ್ಳ ಸಾಗಾಣೆ ದಂಧೆ ನಡೆಸುವ ಪೆಡ್ಲರ್‌ಗಳಿಗೆ
ಜೀವಾವಧಿ ಶಿಕ್ಷೆ

- ಮುಖ್ಯಮಂತ್ರಿ ಸಿದ್ದರಾಮಯ್ಯ ಖಡಕ್ ಎಚ್ಚರಿಕೆ
- ಈ ಪಿಡುಗು ನಿಯಂತ್ರಣಕ್ಕೆ ಉನ್ನತ ಸಭೆ ನಂತರ ತೀರ್ಮಾನ
- ಈ ದಂಧೆ ಹತ್ತಿಕ್ಕಲು ಪೊಲೀಸರಿಗೆ ಪೂರ್ಣ ಸ್ವಾತಂತ್ರ್ಯ
- ಪೊಲೀಸರೇ ಶಾಮೀಲಾದರೆ ಅವರ ವಿರುದ್ಧ ಕಠಿಣ ಕ್ರಮ



ಸುದ್ದಿಗೋಷ್ಠಿಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾತನಾಡಿದರು. ಗೃಹ ಸಚಿವ ಡಾ.ಜಿ.ಪರಮೇಶ್ವರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಇದ್ದಾರೆ.

ಬೆಂಗಳೂರು, ಸೆ.18(ಕೆಎಂಶಿ)– ಮಾದಕ ವಸ್ತು (ಡ್ರಗ್ಸ್) ಮಾರಾಟ ಹಾಗೂ ಕಳ್ಳ ಸಾಗಾಣಿಕೆ ದಂಧೆ ನಡೆಸುವ ಪೆಡ್ಲರ್‌ಗಳಿಗೆ ಜೀವಾವಧಿ ಶಿಕ್ಷೆ ವಿಧಿಸುವ ಕಠಿಣ ಕಾನೂನು ತರುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದಿಲ್ಲಿ ಘೋಷಿಸಿದ್ದಾರೆ.

ಈ ಸಂಬಂಧ ಅಗತ್ಯ ಬಿದ್ದರೆ ಹೊಸ ಕಾನೂನು ಇಲ್ಲವೇ, ಇರುವ ಕಾನೂನನ್ನು ಮತ್ತಷ್ಟು ಗಟ್ಟಿ ಮಾಡಿ ರಾಜ್ಯದಲ್ಲಿ ಡ್ರಗ್ಸ್ ಜಾಲದ ಬೇರುಗಳನ್ನು ಕತ್ತರಿಸುವ ತೀರ್ಮಾನ ಕೈಗೊಳ್ಳಲಾಗಿದೆ ಎಂದರು. ಮಾದಕ ವಸ್ತುಗಳ ಹಾವಳಿ ಹಾಗೂ ನಿಯಂತ್ರಣ ಕುರಿತು ಗೃಹ ಕಚೇರಿ ಕೃಷ್ಣಾದಲ್ಲಿ ಉನ್ನತ ಮಟ್ಟದ ಸಭೆ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನಮ್ಮ ಪೊಲೀಸರ ನೆರಳಿನಲ್ಲೇ ಈ ದಂಧೆ ನಡೆಯುತ್ತಿದೆ.

ಇದಕ್ಕೆ ಕಡಿವಾಣ ಹಾಕಲು ಪೊಲೀಸರನ್ನೇ ಜವಾಬ್ದಾರರನ್ನಾಗಿ ಮಾಡುವುದರ ಜೊತೆಗೆ ದಂಧೆ ನಡೆದ ಠಾಣಾ ವ್ಯಾಪ್ತಿಯ ಠಾಣಾಧಿಕಾರಿ, ಡಿವೈಎಸ್‌ಪಿ, ಎಸಿಪಿ ಮತ್ತು ಎಸ್‌ಪಿಗಳನ್ನು ಹೊಣೆ ಮಾಡಲು ತೀರ್ಮಾನಿಸಿದ್ದೇವೆ. ಇದು ಕೇವಲ ತೀರ್ಮಾನವಲ್ಲ, ಈ ದಂಧೆ ಠಾಣಾ ವ್ಯಾಪ್ತಿಯಲ್ಲಿ ನಿಲ್ಲದಿದ್ದರೆ ಇವರ ವಿರುದ್ಧವೇ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು. ಶಾಲಾ–ಕಾಲೇಜು ಮಕ್ಕಳು ಮತ್ತು ಯುವ ಜನಾಂಗ ಮಾದಕ ವ್ಯಸನಿಗಳಾಗಿ ತಾವು ಹಾಳಾಗುತ್ತಿರುವುದಲ್ಲದೆ, ತಮ್ಮ ಕುಟುಂಬವನ್ನೂ ಬಲಿ ಕೊಡುತ್ತಿದ್ದಾರೆ. ಡ್ರಗ್ಸ್ ದಂಧೆ ಕೊಲೆ, ಸುಲಿಗೆಗಳು ಮತ್ತು ಕಳ್ಳತನ ಕೃತ್ಯಗಳಿಗೆ ದಾರಿ ಮಾಡಿಕೊಡುತ್ತಿದೆ. ಇದಕ್ಕಾಗಿ ಪೊಲೀಸರಿಗೆ ಮುಕ್ತ ಸ್ವಾತಂತ್ರ್ಯ ನೀಡಿ ಅವರನ್ನೇ ಹೊಣೆಗಾರರನ್ನಾಗಿ ಮಾಡುತ್ತೇವೆ. ಡ್ರಗ್ಸ್ ಜಾಲ ಮುಗಿಸಲು ಗೃಹ ಸಚಿವ ಡಾ.ಜಿ.ಪರ ಮೇಶ್ವರ್ ಅಧ್ಯಕ್ಷತೆಯಲ್ಲಿ ಕಾರ್ಯಪಡೆ ರಚಿಸಲಾಗಿದೆ, ಆರೋಗ್ಯ ■ 6ನೇ ಪುಟಕ್ಕೆ

ಕಾರ್ಯಪಡೆ ರಚನೆ

ಬೆಂಗಳೂರು, ಸೆ.18–ರಾಜ್ಯದಲ್ಲಿ ಡ್ರಗ್ಸ್ ಪಿಡುಗನ್ನು ಹತ್ತಿಕ್ಕುವ ಸಲುವಾಗಿ ಗೃಹ ಸಚಿವ ಡಾ. ಜಿ.ಪರಮೇಶ್ವರ್ ನೇತೃತ್ವದಲ್ಲಿ ಕಾರ್ಯಪಡೆಯನ್ನು ರಚಿಸಲಾಗಿದೆ.

ಡಾ.ಪರಮೇಶ್ವರ್ ಅಧ್ಯಕ್ಷರಾಗಿದ್ದು, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಕಂದಾಯ ಸಚಿವ ಕೃಷ್ಣಭೈರೇಗೌಡ, ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ, ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ ಪ್ರಕಾಶ್, ರುದ್ರಪ್ಪ ಪಾಟೀಲ್, ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಇದರ ಸದಸ್ಯರಾಗಿದ್ದಾರೆ.

ಈ ಕಾರ್ಯಪಡೆ ತಿಂಗಳಿಗೊಮ್ಮೆ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಡ್ರಗ್ಸ್ ಪಿಡುಗು ಹತ್ತಿಕ್ಕುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲಿದೆ.

ನಂ.ಗೂಡು ತಾಲೂಕು ಇಮ್ಮಾವು ಗ್ರಾಮದಲ್ಲಿ ಚಿತ್ರನಗರಿ ನಿರ್ಮಾಣ

- ಕೆಐಎಡಿಬಿಯಿಂದ 110 ಎಕರೆ ಭೂಮಿ ವಾರ್ತಾ ಇಲಾಖೆಗೆ ಹಸ್ತಾಂತರಿಸಲು ಸಿಎಂ ಸೂಚನೆ
- ಎರಡನೇ ಹಂತದ ಯೋಜನೆಗೆ ಹೆಚ್ಚುವರಿಯಾಗಿ 50 ಎಕರೆ ಭೂಮಿ ಗುರುತಿಸಲು ಸಲಹೆ
- ಪಿಪಿಪಿ ಮಾದರಿಯಲ್ಲಿ ಯೋಜನೆ ಅನುಷ್ಠಾನಗೊಳಿಸಲು ಟ್ರಾನ್ಸಾಕ್ಷನ್ ಅಡ್ವೈಸರ್ ನೇಮಕಕ್ಕೆ ಟೆಂಡರ್

ಬೆಂಗಳೂರು, ಸೆ.18– ಮೈಸೂರು ಜಿಲ್ಲೆಯ ಇಮ್ಮಾವು ಗ್ರಾಮದಲ್ಲಿ ಚಿತ್ರನಗರಿ ನಿರ್ಮಿಸಲು ಈಗಾಗಲೇ ಗುರುತಿಸಲಾಗಿರುವ 110 ಎಕರೆ ಭೂಮಿಯನ್ನು ಕೆಐಎಡಿಬಿಯಿಂದ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಹಸ್ತಾಂತರಿಸಿ ಆದೇಶ ಹೊರಡಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಅಲ್ಲದೆ ಹೆಚ್ಚುವರಿಯಾಗಿ ಎರಡನೇ ಹಂತದ ವಿಸ್ತರಣೆಗೆ 50 ಎಕರೆ ಗುರುತಿಸುವಂತೆಯೂ ಸೂಚಿಸಿದ್ದಾರೆ.

ಮೈಸೂರು ಜಿಲ್ಲೆಯ ಇಮ್ಮಾವು ಗ್ರಾಮದಲ್ಲಿ ಚಿತ್ರನಗರಿ ನಿರ್ಮಿಸುವ ಕುರಿತು ನಡೆದ ಹಿರಿಯ ಅಧಿಕಾರಿಗಳ ಸಭೆಯಲ್ಲಿ ಮಾತನಾಡಿದ ಅವರು, ಮೊದಲ ಹಂತದ ಯೋಜನೆಯನ್ನು ಕೂಡಲೇ ಪ್ರಾರಂಭಿಸಲು ಸೂಚಿಸಿದರು. 2015–16ರಲ್ಲಿ ಆಯವ್ಯಯದಲ್ಲಿ ಈ ಯೋಜನೆಯನ್ನು ಘೋಷಣೆ ಮಾಡಲಾಗಿತ್ತು. ಆದರೆ, ಇನ್ನೂ ಅದು ಕಾರ್ಯರೂಪಕ್ಕೆ ಬಂದಿಲ್ಲ. ಇದನ್ನು ಪಿಪಿಪಿ ಮಾದರಿಯಲ್ಲಿ ಅನುಷ್ಠಾನಗೊಳಿಸಲು ಟ್ರಾನ್ಸಾಕ್ಷನ್ ಅಡ್ವೈಸರ್ ನೇಮಕ ಮಾಡಲು ಟೆಂಡರ್ ಕರೆಯುವಂತೆ ಸೂಚಿಸಿದರು. ಭೂಮಿಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಗೆ ಹಸ್ತಾಂತರ ಮಾಡಿದ ನಂತರ ಪಿಪಿಪಿ ಮಾದರಿಯಲ್ಲಿ ಎಕ್ಸ್‌ಪ್ರೆಷನ್ ಆಫ್ ಇಂಟರೆಸ್ಟ್ ಕರೆಯಲು ಕ್ರಮ ಕೈಗೊಳ್ಳಬೇಕು. ಇಂದಿನ ಚಿತ್ರರಂಗಕ್ಕೆ ಅಗತ್ಯವಿರುವ ತಂತ್ರಜ್ಞಾನಗಳನ್ನೊಳಗೊಂಡ ಅತ್ಯಾಧುನಿಕ ಮಾದರಿಯ ಚಿತ್ರನಗರಿ ನಿರ್ಮಿಸಬೇಕು, ಚಿತ್ರನಗರಿಯಲ್ಲಿ ಥಿಯೇಟರ್, ಸ್ಟುಡಿಯೋ, ಮಲ್ಟಿಪ್ಲೆಕ್ಸ್, ಥೀಮ್ ಪಾರ್ಕ್, ಹೋಟೆಲ್‌ಗಳನ್ನೂ ನಿರ್ಮಿಸಬೇಕು. ಟ್ರಾನ್ಸಾಕ್ಷನ್ ಅಡ್ವೈಸರ್ ನೇಮಕವಾದ ನಂತರ ಚಿತ್ರರಂಗದ ಪ್ರತಿನಿಧಿಗಳೊಂದಿಗೆ ಸಮಾಲೋಚನೆ ನಡೆಸಿ, ಚಿತ್ರನಗರಿಯ ರೂಪುರೇಷೆಗಳನ್ನು ಅಂತಿಮಗೊಳಿಸುವಂತೆ ಮುಖ್ಯಮಂತ್ರಿಗಳು ಸೂಚಿಸಿದರು. ಇದರಿಂದ ಪ್ರವಾಸೋದ್ಯಮಕ್ಕೂ ಹೆಚ್ಚಿನ ಉತ್ತೇಜನ ದೊರೆಯಬೇಕು. ಹೊಸ ಪ್ರವಾಸೋದ್ಯಮ ನೀತಿಯಲ್ಲಿ ಚಿತ್ರ ಪ್ರವಾಸೋದ್ಯಮಕ್ಕೆ ಒತ್ತು ನೀಡಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ.ಮಹದೇವಪ್ಪ, ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್, ಕರ್ನಾಟಕ ಚಲನಚಿತ್ರ ಅಕಾಡೆಮಿ ಅಧ್ಯಕ್ಷ ಸಾಧು ಕೋಕಿಲ, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಮುಖ್ಯಮಂತ್ರಿಯವರ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರ್ಯದರ್ಶಿ ಡಾ.ಕೆ.ವಿ.ತ್ರಿಲೋಕ್ ಚಂದ್ರ, ಆಯುಕ್ತ ಹೇಮಂತ್ ಎಂ. ನಿಂಬಾಳ್ಕರ್ ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.



ಮುಖ್ಯಮಂತ್ರಿ ಸಿದ್ದರಾಮಯ್ಯ, ಅಧಿಕಾರಿಗಳಿಂದ ಚಿತ್ರನಗರಿ ನಕ್ಷೆ ಆಧರಿಸಿ ಮಾಹಿತಿ ಪಡೆದರು. ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ ತಂಗಡಗಿ ಇದ್ದಾರೆ.

ಮುಡಾ ಆಯ್ತು... ಪಾಲಿಕೆ ಆಯ್ತು... ಈಗ ಪೊಲೀಸ್ ಇಲಾಖೆ ಸರದಿ...!
ಮೈಸೂರಿನ ಕೆಎಸ್‌ಆರ್‌ಪಿ 5ನೇ ಬೆಟಾಲಿಯನ್‌ನಲ್ಲಿ ಲಕ್ಷಾಂತರ ರೂ. ದುರ್ಬಳಕೆ
ವಿಶೇಷ ಮೀಸಲು ಹೆಡ್ ಕಾನ್‌ಸ್ಟೇಬಲ್ ಸುಪ್ರೀತ್ ಬಂಧನ; ಜಾಮೀನಿನ ಮೇಲೆ ಬಿಡುಗಡೆ

- ಸುಪ್ರೀತ್, ಎಫ್‌ಡಿಎ ಪೊನ್ನಣ್ಣ ಅಮಾನತು; ಪ್ರಕರಣದ ತನಿಖೆ ಸಿಐಡಿಗೆ ಹಸ್ತಾಂತರ
- ಕೆಎಸ್‌ಆರ್‌ಪಿ ಸಿಬ್ಬಂದಿಯ ಟಿಎ, ಡಿಎ ಹಣ ವೈಯಕ್ತಿಕ ಬ್ಯಾಂಕ್ ಖಾತೆಗೆ ಜಮಾ

ಎಸ್.ಟಿ.ರವಿಕುಮಾರ್

ಮೈಸೂರು, ಸೆ 18–ಮುಖ್ಯಮಂತ್ರಿ ಸಿದ್ದರಾಮಯ್ಯ ತವರು ಜಿಲ್ಲೆ ಮೈಸೂರಲ್ಲಿ ಹಗರಣಗಳ ಮೇಲೊಂದು ಹಗರಣ ಬೆಳಕಿಗೆ ಬರುತ್ತಿದೆ. ಸರ್ಕಾರಿ ಅಧಿಕಾರಿಗಳು, ಸಿಬ್ಬಂದಿ ಎಂತಹ ಭ್ರಷ್ಟಾಚಾರಕ್ಕೂ ನಾವ್ ರೆಡಿ ಎಂಬಂತಾಗಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ) ದಲ್ಲಿ ಸಾವಿರಾರು ನಿವೇಶನಗಳನ್ನು ನಿಯಮ ಬಾಹಿರವಾಗಿ ಮಂಜೂರು ಮಾಡಿ ಭಾರಿ ಹಗರಣ ವೆಸಗಿರುವುದು ಬೆಳಕಿಗೆ ಬರುತ್ತಿದ್ದಂತೆ, ಬೆನ್ನ ಹಿಂದೆಯೇ ನೂರಾರು ಕೋಟಿಯ ಭೂ ಹಗರಣ ಮೈಸೂರು ಮಹಾನಗರ ಪಾಲಿಕೆ (ಎಂಸಿಸಿ) ಯಲ್ಲಿ ಬಯಲಾಗಿದೆ ಇದೀಗ ಮೈಸೂರಿನ ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ), 5ನೇ ಪಡೆ (ಬೆಟಾಲಿಯನ್)ಯಲ್ಲಿ ಲಕ್ಷಾಂತರ ರೂ. ಸರ್ಕಾರಿ ಹಣ ದುರುಪಯೋಗಪಡಿಸಿಕೊಂಡಿರುವ ಪ್ರಕರಣ ಬಯಲಾಗಿದೆ.

ಮೈಸೂರಿನ ಲಲಿತ ಮಹಲ್ ರಸ್ತೆಯಲ್ಲಿರುವ ಕೆಎಸ್‌ಆರ್‌ಪಿ 5ನೇ ಪಡೆ ಕಮಾಂಡೆಂಟ್ ಕಚೇರಿಯಲ್ಲಿ ಪ್ರಥಮ ದರ್ಜೆ ಸಹಾಯಕ ಪೊನ್ನಣ್ಣ ಮತ್ತು ವಿಶೇಷ ಮೀಸಲು ಹೆಡ್‌ಕಾನ್‌ಸ್ಟೇಬಲ್–275 ಸಿ.ಆರ್.ಸುಪ್ರೀತ್ ಆಡಳಿತ ಕಚೇರಿಯ ಪ್ರಯಾಣ ಭತ್ಯೆ (ಟಿಎ) ಶಾಖೆಯಲ್ಲಿ 2020ರ ಜನವರಿ 6ರಿಂದ ವಿಷಯ ನಿರ್ವಾಹಕ (ಪೊನ್ನಣ್ಣ)ರಿಗೆ ಸಹಾಯಕರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ ಹಣ ದುರುಪಯೋಗಪಡಿಸಿಕೊಂಡು ಸಿಕ್ಕಿಬಿದ್ದಿದ್ದಾರೆ.



ಕೆಎಸ್‌ಆರ್‌ಪಿ 5ನೇ ಪಡೆ ಕಚೇರಿ

ಈ ಸಂಬಂಧ ಕಮಾಂಡೆಂಟ್ ದೊರೆಮನಿ ಭೀಮಯ್ಯ ಸೂಚನೆ ಮೇರೆಗೆ ಕೆಎಸ್‌ಆರ್‌ಪಿ ವಿಶೇಷ ಮೀಸಲು ಪೊಲೀಸ್ ಇನ್ಸ್‌ಪೆಕ್ಟರ್ ಪ್ರದೀಪ್ ನಾಯಕ್ ಸೆಪ್ಟೆಂಬರ್ 4ರಂದು ನಜರ್‌ಬಾದ್ ಠಾಣೆಗೆ ದೂರು ನೀಡಿದ್ದಾರೆ. ಸುಪ್ರೀತ್ 2020 ರಿಂದೀಚೆಗೆ ಪ್ರಯಾಣ ಭತ್ಯೆಗೆ ಸಂಬಂಧಿಸಿದ ಬಿಲ್ಲುಗಳನ್ನು ಖಜಾನೆ–2 ಮುಖಾಂತರ ಜಿಲ್ಲಾ ಖಜಾನೆಗೆ ಸಲ್ಲಿಸುವ ಸಂದರ್ಭದಲ್ಲಿ ಸಿಬ್ಬಂದಿಯ ಖಾತೆಗೆ ಜಮಾ ಮಾಡುವ ಬದಲಾಗಿ ತನ್ನ ವೈಯಕ್ತಿಕ ವೇತನ ಡ್ರಾ ಮಾಡುವ ಖಾತೆಗಳಾದ ಎಸ್‌ಬಿಐ–54057526242 ಮತ್ತು ಬ್ಯಾಂಕ್ ಆಫ್ ಬರೋಡ–74240100016133ಗಳಿಗೆ ಅನಧಿಕೃತವಾಗಿ ಜಮಾ ಮಾಡಿಕೊಂಡಿದ್ದಾರೆ ಎಂದು ಪ್ರದೀಪ್ ನಾಯಕ್ ದೂರಿನಲ್ಲಿ ತಿಳಿಸಿದ್ದಾರೆ. 2024ರ ಸೆಪ್ಟೆಂಬರ್ 4ರ ಪ್ರಾಥಮಿಕ ಪರಿಶೀಲನೆ ವೇಳೆ ಅಂದಾಜು 25 ಲಕ್ಷ ರೂ. ಹಣ ದುರುಪಯೋಗ ಮಾಡಿಕೊಂಡಿರುವುದು ಕಂಡುಬಂದಿದ್ದು, ಇನ್ನೂ ಪರಿಶೀಲನೆ ನಡೆಯುತ್ತಿದೆ. ಬ್ಯಾಂಕ್ ಸ್ಟೇಟ್‌ಮೆಂಟ್‌ಗಳನ್ನು ಪರಿಶೀಲಿಸಿದಾಗ ಸುಪ್ರೀತ್ ಬ್ಯಾಂಕ್ ಖಾತೆಗಳಿಗೆ ಟಿಎ ಹಣ ಜಮಾ ಆಗಿರುವುದು ದೃಢಪಟ್ಟಿದೆ ಎಂದು ಅವರು ದೂರಿನಲ್ಲಿ ತಿಳಿಸಿದ್ದಾರೆ.

ಕಚೇರಿಯ ಶಾಖಾಧೀಕ್ಷಕರಾದ ಹೆಚ್.ಪಿ. ಮಧುಸೂದನ್ ಈ ಸಂಬಂಧ ನೀಡಿದ ಮಾಹಿತಿಯಂತೆ ಕಮಾಂಡೆಂಟ್‌ರವರ ನಿರ್ದೇಶನದಂತೆ ಪ್ರದೀಪ್ ನಾಯಕ್ ಅವರ ಲಿಖಿತ ದೂರು ಆಧರಿಸಿ ಸೆಪ್ಟೆಂಬರ್ 4ರಂದು ನಜರ್‌ಬಾದ್ ಠಾಣೆಯಲ್ಲಿ ದಿ ಭಾರತೀಯ ನ್ಯಾಯ ಸಂಹಿತೆ 2023ರ ಕಲಂ 316(5) ರೀತ್ಯಾ ಸುಪ್ರೀತ್ ವಿರುದ್ಧ ಎಫ್‌ಐಆರ್ (ಸಂಖ್ಯೆ 0123/2024) ದಾಖಲಿಸಲಾಗಿದೆ. ಪ್ರಕರಣ ದಾಖಲಾಗುತ್ತಿದ್ದಂತೆಯೇ ■ 6ನೇ ಪುಟಕ್ಕೆ

ಮೈಸೂರು ಮಿತ್ರ

ದಸರಾ ಆಹಾರ ಮೇಳಕ್ಕೆ ಲಾಟರಿ ಮೂಲಕ ಅಂಗಡಿ ಮಳಿಗೆಗಳ ಆಯ್ಕೆ ಪ್ರಕ್ರಿಯೆಗೆ ವಿರೋಧ



ಹಳೆ ಪದ್ಧತಿಯಂತೆ ನೇರವಾಗಿ ಆಯ್ಕೆ ಮಾಡಿ, ಲಾಟರಿ, ಆನ್‌ಲೈನ್ ಮೂಲಕ ಮಳಿಗೆಗಳ ಆಯ್ಕೆ ಬೇಡ. ಎಂಟು ದಿನದ ಬದಲು ಆಹಾರ ಮೇಳವನ್ನು 15 ದಿನಕ್ಕೆ ವಿಸ್ತರಿಸಿ

ಮೈಸೂರು, ಸೆ.18(ಜಿಎ)–ಮೈಸೂರು ದಸರಾ ಮಹೋತ್ಸವದ ಆಹಾರ ಮೇಳಕ್ಕೆ ಲಾಟರಿ ಮೂಲಕ ಅಂಗಡಿ ಮಳಿಗೆಗಳ ಆಯ್ಕೆ ಪ್ರಕ್ರಿಯೆಗೆ ಮೈಸೂರು ದಸರಾ ಆಹಾರ ಮೇಳ ತಿಂಡಿ ತಿನಿಸು ಮಾರಾಟಗಾರರ ಸಂಘ ವಿರೋಧ ವ್ಯಕ್ತಪಡಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಂಘದ ಕಾರ್ಯದರ್ಶಿ ಕಂಸಾಳೆ ರವಿ ಮಾತನಾಡಿ, ಈ ಬಾರಿ ದಸರಾ ಆಹಾರ ಮೇಳದಲ್ಲಿ ಲಾಟರಿ ಮೂಲಕ ಅಂಗಡಿ ಮಳಿಗೆಗಳ ಆಯ್ಕೆ ಪ್ರಕ್ರಿಯೆ ರದ್ದುಪಡಿಸಿ ಹಳೆಯ ಪದ್ಧತಿಯನ್ನೇ ಮುಂದುವರೆಸಿ ಎಂದು ಆಗ್ರಹಿಸಿದರು.

ಲಾಟರಿ ಎತ್ತುವ ಮೂಲಕ ಆಯ್ಕೆ ಮಾಡಿದರೆ ಸ್ಥಳೀಯರಿಗೆ ಅವಕಾಶ ಸಿಗುವುದಿಲ್ಲ. ಜೊತೆಗೆ ಅವ್ಯವಸ್ಥೆಗೆ ಕಾರಣವಾಗುತ್ತದೆ. ಕಳೆದ ಬಾರಿಯೂ ಕೂಡ ಆನ್‌ಲೈನ್ ಪದ್ಧತಿಯಿಂದ ಸಾಕಷ್ಟು ಅವ್ಯವಸ್ಥೆ ಉಂಟಾಯಿತು. ಹಾಗಾಗಿ ಆನ್‌ಲೈನ್ ಮತ್ತು ಲಾಟರಿ ಎರಡೂ ಪದ್ಧತಿಯನ್ನು ರದ್ದು ಮಾಡಿ ನೇರವಾಗಿ ಹಳೆ ಪದ್ಧತಿಯಂತೆ ಆಯ್ಕೆ ಮಾಡಬೇಕು ಎಂದು ಒತ್ತಾಯಿಸಿದರು.

ಆಹಾರ ಮೇಳವನ್ನು ಕೇವಲ 8 ದಿನಕ್ಕೆ ಸೀಮಿತಗೊಳಿಸಲಾಗಿದೆ. ಇದನ್ನು 15 ದಿನಕ್ಕೆ ವಿಸ್ತರಿಸಬೇಕು. ಕಳೆದ ಬಾರಿಯಂತೆ ಆಹಾರ ಮೇಳದ ಆವರಣದಲ್ಲಿ ವೇದಿಕೆ ನಿರ್ಮಿಸಿ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಬೇಕೆಂದು ಆಗ್ರಹಿಸಿದರು.

ಕಳೆದ ವರ್ಷ ಸಸ್ಯಾಹಾರಿ ಮಳಿಗೆಗಳಿಗೆ 59 ಸಾವಿರ, ಮಾಂಸಾಹಾರಿ ಮಳಿಗೆಗಳಿಗೆ 88,500 ದುಬಾರಿ ಮೊತ್ತ ನಿಗದಿ ಮಾಡಲಾಗಿತ್ತು. ಇದರಿಂದ ಸಾಕಷ್ಟು ನಷ್ಟವುಂಟಾಗಿದೆ. ಆದ್ದರಿಂದ ಸಸ್ಯಾಹಾರಿ ಮಳಿಗೆಗೆ 25 ಸಾವಿರ ಹಾಗೂ ಮಾಂಸಾಹಾರಿ ಮಳಿಗೆಗೆ 30 ಸಾವಿರ ರೂ. ನಿಗದಿಗೊಳಿಸಬೇಕೆಂದು ಹಾಗೂ 100 ಮಳಿಗೆಗಳನ್ನು ಸ್ಕೌಟ್ಸ್ ಅಂಡ್ ಗೈಡ್ಸ್ ಮೈದಾನದಲ್ಲಿ ಮತ್ತು 75 ಮಳಿಗೆಗಳನ್ನು ಜಂಬೋ ಸರ್ಕಸ್ ನಡೆಸುವ ಸ್ಥಳದಲ್ಲಿ ನಿರ್ಮಾಣ ಮಾಡುವಂತೆ ಈಗಾಗಲೇ ಜಿಲ್ಲಾ ಉಸುವಾರಿ ಸಚಿವರಿಗೆ ಮನವಿ ಸಲ್ಲಿಸಿದ್ದು, ಅವರು ಈ ಸಂಬಂಧ ಪರಿಶೀಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆದಿದ್ದಾರೆ. ಜಿಲ್ಲಾಧಿಕಾರಿಗಳನ್ನು ನಮ್ಮ ಸಂಘ ಸದ್ಯದಲ್ಲೇ ಭೇಟಿ ಮಾಡಿ ಎಲ್ಲಾ ಸಮಸ್ಯೆಗಳನ್ನು ಗಮನಕ್ಕೆ ತರಲಾಗುತ್ತದೆ ಎಂದರು. ಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ನಾಗರಾಜು, ಉಪಾಧ್ಯಕ್ಷೆ ಶಾಂತಮ್ಮ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಈ ಬಾರಿ 'ಪ್ರವಾಸೋದ್ಯಮ–ಶಾಂತಿ' ವಿಶ್ವ ಪ್ರವಾಸೋದ್ಯಮ ದಿನದ ಸಂದೇಶ

ಪ್ರವಾಸಿಗರ ಆಕರ್ಷಿಸುವ ನಿಟ್ಟಿನಲ್ಲಿ ಅರ್ಥಪೂರ್ಣ ಆಚರಣೆ; ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ನೇತೃತ್ವದಲ್ಲಿ ಪೂರ್ವಭಾವಿ ಸಭೆ ನಿರ್ಧಾರ



ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ಅಧ್ಯಕ್ಷತೆಯಲ್ಲಿ ಬುಧವಾರ ವಿಶ್ವ ಪ್ರವಾಸೋದ್ಯಮ ದಿನದ ಪೂರ್ವಭಾವಿ ಸಭೆ ನಡೆಯಿತು.

ಮೈಸೂರು, ಸೆ.18(ಎಂಟಿವೈ)– ಪ್ರಸಕ್ತ ಸಾಲಿನ ವಿಶ್ವ ಪ್ರವಾಸೋದ್ಯಮ ದಿನವನ್ನು 'ಪ್ರವಾಸೋದ್ಯಮ ಮತ್ತು ಶಾಂತಿ' ಸಂದೇಶದೊಂದಿಗೆ ಆಚರಿಸಲು ನಿರ್ಧರಿಸಲಾಗಿದ್ದು, ಸೆ.27ರಂದು ಬೆಳಗ್ಗೆ 10 ಗಂಟೆಗೆ ಅರಮನೆ ಮುಂಭಾಗ ಅದ್ಧೂರಿ ಕಾರ್ಯಕ್ರಮ ಏರ್ಪಡಿಸಲಾಗುತ್ತಿದೆ ಎಂದು ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ತಿಳಿಸಿದ್ದಾರೆ.

ಮೈಸೂರಿನ ಪ್ರವಾಸೋದ್ಯಮ ಇಲಾಖೆ ಸಭಾಂಗಣದಲ್ಲಿ ಬುಧವಾರ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಸಂಬಂಧ ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಂಘ–ಸಂಸ್ಥೆಗಳ ಪ್ರತಿನಿಧಿಗಳೊಂದಿಗಿನ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಶಾಂತಿ ಹಾಗೂ ಭದ್ರತೆ ಇರುವ ರಾಷ್ಟ್ರಗಳಿಗೆ ಪ್ರವಾಸಿಗರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಾರೆ. ಹಾಗಾಗಿ ಸೌಹಾರ್ದತೆ ಸಂದೇಶ ಸಾರುವುದರೊಂದಿಗೆ ಸರ್ವಧರ್ಮದ ಜನರನ್ನು ಒಳಗೊಂಡಂತೆ ಕಾರ್ಯಕ್ರಮ ನಡೆಸಲು ಉದ್ದೇಶಿಸಲಾಗಿದೆ. ಅಲ್ಲದೆ, ಜಾನಪದ ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಲು ಉದ್ದೇಶಿಸಲಾಗಿದೆ ಎಂದು ತಿಳಿಸಿದರು.

ಅರಮನೆ ಮುಂಭಾಗದ ಪ್ರವಾಸೋದ್ಯಮ ದಿನದ ಕಾರ್ಯಕ್ರಮಕ್ಕೆ ಚಾಲನೆ ವೇಳೆ ಜಿಲ್ಲಾ ಉಸ್ತುವಾರಿ ಸಚಿವ ಡಾ.ಹೆಚ್.ಸಿ.ಮಹದೇವಪ್ಪ, ಪ್ರವಾಸೋದ್ಯಮ ಇಲಾಖೆ ಅಧಿಕೃತ ವೆಬ್‌ಸೈಟ್ ಅನಾವರಣಗೊಳಿಸಲಿದ್ದಾರೆ. ಬಳಿಕ ಅರಮನೆ ಮುಂಭಾಗದಿಂದ ಹೈವೆ ಸರ್ಕಲ್‌ವರೆಗೆ ಮೆರವಣಿಗೆ ನಡೆಸಲಾಗುತ್ತದೆ. ಇದರಲ್ಲಿ ದಸರಾ ಗಜಪಡೆ, ಪೊಲೀಸ್ ಬ್ಯಾಂಡ್, ನಾದಸ್ವರ, ಡೊಳ್ಳು ಕುಣಿತ, ಕಂಸಾಳೆ, ವೀರಗಾಸೆ, ಕೊಡವ ನೃತ್ಯ, ಟಿಬೇಟಿಯನ್ ನೃತ್ಯ ಹಾಗೂ ಕೇರಳದ ಚೆಂಡೆ ಮದ್ದಳೆ ಸೇರಿದಂತೆ ಇನ್ನಿತರ ಕಲಾ ತಂಡಗಳು ಪಾಲ್ಗೊಳ್ಳಲಿವೆ ಎಂದರು.

ಮೆರವಣಿಗೆಯಲ್ಲಿ ಪಾಲ್ಗೊಳ್ಳುವ ಅಧಿಕಾರಿಗಳು, ಸಂಘ–ಸಂಸ್ಥೆಗಳು, ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಶಾಂತಿಯ ಸಂಕೇತವಾದ ಬಿಳಿ ವಸ್ತ್ರವನ್ನು ಧರಿಸಬೇಕು. ಮೆರವಣಿಗೆಯಲ್ಲಿ ಭಾಗವಹಿಸುವ ಕಲಾತಂಡಗಳು ಹಾಗೂ ವಿದ್ಯಾರ್ಥಿಗಳಿಗೆ ಊಟದ ವ್ಯವಸ್ಥೆ, ಜೊತೆಗೆ ಪ್ರತಿಯೊಬ್ಬರಿಗೂ ಕುಡಿಯುವ ನೀರಿನ ವ್ಯವಸ್ಥೆಯನ್ನು ಮೆರವಣಿಗೆಯಲ್ಲಿ ಮಾಡಲಾಗಿದೆ ಎಂದು ವಿವರಿಸಿದರು.

ಸಭೆಯಲ್ಲಿ ಅರಮನೆ ಮಂಡಳಿಯ ಉಪ ನಿರ್ದೇಶಕ ಟಿ.ಎಸ್.ಸುಬ್ರಮಣ್ಯ, ಕರ್ನಾಟಕ ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಸಿಇಒ ಕೆರುದ್ರೇಶ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಪ್ರಭುಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಮೈಸೂರು ಟ್ರಾವಲ್ಸ್ ಅಸೋಸಿಯೇಶನ್‌ನ ಅಧ್ಯಕ್ಷ ಜಯಪ್ರಕಾಶ್ ರಾಜೇ ಅರಸ್, ಸ್ಕಾಲ್ ಇಂಟರ್‌ನ್ಯಾಷನಲ್ ಮೈಸೂರು ವಿಭಾಗದ ಅಧ್ಯಕ್ಷ ಬಿ.ಎಸ್.ಪ್ರಶಾಂತ್, ಟೂರಿಸ್ಟ್ ಗೈಡ್ಸ್ ಅಸೋಸಿಯೇಷನ್ ಅಧ್ಯಕ್ಷ ಎಸ್.ಜೆ.ಅಶೋಕ್, ಚಾಲಕರ ಸಂಘದ ಅಧ್ಯಕ್ಷ ನಾಗರಾಜು, ಡಿ.ದೇವರಾಜು ಅರಸು ರಸ್ತೆ ಅಂಗಡಿ ಮಾಲೀಕರ ಹಾಗೂ ಬಾಡಿಗೆದಾರರು ಸಂಘದ ಅಧ್ಯಕ್ಷ ಪ್ರಕಾಶ್ ಕೆ.ಜಿ., ಉದ್ಯಮಿ ಭರತ್ ಗೌಡ, ಅರೋಹಿ ಹೋಟೆಲ್‌ನ ಸಮರ್ಥ್ ವೈದ್ಯ ಇತರರು ಉಪಸ್ಥಿತರಿದ್ದರು.

ಟ್ಯಾಗ್ ಮಾಡಿ ಬಹುಮಾನ ಗೆಲ್ಲಿ...

ಸೆ.27ರಂದು ನಡೆಯುವ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮವನ್ನು ಉತ್ತಮವಾಗಿ ಚಿತ್ರೀಕರಿಸಿ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ರೀಲ್ಸ್ ಅಪ್ಲೋಡ್ ಮಾಡಿ, ವಿಸಿಟ್ ಮೈಸೂರು ಪೇಜ್‌ಗೆ ಟ್ಯಾಗ್ ಮಾಡಬಹುದು. ನಿಗದಿತ ಸಮಯದಲ್ಲಿ ಅತೀ ಹೆಚ್ಚು ವೀಕ್ಷಣೆ ಪಡೆದ ಒಂದು ವಿಡಿಯೋ ಹಾಗೂ ಉತ್ತಮ ಕಂಟೆಂಟ್ ಇರುವ ಒಂದು ವಿಡಿಯೋಗೆ ಅ.5ರಂದು ಅರಮನೆ ಆವರಣದ ದಸರಾ ವೇದಿಕೆಯಲ್ಲಿ ಬಹುಮಾನ ನೀಡಲಾಗುತ್ತದೆ. –ಎಂ.ಕೆ.ಸವಿತಾ

ಸೆ. 22, ಕೊಡಗು ಸಹಕಾರ ಸಂಘ ವಾರ್ಷಿಕ ಮಹಾಸಭೆ

ಮೈಸೂರು, ಸೆ.18–ಮೈಸೂರಿನ ಜಯಲಕ್ಷ್ಮೀಪುರಂನಲ್ಲಿರುವ ಕೊಡಗು ಸಹಕಾರ ಸಂಘದ 2023–24ನೇ ಸಾಲಿನ ವಾರ್ಷಿಕ ಮಹಾಸಭೆ ಸೆ.22 (ಭಾನುವಾರ)ರಂದು ಬೆಳಗ್ಗೆ 10.30ಕ್ಕೆ ಸಂಘದ ಅಧ್ಯಕ್ಷೆ ಶ್ರೀಮತಿ ಎ.ಸಿ.ನಂಜಮ್ಮನವರ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಸಂಘದ ಕಾರ್ಯನಿರ್ವಾಹಕ ನಿರ್ದೇಶಕಿ ಪೋಂಜಾಂಡ ಲವ್ಲಿ ಅಪ್ಪಯ್ಯ ತಿಳಿಸಿದ್ದಾರೆ. ಇದೇ ವೇಳೆ 2023–24ನೇ ಸಾಲಿನ ವಾರ್ಷಿಕ ಅಂತಿಮ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದು ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಬಹುಮಾನ ನೀಡಲಾಗುವುದು.

ಅರ್ಜಿ ಆಹ್ವಾನ

ಮೈಸೂರು, ಸೆ. 18 –ಮೈಸೂರಿನ ಶಾಲಿವಾಹನ ವಿವಿಧೋದ್ದೇಶ ಕೈಗಾರಿಕಾ ಸಹಕಾರ ಸಂಘದ ಸದಸ್ಯರ ಮಕ್ಕಳಿಗೆ ಪ್ರಸಕ್ತ ಸಾಲಿನ 2023–24ನೇ ಸಾಲಿನ ಎಸ್‌ಎಸ್‌ಎಲ್‌ಸಿ, ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವುದು. ವಿದ್ಯಾರ್ಥಿಗಳು ಅರ್ಜಿಯೊಂದಿಗೆ ಅಂಕಪಟ್ಟಿ ಜೆರಾಕ್ಸ್, ದೂರವಾಣಿ ಸಂಖ್ಯೆ, ಭಾವಚಿತ್ರದೊಂದಿಗೆ ಸೆ.19ರೊಳಗೆ ಕಚೇರಿಗೆ ತಲುಪಿಸುವುದು. ಹೆಚ್ಚಿನ ವಿವರಗಳಿಗೆ ದೂ.0821–2412988 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.



ಅಭಿನಂದನೆ...

ಮೈಸೂರು ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಜಿಲ್ಲಾ ವಿಶ್ವಕರ್ಮ ಸಮಾಜದ ಎಲ್ಲಾ ಸಂಘ–ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಕಲಾಮಂದಿರದ ಕಿರು ರಂಗಮಂದಿರದಲ್ಲಿ ನಡೆದ ವಿಶ್ವಕರ್ಮ ಜಯಂತಿ ಕಾರ್ಯಕ್ರಮದಲ್ಲಿ ಜಿಲ್ಲಾ ವಿಶ್ವಕರ್ಮ ಜಯಂತ್ಯುತ್ಸವ ಸಮಿತಿ ವತಿಯಿಂದ ಶಿಲ್ಪಿ ಅರುಣ್ ಯೋಗಿರಾಜ್, ಪ್ರೊ.ಸಿ.ನಾಗಣ್ಣ ಮತ್ತು ಜೀ ಕನ್ನಡ ಮಹಾನಟಿ ಶೋ ವಿಜೇತೆ ಪ್ರಿಯಾಂಕ ಅವರನ್ನು ಅಭಿನಂದಿಸಲಾಯಿತು. ಈ ವೇಳೆ ಶಾಸಕ ಕೆ.ಹರೀಶ್‌ಗೌಡ, ಜಿಲ್ಲಾ ವಿಶ್ವಕರ್ಮ ಸಂಘದ ಅಧ್ಯಕ್ಷ ರಿಷಿ ವಿಶ್ವಕರ್ಮ, ಜಿಲ್ಲಾ ಅಮರಶಿಲ್ಪಿ ವೇದಿಕೆ ಅಧ್ಯಕ್ಷ ಕೆಂಪರಾಜು, ಕಾರ್ಯದರ್ಶಿ ಮಹೇಶ್, ಬಡಿಗಿ ಸಂಘದ ಅಧ್ಯಕ್ಷ ಮೊಗಣ್ಣಾಚಾರ್, ಚಾಮುಂಡೇಶ್ವರಿ ಕ್ಷೇತ್ರದ ಜೆಡಿಎಸ್ ಉಪಾಧ್ಯಕ್ಷ ಕುಮಾರ್, ವಿಶ್ವಕರ್ಮ ಜಾಗೃತಿ ವೇದಿಕೆ ಅಧ್ಯಕ್ಷ ಕೆಂಡಗಣ್ಣ ಇತರರಿದ್ದರು.

ಡಾ.ವಿಷ್ಣುವರ್ಧನ್ ಹುಟ್ಟುಹಬ್ಬ ಆಚರಣೆ...



ಅಭಿನಯ ಭಾರ್ಗವ ಡಾ.ವಿಷ್ಣುವರ್ಧನ್ ಅವರ 74ನೇ ವರ್ಷದ ಹುಟ್ಟುಹಬ್ಬವನ್ನು ಮೈಸೂರಿನ ಲಕ್ಷ್ಮಿ ಚಿತ್ರಮಂದಿರದ ಎದುರು ವಿಷ್ಣು ಬಳಗದ ವತಿಯಿಂದ ವಿಷ್ಣು ಅಭಿಮಾನಿಗಳಿಗೆ ಸಿಹಿ ಹಂಚುವ ಮೂಲಕ ಆಚರಿಸಲಾಯಿತು. ಈ ವೇಳೆ ಬಳಗದ ಮದನ್, ಪಾಪು, ಟಿ.ಎಸ್ ಅರುಣ್, ರವಿ, ಶ್ರೀಧರ್, ಸತ್ಯ ಇನ್ನಿತರರು ಉಪಸ್ಥಿತರಿದ್ದರು.

'ಕೇದಾರನಾಥ ಕುರಿ ಫಾರಂ' ಚಿತ್ರ ರಾಜ್ಯಾದ್ಯಂತ ಸೆ.27ರಂದು ಬಿಡುಗಡೆ

ಮೈಸೂರು, ಸೆ.18 (ಜಿಎ)–ಜೆ.ಕೆ. ಮೂವೀಸ್ ಬ್ಯಾನರ್ ಅಡಿಯಲ್ಲಿ ಮೂಡಿ ಬಂದಿರುವ 'ಕೇದಾರನಾಥ ಕುರಿ ಫಾರಂ' ಚಿತ್ರವು ಸೆ.27ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಚಿತ್ರ ನಿರ್ದೇಶಕ ಶೀನು ಸಾಗರ್ ಈ ವಿಷಯ ತಿಳಿಸಿ, 'ಕೇದಾರನಾಥ ಕುರಿ ಫಾರಂ' ಚಿತ್ರವು ಗ್ರಾಮೀಣ ಸೊಗಡಿನೊಂದಿಗೆ ಹಾಸ್ಯಮಯ ಚಿತ್ರವಾಗಿದ್ದು, ಕುಟುಂಬ ಸಮೇತರಾಗಿ ಕುಳಿತು ನೋಡುವ ರೀತಿಯಲ್ಲಿ ಚಿತ್ರ ಮೂಡಿ ಬಂದಿದೆ. ಚಿತ್ರದಲ್ಲಿ ಹಿರಿಯ ಕಲಾವಿದ ಟೆನ್ನಿಸ್ ಕೃಷ್ಣ ಪ್ರಮುಖ ಪಾತ್ರ ನಿರ್ವಹಿಸಿದ್ದು, ಅವರೇ ಚಿತ್ರದ ಶಕ್ತಿಯಾಗಿದ್ದಾರೆ ಎಂದು ತಿಳಿಸಿದರು.

ಚಿತ್ರದ ನಾಯಕ ಮಡೆನೂರು ಮನು ಮಾತನಾಡಿ, ಇಷ್ಟು ದಿನ ಕಿರುತೆರೆಯ ರಿಯಾಲಿಟಿ ಶೋಗಳ ಮೂಲಕ ರಂಜಿಸಿದ್ದು, ಈಗ ಮೊಟ್ಟ ಮೊದಲ ಬಾರಿಗೆ ದೊಡ್ಡ ಪರದೆಯಲ್ಲಿ ಕಾಣಿಸಿಕೊಳ್ಳುತ್ತಿದ್ದೇನೆ. ಚಿತ್ರ ಉತ್ತಮವಾಗಿ ಮೂಡಿಬಂದಿದೆ. ಎಲ್ಲರೂ ನೋಡಿ ಪ್ರೋತ್ಸಾಹಿಸಿ ಎಂದು ಕೋರಿದರು. ಸುದ್ದಿಗೋಷ್ಠಿಯಲ್ಲಿ ಹಿರಿಯ ನಟ ಟೆನ್ನಿಸ್ ಕೃಷ್ಣ, ನಿರ್ಮಾಪಕ ಕೆ.ಎಂ.ನಾಗರಾಜ್, ನಟಿ ಶಿವಾನಿ, ರಾಜೇಶ್ ಸಾಲುಂಡಿ, ಸುನಂದಾ ಹೊಸಪೇಟೆ ಉಪಸ್ಥಿತರಿದ್ದರು.

ಮೈಸೂರಲ್ಲಿ ಸಾಹಸಸಿಂಹ ವಿಷ್ಣುವರ್ಧನ್ ಹುಟ್ಟುಹಬ್ಬ ಆಚರಣೆ



ಮೈಸೂರಿನ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಡಾ.ವಿಷ್ಣುವರ್ಧನ್‌ರ 74ನೇ ಹುಟ್ಟುಹಬ್ಬ ಆಚರಿಸಲಾಯಿತು.

ಮೈಸೂರು, ಸೆ. 18– ಸಾಹಸಸಿಂಹ ಡಾ.ವಿಷ್ಣುವರ್ಧನ್ ಬಳಗ ಹಾಗೂ ಸಂಘಗಳ ಒಕ್ಕೂಟದ ವತಿಯಿಂದ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗ ಸಾಹಸಸಿಂಹ ಡಾ.ವಿಷ್ಣುವರ್ಧನ್ 74ನೇ ಹುಟ್ಟುಹಬ್ಬ ಆಚರಿಸಲಾಯಿತು.

ಇದೇ ವೇಳೆ ಅನ್ನಸಂತರ್ಪಣೆ ಹಾಗೂ ಚಂದನ ಶ್ರೀನಿವಾಸ್ ತಂಡ ಸಾಹಸ ಸಿಂಹ ವಿಷ್ಣುವರ್ಧನ್ ಅಭಿನಯಿಸಿರುವ ಚಿತ್ರಗೀತೆ ಹಾಡುವ ಮೂಲಕ ಸ್ಮರಿಸಿ ನಮಿಸಿದರು. ಕಲಾವಿದ ಅರ್ಜುನ್ ಆರ್ಯ ವಿಷ್ಣುವರ್ಧನ್ ಅವರ ವರ್ಣ ತೈಲ ಚಿತ್ರ ಪ್ರದರ್ಶನದ ಮೂಲಕ ಗಮನ ಸೆಳೆದರು. ವಿಷ್ಣು ಸಂಘ ಒಕ್ಕೂಟದ ಅಧ್ಯಕ್ಷ ಎಂ.ಸಿ.ಪಾರ್ಥಸಾರಥಿ, ಹಿರಿಯ ಸಮಾಜ ಸೇವಕ ಕೆ.ರಘುರಾಮ್ ವಾಜಪೇಯಿ, ಗಾಂಧಿ ಚೌಕ ವಿಷ್ಣು ಅಭಿಮಾನಿ ಬಳಗದ ಅಧ್ಯಕ್ಷ ಮುಬಾರಕ್, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ರೂಪದರ್ಶಿ ರೇಣುಕಾ, ಮಹದೇವ್, ಕುಮಾರ್, ಜಬಿ, ಬಸವಣ್ಣ, ಬಿಜೆಪಿ ಮುಖಂಡ ಎಂ.ಆರ್.ಬಾಲಕೃಷ್ಣ, ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಕೆ.ಆರ್. ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಜಿ.ರಾಘವೇಂದ್ರ, ರಾಜೇಶ್ ಪಳನಿ, ರವಿಚಂದ್ರ, ಶಿವಲಿಂಗ, ಮಹಾದೇವ್, ನವೀನ್ ಮತ್ತಿತರರು ಉಪಸ್ಥಿತರಿದ್ದರು.

ವಿಷ್ಣುವರ್ಧನ್‌ಗೆ ಪದ್ಮಶ್ರೀ ಪ್ರಶಸ್ತಿ ಕಲ್ಪಿಸಿ

ಬ್ರಾಹ್ಮಣ ಸಮಾಜದ ಮುಖ್ಯಸ್ಥ ಡಿ.ಟಿ.ಪ್ರಕಾಶ್ ಮನವಿ



ಡಾ.ವಿಷ್ಣುವರ್ಧನ್ ಪ್ರತಿಮೆಗೆ ಅಭಿಮಾನಿಗಳು ಮಾಲಾರ್ಪಣೆ ಮಾಡಿದರು.

ಮೈಸೂರು, ಸೆ. 18–ದಿವಂಗತ ಡಾ.ವಿಷ್ಣುವರ್ಧನ್ ಅವರಿಗೆ ಕೇಂದ್ರ ಸರ್ಕಾರವು ಮರಣೋತ್ತರವಾಗಿ ಪದ್ಮಶ್ರೀ ಇಲ್ಲವೇ ಪದ್ಮಭೂಷಣ ಪುರಸ್ಕಾರವನ್ನು ನೀಡಬೇಕೆಂದು ಕೇಂದ್ರ ಸರ್ಕಾರಕ್ಕೆ ಮೈಸೂರು ನಗರ–ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್ ಮನವಿ ಮಾಡಿದ್ದಾರೆ. ಮೈಸೂರು ಹೊರವಲಯ ಉದ್ಬೂರ್‌ನಲ್ಲಿರುವ ಸಾಹಸ ಸಿಂಹ ವಿಷ್ಣುವರ್ಧನ್ ಸ್ಮಾರಕದಲ್ಲಿ ವಿಷ್ಣುವರ್ಧನ್ ಅಭಿಮಾನಿ ಬಳಗ ಹಾಗೂ ಜೀವಧಾರ ರಕ್ತನಿಧಿ ಕೇಂದ್ರದ ಸಹಯೋಗದೊಂದಿಗೆ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ನಂತರ 100ಕ್ಕೂ ಹೆಚ್ಚು ಅಭಿಮಾನಿಗಳು ಸ್ವಯಂಪ್ರೇರಿತ ರಕ್ತದಾನ ಮಾಡುವ ಮೂಲಕ ತಮ್ಮ ನೆಚ್ಚಿನ ನಟನ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು. ಕೆಪಿಸಿಸಿ ಸದಸ್ಯ ನಜರ್‌ಬಾದ್ ನಟರಾಜ್, ಜಿ.ರಾಘವೇಂದ್ರ, ಶ್ರೀ ದುರ್ಗಾ ಫೌಂಡೇಶನ್ ಪ್ರಧಾನ ಕಾರ್ಯದರ್ಶಿ ರೇಣುಕಾ, ಮಹದೇವ್, ಶಿವಲಿಂಗ, ಲೋಕೇಶ್, ಸಿದ್ದಪ್ಪ, ರಶ್ಮಿ, ಸುರೇಶ್, ಪ್ರಭು ಹಾಗೂ ಇನ್ನಿತರರು ಹಾಜರಿದ್ದರು.

ನಿಧನ



ಕೆ.ಎನ್.ನಾಗರಾಜನ್

ಮೈಸೂರು,ಸೆ.18–ಮೈಸೂರಿನ ಎನ್.ಆರ್.ಮೊಹಲ್ಲಾದ ಸೇಂಟ್ ಮೇರೀಸ್ ರಸ್ತೆ ನಿವಾಸಿ ಕೆ.ಎನ್.ನಾಗರಾಜನ್ (88) ಬುಧವಾರ ಬೆಳಗ್ಗೆ ನಿಧನರಾದರು. ಮೃತರು ಪತ್ನಿ, ನಾಲ್ವರು ಪುತ್ರರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಸೆ.19) ಮಧ್ಯಾಹ್ನ 12.30ಕ್ಕೆ ಬನ್ನಿಮಂಟಪದ ವೀರಶೈವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಸಿದ್ದಲಿಂಗಪ್ಪ ಬಿ. ದಾಡೇದ್



ಮೈಸೂರಿನ ವಿಜಯನಗರದ ನಿವಾಸಿ ಸಿದ್ದಲಿಂಗಪ್ಪ ಬಿ. ದಾಡೇದ್ (89) ಮಂಗಳವಾರ ನಿಧನರಾದರು. ಮೃತರು ಪುತ್ರ ಇನ್ಫೋಸಿಸ್ ಉದ್ಯೋಗಿ ಮಹಾಲಿಂಗೇಶ್ವರ ದಾಡೇದ್, ಮೂವರು ಪುತ್ರಿಯರು ಹಾಗೂ ಅಪಾರ ಬಂಧು ಮಿತ್ರರನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ವಿದ್ಯಾರಣ್ಯಪುರಂನ ವೀರಶೈವ ರುದ್ರಭೂಮಿಯಲ್ಲಿ ಮಂಗಳವಾರ ನೆರವೇರಿಸಲಾಯಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.



ಸಿ. ವಿ. ಹೇಮಂತ್

ಸೋಮವಾರಪೇಟೆಯ ಬಸವೇಶ್ವರ ರಸ್ತೆ ನಿವಾಸಿ, ಕಾಳಮ್ಮನ ಎಸ್ಟೇಟ್ ದಿವಂಗತ ಸಿ.ಸಿ.ವಿರೂಪಾಕ್ಷ ಅವರ ಪುತ್ರ ಸಿ.ವಿ.ಹೇಮಂತ್ (47) ಬೆಂಗಳೂರಿನಲ್ಲಿ ಇಂದು ನಿಧನರಾದರು. ಮೃತರು ತಾಯಿ ಪೂರ್ಣಿಮಾ ವಿರೂಪಾಕ್ಷ, ಸಹೋದರ, ಸಹೋದರಿ ಹಾಗೂ ಅಪಾರ ಬಂಧು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಸೋಮವಾರಪೇಟೆಯಲ್ಲಿ ನಡೆಯಲಿದೆ.

ವಿಜಯ ಶಂಕರನಾರಾಯಣ




ಮೈಸೂರು,ಸೆ.18– ಮೈಸೂರಿನ ಜಯಲಕ್ಷ್ಮೀಪುರಂ ನಿವಾಸಿ ವಿಜಯ ಶಂಕರನಾರಾಯಣ (82) ಬುಧವಾರ ಸಂಜೆ ನಿಧನರಾದರು. ಮೃತರು ಪತಿ ವೈ.ವಿ.ಶಂಕರನಾರಾಯಣ, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಸೆ.19ರಂದು ಬೆಳಗ್ಗೆ 10.30ಕ್ಕೆ ಚಾಮುಂಡಿಬೆಟ್ಟದ ತಪ್ಪಲಿನ ಸ್ಮಶಾನದಲ್ಲಿ ಅಂತ್ಯಕ್ರಿಯೆ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಗೌರಮ್ಮ



ಮೈಸೂರಿನ ಕೆ.ಜಿ.ಕೊಪ್ಪಲಿನ ನಿವಾಸಿ ತಮ್ಮಣ್ಣ ಅವರ ಧರ್ಮಪತ್ನಿ ಗೌರಮ್ಮ ನಿಧನರಾದರು. ಮೃತರು ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಮೊಮ್ಮಕ್ಕಳು, ಅಳಿಯಂದಿರು ಸೇರಿದಂತೆ ಅಪಾರ ಬಂದು ವರ್ಗ ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ನಾಳೆ (ಸೆ.19) ಬೆಳಗ್ಗೆ 11 ಗಂಟೆಗೆ ಕುವೆಂಪುನಗರದ ಕನ್ನೇಗೌಡ ಕೊಪ್ಪಲಿನ ರುದ್ರಭೂಮಿಯಲ್ಲಿ ನೆರವೇರಿಸಲಾಗುವುದು ಎಂದು ಮೂಲಗಳು ತಿಳಿಸಿವೆ.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

19.09.2024 ಗುರುವಾರ, ಮಳೆ ನಕ್ಷತ್ರ: ಉತ್ತರಾ, 13.09.2024ರಿಂದ 26.09.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ವರ್ಷ ಋತು, ಭಾದ್ರಪದ ಮಾಸ, ಕೃಷ್ಣ ಪಕ್ಷ,
ತಿಥಿ: ಪಾಡ್ಯ, ನಕ್ಷತ್ರ: ಉಭಾ, ರಾಹುಕಾಲ: ಮಧ್ಯಾಹ್ನ 1.30ರಿಂದ 3 ಗಂಟೆಯವರೆಗೆ

- **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಚರ್ಮದಲ್ಲಿ ಕಾಣಿಸಿಕೊಳ್ಳುವ ವಿವಿಧ ರೀತಿಯ ಗಂಟುಗಳು, ಅಪಘಾತದಿಂದ ಉಂಟಾಗುವ ಚಿಕ್ಕ ಗಾಯಗಳು, ಉಸಿರಾಟದ ಸಮಸ್ಯೆಗಳು ಮತ್ತು ಹಲ್ಲು ನೋವು, ಹುಳುಕು ಹಲ್ಲು, ಬಾಯಿಂದ ದುರ್ವಾಸನೆ, ವಸಡಿನಿಂದ ರಕ್ತಸ್ರಾವ ಮುಂತಾದ ದಂತ ಮತ್ತು ಬಾಯಿ ರೋಗಗಳಿಗೆ ಪ್ರತ್ಯೇಕ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಆಲನಹಳ್ಳಿ, ಬೆಳಗ್ಗೆ 9 ಗಂಟೆಯಿಂದ.
- **ಕಾವೇರಿ ಆಯುರ್ವೇದ ಆಸ್ಪತ್ರೆ:** ಕತ್ತು ಮತ್ತು ಭುಜದ ನೋವಿಗೆ ಉಚಿತ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ದೇವೇಗೌಡ ಸರ್ಕಲ್ ಹತ್ತಿರ, ಕೆಬಿಎಲ್ ಲೇಔಟ್, ಬೆಳಗ್ಗೆ 9 ಗಂಟೆಯಿಂದ.
- **ಅಂಬಾರಿ ಬಾಯ್ಸ್ :** 10ನೇ ವರ್ಷದ ಗಣಪತಿ ಪೂಜಾ ಮಹೋತ್ಸವ, ಬಲೂನ್ ಅಲಂಕಾರ ಮತ್ತು ಬಹುಮಾನ ವಿತರಣೆ, ಸ್ಥಳ: ಕಾಮಾಟಗೇರಿ, ನಜರ್‌ಬಾದ್.
- **ಎಚ್.ವಿ. ರಾಜೀವ್ ಸ್ನೇಹ ಬಳಗ :** ಹೆಚ್.ವಿ. ರಾಜೀವ್ ಅವರ ಹುಟ್ಟುಹಬ್ಬದ ಅಂಗವಾಗಿ ಗಿಡ ನೆಡುವ ಕಾರ್ಯಕ್ರಮ, ಉಪಸ್ಥಿತರು : ಇಳೈ ಆಳ್ವಾರ್ ಸ್ವಾಮೀಜಿ, ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್, ಕಾಂಗ್ರೆಸ್ ನಗರಾಧ್ಯಕ್ಷ ಆರ್. ಮೂರ್ತಿ, ಎಂ. ಲಕ್ಷ್ಮಣ್, ರಘುರಾಂ ವಾಜಪೇಯಿ, ಮಾಜಿ ಮೇಯರ್ ಭೈರಪ್ಪ, ಕೆ.ವಿ. ಮಲ್ಲೇಶ್, ಸ್ಥಳ: ಇಸ್ಕಾನ್ ದೇವಸ್ಥಾನದ ಎದುರು, ಜಯನಗರ, ಬೆಳಗ್ಗೆ 9.45ಕ್ಕೆ.
- **ಪ್ರೀತಿ ಕ್ಯಾನ್ಸರ್ ಸೆಂಟರ್ :** ಉಚಿತ ಕ್ಯಾನ್ಸರ್ ತಪಾಸಣಾ ಶಿಬಿರ, ಸ್ಥಳ: ಪ್ರೀತಿ ಕ್ಯಾನ್ಸರ್ ಸೆಂಟರ್, ಎಂ.ಜಿ. ರಸ್ತೆ, ಲಕ್ಷ್ಮೀಪುರಂ, ಬೆಳಗ್ಗೆ 10 ರಿಂದ.
- **ರಾಮ್‌ಸನ್ಸ್ ಪ್ರತಿಷ್ಠಾನ :** ಬೊಂಬೆ ಮನೆ, ದಸರೆಯ ಬೊಂಬೆ ಪ್ರದರ್ಶನದ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, ಆಮ್ರಪಾಲಿ ಸೀರೆ ಮಳಿಗೆಯ ಮೇಲೆ, ನಜರ್‌ಬಾದ್, ಬೆಳಗ್ಗೆ 10ರಿಂದ ಸಂಜೆ 7ರವರೆಗೆ.
- **ಪಿ.ಆರ್.ತಿಪ್ಪೇಸ್ವಾಮಿ ಪ್ರತಿಷ್ಠಾನ:** ಹಿರಿಯ ಕಲಾವಿದ ದಿವಂಗತ ಪಿ.ಆರ್.ತಿಪ್ಪೇಸ್ವಾಮಿ ಅವರ ಜನ್ಮ ಶತಮಾನೋತ್ಸವ ಸಮಾರೋಪ ಸಮಾರಂಭದ ಅಂಗವಾಗಿ ಚಿತ್ರಕಲಾ ಪ್ರದರ್ಶನ, ಸ್ಪರ್ಧೆ, ಪ್ರಾತ್ಯಕ್ಷಿಕೆ ಮತ್ತು ಪ್ರಶಸ್ತಿ ಪ್ರದಾನ ಸಮಾರಂಭ, ಲಲಿತ ಕಲಾ ಅಕಾಡೆಮಿಯಿಂದ ಚಿತ್ರಕಲಾ ಸ್ಪರ್ಧೆ, ಪ್ರಾತ್ಯಕ್ಷಿಕೆ, ಉದ್ಘಾಟನೆ : ಮೈಸೂರು ವಿಶ್ವವಿದ್ಯಾನಿಲಯ ಕುಲಪತಿ ಪ್ರೊ. ಎನ್.ಕೆ. ಲೋಕನಾಥ್, ಸ್ಥಳ: ಶ್ರೀ ಕಲಾನಿಕೇತನ ಕಲಾ ಶಾಲೆ, ವಿಜಯನಗರ 2ನೇ ಹಂತ, ಬೆಳಗ್ಗೆ 11ಕ್ಕೆ.
- **ಶ್ರೀ ರಾಮಕೃಷ್ಣ ಸೇವಾ ಸಂಘ, ರಾಮಕೃಷ್ಣ ವಿದ್ಯಾಕೇಂದ್ರ, ಆರ್‌ಕೆವಿಕೆ ಸಂಯುಕ್ತ ಪದವಿ ಪೂರ್ವ ಕಾಲೇಜು :** ಹಿಂದಿ ದಿನಾಚರಣೆ, ಅಧ್ಯಕ್ಷತೆ : ಶ್ರೀ ರಾಮಕೃಷ್ಣ ಸೇವಾ ಸಂಘದ ಅಧ್ಯಕ್ಷ ಎಂ. ಪಾಪೇಗೌಡ, ಮುಖ್ಯ ಭಾಷಣಕಾರರು : ಮಹಾಜನ ಪದವಿ ಕಾಲೇಜು ಹಿಂದಿ ವಿಭಾಗದ ಮುಖ್ಯಸ್ಥ ಪ್ರೊ. ಪರಮೇಶ್ವರ ಹೆಗಡೆ, ಉಪಸ್ಥಿತರು : ಪ್ರೊ. ಜಿ. ಚಂದ್ರಶೇಖರ್, ಜಿ.ಎನ್. ವಿಶ್ವನಾಥ್, ಸಿ. ಶಿವಪ್ಪ, ಶ್ರೀಮತಿ ವೀಣಾ ಕೆ. ಹೆಗಡೆ, ಶ್ರೀಮತಿ ಪಿ.ವಿ. ಸವಿತಾ, ಎಸ್. ಚಿದಂಬರ, ಶ್ರೀಮತಿ ಮಹಾಲಕ್ಷ್ಮಿ, ಸ್ಥಳ: ಶಾರದಾ ಸಭಾಂಗಣ, ಮಧ್ಯಾಹ್ನ 3ಕ್ಕೆ.
- **ಶ್ರೀ ರಾಮಕೃಷ್ಣ ಆಶ್ರಮ :** ಸ್ವಾಮಿ ಜ್ಞಾನಯೋಗಾನಂದ ಅವರಿಂದ ಶ್ರೀಮದ್ಭಗವದ್ಗೀತಾ ಕುರಿತು ಪ್ರವಚನ, ಸ್ಥಳ: ಸ್ವಾಮಿ ಶಾಂಭವಾನಂದಜೀ ಸ್ಮಾರಕ ಸಭಾಂಗಣ, ಸಂಜೆ 6 ರಿಂದ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಸಂವಹನ ಸಮಾಚಾರ–ಬಾನುಲಿ ಸರಣಿ, ಪ್ರಸ್ತುತಿ: ಅಲಕಾ ಕಟ್ಟೆಮನೆ, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಎ.ಎಸ್.ನಾಗಲಕ್ಷ್ಮಿ, ವ್ಯಾಖ್ಯಾನ–ಡಾ.ಲತಾ, ಮೈಸೂರು, 6.50 ರೈತರಿಗೆ ಸಲಹೆ, 7.15 ಹಸಿರುಹೊನ್ನು–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಅರಣ್ಯ ಇಲಾಖೆ, ಕರ್ನಾಟಕ ಸರ್ಕಾರ, 8.30 ಕನ್ನಡ ಚಿತ್ರಗೀತೆಗಳು, 10.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಆರ್.ವೇದವಲ್ಲಿ–ಹಾಡುಗಾರಿಕೆ, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ನೇರ ಫೋನ್ ಇನ್ ಕಾರ್ಯಕ್ರಮ–ಕಾಡಿನಲ್ಲಿನ ಕಥೆಗಳು, ಪ್ರಸ್ತುತಿ: ಜಿ.ಶಾಂತಕುಮಾರ್ **ಮಧ್ಯಾಹ್ನ:** 12.30 ದೇವರನಾಮ, 12.45 ಚಿತ್ರಗೀತೆಗಳು, 1.20 ಭಾವಗೀತೆಗಳು, 4.00 ಜನಪದ ಸಂಗೀತ, 4.30 ವಿಜ್ಞಾನ ಭಾರತಿ: ಭೌತಶಾಸ್ತ್ರದ ಅಪ್ರತಿಮ ಪ್ರತಿಭೆ ಮೇಘನಾದ್ ಶಾ–ಈ ಕುರಿತು ಮಾತನಾಡುತ್ತಾರೆ ಎನ್.ಶಂಕರ್, ಸಮಯದ ಇತಿಹಾಸ ಈ ಬಗ್ಗೆ ಮಾತನಾಡುತ್ತಾರೆ ನಿವೃತ್ತ ಭೌತಶಾಸ್ತ್ರದ ಪ್ರಾಧ್ಯಾಪಕರಾದ ಕೆ.ಎಸ್.ಮಲ್ಲೇಶ್. ಪ್ರಸ್ತುತಿ: ಜಿ.ಶಾಂತಕುಮಾರ್, 6.10 ಸಂವಹನ ಸಮಾಚಾರ–ಬಾನುಲಿ ಸರಣಿ. ಪ್ರಸ್ತುತಿ: ಅಲಕಾ ಕಟ್ಟೆಮನೆ, 6.50 ಕೃಷಿರಂಗ–ಕಿಸಾನ್‌ವಾಣಿ, ಪ್ರಾಯೋಜಕರು: ಭಾರತ ಸರ್ಕಾರದ ಕೃಷಿ ಹಾಗೂ ರೈತ ಕಲ್ಯಾಣ ಸಚಿವಾಲಯ 'ನಂ ಕಂಪನಿ' ರೈತ ಉತ್ಪಾದಕ ಸಂಸ್ಥೆಗಳ ಸಬಲೀಕರಣ ಕುರಿತ ಬಾನುಲಿ ಸರಣಿ, ರೈತ ಉತ್ಪಾದಕ ಸಂಸ್ಥೆಗಳ ಅಭಿವೃದ್ಧಿಗೆ ಕಾರ್ಯಕ್ರಮಗಳು ಹಾಗೂ ಮಾರಾಟ ಕುರಿತ ನೇರ ಫೋನ್ ಇನ್ ಕಾರ್ಯಕ್ರಮ. ಭಾಗವಹಿಸುತ್ತಾರೆ : ಮಂಡ್ಯದ ರಾಷ್ಟ್ರೀಯ ಕೃಷಿ ಹಾಗೂ ಗ್ರಾಮೀಣಾಭಿವೃದ್ಧಿ ಬ್ಯಾಂಕಿನ ಜಿಲ್ಲಾ ಅಭಿವೃದ್ಧಿ ವ್ಯವಸ್ಥಾಪಕಿ ಹರ್ಷಿತಾ ಹಾಗೂ ಗ್ರೀನ್ ಆಬ್ಜೆಕ್ಟ್ ಸಂಸ್ಥೆಯ ಪುಷ್ಪಾದೇವಿ ಹಾಗೂ ಮಂಡ್ಯದ ವಿಕಸನ ಗ್ರಾಮೀಣ ಹಾಗೂ ನಗರಾಭಿವೃದ್ಧಿ ಸಂಸ್ಥೆಯ ನಿರ್ದೇಶಕ ಮಹೇಶ್ ಚಂದ್ರಗುರು, ಪ್ರಸ್ತುತಿ: ಎನ್.ಕೇಶವಮೂರ್ತಿ, 7.45 ಕನ್ನಡದಲ್ಲಿ ಭಾಷಣ, 8.00 ಯುವವಾಣಿ–ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ಕುರಿತ ಸಾಮಾನ್ಯ ಜ್ಞಾನ ರಸಪ್ರಶ್ನೆ ಕಾರ್ಯಕ್ರಮ. ನಡೆಸಿಕೊಡುತ್ತಾರೆ: ನಿವೇದಿತಾ. ಎಚ್., 9.30 ಕನ್ನಡ ಭಾರತಿ: ಆಲೂರು ದೊಡ್ಡ ನಿಂಗಪ್ಪ ಅವರಿಂದ ಸಣ್ಣಕತೆ. ಕೆಂಪು ಬೆಲ್ಲ ಮತ್ತು ಕಟ್ಟಿರುವೆಗಳು, ರಾಜರ ಆಳ್ವಿಕೆಯಲ್ಲಿ ಕನ್ನಡದ ಬಳಕೆ. ಈ ಕುರಿತು ಮಾತನಾಡುತ್ತಾರೆ: ಆರ್.ಗಣೇಶ್, ಪ್ರಸ್ತುತಿ: ಜಿ.ಶಾಂತಕುಮಾರ್, 10.00 ನಾಟಕ–ದೇವಿ, ರಚನೆ–ಹೆಚ್.ಎಸ್.ಪಾರ್ವತಿ, ನಿರ್ದೇಶನ–ಹೆಚ್.ಎಸ್.ಸರಸ್ವತಿ, 10.30 ಸವಿನೆನಪು

ಮೈಸೂರು ಮಿತ್ರ

ಮೈಸೂರಲ್ಲಿ ಜೆಡಿಎಸ್ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ

ಸ್ಥಳೀಯ ಸಂಸ್ಥೆಗಳ ಚುನಾವಣೆ ಗೆಲ್ಲಲು ಜೆಡಿಎಸ್ ಸಂಘಟಿಸಿ

ಕಾರ್ಯಕರ್ತರಿಗೆ ಹಿರಿಯ ಶಾಸಕರೂ ಆದ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡರ ಕರೆ

ಮೈಸೂರು, ಸೆ.18(ಬಿಎಲ್‌ಯು)– ನಗರಪಾಲಿಕೆ, ಜಿಲ್ಲಾ ಪಂಚಾಯತ್ ಸೇರಿದಂತೆ ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಗೆಲುವು ಸಾಧಿಸಲು ಜೆಡಿಎಸ್ ಪಕ್ಷವನ್ನು ಮತ್ತಷ್ಟು ಬಲವಾಗಿ ಸಂಘಟನೆ ಮಾಡಬೇಕು ಎಂದು ಶಾಸಕರೂ ಆದ ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡರು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

ನಗರದ ಯಾದವಗಿರಿಯ ಕಲ್ಯಾಣ ಮಂಟಪದಲ್ಲಿ ಇಂದು ಜೆಡಿಎಸ್ ಸದಸ್ಯತ್ವ ನೋಂದಣಿ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಇವತ್ತಿನಿಂದಲೇ ಜವಾಬ್ದಾರಿ ತೆಗೆದುಕೊಂಡು ಸದಸ್ಯತ್ವ ನೋಂದಣಿ ಮಾಡಿಸಬೇಕು ಎಂದು ತಾಕೀತು ಮಾಡಿದರು. ಈ ವೇಳೆ ಮಾತನಾಡಿದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ಮುಂಬರುವ ಸ್ಥಳಿಯ ಸಂಸ್ಥೆ ಚುನಾವಣೆಯಲ್ಲಿ ಪಕ್ಷ ಅಭೂತಪೂರ್ವ ಜಯ ಸಾಧಿಸಲು ಸಜ್ಜಾಗಬೇಕು. ಈ ನಿಟ್ಟಿನಲ್ಲಿ ಕಾರ್ಯಕರ್ತರು ಹಾಗೂ ಮುಖಂಡರು ಕಾಲಿಗೆ ಚಕ್ರ ಕಟ್ಟಿಕೊಂಡು ಪಕ್ಷ ಸಂಘಟನೆ ಮಾಡಬೇಕು ಎಂದು ಸಲಹೆ ನೀಡಿದರು. ಮಾಜಿ ಪ್ರಧಾನಮಂತ್ರಿ ಹೆಚ್.ಡಿ.ದೇವೇಗೌಡರ ಸ್ಫೂರ್ತಿದಾಯಕ ಮಾತುಗಳು ನಮ್ಮೆಲ್ಲರಿಗೂ ಪ್ರೇರಣೆಯಾಗಿದೆ. ಈ ಪ್ರಾದೇಶಿಕ ಪಕ್ಷವನ್ನು ಉಳಿಸಿ–ಬೆಳೆಸಲು ನಾವೆಲ್ಲಾ ಕಂಕಣಬದ್ಧರಾಗಿ ಕೆಲಸ ಮಾಡಬೇಕು ಎಂದು ಹೇಳಿದರು. ಯಾರೂ ಮೈಮರೆಯದೆ ಪಕ್ಷ ಸಂಘಟನೆಯತ್ತ ಗಮನಹರಿಸಬೇಕು. ಈ ಮೂಲಕ ಸ್ಥಳೀಯ ಸಂಸ್ಥೆ ಚುನಾವಣೆ ಎದುರಿಸಲು ತಯಾರಾಗಬೇಕು. ಜೊತೆಗೆ ರಾಜ್ಯ ಕಾಂಗ್ರೆಸ್ ಪಕ್ಷದ ವೈಫಲ್ಯತೆಗಳನ್ನು ಕೂಡ ಜನರಿಗೆ ಮನದಟ್ಟು ಮಾಡಿಕೊಡಬೇಕು ಎಂದು ತಿಳಿಸಿದರು. ಹೆಚ್.ಡಿ.ದೇವೇಗೌಡರು ಜಾತ್ಯಾತೀತ ಹಾಗೂ ಧರ್ಮಾತೀತವಾಗಿ ಎಲ್ಲಾ ವರ್ಗದ ಜನರಿಗೆ ಕೊಡುಗೆ ನೀಡಿದ್ದಾರೆ. ಇದನ್ನು ಮನಗಂಡು ಎಲ್ಲರೂ ದೇವೇಗೌಡರ ಪಕ್ಷವನ್ನು ಬೆಂಬಲಿಸಬೇಕು ಎಂದು ನಿಖಿಲ್ ಕುಮಾರಸ್ವಾಮಿ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಸಾ.ರಾ.ಮಹೇಶ್, ಪ್ರತಿಯೊಬ್ಬ ಕಾರ್ಯಕರ್ತನೂ ಪಕ್ಷದಲ್ಲಿ ಸಕ್ರಿಯನಾಗಿರಬೇಕು. ಆಗ ಮಾತ್ರ ನಗರಪಾಲಿಕೆ, ಜಿಲ್ಲಾ ಪಂಚಾಯತ್ ಸೇರಿದಂತೆ ಸ್ಥಳಿಯ ಸಂಸ್ಥೆಗಳ ಚುನಾವಣೆಯಲ್ಲಿ ಟಿಕೆಟ್ ಪಡೆಯಲು ಸಾಧ್ಯ ಎಂದು ಹೇಳಿದರು. ಒಂದು ಬೂತ್‌ಗೆ ಕನಿಷ್ಠ 250 ಜನರನ್ನು ಸದಸ್ಯರಾಗಿ ಮಾಡಬೇಕು. ಈ ಮೂಲಕ ಪಕ್ಷಕ್ಕೆ ದುಡಿಯುವವರಿಗೆ ಸ್ಥಾನಮಾನ ದೊರೆಯುತ್ತಿದೆ. ಇದನ್ನು ಮನಗಂಡು ದಕ್ಷತೆಯಿಂದ ಕೆಲಸ ಮಾಡಿ ಎಂದು ಸಲಹೆ ನೀಡಿದರು. ಇದಕ್ಕೂ ಮೊದಲು ಮಾತನಾಡಿದ ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಪ್ರತಿಯೊಂದು ಮನೆಗೆ ಭೇಟಿ ನೀಡಿ ಸದಸ್ಯತ್ವ ನೋಂದಣಿ ಮಾಡಿಸಬೇಕು ಎಂದು ತಿಳಿಸಿದರು. ಶಾಸಕರಾದ ಜಿ.ಡಿ.ಹರೀಶ್‌ಗೌಡ, ಸಿ.ಎನ್.ಮಂಜೇಗೌಡ, ಮಾಜಿ ಶಾಸಕರಾದ ಅಶ್ವಿನ್ ಕುಮಾರ್, ಡಾ.ಅನ್ನದಾನಿ, ಕೆ.ಟಿ. ಶ್ರೀಕಂಠೇಗೌಡ, ಜೆಡಿಎಸ್ ಜಿಲ್ಲಾಧ್ಯಕ್ಷ ನರಸಿಂಹಸ್ವಾಮಿ ಸೇರಿದಂತೆ ಹಲವರು ವೇದಿಕೆಯಲ್ಲಿ ಉಪಸ್ಥಿತರಿದ್ದರು.


ಮೈಸೂರಿನ ಯಾದವಗಿರಿಯ ಖಾಸಗಿ ಕಲ್ಯಾಣ ಮಂಟಪದಲ್ಲಿ ಬುಧವಾರ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸದಸ್ಯತ್ವ ನೋಂದಣಿ ಅಭಿಯಾನಕ್ಕೆ ಚಾಲನೆ ನೀಡಿದರು. ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸುರೇಶ್ ಬಾಬು, ಶಾಸಕರಾದ ಜಿ.ಟಿ.ದೇವೇಗೌಡ, ಜಿ.ಡಿ.ಹರೀಶ್‌ಗೌಡ, ಸಿ.ಎನ್.ಮಂಜೇಗೌಡ, ಮಾಜಿ ಶಾಸಕರಾದ ಸಾ.ರಾ.ಮಹೇಶ್, ಅಶ್ವಿನ್ ಕುಮಾರ್, ಡಾ.ಅನ್ನದಾನಿ ಹಾಗೂ ಇತರರನ್ನು ಚಿತ್ರದಲ್ಲಿ ಕಾಣಬಹುದು.

ಹಗರಣಗಳ ಮುಚ್ಚಿಕೊಳ್ಳಲು ಕಾಂಗ್ರೆಸ್ ಸರ್ಕಾರವೇ ಗಲಾಟೆ ಮಾಡಿಸುತ್ತಿದೆ...!

ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪ

ಮೈಸೂರು, ಸೆ.18(ಬಿಎಲ್‌ಯು)– ಕಾಂಗ್ರೆಸ್ ಸರ್ಕಾರ ತನ್ನ ಹಗರಣಗಳನ್ನು ಮುಚ್ಚಿ ಹಾಕಲು ರಾಜ್ಯದಲ್ಲಿ ಗಲಾಟೆ ಮಾಡಿಸುತ್ತಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಆರೋಪಿಸಿದರು.

ನಗರದ ಯಾದವಗಿರಿಯ ಕಲ್ಯಾಣ ಮಂಟಪದಲ್ಲಿ ಇಂದು ನಡೆದ ಜೆಡಿಎಸ್ ಸದಸ್ಯತ್ವ ನೋಂದಣಿ ಅಭಿಯಾನ ಕಾರ್ಯಕ್ರಮಕ್ಕೂ ಮುನ್ನ ಪತ್ರಕರ್ತರ ಜೊತೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಹಾಳಾಗಿದ್ದು, ಗುಪ್ತಚರ ಇಲಾಖೆ ಸಂಪೂರ್ಣ ವಿಫಲವಾಗಿದೆ ಎಂದು ದೂರಿದರು.

ಒಂದು ಸಮುದಾಯದ ಓಲೈಕೆಗಾಗಿ ಸರ್ಕಾರ ಇನ್ನೊಂದು ಸಮುದಾಯವನ್ನು ಕೈಬಿಟ್ಟಿದೆ. ಈ ಮೂಲಕ ತುಷ್ಟೀಕರಣ ರಾಜಕಾರಣ ಮಾಡುತ್ತಿದೆ ಎಂದು ಕಿಡಿಕಾರಿದರು. ಸರ್ಕಾರ ತನ್ನ ಹಗರಣಗಳನ್ನು ಮುಚ್ಚಿಕೊಳ್ಳಲು ಇಂತಹ ಗಲಾಟೆಗಳನ್ನು ಮಾಡಿಸುತ್ತಿದೆ. ರಾಜ್ಯ ಸರ್ಕಾರ ಯಾವ ರೀತಿ ನಡೆದುಕೊಳ್ಳುತ್ತಿದೆ ಎಂದು ಮಂಡ್ಯ ಮಾತ್ರವಲ್ಲದೆ ರಾಜ್ಯದ ಪ್ರಬುದ್ಧ ಜನರು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ ಎಂದು ನಿಖಿಲ್ ಕುಮಾರಸ್ವಾಮಿ ಎಚ್ಚರಿಸಿದರು.

ಎನ್‌ಡಿಎ ಅಭ್ಯರ್ಥಿ ಸ್ಪರ್ಧೆ: ಚನ್ನಪಟ್ಟಣ ಉಪ ಚುನಾವಣೆಗೆ ಸಂಬಂಧಿಸಿದಂತೆ ಸಿ.ಪಿ.ಯೋಗೇಶ್ವರ್ ಸರಣಿ ಸಭೆಗಳನ್ನು ಮಾಡುತ್ತಿದ್ದಾರೆ. ನಾವು ಕೂಡ ಕಾರ್ಯಕರ್ತರ ಸಭೆ ನಡೆಸುತ್ತಿದ್ದೇವೆ. ಇಲ್ಲಿ ಎನ್‌ಡಿಎ ಅಭ್ಯರ್ಥಿ ಚುನಾವಣಾ ಕಣಕ್ಕಿಳಿಯಲಿದ್ದಾರೆ. ಚುನಾವಣೆಯಲ್ಲಿ ನಾನು ಸ್ಪರ್ಧೆ ಮಾಡುತ್ತೇನೊ ಅಥವಾ ಬೇರೆಯವರು ಸ್ಪರ್ಧೆ ಮಾಡುತ್ತಾರೋ ಎಂಬುವುದು ಸದ್ಯಕ್ಕೆ ಅಪ್ರಸ್ತುತ. ಇನ್ನು ಚುನಾವಣಾ ದಿನಾಂಕ ಪ್ರಕಟವಾಗದ ಕಾರಣ ಈಗಲೇ ಈ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ. ಕಾರ್ಯಕರ್ತರ ಭಾವನೆಗೆ ತಕ್ಕಂತೆ ಕೆಲಸ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಮುನಿರತ್ನ ಧ್ವನಿ ಖಚಿತತೆ ಆಗಬೇಕಿದೆ: ಮುನಿರತ್ನ ಜಾತಿ ನಿಂದನೆ ಪ್ರಕರಣ ಸಂಬಂಧ ಧ್ವನಿ ಖಚಿತತೆ ಬಗ್ಗೆ ಎಫ್‌ಎಸ್‌ಎಲ್ ವರದಿ ಬರಬೇಕಿದೆ. ಆಗ ಸತ್ಯಾಸತ್ಯತೆ ಹೊರಗೆ ಬರುತ್ತಿದೆ. ಆದರೆ ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಪ್ರಕರಣದಲ್ಲಿ ಸರ್ಕಾರ ಯಾವ ರೀತಿಯ ಧೋರಣೆ ತಳೆದಿದೆ ಎಂಬುದನ್ನು ನೋಡಿದ್ದೇವೆ. ಈ ಮೂಲಕ ರಾಜ್ಯ ಸರ್ಕಾರ ದ್ವೇಷ ರಾಜಕಾರಣ ಮಾಡುತ್ತಿದೆ ಎಂದು ದೂರಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣ ಸಂಬಂಧ ಹೈಕೋರ್ಟ್ ತೀರ್ಪು ಕಾಯ್ದಿರಿಸಿದೆ. ಹಾಗಾಗಿ ಈ ವಿಚಾರದ ಬಗ್ಗೆ ಯಾವುದೇ ಪ್ರತಿಕ್ರಿಯೆ ನೀಡುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಚನ್ನಪಟ್ಟಣ, ಶಿಗ್ಗಾವಿ ಹಾಗೂ ಸಂಡೂರು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯಲಿದೆ. ಜೊತೆಗೆ ಜಿಲ್ಲಾ ಪಂಚಾಯಿತಿ ಸೇರಿದಂತೆ ಸ್ಥಳೀಯ ಸಂಸ್ಥೆ ಚುನಾವಣೆ ನಡೆಯಲಿದ್ದು, ಇದಕ್ಕೆ ಸಜ್ಜಾಗಲು ನಾವು ಪೂರ್ವ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಎಂದು ತಿಳಿಸಿದರು.

ಪೊಲೀಸ್ ಇಲಾಖೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ.ಶಿವಕುಮಾರ್ ಕಪಿಮುಷ್ಟಿಯಲ್ಲಿದೆ

ಸಾ.ರಾ.ಮಹೇಶ್ ಆರೋಪ

ಮೈಸೂರು, ಸೆ.18(ಬಿಎಲ್‌ಯು)– ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಂಪೂರ್ಣ ಹಾಳಾಗಿದ್ದು, ಪೊಲೀಸ್ ಇಲಾಖೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕಪಿಮುಷ್ಟಿಯಲ್ಲಿದೆ ಎಂದು ಮಾಜಿ ಸಚಿವ ಸಾ.ರಾ.ಮಹೇಶ್ ಆರೋಪಿಸಿದರು.

ನಾಗಮಂಗಲ ಗಲಭೆಗೆ ಸಂಬಂಧಿಸಿದಂತೆ ಪತ್ರಕರ್ತರಿಗೆ ಪ್ರತಿಕ್ರಿಯೆ ನೀಡಿದ ಅವರು, ಗಣೇಶ ಮೂರ್ತಿಯನ್ನು ಪೊಲೀಸ್ ವಾಹನದಲ್ಲಿ ತುಂಬಿಕೊಂಡು ಹೋಗಿರುವುದು ಸರಿಯಲ್ಲ. ಇದರಲ್ಲಿ ಗೃಹ ಇಲಾಖೆ ವೈಫಲ್ಯವಿದ್ದು, ಕಾನೂನು ಸುವ್ಯವಸ್ಥೆ ಹದಗೆಟ್ಟಿರುವುದಕ್ಕೆ ಇದಕ್ಕಿಂತ ಬೇರೆ ನಿದರ್ಶನ ಬೇಕಿಲ್ಲ ಎಂದು ಆಪಾದಿಸಿದರು. ಗಲಭೆ, ಅಪರಾಧ ಚಟುವಟಿಕೆಗಳನ್ನು ರಾಜ್ಯ ಸರ್ಕಾರ ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ. ಈ ಹಿನ್ನೆಲೆಯಲ್ಲಿ ರಾಜ್ಯಪಾಲರು ಈ ಸರ್ಕಾರವನ್ನು ವಜಾ ಮಾಡಬೇಕೆಂದು ಆಗ್ರಹಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಮೈಸೂರಿನ ವಿಜಯನಗರದಲ್ಲಿ ದಲಿತರನ್ನು ಒಕ್ಕಲೆಬ್ಬಿಸಿ ಮನೆ ನಿರ್ಮಿಸಿದ್ದಾರೆಂಬ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪವನ್ನು ಸಮರ್ಥಿಸಿಕೊಂಡ ಸಾ.ರಾ.ಮಹೇಶ್, ಕುಮಾರಸ್ವಾಮಿ ಯಾವುದೇ ದಾಖಲೆ ಇಲ್ಲದೆ ಇಂತಹ ಹೇಳಿಕೆ ನೀಡುವುದಿಲ್ಲ. ದೆಹಲಿಯಿಂದ ರಾಜ್ಯಕ್ಕೆ ಬಂದ ನಂತರ ಈ ಬಗ್ಗೆ ಅವರೇ ಪ್ರತಿಕ್ರಿಯೆ ನೀಡುತ್ತಾರೆ ಎಂದು ಸಾ.ರಾ.ಮಹೇಶ್ ಸ್ಪಷ್ಟಪಡಿಸಿದರು. ಈ ಹಿಂದೆ ವಾಲ್ಮೀಕಿ ನಿಗಮದಲ್ಲೂ ಕೂಡ ಯಾವುದೇ ಅವ್ಯವಹಾರ ನಡೆದಿಲ್ಲವೆಂದು ಕಾಂಗ್ರೆಸ್ ನಾಯಕರು ಸಮರ್ಥಿಸಿಕೊಳ್ಳುತ್ತಿದ್ದರು. ಆದರೆ ಹಗರಣ ನಡೆದಿದೆ ಎಂದು ಸ್ವತಃ ಸಿದ್ದರಾಮಯ್ಯ ಅವರೇ ಒಪ್ಪಿಕೊಂಡರು. ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಮೀಸಲಿಟ್ಟ ಹಣ ದುರ್ಬಳಕೆ ಮಾಡಿಕೊಂಡಿರುವುದು ನಾಚಿಕೆಗೇಡಿನ ಸಂಗತಿ ಎಂದು ಕಿಡಿಕಾರಿದರು. ಹಣಕಾಸು ಖಾತೆ ಜವಾಬ್ದಾರಿ ಹೊತ್ತಿರುವ ಸಿದ್ದರಾಮಯ್ಯ ಅವರೇ ಇದಕ್ಕೆ ನೇರ ಹೊಣೆಗಾರರು. ಐದು ಗ್ಯಾರಂಟಿ ಗುಂಗಿನಲ್ಲಿರುವ ಸರ್ಕಾರ ಗ್ಯಾರಂಟಿ ಕೊಟ್ಟು ಏನೇ ಭ್ರಷ್ಟಾಚಾರ ನಡೆಸಿದರೂ ಜನರು ಕೇಳುವುದಿಲ್ಲವೆಂಬ ಮನಸ್ಥಿತಿಯಲ್ಲಿದೆ ಎಂದು ಟೀಕಿಸಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಜನರು ಪಾಠ ಕಲಿಸಿದ್ದಾರೆ. ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಯಲ್ಲಿಯೂ ಜನರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಲಿದ್ದಾರೆ ಎಂದು ಸಾ.ರಾ.ಮಹೇಶ್ ಎಚ್ಚರಿಸಿದರು.

ಮೆಡಿಕಲ್ ಸ್ಟೋರ್‌ಗಳಲ್ಲಿ ಸಿಂಥೆಟಿಕ್ ಡ್ರಗ್ಸ್ ಮಾರಾಟಕ್ಕೆ ಕಡಿವಾಣ

ಬೆಂಗಳೂರು: ಇತ್ತೀಚಿನ ದಿನಗಳಲ್ಲಿ ಡ್ರಗ್ಸ್ ಹಾವಳಿ ಹೆಚ್ಚಾಗಿದ್ದು, ಯುವಜನತೆಗೆ ಸುಲಭವಾಗಿ ಮಾರುಕಟ್ಟೆಗಳಲ್ಲಿ ಮಾದಕ ವಸ್ತು, ಡಗ್ಸ್ ದೊರಕುತ್ತಿದೆ ಎಂಬ ಆರೋಪ ಸಾಕಷ್ಟು ಕೇಳಿಬರುತ್ತಿದೆ. ಈ ಬಗ್ಗೆ ಪ್ರತಿಕ್ರಿಯಿಸಿರುವ ಗೃಹ ಸಚಿವ ಡಾ.ಜಿ.ಪರಮೇಶ್ವರ್, ಕರ್ನಾಟಕದಲ್ಲಿ ಡ್ರಗ್ಸ್ ದಂಧೆ ಹತ್ತಿಕ್ಕಲು ಕ್ರಮ ಕೈಗೊಳ್ಳುತ್ತೇವೆ. ಡ್ರಗ್ಸ್ ದಂಧೆ ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಕಡಿಮೆಯಾಗಿದೆ. ಆದಾಗ್ಯೂ, ಮೆಡಿಕಲ್ ಸ್ಟೋರ್‌ಗಳಲ್ಲಿ ಕೂಡ ಸಿಂಥೆಟಿಕ್ ಡ್ರಗ್ಸ್ ಸಿಗುತ್ತಿದೆ ಎಂಬ ಮಾಹಿತಿ ಬಂದಿದ್ದು, ಇದು ನಮಗೆ ಆತಂಕ ಮೂಡಿಸಿದೆ ಎಂದರು. ಇಂದು ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಅವರು, ಮೆಡಿಕಲ್ ಸ್ಟೋರ್‌ಗಳಲ್ಲಿ ಡ್ರಗ್ಸ್ ದಂಧೆಗೆ ಯಾವ ರೀತಿ ಕಡಿವಾಣ ಹಾಕಬೇಕು ಎಂಬ ಬಗ್ಗೆ ಇಂದು ಸಭೆ ನಡೆಸಿ ಚರ್ಚೆ ಮಾಡುತ್ತೇವೆ ಎಂದರು.



ಪರಮೇಶ್ವರ್

ದಸರಾ: ಈ ಬಾರಿ 130 ಕಿ.ಮೀ. ರಸ್ತೆ, 84 ವೃತ್ತ

ದೀಪಾಲಂಕಾರದಿಂದ ಜಗಮಗಿಸಲಿದೆ

- ವಿವಿಧೆಡೆ 80ಕ್ಕೂ ಹೆಚ್ಚು ಆಕೃತಿಗಳ ನಿರ್ಮಾಣ
- 6.50 ಕೋಟಿ ರೂ. ವೆಚ್ಚದ ದೀಪಾಲಂಕಾರ
- 2,42,012 ಯೂನಿಟ್ ಬಳಕೆಯ ನಿರೀಕ್ಷೆ








ದೀಪಾಲಂಕಾರ ಕಾರ್ಯದಲ್ಲಿ ತೊಡಗಿರುವ ಸಿಬ್ಬಂದಿ

■ ಎಂ.ಟಿ.ಯೋಗೇಶ್‌ಕುಮಾರ್

ಮೈಸೂರು,ಸೆ.18– ದಸರಾ ಮಹೋತ್ಸವವನ್ನು ಈ ಬಾರಿ ವಿಜೃಂಭಣೆಯಿಂದ ಆಚರಿಸಲು ನಿರ್ಧರಿಸಿರುವ ಬೆನ್ನಲ್ಲೇ ಇದೀಗ ದೀಪಾಲಂಕಾರಕ್ಕೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದ್ದು, ಸಾಂಸ್ಕೃತಿಕ ನಗರಿ ಮೈಸೂರನ್ನು ಬಣ್ಣ ಬಣ್ಣದ ಲಕ್ಷಾಂತರ ವಿದ್ಯುತ್ ದೀಪಗಳು ಜಗಮಗಿಸಿ ಬೆಳಗುವ ಮೂಲಕ ಪ್ರವಾಸಿಗರನ್ನು ಸೆಳೆದು ದಸರಾ ಮಹೋತ್ಸವಕ್ಕೆ ಕಳೆಕಟ್ಟಲಿವೆ.

ನಾಡಹಬ್ಬ ದಸರಾ ಮಹೋತ್ಸವದಲ್ಲಿ ಪ್ರಮುಖ ಆಕರ್ಷಣೀಯ ಕೇಂದ್ರಬಿಂದುವಾಗುವ ದೀಪಾಲಂಕಾರ ವೀಕ್ಷಣೆಗೆ ರಾಜ್ಯದ ವಿವಿಧೆಡೆ ಮಾತ್ರವಲ್ಲದೆ ಹೊರರಾಜ್ಯಗಳಿಂದಲೂ ಪ್ರವಾಸಿಗರು ಬಂದು ವೀಕ್ಷಣೆ ಮಾಡಲು ಮುಗಿಬೀಳಲಿದ್ದು, ಈ ಬಾರಿಯೂ ದೀಪಾಲಂಕಾರ ಆಕರ್ಷಣೀಯ ಕೇಂದ್ರ ಬಿಂದುವಾಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಈಗಾಗಲೇ ದಸರಾ ಮಹೋತ್ಸವವನ್ನು ಅದ್ಧೂರಿಯಾಗಿ ನಡೆಸುವಂತೆ ಸೂಚನೆ ನೀಡಿದ್ದು, ಎಲ್ಲಿಯೂ ಲೋಪವಾಗದಂತೆ ಸಿದ್ಧತಾ ಕಾರ್ಯ ನಡೆಸುವಂತೆ ಆದೇಶಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಈ ಬಾರಿ ದೀಪಾಲಂಕಾರವನ್ನು ಮತ್ತಷ್ಟು ವರ್ಣರಂಜಿತವಾಗಿ ಆಯೋಜಿಸಲು ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಕ್ರಮ ಕೈಗೊಂಡಿದೆ.

ಬೆಳಗಲಿದೆ ಮೈಸೂರು: ದಸರಾ ಹಿನ್ನೆಲೆಯಲ್ಲಿ ನವರಾತ್ರಿ ವೇಳೆ ಸಾಂಸ್ಕೃತಿಕ ನಗರಿ ಮೈಸೂರು ಬೆಳಕಿನಲ್ಲಿ ಮಿಂದೇಳಲಿದೆ. ಈ ಬಾರಿ ಮೈಸೂರು ನಗರ ವ್ಯಾಪ್ತಿಯೊಳಗೆ 130ರಿಂದ 140 ಕಿ.ಮೀ. ರಸ್ತೆಗೆ ದೀಪಾಲಂಕಾರ ಮಾಡಲು ನಿರ್ಧರಿಸಲಾಗಿದೆ. ಇದರೊಂದಿಗೆ ಪ್ರಮುಖ ವೃತ್ತಗಳೂ ಒಳಗೊಂಡಂತೆ 84ರಿಂದ 100 ವೃತ್ತಗಳಿಗೂ ಕಣ್ಮನ ಸೆಳೆಯುವ ದೀಪಾಲಂಕಾರ ಮಾಡಲಾಗುತ್ತದೆ. ದೊಡ್ಡಕೆರೆ ಮೈದಾನ, ಕೆ.ಆರ್.ವೃತ್ತ, ಚಾಮರಾಜವೃತ್ತ, ಜಯಚಾಮರಾಜ ವೃತ್ತ(ಹಾರ್ಡಿಂಜ್), ರಾಮಸ್ವಾಮಿ ವೃತ್ತ, ರೈಲ್ವೆ ನಿಲ್ದಾಣ ಸಮೀಪ, ಗನ್‌ಹೌಸ್, ಎಲ್‌ಐಸಿ ವೃತ್ತ ಸೇರಿದಂತೆ ವಿವಿಧೆಡೆ ವಿದ್ಯುತ್ ದೀಪಗಳಿಂದಲೇ ಮಾಡಿರುವ 64 ರಿಂದ 80ಕ್ಕೂ ಹೆಚ್ಚು ಆಕೃತಿಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ.

ಸರ್ಕಾರಿ ಕಟ್ಟಡಗಳಿಗೂ ದೀಪಾಲಂಕಾರ: ಒಂದೆಡೆ ಮೈಸೂರಿನ ರಸ್ತೆಗಳು ಜಗಮಗಿಸಲಿದ್ದರೆ, ಸರ್ಕಾರಿ ಕಟ್ಟಡಗಳು ಬಣ್ಣ ಬಣ್ಣದ ವಿದ್ಯುತ್ ದೀಪಗಳಿಂದ ಮಿಂಚಿ ಮಿನುಗಲಿವೆ. ಹೊಸ ಹಾಗೂ ಹಳೆ ಜಿಲ್ಲಾಧಿಕಾರಿ ಕಚೇರಿ ಕಟ್ಟಡ, ಮಹಾನಗರ ಪಾಲಿಕೆ, ಮೈಸೂರು ವಿವಿಯ ಕ್ರಾಫರ್ಡ್ ಭವನ, ಮುಡಾ, ಕಾಡಾ ಕಚೇರಿ, ಕೆ.ಆರ್. ಆಸ್ಪತ್ರೆ, ರೈಲ್ವೆ ನಿಲ್ದಾಣದ ಕಚೇರಿ, ಮಹಾರಾಜ ಕಾಲೇಜು ಸೇರಿದಂತೆ ಹಲವು ಸರ್ಕಾರಿ ಕಟ್ಟಡಗಳೂ ದೀಪಾಲಂಕಾರದಿಂದ ಕಂಗೊಳಿಸಲಿವೆ.

6.50 ಕೋಟಿ ರೂ.ಗಳ ಟೆಂಡರ್: ದಸರಾ ಮಹೋತ್ಸವದ ವೇಳೆ ದೀಪಾಲಂಕಾರಕ್ಕಾಗಿ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ವತಿಯಿಂದ ಟೆಂಡರ್ ಪ್ರಕ್ರಿಯೆ ನಡೆಸಲಾಗಿದೆ. ಸ್ಥಳೀಯ ಗುತ್ತಿಗೆದಾರರಿಗೆ ಆದ್ಯತೆ ನೀಡಲಾಗುತ್ತಿದ್ದು, ಪೀಸ್ ವರ್ಕ್ ಮಾದರಿಯಲ್ಲಿ ಒಂದೊಂದು ರಸ್ತೆಯನ್ನು ಒಬ್ಬೊಬ್ಬರು ಗುತ್ತಿಗೆದಾರರಿಗೆ ಗುತ್ತಿಗೆ ನೀಡಲು ಉದ್ದೇಶಿಸಲಾಗಿದೆ. ಈಗಾಗಲೇ ವಿವಿಧ ರಸ್ತೆಯಲ್ಲಿ ಬಗೆ ಬಗೆಯ ವಿನ್ಯಾಸದ ವಿದ್ಯುತ್ ದೀಪಾಲಂಕಾರ ಮಾಡುವುದಾಗಿ ಕೆಲ ಗುತ್ತಿಗೆದಾರರು ಡೆಮೋ ಪ್ರದರ್ಶಿಸಿದ್ದಾರೆ. ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತ್ ಮೈದಾನದವರೆಗಿನ ರಸ್ತೆಯಲ್ಲಿ ವಿದ್ಯುತ್ ದೀಪಾಲಂಕಾರದಲ್ಲಿ ಯಾವುದೇ ಬದಲಾವಣೆ ಮಾಡದೆ, ಈ ಹಿಂದೆ ಇದ್ದಂತೆ ಮುಂದುವರೆಸಲು ತೀರ್ಮಾನಿಸಲಾಗಿದೆ. ಅಲ್ಲದೆ, ಅರಮನೆ ದೀಪಾಲಂಕಾರಕ್ಕೆ ಹೊಂದಿಕೊಂಡಂತೆ ಕಳೆದ ಬಾರಿ ಬಳಸಿದ ಬಲ್ಬ್‌ಗಳ ಮಾದರಿಯನ್ನೇ ಈ ಬಾರಿಯೂ ಅಳವಡಿಸಲಾಗುತ್ತಿದೆ.

ಈ ಬಾರಿ ದೀಪಾಲಂಕಾರಕ್ಕೆ ಅಂದಾಜು 6.50 ಕೋಟಿ ವೆಚ್ಚವಾಗಲಿದ್ದು, ಒಟ್ಟು ದೀಪಾಲಂಕಾರಕ್ಕೆ 2,42,012 ಯುನಿಟ್ ವಿದ್ಯುತ್ ವ್ಯಯವಾಗುವ ಅಂದಾಜು ಪಟ್ಟಿ ತಯಾರಿಸಲಾಗಿದೆ. ಜಂಬೂಸವಾರಿ ಮಾರ್ಗ ಹೊರತುಪಡಿಸಿ ಉಳಿದ ಎಲ್ಲಾ ರಸ್ತೆಗಳಲ್ಲೂ ವಿದ್ಯುತ್ ಮಿತ ಬಳಕೆ ಮಾಡಲು ಎಲ್‌ಇಡಿ ಬಲ್ಬ್‌ಗಳನ್ನೇ ಬಳಸಲು ಸೂಚನೆ ನೀಡಲಾಗಿದೆ. ವಿವಿಧ ರಸ್ತೆಗಳಲ್ಲಿ ಗುತ್ತಿಗೆ ಪಡೆದಿರುವ ಗುತ್ತಿಗೆದಾರರು ಈಗಾಗಲೇ ದೀಪಾಲಂಕಾರದ ಬಲ್ಬ್ ಅಳವಡಿಕಾ ಕಾರ್ಯದಲ್ಲಿ ತೊಡಗಿದ್ದಾರೆ.

ಸುರಕ್ಷತೆಗೆ ಆದ್ಯತೆ: ದೀಪಾಲಂಕಾರಕ್ಕಾಗಿ ಕಳಪೆ ಗುಣಮಟ್ಟದ, ಕಡಿಮೆ ಬೆಲೆಯ ಚೈನಾ ಸೀರಿಯಲ್ ಸೆಟ್ ಬಳಸದಂತೆ ಸೂಚನೆ ನೀಡಲಾಗಿದೆ. ಕಳೆದ ಎರಡು ವರ್ಷದ ಹಿಂದೆ ರಾಮಸ್ವಾಮಿ ವೃತ್ತದ ಬಳಿ ಮಳೆಯಿಂದಾಗಿ ದೀಪಾಲಂಕಾರಕ್ಕೆ ಬಳಸಿದ್ದ ಜೋತು ಬಿದ್ದ ಸೀರಿಯಲ್ ಸೆಟ್ ಬೆಂಕಿಗೆ ಆಹುತಿಯಾಗಿತ್ತು. ಈ ಹಿನ್ನೆಲೆಯಲ್ಲಿ ಸುರಕ್ಷತೆಗೆ ಒತ್ತು ನೀಡುವಂತೆ ಗುತ್ತಿಗೆದಾರರಿಗೆ ಸೂಚನೆ ನೀಡಲಾಗಿದೆ. ಅಲ್ಲದೆ, ಎಸಿಯಿಂದ ಡಿಸಿಗೆ ವಿದ್ಯುತ್ ಸಂಪರ್ಕದ ಮಾರ್ಗವನ್ನು ಬದಲಿಸಿ, ದೀಪಾಲಂಕಾರಕ್ಕೆ ಬಳಸಿ ಪ್ರಾಯೋಗಿಕವಾಗಿ ಪರೀಕ್ಷೆ ನಡೆಸಲು ಉದ್ದೇಶಿಸಲಾಗಿದೆ. ಡಿಸಿ ಸಂಪರ್ಕವಿದ್ದರೆ ವಿದ್ಯುತ್ ಸ್ಪರ್ಶಿಸಿದರೂ ಅನಾಹುತ ತಪ್ಪಿಸಬಹುದಾಗಿದೆ. ಆದರೆ, ಬೆಳಕಿನಲ್ಲಿ ಮಂದಗತಿ ಕಂಡರೆ ದೀಪಾಲಂಕಾರ ಮಂಕಾಗುವ ಸಾಧ್ಯತೆ ಕಂಡುಬಂದರೆ, ಎಸಿ ಸಂಪರ್ಕವನ್ನೇ ಮುಂದುವರೆಸಲು ಚಿಂತನೆ ನಡೆಸಲಾಗಿದೆ.

ಇನ್ನೆರಡು ದಿನದಲ್ಲಿ ದೀಪಾಲಂಕಾರದ ಚಿತ್ರಣ ಅಂತಿಮವಾಗಲಿದೆ

ದಸರಾ ಮಹೋತ್ಸವದ ದೀಪಾಲಂಕಾರಕ್ಕಾಗಿ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಈ ಬಾರಿ ಕಳೆದ ವರ್ಷದಂತೆ 130ರಿಂದ 140 ಕಿ.ಮಿ ರಸ್ತೆಗೆ ದೀಪಾಲಂಕಾರ ಮಾಡಲಾಗುತ್ತದೆ. ಅಲ್ಲದೆ, 84 ರಿಂದ 100 ವೃತ್ತ ದೀಪಾಲಂಕಾರ ಮಾಡಲು ಉದ್ದೇಶಿಸಲಾಗಿದೆ. ಮೈಸೂರಿನ ವಿವಿಧೆಡೆ 80ಕ್ಕೂ ಹೆಚ್ಚು ಆಕೃತಿಗಳನ್ನು ವಿವಿಧೆಡೆ ಅಳವಡಿಸಲಾಗುತ್ತದೆ. ಮಾಸಾಂತ್ಯದವರೆಗೂ ದೀಪಾಲಂಕಾರದ ಕೆಲ ಮಾರ್ಪಾಡು ಆಗಬಹುದು. ಮತ್ತಷ್ಟು ರಸ್ತೆ, ವೃತ್ತ ಸೇರಲೂ ಬಹುದು. ಅಂತಿಮ ಚಿತ್ರಣವನ್ನು ಇಲಾಖೆಯ ಹಿರಿಯ ಅಧಿಕಾರಿಗಳು, ನಿಗಮದ ಅಧ್ಯಕ್ಷರು ನೀಡಲಿದ್ದಾರೆ.

– ಕೆ.ಎಂ.ಮುನಿಗೋಪಾಲ ರಾಜು, ನಿರ್ದೇಶಕರು, ತಾಂತ್ರಿಕ ವಿಭಾಗ, ಸೆಸ್ಕ್

ನಕ್ಕರೆ ಅದೇ ಸ್ವರ್ಗ

ಯಮರಾಜ : ಹೇಳಪ್ಪಾ ಮಾನವ ನೀನು ಸ್ವರ್ಗಕ್ಕೆ ಹೋಗ್ತಿಯೋ ಅಥವಾ ನರಕಕ್ಕೋ...?

ಗುಂಡ : ಸ್ವಾಮಿ ನನ್ನ ಮೊಬೈಲ್ ಭೂಮಿ ಮೇಲೆ ಉಳಿದುಬಿಟ್ಟಿದೆ. ಅದು ಮತ್ತು ಚಾರ್ಜರ್ ತರಿಸಿಕೊಡಿ. ಆ ಮೇಲೆ ಎಲ್ಲಿಗಾದರೂ ಹೋಗ್ತೀನಿ.

ಮೈಸೂರು ಮಿತ್ರ

ಗುರುವಾರ, 19 ಸೆಪ್ಟೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತವಾಹಿನಿ..........

ಸುವಾಸನೆಗಿಂತಲೂ ದುರ್ವಾಸನೆ ಬೇಗ ಹರಡುತ್ತದೆ. ಸತ್ಕೀರ್ತಿ ಹಬ್ಬುವುದು ನಿಧಾನ. ಕೆಟ್ಟ ಕೀರ್ತಿ ಕಾಳ್ಗಿಚ್ಚಿನಂತೆ ಹಬ್ಬುತ್ತದೆ. – ಕುವೆಂಪು

ವೇದ ಸುಳ್ಳಾದರೂ
ಗಾದೆ ಸುಳ್ಳಾಗದು { ಲೋಕ ತಿಳೀಬೇಕು
ಲೆಕ್ಕ ಕಲೀಬೇಕು.

ನಿಮ್ಮ ಪತ್ರಗಳು

ದೇವರಾಜ ಅರಸು ಕುಸ್ತಿ ಕ್ರೀಡಾಂಗಣದ ವೀಕ್ಷಕರ ಗ್ಯಾಲರಿಗೆ ಚಾವಣಿ ಅಳವಡಿಸಿ

ಮಾನ್ಯರೆ.

ವಿಶ್ವವಿಖ್ಯಾತ ಮೈಸೂರು ದಸರಾ ಮತ್ತು ಕುಸ್ತಿಗೂ ಅವಿನಾಭಾವ ಸಂಬಂಧವಿದೆ. ಮಹಾರಾಜರ ಕಾಲದಿಂದಲೂ ನಡೆದುಕೊಂಡು ಬಂದ ಈ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಲು ರಾಜ್ಯದ ವಿವಿಧ ಭಾಗಗಳಿಂದ ಪೈಲ್ವಾನರು ಬರುತ್ತಾರೆ.

ಪ್ರಜಾಪ್ರಭುತ್ವದ ನಂತರ ರಾಜ್ಯ ಸರ್ಕಾರ ಮತ್ತು ಜಿಲ್ಲಾಡಳಿತ ವತಿಯಿಂದ ಈ ಸಂಪ್ರದಾಯವನ್ನು ಮುಂದುವರೆಸಿಕೊಂಡು ಬರಲಾಗುತ್ತಿದೆ.

ದಸರಾ ಕುಸ್ತಿ ಪಂದ್ಯಾವಳಿಯಲ್ಲಿ ನಾಡ ಕುಸ್ತಿ, ಮಹಿಳಾ ಕುಸ್ತಿ, ಕಿಶೋರ ಪ್ರಶಸ್ತಿ, ಕುಮಾರ ಪ್ರಶಸ್ತಿ, ಕೇಸರಿ ಪ್ರಶಸ್ತಿ, ಕಂಠೀರವ ಪ್ರಶಸ್ತಿ ಒಳಗೊಂಡಂತೆ ನಡೆಸುವ ಈ ಪಂದ್ಯಾವಳಿಯನ್ನು ನೋಡಲು ರಾಜ್ಯದ ವಿವಿಧ ಭಾಗಗಳಿಂದ ಕುಸ್ತಿ ಅಭಿಮಾನಿಗಳು ಬರುತ್ತಾರೆ. ಆದರೆ ಕುಸ್ತಿ ಪ್ರೇಮಿಗಳು ವೀಕ್ಷಿಸಲು ಕಲ್ಲಿನ ಆಸನ (ಗ್ಯಾಲರಿ) ಇರುತ್ತದೆ. ಆದರೆ ಮಳೆ ಬಂದರೆ ಚಾವಣಿ ಇಲ್ಲದೆ ಮಳೆಯಲ್ಲಿಯೇ ವೀಕ್ಷಿಸಬೇಕಾಗುತ್ತದೆ. ದಯವಿಟ್ಟು ಈ ಕ್ರೀಡಾಂಗಣದ ಪ್ರೇಕ್ಷಕರ ಗ್ಯಾಲರಿಗೆ ಮೇಲ್ಛಾವಣಿ ಅಳವಡಿಸುವಂತೆ ಕಳೆದ 2 ವರ್ಷಗಳಿಂದ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದರೂ ಸಂಬಂಧಪಟ್ಟವರು ಗಮನ ಹರಿಸುತ್ತಿಲ್ಲ. ಆದ್ದರಿಂದ ಜಿಲ್ಲಾಡಳಿ ಈ ಬಾರಿಯಾದರೂ ಕುಸ್ತಿ ಕ್ರೀಡಾಂಗಣದ ವೀಕ್ಷಕರ ಗ್ಯಾಲರಿಗೆ ಚಾವಣಿ ಅಳವಡಿಸಬೇಕೆಂದು ಈ ಮೂಲಕ ಮನವಿ.

–ಪಿ.ಸಿ.ಕಂಗಾಣಿಸೋಮು, ಕ್ಯಾತಮಾರನಹಳ್ಳಿ ಮೈಸೂರು

ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರ ಕಲಿಸುವುದು ಶಿಕ್ಷಕರ ಜವಾಬ್ದಾರಿ

ಮಾನ್ಯರೆ,

ಶಾಲೆಯಲ್ಲಿ ಓದುತ್ತಿರುವ ಮಕ್ಕಳಿಗೆ ಇಂದಿನ ಶಿಕ್ಷಕರು ವಿನಯತೆ, ಸಂಸ್ಕಾರ ನಮ್ಮ ನೆಲದ ಸಂಸ್ಕೃತಿಯನ್ನು ಹೇಳಿಕೊಡುವುದು ಅವರ ಪ್ರಧಾನ ಕರ್ತವ್ಯ. ಇತ್ತೀಚಿನ ದಿನಗಳಲ್ಲಿ ಮಕ್ಕಳಲ್ಲಿ ಅಶ್ಲೀಲತೆಯನ್ನು ಶಿಕ್ಷಕರು ಪ್ರೋತ್ಸಾಹಿಸುತ್ತಿದ್ದಾರೆ. ಸೆಪ್ಟೆಂಬರ್ 5 ರಂದು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮದಿನದ ಪ್ರಯುಕ್ತ ಆಚರಿಸುವ ಶಿಕ್ಷಕರ ದಿನಾಚರಣೆಯ ಪ್ರಯುಕ್ತ ಅಸ್ಸಾಂ ರಾಜ್ಯದ ಒಂದು ಶಾಲೆಯಲ್ಲಿ ಅಲ್ಲಿನ ಶಿಕ್ಷಕರು ವಿದ್ಯಾರ್ಥಿಗಳಿಗೆ ಚಿತ್ರನಟಿ ತಮನ್ನಾ ಭಾಟಿಯಾ ನಟಿಸಿರುವ ಸ್ತ್ರೀ–2 ಚಲನಚಿತ್ರದ 'ಆಜ್ ಕಿ ರಾತ್' ಎಂಬ ಹಿಂದಿ ಐಟಂ ಸಾಂಗ್‌ಗೆ ನೃತ್ಯವನ್ನು ಮಾಡಿಸಿದ್ದಾರೆ. ಇದು ಎಲ್ಲರ ಕೆಂಗಣ್ಣಿಗೆ ಗುರಿಯಾಗಿದೆ. ಮಕ್ಕಳು ಖಾಲಿ ಪುಟವಿದ್ದಂತೆ. ಅದರಲ್ಲಿ ನಾವು ಏನನ್ನು ಬರೆಯುತ್ತೇವೆಯೋ ಅದು ಅವರಲ್ಲಿ ಮೂಡುತ್ತದೆ. ಮಕ್ಕಳಿಗೆ ಒಳ್ಳೆಯ ಶಿಕ್ಷಣ, ಸಂಸ್ಕಾರವನ್ನು ಕಲಿಸಿ ಅವರನ್ನು ಭಾವಿ ಉತ್ತಮ ನಾಗರಿಕರನ್ನಾಗಿ ಮಾಡುವುದು ಶಿಕ್ಷಕರು, ಪೋಷಕರ ಜವಾಬ್ದಾರಿ ಎಂಬುದನ್ನು ಯಾವತ್ತು ಮರೆಯಬಾರದು.

–ಪುಂಡಲಿಕ ಲಮಾಣಿ, ಮೈಸೂರು

ಭಿಕ್ಷೆ ಬೇಡುತ್ತಿರುವ ಮಕ್ಕಳನ್ನು ರಕ್ಷಿಸಿ

ಮಾನ್ಯರೆ,

ದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ದಿನೇ ದಿನೆ ಕೆಲವು ಕುಟುಂಬಗಳ ಆರ್ಥಿಕ ಸ್ಥಿತಿ ಹದಗೆಡುತ್ತಿರುವ ಕಾರಣ ಮತ್ತು ಅನೇಕ ಸಮಸ್ಯೆಗಳ ನೆಪ ಮಾಡಿಕೊಂಡು ಜೀವನ ಸಾಗಿಸಲು ದೇಶದ ಪ್ರಮುಖ ನಗರಗಳಲ್ಲಿ ಸಾರ್ವಜನಿಕವಾಗಿ ಭಿಕ್ಷೆ ಬೇಡುವುದನ್ನು ವೃತ್ತಿ ಮಾಡಿಕೊಂಡು ಬದುಕುತ್ತಿರುವುದುಂಟು. ಕೆಲವು ಭಿಕ್ಷುಕರು ಚಿಕ್ಕ ಮಕ್ಕಳನ್ನೆ ಭಿಕ್ಷೆ ಬೇಡುವ ವೃತ್ತಿಗೆ ಕಳುಹಿಸಿ ಜೀವನ ಮಾಡುತ್ತಿರುವುದು ಬೇಸರದ ಸಂಗತಿಯಾಗಿದೆ. ಇದರಿಂದ ಮಕ್ಕಳು ಸಾಮಾಜಿಕ ಸ್ಥಿತಿ, ಶಿಕ್ಷಣ, ಇನ್ನಿತರ ಅರಿವನ್ನು ಕಳೆದುಕೊಳ್ಳುವಂತಾಗಿದೆ. ಆದ್ದರಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಶಿಕ್ಷಣ ಮೊಟಕುಗೊಳಿಸಿ ಮತ್ತು ಶಿಕ್ಷಣದ ಗಂಧವನ್ನು ಅರಿಯದೆ ಭಿಕ್ಷೆ ಬೇಡುತ್ತಿರುವ ಮಕ್ಕಳನ್ನು ರಕ್ಷಿಸಿ ಸರ್ಕಾರಿ ಶಾಲಾ–ಕಾಲೇಜುಗಳಿಗೆ ಸೇರಿಸಿ ವಿದ್ಯಾರ್ಥಿನಿಲಯಗಳಲ್ಲಿ ಉಳಿದುಕೊಳ್ಳಲು ಅವಕಾಶ ಕಲ್ಪಿಸಿ ವಿದ್ಯಾಭ್ಯಾಸ ನೀಡಲು ಮುಂದಾಗಬೇಕು. ದೇಶದಲ್ಲಿ ಮಹಿಳೆಯರು ಸೇರಿದಂತೆ ಹೆಚ್ಚೆಚ್ಚು ಭಿಕ್ಷುಕರು ದಿನೇ ದಿನೆ ಏರಿಕೆ ಆಗುತ್ತಿರುವುದನ್ನು ತನಿಖೆ ಮಾಡಿ ಅವರ ಸಮಸ್ಯೆಗಳೇನು, ಉದ್ದೇಶವೇನು, ಮನೆ ಇಲ್ಲವೇ, ಸರ್ಕಾರಗಳು ನೀಡುತ್ತಿರುವ ಸೌಲಭ್ಯಗಳು ಇವರಿಗೆ ತಲುಪಿಲ್ಲವೇ? ಅಥವಾ ಸ್ವತಃ ಇವರೇ ಪಡೆದಿಲ್ಲವೇ ಎಂಬುದನ್ನು ತಿಳಿದು ಸರ್ಕಾರಗಳೇ ಇವರಿಗೆ ಯಾವುದಾದರೂ ವೃತ್ತಿಯನ್ನು ಒದಗಿಸಿ ಇಂತಹ ಭಿಕ್ಷೆ ಬೇಡುವ ಕುಟುಂಬಗಳನ್ನು ರಕ್ಷಿಸಿ ಸಮಾಜದಲ್ಲಿ ಸಾಮಾನ್ಯರಂತೆ ಬದುಕಲು ಅವಕಾಶ ಕಲ್ಪಿಸಲು ಕೇಂದ್ರ ಮತ್ತು ರಾಜ್ಯ ನಿರ್ಣಯ ಕೈಗೊಳ್ಳಬೇಕು.

–ನಾಗೇಶ್, ಮಾನಸಗಂಗೋತ್ರಿ, ಮೈಸೂರು

ಮುನಿರತ್ನ ವಿರುದ್ಧ ಕಠಿಣ ಕ್ರಮ ಅಗತ್ಯ

ಮಾನ್ಯರೆ,

ರಾಜರಾಜೇಶ್ವರಿ ನಗರದ ಶಾಸಕ ಮುನಿರತ್ನ ಅವರು ಗುತ್ತಿಗೆದಾರರೊಬ್ಬರೊಂದಿಗೆ ತನ್ನ ಹಣಕಾಸಿನ ವ್ಯವಹಾರ ಮಾಡುವ ಸಂದರ್ಭದಲ್ಲಿ ಸಮುದಾಯವೊಂದರ ಬಗ್ಗೆ ತುಂಬಾ ಕೆಳಮಟ್ಟದಲ್ಲಿ ನಿಂದಿಸಿ ಆತನಿಗೆ ಬೈದಿದ್ದಾರೆ. ನಮ್ಮ ಸಮುದಾಯವೂ ಕೂಡ ಅವರಿಗೆ ಮತವನ್ನು ಕೊಟ್ಟು ಇಂದು ಅವರು ಶಾಸಕರಾಗಲು ಕಾರಣರಾಗಿದ್ದಾರೆ ಎಂಬುದನ್ನು ಅವರು ಮರೆತಂತಿದೆ. ಅವರು ಈ ಪ್ರಜಾಪ್ರಭುತ್ವದಲ್ಲಿ ಶಾಸಕರಾಗಿ ಮುಂದುವರೆಯಲು ಯೋಗ್ಯರಲ್ಲದ ವ್ಯಕ್ತಿ ಎಂಬುದು ಈ ಘಟನೆಯಿಂದ ಸಾಬೀತಾಗಿದೆ. ಈ ತಕ್ಷಣ ಅವರು ರಾಜೀನಾಮೆ ನೀಡಿ ನಮ್ಮ ಸಮುದಾಯದ ಬಹಿರಂಗ ಕ್ಷಮೆ ಯಾಚಿಸಬೇಕು.

ಬಿಜೆಪಿಯಲ್ಲಿ ಸರ್ವರೂ ಸಮಾನರು ಎಂಬ ಸಿದ್ಧಾಂತದಲ್ಲಿ ಸಂಘಟನೆ ಮಾಡಿಕೊಂಡು ಬಂದಿರುವ ಸಂದರ್ಭದಲ್ಲಿ ಮುನಿರತ್ನರವರ ಆ ಮಾತುಗಳು ಸಮುದಾಯದ ಎಲ್ಲರಿಗೂ ಮಾನಸಿಕವಾಗಿ ಘಾಸಿಯನ್ನುಂಟು ಮಾಡಿದೆ. ಇವರ ಈ ಜಾತಿ ನಿಂದನೆಯ ಮಾತುಗಳನ್ನು ಗಂಭೀರವಾಗಿ ಪರಿಗಣಿಸಿ ಪಕ್ಷದ ಉನ್ನತ ಮಟ್ಟದ ಜವಾಬ್ದಾರಿ ಇರುವವರು ಹಾಗೂ ರಾಜ್ಯಾಧ್ಯಕ್ಷರು ಅವರ ವಿರುದ್ಧ ಕ್ರಮ ಜರುಗಿಸಬೇಕಾಗಿದೆ. ಮಹಿಳೆಯರನ್ನು ತನ್ನ ಬೈಗುಳದಲ್ಲಿ ಅವಾಚ್ಯವಾಗಿ ನಿಂದಿಸಿರುವ ಕಾರಣ ರಾಜ್ಯ ಮತ್ತು ಕೇಂದ್ರದ ಮಹಿಳಾ ಆಯೋಗವು ಸುಮೋಟೋ ದೂರು ದಾಖಲಿಸಿಕೊಂಡು ಕಾನೂನಿನನ್ವಯ ಅವರಿಗೆ ಶಿಕ್ಷೆ ನೀಡಬೇಕು ಮತ್ತು ರಾಜ್ಯ ಸರ್ಕಾರವೂ ಕೂಡ ಈ ಬಗ್ಗೆ ಕ್ರಮ ತೆಗೆದುಕೊಳ್ಳಬೇಕು. ಇದೊಂದು ಆಕಸ್ಮಿಕ ಬೈಗುಳ ಎಂದು ಹೇಳುವ ಮೂಲಕ ನಿಂದನೆಗೊಳಪಟ್ಟ ಸಮುದಾಯದ ನಾಯಕರಾದ ಗೃಹ ಸಚಿವರು ಬೇಜವಾಬ್ದಾರಿ ಹೇಳಿಕೆ ಕೊಟ್ಟು ಸುಮ್ಮನಾಗಬಾರದು ಎಂಬುದೂ ನನ್ನ ಆಗ್ರಹ.

–ಪರಮಾನಂದ.ಎಂ.ಎಸ್, ರಾಜ್ಯ ಕಾರ್ಯದರ್ಶಿ, ಎಸ್‌ಸಿ ಮೋರ್ಚಾ, ಬಿಜೆಪಿ

ನಂಬಿಕೆಯ ಮರ ಸದಾ ಹಸಿರಾಗಿರಲಿ...



ಪರಮೇಶ ಕೆ.ಉತ್ತನಹಳ್ಳಿ
ಕನ್ನಡ ಸಹಾಯಕ ಪ್ರಾಧ್ಯಾಪಕ
ಮೊ.7795862281

ಮಾನವನ ಬದುಕು ನಂಬಿಕೆಯ ಅಡಿಗಲ್ಲ ಮೇಲೆ ನಿಂತಿದೆ. ಇಲ್ಲದಿದ್ದರೆ ಮಾನವನ ಬದುಕಿಗೆ ಅರ್ಥವೇ ಇರುತ್ತಿರಲಿಲ್ಲ. ನಂಬಿಕೆಯಲ್ಲಿ ಭರವಸೆ ಇದೆ, ನೆಮ್ಮದಿ ಇದೆ, ನಂಬಿಕೆಯ ಊರುಗೋಲು ಮುರಿದರೆ ಅಪನಂಬಿಕೆ, ಸಂಶಯ, ದುಗುಡ, ದುಮ್ಮಾನಗಳ ಭಾವರೂಪಗಳು ಗರಿಗೆದರುತ್ತವೆ. ಯಾವಾಗ ನಮ್ಮ ನಮ್ಮ ಮಾತುಗಳಲ್ಲಿ, ನಡತೆಯಲ್ಲಿ ನಂಬಿಕೆಗಳು ಮೂಡುತ್ತವೆಯೋ ಆಗ ನಿಜಕ್ಕೂ ಅದೆಷ್ಟೋ ವ್ಯವಹಾರ, ವ್ಯಾಪಾರ ಕುದುರಲು ಸಾಧ್ಯ. ನಂಬಿಕೆಯಿಂದ ನಾಳಿನ ಬದುಕಿಗೆ ಭರವಸೆಯ ಬೆಳಕು ಕಾರಂಜಿಯಾಗಲು ಸಾಧ್ಯ. ಈ ದಿನ ನಾವು ಎಷ್ಟೇ ಕಷ್ಟ ಕಾರ್ಪಣ್ಯದಿಂದ ನೋವಿನ ದಳ್ಳುರಿಯಲ್ಲಿ ದಹಿಸುತ್ತಿದರೂ ನಾಳೆಯ ದಿನವಾದರೂ ಸಂತಸದ ಕ್ಷಣಗಳು ಅರಸುತ್ತಾ ಬರಬಹುದೆಂದು ನಂಬಿರುವುದು ಜೀವಂತ ಬದುಕಿನ ಲಕ್ಷಣ. ರೈತ ಬರಲಿರುವ ಮಳೆಯನ್ನು ನಂಬಿ ಹೊಲವನ್ನು ಹಸನು ಮಾಡಿ ಆಸೆಗಣ್ಣಿನಲ್ಲಿ ಕಾಯುವಿಕೆ, ಗಂಡು–ಹೆಣ್ಣು ಪರಸ್ಪರ ನಂಬಿಕೆಯ ಬನದೊಳಗೆ ಬದುಕುತ್ತಲೇ ಹೂ–ಗಿಡಗಳ ಬೆಳೆಸುವ ಪರಿ ಅದ್ಭುತ.

ಈ ಬಗೆಯ ನಂಬಿಕೆಗಳೇ ನಮ್ಮ ಬದುಕಿನ ಮುನ್ನಡೆಗೆ ಸಹಾಯ ಮಾಡುತ್ತದೆ. ಈ ರೀತಿಯಲ್ಲಿ ನಂಬಿಕೆಯ ವಿಚಾರಗಳು–ಸಂಗತಿಗಳು ಕೇವಲ ಮನುಷ್ಯರಿಗೆ ಮಾತ್ರ ಅನ್ವಯವಾಗದೆ ಪ್ರಾಣಿ–ಪಕ್ಷಿಗಳು ಆತ್ಮೀಯ ಬಾಂಧವ್ಯತೆಯಿಂದ ಒಮ್ಮೊಮ್ಮೆ ಕೋಪವನ್ನು ವ್ಯಕ್ತಪಡಿಸಿದರೂ ತಾವು ನಂಬಿಕೆ ಇಟ್ಟಿರುವುದನ್ನು ದೂರ ಮಾಡಿಕೊಳ್ಳದೆ ಸದಾ ಕಾಲ ನಮ್ಮ ನೆರಳಲ್ಲಿಯೇ ಉಳಿಯುವುದು, ಮರಳಿ ಬರುವುದು ನಂಬಿಕೆಯ ಬಲವನ್ನು ವೃದ್ಧಿಸುತ್ತದೆ. ಅವುಗಳಿಗೆ ಕಾಡುವ ಭಾವ ಅನ್ನದ ಋಣ ಹಾಗೂ ಸ್ವಾಮಿ ನಿಷ್ಠೆಯ ನಂಬಿಕೆ.

ಅದೇ ಜಾಗದಲ್ಲಿ ಮಕ್ಕಳಿದ್ದು ನಂಬಿಕೆಯನ್ನು ಕಳೆದುಕೊಂಡರೆ ಇಲ್ಲವೇ ದೂರವಾದರೆ ನೂರು ಬಾಣಗಳು ಒಮ್ಮೆಲೆ ಎದೆಯನ್ನು ಬಗೆದಂತೆ ಭಾಸವಾಗುತ್ತದೆ. ಅದಕ್ಕೆ ಬಲ್ಲವರು ಹೇಳುವುದು ನಂಬಿದರೆ ಇಂಬು, ನಂಬದಿರೆ ಅಂಬು ಎಂದು. ನಂಬಿಕೆಯ ಹಂಬಲದಿಂದ–ಬೆಂಬಲದಿಂದ ಬದುಕುತ್ತಿದ್ದೇವೆ. ಆಕಾಶವು ನಮ್ಮ ಮೇಲೆ ಬೀಳುವುದಿಲ್ಲ ಎಂಬ ಬಲವಾದ ನಂಬಿಕೆ–ವಿಶ್ವಾಸದಲ್ಲಿಯೇ ಅದರ ಅಡಿಯಲ್ಲಿ ನಾವು ಬದುಕನ್ನು ಸಾಗಿಸುತ್ತಿದ್ದೇವೆ.

ಜೀವನ ಸದಾ ಹಸಿರಾಗಿರಬೇಕು. ಅದಕ್ಕೆ ನಂಬಿಕೆ ಎಂಬ ಮರ ಭದ್ರವಾದ ಬೇರುಕೊಟ್ಟು ಹಸಿರಿನ ಸಮೃದ್ಧತೆಯಿಂದ ಉಸಿರಾಗಿರಬೇಕು. ಪರಸ್ಪರ ಒಡನಾಟದಲ್ಲಿ ಬದುಕುವ ಮನುಷ್ಯ ನಂಬಿಕೆಯಿಂದ ತನ್ನ ಬಾಳಿನ ಬಂಡಿಯನ್ನು ಎಳೆದು ಸಾಗಬೇಕು. ನಂಬಿಕೆ ಎಂಬುದು ಆಂತರ್ಯದ ಮನೋಭಾವ. ನಂಬಿಕೆಗೆ ಮತ್ತೊಂದು ಅರ್ಥವೇ ವಿಶ್ವಾಸ, ಭರವಸೆ. ವಿಶ್ವಾಸ ಗಳಿಸುವುದು ಮುಖ್ಯವಲ್ಲ, ಗಳಿಸಿರುವ ವಿಶ್ವಾಸವನ್ನು ಸಾಯೋತನಕ ಉಳಿಸಿಕೊಂಡು ಹೋಗುವುದು ಮುಖ್ಯ. ವಿಶ್ವಾಸ ಗಳಿಕೆಗೆ ಕ್ಷಣ ಸಾಕು. ಅದರ ಉಳಿಕೆಗೆ ಜೀವಮಾನವೇ ಬೇಕು. ನಂಬಿಕೆಯು ವ್ಯಕ್ತಿಯ ವ್ಯಕ್ತಿತ್ವಕ್ಕೊಂದು ಶೋಭೆ ತರುವ ಅಂಶವಾಗಿದೆ. ನಂಬಿಕೆಯಿಂದ ಬದುಕಬೇಕು. ಏಕೆಂದರೆ ನಂಬಿಕೆಯೇ ಜೀವನದ ತಳಹದಿ. ತನ್ನ ಮೇಲೆ ತನಗೆ ನಂಬಿಕೆ ಇರಬೇಕು. ನಾನು ಈ ಕೆಲಸವನ್ನು ಮಾಡುತ್ತೇನೆ. ನನಗೆ ಇದು ಸಾಧ್ಯವಿದೆ ಎಂಬ ಅಚಲ ನಂಬಿಕೆ ಇದ್ದರೆ ಅರ್ಧ ಕೆಲಸ ಆದಂತೆಯೇ ಸರಿ.

ಏನನ್ನಾದರೂ ನಂಬುವುದಾದರೆ ನಂಬಿಕೆಯನ್ನು ನಂಬು. ಈ ಜಗತ್ತು ನಂಬಿಕೆಯ ಮೇಲೆ ನಿಂತಿದೆ. ಹಾಗಾಗಿ ನಂಬಿಕೆ ಎಂದರೆ ಒಬ್ಬರ ಮೇಲೆ ಮತ್ತೊಬ್ಬರಿಗಿರುವ ವಿಶ್ವಾಸ. ಬೇರೆಯವರ ಮೇಲೆ ನಮಗಿರುವ ನಂಬಿಕೆಯಂತೆ ನಮ್ಮ ಮೇಲೆ ನಮಗಿರುವ ನಂಬಿಕೆ ದೊಡ್ಡದು. ಕಾಲ ಕಳೆದಂತೆಲ್ಲ ಮನುಷ್ಯನು ತನ್ನ ನಂಬಿಕೆಯನ್ನು ಕಳೆದುಕೊಳ್ಳುತ್ತಿದ್ದಾನೆ. ಈಗಿದ್ದ ಮಾತು ಇನ್ನು ಸ್ವಲ್ಪ ಹೊತ್ತಿನಲ್ಲಿ ಇರುವುದಿಲ್ಲ. ವಚನ ಭ್ರಷ್ಟತೆ, ಮಾತು ತಪ್ಪುವುದು ಇವೆಲ್ಲವೂ ಸಾಮಾನ್ಯ ಸಂಗತಿಗಳಾಗಿವೆ. ಹೀಗೆ ಮಾಡಿದರೆ ನಂಬಿಕೆಯ ಕತ್ತು ಹಿಸುಕಿದಂತಾಗುತ್ತದೆ. ಆದರೂ ಕೆಲವರು ನಂಬಿದವರಿಗೆ ಪ್ರಾಣ ಕೊಡಲು ಸಿದ್ಧವಾಗಿರುತ್ತಾರೆ. ಅದೇ ನಿಜವಾದ ನಂಬಿಕೆ, ಅವರೇ ನಿಜವಾದ ನಂಬಿಕಸ್ಥರು. ಈ ನೆಲದ ಬಯಲಲ್ಲಿ ದೇವರು ಮಾತ್ರ ವಾಸವಾಗಿಲ್ಲ, ದೇವತಾ ಮನುಷ್ಯರು ವಾಸವಾಗಿದ್ದಾರೆ. ಅದೇ ರೀತಿ



> ಹೆಂಡತಿಯ ಮೇಲೆ ಗಂಡನಿಗೆ, ಗಂಡನ ಮೇಲೆ ಹೆಂಡತಿಗೆ ನಂಬಿಕೆ ಇರಬೇಕು. ಮುಖವಾಡದ ಬದುಕು ಮೂರೇ ದಿನ ಉಳಿಯುವುದು. ಅವಿಶ್ವಾಸದಿಂದ ಬಾಳಬಾರದು. ತಂದೆಯ ಬಗ್ಗೆ ಮಗನಿಗೆ, ಮಗನ ಬಗ್ಗೆ ತಂದೆಗೆ, ಗಂಡ–ಹೆಂಡತಿ, ಸಹೋದರ–ಸಹೋದರಿ, ಗುರು–ಶಿಷ್ಯರು, ಅತೀತ ಶಕ್ತಿಯನ್ನು ಒಳಗೊಂಡಿರುವ ನಿಸರ್ಗ ಹೀಗೆ ಸಾಗುವ ಸಂಬಂಧಗಳ ಅನುಬಂಧಗಳು ನಿಂತಿರುವುದೇ ನಂಬಿಕೆಯ ಮೇಲೆ. ನಂಬಿ ಕೆಟ್ಟವರಿಲ್ಲವೋ ರಂಗಯ್ಯನಾ ಎಂದು ದಾಸವಾಣಿಯೇ ಹೇಳುತ್ತದೆ. ಹಾಗೆ ಹೇಳಿದ ಮಾತ್ರಕ್ಕೆ ಎಲ್ಲರನ್ನೂ, ಎಲ್ಲವನ್ನೂ ನಂಬಬೇಕು ಎಂದಲ್ಲ. ಅದಕ್ಕೂ ಒಂದು ಮಿತಿ ಇರುತ್ತದೆ.

ಇದೇ ನೆಲದಲ್ಲಿ ರಾಕ್ಷಸರು ವಾಸವಾಗಿಲ್ಲ ನರಭಕ್ಷಕರೂ ವಾಸವಾಗಿದ್ದಾರೆ. ಅತ್ಯಂತ ಭೀಕರ ಸಮಯ–ಕಷ್ಟವೆಂದು ಪಡೆದ ಹಣಕ್ಕೆ ದ್ರೋಹ ಬಗೆದು ವಿಶ್ವಾಸ ಕಗ್ಗೊಲೆಗೆ ಸುಪಾರಿ ಕೊಟ್ಟಿರುತ್ತಾರೆ. ಇಂತಹ ವ್ಯಕ್ತಿಗಳು ವಿಶ್ವಾಸ ಘಾತುಕರಾಗಿರುತ್ತಾರೆ. ಹಿಂದಿನ ಕಾಲದಲ್ಲಿ ಕೇವಲ ಮಾತಿನಿಂದಲೇ ಎಷ್ಟೋ ಕೆಲಸ–ಕಾರ್ಯಗಳು ಅಲ್ಲದೆ ಹಣದ ವ್ಯವಹಾರವು ಕೂಡ ನಡೆಯುತ್ತಿದ್ದವು ಎಂದರೆ ಆ ಮಾತಿನ ಮೇಲೆ ಇದ್ದ ನಂಬಿಕೆಯೇ ಕಾರಣ. ನಂಬಿಕೆ ಇಟ್ಟವರು ನಂಬಿಕೆ ಕಳ್ಕೊತ್ತಾರೆ. ಒಂದು ಕಾಲದಲ್ಲಿ ಜನಪ್ರಿಯವಾದ ಗೀತೆಯಾಗಿದ್ದ ಹೇಳಿದ್ದು ಸುಳ್ಳಾಗಬಹುದು ನೋಡಿದ್ದು ಸುಳ್ಳಾಗಬಹುದು ನಿಧಾನಿಸಿ ಯೋಚಿಸಿದಾಗ ನಿಜವು ತಿಳಿವುದು. ಆದರೆ ಏನು ಮಾಡುವುದು ಹೊರಗಿನ ಕಳ್ಳರನ್ನಾದರೂ ಪತ್ತೆ ಮಾಡಬಹುದು, ಒಳಗಿನ ಕಳ್ಳರನ್ನು ಪತ್ತೆ ಮಾಡಲು ಸಾಧ್ಯವಾಗದೆ ಇರಬಹುದು. ಆದರೆ ಪ್ರಕೃತಿಯಲ್ಲಿನ ಪ್ರತಿಯೊಂದು ವಸ್ತುವಿನ ಮೇಲೆ ನಂಬಿಕೆ ಇರಲೇಬೇಕು. ನಂಬಿಕೆಯ ಭಾವದಿಂದ ಉಸಿರಾಡುವುದು ಬಹಳಾನೇ ಕಷ್ಟ. ಅದಕ್ಕಾಗಿಯೇ ಹೇಳುವುದು ಎಲ್ಲರನ್ನು ನಂಬಬೇಕು. ಆದರೆ ನಮ್ಮನ್ನು ನಾವೇ ಕಳೆದುಕೊಳ್ಳುವ ಹಾಗೆ ನಂಬಬಾರದು ಎಂದು. ಜೀವನದಲ್ಲಿ ನಂಬಿಕೆ ಎನ್ನುವುದು ಅತೀ ಮುಖ್ಯವಾದುದು. ಅದನ್ನು ಕಳೆದುಕೊಂಡರೆ ಮತ್ತೆ ಸಂಪಾದಿಸಲು ಮಣ್ಣಿಗೋದರೂ ಸಾಧ್ಯವಿಲ್ಲ.

ನಂಬಿಕೆ ಮತ್ತು ಅನುಮಾನ ಒಂದೇ ಜಾಗದಲ್ಲಿ ಇರಲು ಎಂದಿಗೂ ಸಾಧ್ಯವಿಲ್ಲ. ಅನುಮಾನದೊಂದಿಗೆ ಬದುಕದೆ ನಂಬಿಕೆಯ ಮೇಲೆ ವಿಶ್ವಾಸವಿಟ್ಟು ಮುಂದೆ ಸಾಗಿದರೆ ಆಗ ತನಗೆ ತಾನೇ ಅನುಮಾನ ಜಾಗ ಖಾಲಿ ಮಾಡುತ್ತದೆ. ನಂಬಿಕೆ ಎನ್ನುವುದು ಯಾವುದೇ ಸಂಬಂಧದ ಅಡಿಪಾಯ. ಈ ಅಡಿಪಾಯ ಗಟ್ಟಿಯಿಲ್ಲದಿದ್ದರೆ ಮನಸ್ಸುಗಳು ಮುರಿದು ಬೀಳುತ್ತವೆ. ಅನುಮಾನ ಎಂಬ ಹುಳು ಮನಸ್ಸಿನ ಒಳಗೆ ಸೇರಿದರೆ ಅದು ಕೊರೆಯುತ್ತಲೇ ಮನುಷ್ಯನನ್ನು ಮಾನಸಿಕವಾಗಿ ಅಧಃಪತನಕ್ಕೆ ಎಳೆದೊಯ್ಯುತ್ತದೆ. ಹೆಂಡತಿಯ ಮೇಲೆ ಗಂಡನಿಗೆ, ಗಂಡನ ಮೇಲೆ ಹೆಂಡತಿಗೆ ನಂಬಿಕೆ ಇರಬೇಕು. ಮುಖವಾಡದ ಬದುಕು ಮೂರೇ ದಿನ ಉಳಿಯುವುದು. ಅವಿಶ್ವಾಸದಿಂದ ಬಾಳಬಾರದು. ತಂದೆಯ ಬಗ್ಗೆ ಮಗನಿಗೆ, ಮಗನ ಬಗ್ಗೆ ತಂದೆಗೆ ಗಂಡ–ಹೆಂಡತಿ, ಸಹೋದರ–ಸಹೋದರಿ, ಗುರು–ಶಿಷ್ಯರು, ಅತೀತ ಶಕ್ತಿಯನ್ನು ಒಳಗೊಂಡಿರುವ ನಿಸರ್ಗ ಹೀಗೆ ಸಾಗುವ ಸಂಬಂಧಗಳ ಅನುಬಂಧಗಳು ನಿಂತಿರುವುದೇ ನಂಬಿಕೆಯ ಮೇಲೆ. ನಂಬಿ ಕೆಟ್ಟವರಿಲ್ಲವೋ ರಂಗಯ್ಯನಾ ಎಂದು ದಾಸವಾಣಿಯೇ ಹೇಳುತ್ತದೆ. ಹಾಗೆ ಹೇಳಿದ ಮಾತ್ರಕ್ಕೆ ಎಲ್ಲರನ್ನೂ, ಎಲ್ಲವನ್ನೂ ನಂಬಬೇಕು ಎಂದಲ್ಲ. ಅದಕ್ಕೂ ಒಂದು ಮಿತಿ ಇರುತ್ತದೆ. ಯಾರನ್ನು ಯಾವ ಸಮಯದಲ್ಲಿ ಎಷ್ಟು ನಂಬಬೇಕು ಎಂಬ ನಿರ್ಧಾರ ತೆಗೆದುಕೊಳ್ಳುವುದು ಸ್ವಲ್ಪ ಕಷ್ಟವೇ, ತಂದೆ ತಾಯಿಗಳಿಗೆ ಮಕ್ಕಳು ಚೆನ್ನಾಗಿ ಓದುತ್ತಾರೆ, ವಿದ್ಯಾರ್ಥಿಗಳಿಗೆ ಗುರುಗಳು ಏನೇ ಹೇಳಿಕೊಟ್ಟರೂ ಸರಿ ಇರುತ್ತದೆ ಎಂಬ ನಂಬಿಕೆ. ಆಸ್ತಿಕರಿಗೆ ದೇವರ ಬಗಗಿನ ನಂಬಿಕೆ, ನಾಸ್ತಿಕರಿಗೆ ಎಲ್ಲವೂ ಮಿಥ್ಯ ಎಂಬ ನಂಬಿಕೆ, ವೃದ್ಧರಿಗೆ ತಮ್ಮ ಮಕ್ಕಳು ಇಳಿ ವಯಸ್ಸಲ್ಲಿ ನಮ್ಮನ್ನು ನೋಡಿಕೊಳ್ಳುತ್ತಾರೆ ಎಂಬ ನಂಬಿಕೆ, ಪ್ರೀತಿಸುವ ವರು ತಮ್ಮ ಸಂಗಾತಿಯ ಬಗ್ಗೆ ಪ್ರಬಲವಾದ ನಂಬಿಕೆ ಇಟ್ಟು ಸಾಗಿದರೆ ನಂಬಿಕೆ ಚಿರಕಾಲ ಜೀವಿಸುವುದರಲ್ಲಿ ಯಾವುದೇ ಸಂಶಯವಿಲ್ಲ..

ನಂಬಿಕೆಯೆಂಬುದು ಒಂದು ಪರಿಣಾಮಕಾರಿಯಾದ ಅಂಶ. ಧರ್ಮೋ ರಕ್ಷತಿ ರಕ್ಷಿತಃ ಎಂಬ ಮಾತಿನಂತೆ ನಾವು ನಂಬಿಕೆಯನ್ನು ಕಾಪಾಡಿಕೊಂಡರೆ ನಂಬಿಕೆ ನಮ್ಮನ್ನು ಕಾಯುತ್ತದೆ ಹಾಗೂ ಬೆಳೆಸುತ್ತದೆ. ಒಬ್ಬ ಒಳ್ಳೆಯ ಸ್ನೇಹಿತ ಆಗ ಬೇಕಾದ್ರೆ ಹಣ ಬೇಕಾಗಿಲ್ಲ, ಆಸ್ತಿ ಬೇಕಾಗಿಲ್ಲ, ಸೌಂದರ್ಯ ಬೇಕಾಗಿಲ್ಲ. ನಂಬಿಕೆ, ವಿಶ್ವಾಸ, ಪ್ರಾಮಾಣಿಕತೆ ಎಂಬ ಮೂರು ತ್ರಿರತ್ನಗಳಿದ್ದರೆ ಸಾಕು. ನಂಬಿಕೆಯೆಂಬ ಗಾಜು ಒಡೆದು ಹೋದರೆ ಮತ್ತೆ ಅದನ್ನು ಜೋಡಿಸಲು ಸಾಧ್ಯವಿಲ್ಲ. ತೊಂದರೆಗಳಿಗೆ ಪ್ರಮುಖವಾಗಿ ಎರಡು ಕಾರಣ. ಒಂದು ಕೆಟ್ಟವರ ಮೇಲೆ ಬಲವಾದ ನಂಬಿಕೆ ಇಡುವುದು, ಇನ್ನೊಂದು ಒಳ್ಳೆಯವರ ಮೇಲೆ ಸಂಶಯ ಪಡುವುದು.

ದೇಹದ ಮೇಲೆ ಬೀಳುವ ಪೆಟ್ಟಿಗಿಂತ ನಂಬಿಕೆಯ ಮೇಲೆ ಬೀಳುವ ಪೆಟ್ಟು ಹೆಚ್ಚು ನೋವು ಕೊಡುತ್ತದೆ. ಮರಣದವರೆಗೆ ಉತ್ತರ ಸಿಗದ ಏಕೈಕ ಪ್ರಶ್ನೆ ಎಂದರೆ ಯಾರನ್ನು ನಂಬುವುದು? ಪ್ರಪಂಚದಲ್ಲಿ ಅತೀ ದುಬಾರಿ ವಸ್ತು ಅಂದರೆ ನಂಬಿಕೆ. ಅದನ್ನು ಗಳಿಸಲು ಎಷ್ಟೋ ವರ್ಷಗಳೇ ಬೇಕು. ಆದರೆ ಅದನ್ನು ನಾಶಗೊಳಿಸಲು ಕೆಲವೇ ಕ್ಷಣ ಸಾಕು. ನಂಬಿಕೆಗೆ ವಿರುದ್ಧವಾದುದು ನಂಬಿಕೆ ದ್ರೋಹ, ವಿಶ್ವಾಸಘಾತುಕತನ, ನಂಬಿಕೆ ಅಥವಾ ವಿಶ್ವಾಸವನ್ನು ಉಲ್ಲಂಘಿಸುವುದು ವ್ಯಕ್ತಿಗಳ ನಡುವಿನ ಸಂಬಂಧದೊಳಗೆ ನೈತಿಕ ಮತ್ತು ಮಾನಸಿಕ ಸಂಘರ್ಷವನ್ನು ಉಂಟುಮಾಡುತ್ತದೆ. ಹಲವು ವೇಳೆ ದ್ರೋಹವು ಒಂದು ವೈರಿಯ ಗುಂಪನ್ನು ಬೆಂಬಲಿಸುವ ಕ್ರಿಯೆಯಾಗಿರುತ್ತದೆ. ಇತರರಿಗೆ ದ್ರೋಹ ಮಾಡುವವನನ್ನು ದ್ರೋಹಿ ಅಥವಾ ವಿಶ್ವಾಸಘಾತಕ ಎಂದು ಕರೆಯುತ್ತಾರೆ. ಹಾಗೆ ನಂಬಿಕೆಗೆ ದ್ರೋಹ ಬಗೆಯದೆ ಮಾನವ ಕುಲದ ಮನುಷ್ಯರು ನಂಬಿಕೆಯಿಂದ ಬದುಕಿದರೆ ಸುಂದರ ಜಗತ್ತನ್ನು ಕಟ್ಟಬಹುದು. ಅಂತೆಯೇ ನಂಬಿಕೆಯೆಂಬ ಪ್ರತಿಯುಸಿರಿನ ಸಿರಿಸಿಂಚನದ ನವಮಂಟಪದೊಳು ನಳನಳಿಸುತ್ತಿರುವ ಓ ದೀನ ಬಂಧು, ನನ್ನೊಳಗಿನ ಸಿರಿಸಂಪದದ ಮಹಿಮೆಯೇ ನೀನೆನಗೆ ಕಲಿಸು. ಪರರೊಂದಿಗೆ ನಂಬಿಕೆಯಿಂದ ಬದುಕುವುದ, ಮಣ್ಣ ಗೆದ್ದಲಹುಳು ತಿಂದು ಮುಗಿಸುವವರೆಗೂ ಮನುಜನಲ್ಲಿ ಮನುಜನಿಗೆ ನಂಬಿಕೆಯು ಮುಖ್ಯ, ಅದರಿಂದಾಗುವುದು ಜೀವನವು ಸೌಖ್ಯ, ಕತ್ತಲೆಯ ಕಂಡವಗೆ ಭರವಸೆ ಬೇಕು, ನಂಬಿಕೆಯ ಬೆಳಕಿನ ಆರತಿಯೇ ಸಾಕು!.

ನಂಬಿಕೆ ಬೇಕು ಅದಕು–ಇದಕು– ಎದಕೂ–ನಂಬಿಕೆಯೇ ಬಾಳಿನ ಜೀವಾಳದ ಬದುಕು ಎಂದಳು ನನ್ನವ್ವ ಸಾಕವ್ವ

ತಿಲಕನಗರ ಸಯ್ಯಾಜಿರಾವ್ ರಸ್ತೆ ಜಂಕ್ಷನ್‌ನಲ್ಲಿ ಅರ್ಧ ತಾಸಿಗೂ ಹೆಚ್ಚು ಕಾಲ ವಾಹನ ದಟ್ಟಣೆ

ಗಜಪಡೆ ತಾಲೀಮು ಬನ್ನಿಮಂಟಪದತ್ತ ಸಾಗಿದ ಬಳಿಕ ಇಲ್ಲಿ ತಲೆದೋರಿತು ಟ್ರಾಫಿಕ್ ಜಾಮ್

ಮೈಸೂರು,ಸೆ.18(ಪಿಎಂ)– ಈಗಾಗಲೇ ಹಲವು ದಿನಗಳಿಂದ ನಗರದ ಹಲವಾರು ಟ್ರಾಫಿಕ್ ಸಿಗ್ನಲ್ ಲೈಟ್‌ಗಳು ಕೆಟ್ಟು ಕೆಲಸಕ್ಕೆ ಬಾರದಾಗಿವೆ. ಈ ಪೈಕಿ ತಿಲಕನಗರದ ಸಯ್ಯಾಜಿರಾವ್ ರಸ್ತೆ ಮತ್ತು ನಾರಾಯಣಗುರು ರಸ್ತೆ ಜಂಕ್ಷನ್‌ನಲ್ಲಿ ಇರುವ ಸಿಗ್ನಲ್ ಲೈಟ್ ಸಹ ಒಂದು.

ಇಲ್ಲಿನ ಈ ಪರಿಸ್ಥಿತಿಯಿಂದ ಬುಧವಾರ ರಾತ್ರಿ ಅರ್ಧ ತಾಸಿಗೂ ಹೆಚ್ಚು ಕಾಲ ಟ್ರಾಫಿಕ್ ಜಾಮ್ ಉಂಟಾಗಿ ವಾಹನ ಸವಾರರು ಪರದಾಡಿದರು. ನಾಲ್ಕು ದಿಕ್ಕಿನಿಂದಲೂ ಒಮ್ಮೆಗೆ ಬಂದ ವಾಹನಗಳು ಈ ಜಂಕ್ಷನ್‌ನಲ್ಲಿ ಮುಂದೆ ಸಾಗಲಾಗದೇ ನಿಲ್ಲುವ ಪರಿಸ್ಥಿತಿ ಉದ್ಭವಿಸಿತು. ಅತ್ತ ಸಂಚಾರ ಪೊಲೀಸ್ ಸಿಬ್ಬಂದಿಯೂ ಇಲ್ಲದೇ ಇದ್ದ ಕಾರಣ ದಟ್ಟಣೆ ನಿವಾರಣೆಯಾಗದೇ ವಾಹನ ಸವಾರರು ಕಿರಿಕಿರಿ ಅನುಭವಿಸಿದರು.

ಹಿಂಬದಿಯಲ್ಲಿ ಇನ್ನೂ ದೂರದಿಂದ ಬರುತ್ತಿದ್ದ ಹಲವು ವಾಹನ ಸವಾರರು ತಮ್ಮ ಮುಂದಿನ ಜಂಕ್ಷನ್‌ನಲ್ಲಿ ಸಂಚಾರ ದಟ್ಟಣೆ ಉಂಟಾಗಿರುವುದನ್ನು ಗಮನಿಸಿ ಯೂಟರ್ನ್ ತೆಗೆದು ಅನ್ಯ ಮಾರ್ಗದಲ್ಲಿ ಸಾಗಿದರು. ಇನ್ನು ಜಂಕ್ಷನ್‌ನಲ್ಲಿ ಸಿಲುಕಿಕೊಂಡಿದ್ದ ವಾಹನ ಸವಾರರಲ್ಲಿ ಅನೇಕರು ಪರಸ್ಪರ ಮಾತಿನ ಚಕಮಕಿ ನಡೆಸಿ ತಾವೇ ಮುಂದೆ ಸಾಗಬೇಕೆಂದು ಹಠವಿಡಿದು ಮತ್ತಷ್ಟು ಗೊಂದಲ ಉಂಟು ಮಾಡಿದ್ದರು.

ದಟ್ಟಣೆಗೆ ಕಾರಣ: ತಾಲೀಮು ಹಿನ್ನೆಲೆಯಲ್ಲಿ ದಸರಾ ಗಜಪಡೆ ಈ ಜಂಕ್ಷನ್ ಮೂಲಕ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದತ್ತ ಹೆಜ್ಜೆ ಹಾಕಿದ್ದವು. ಹೀಗಾಗಿ ಈ ಹೊತ್ತಿನಲ್ಲಿ ಅರ್ಧ ತಾಸಿಗೂ ಹೆಚ್ಚು ಕಾಲ ಸದರಿ ಜಂಕ್ಷನ್‌ನಲ್ಲಿ ವಾಹನ ದಟ್ಟಣೆ ಉಂಟಾಗಿತ್ತು. ಹಲವು ದ್ವಿಚಕ್ರ ಸವಾರರು ದಟ್ಟಣೆ ನಡುವೆಯೂ ಸ್ಥಳಾವಕಾಶ ಮಾಡಿಕೊಂಡು ಮುಂದೆ ಸಾಗಿದರೆ, ಉಳಿದ ವಾಹನ ಸವಾರರು ಸಾಗಲಾಗದೇ ಪರದಾಡಿದರು. ಕೊನೆಗೆ ಸಂಚಾರ ಪೊಲೀಸರು ಸ್ಥಳಕ್ಕೆ ಧಾವಿಸಿ ವಾಹನ ದಟ್ಟಣೆ ನಿವಾರಿಸಿದರು.

ಒಂದು ವೇಳೆ ಸಿಗ್ನಲ್ ಸರಿ ಇದ್ದಿದ್ದರೆ ಇಷ್ಟು ಸಮಸ್ಯೆ ಉಂಟಾಗುತ್ತಲೇ ಇರಲಿಲ್ಲ. ಪೊಲೀಸ್ ಸಿಬ್ಬಂದಿಯೂ ಇಲ್ಲದೇ ಸಿಗ್ನಲ್ ಲೈಟ್‌ಗಳ ವ್ಯವಸ್ಥೆಯೂ ಇಲ್ಲದೇ ಇಂತಹ ವಾಹನ ದಟ್ಟಣೆ ಉಂಟಾಗಿತ್ತು. ದಸರಾ ಮಹೋತ್ಸವ ಸಮೀಪಿಸುತ್ತಿದ್ದು, ಪ್ರವಾಸಿಗರ ಆಗಮನದೊಂದಿಗೆ ರಸ್ತೆಗಳಲ್ಲಿ ವಾಹನ ಸಂಚಾರ ಹೆಚ್ಚಾಗಲಿದೆ. ಸಿಗ್ನಲ್ ಸಮಸ್ಯೆ ಪರಿಹರಿಸದಿದ್ದರೆ, ಆಗ ಸಂಚಾರ ದಟ್ಟಣೆ ಸಮಸ್ಯೆ ಮತ್ತಷ್ಟು ಹೆಚ್ಚಾಗಲಿದೆ.



ಮೈಸೂರಿನ ತಿಲಕನಗರದ ಸಯ್ಯಾಜಿರಾವ್ ರಸ್ತೆ ಮತ್ತು ನಾರಾಯಣಗುರು ರಸ್ತೆ ಜಂಕ್ಷನ್‌ನಲ್ಲಿ ಬುಧವಾರ ರಾತ್ರಿ ವಾಹನ ದಟ್ಟಣೆ ಉಂಟಾಗಿ ಸವಾರರು ಪರದಾಡಿದರು.

ಪ್ರೊ.ಜಿ.ಹೆಚ್.ನಾಯಕ ನಿಷ್ಠೂರ, ದಿಟ್ಟತನದ ವಿಮರ್ಶಕರಾಗಿದ್ದರು

ಕನ್ನಡ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜ್ ಅಭಿಮತ

ಮೈಸೂರು, ಸೆ.18(ಎಂಟಿವೈ)– ವಿಮರ್ಶೆ ಮಾಡುವುದು ಸುಲಭದ ಮಾತಲ್ಲ. ಆದರೆ, ವಿಮರ್ಶಕ ಪ್ರೊ.ಜಿ.ಹೆಚ್.ನಾಯಕ ಆಧುನಿಕ ಕನ್ನಡ ಸಾಹಿತ್ಯದ ನಿಷ್ಠುರ ಹಾಗೂ ದಿಟ್ಟತನದ ವಿಮರ್ಶಕರಾಗಿದ್ದರು ಎಂದು ಕನ್ನಡ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್. ಮುಕುಂದರಾಜ್ ಅಭಿಪ್ರಾಯಪಟ್ಟಿದ್ದಾರೆ.

ಮೈಸೂರಿನ ಮಹಾಜನ ಕಾಲೇಜಿನಲ್ಲಿ 'ಕರ್ನಾಟಕ ಸಾಹಿತ್ಯ ಅಕಾಡೆಮಿ' ಹಾಗೂ 'ಚಿಂತನ ಚಿತ್ತಾರ' ಪ್ರಕಾಶನ ಸಂಸ್ಥೆ ವಿಮರ್ಶಕ ಜಿ.ಹೆಚ್.ನಾಯಕ–89ನೇ ಜನ್ಮದಿನದ ಹಿನ್ನೆಲೆಯಲ್ಲಿ ಬುಧವಾರ ಆಯೋಜಿಸಿದ್ದ 'ಜಿ.ಹೆಚ್.ನಾಯಕರ– ಶಿವರಾಮ ಕಾರಂತರ ಕಾದಂಬರಿಗಳಲ್ಲಿ ಆದರ್ಶ ಮತ್ತು ವಾಸ್ತವ' ಕೃತಿ ಬಿಡುಗಡೆ ಮಾಡಿ ಮಾತನಾಡಿದ ಅವರು, ಕನ್ನಡ ಸಾಹಿತ್ಯ ಲೋಕದ ವಿಮರ್ಶಾ ಕೈಂಕರ್ಯದಲ್ಲಿ ಪ್ರೊ.ಜಿ.ಹೆಚ್. ನಾಯಕರು ಕೊಟ್ಟ ಕೊಡುಗೆ ಅಪಾರ. ಕನ್ನಡದಲ್ಲಿ ವಿಮರ್ಶೆ ಎನ್ನುವುದು ವಿಭಿನ್ನ ಸ್ವರೂಪದಲ್ಲಿದೆ. ವಿಮರ್ಶೆಯ ಪರಿಕಲ್ಪನೆ ಪ್ರಾಚೀನ ಕವಿಗಳಾದ ಪಂಪ, ರನ್ನ, ಕುಮಾರವ್ಯಾಸ, ವಚನಕಾರರಲ್ಲಿಯೂ ಇತ್ತು. ಆದರೆ ನವ್ಯ ವಿಮರ್ಶೆ ಇಂಗ್ಲಿಷ್ ಸಾಹಿತ್ಯದ ಪ್ರೇರಣೆಯಿಂದ ಬಂದದ್ದು. ಇತ್ತೀಚೆಗೆ ವಿಮರ್ಶಕರ ಸಂಖ್ಯೆ ಕಡಿಮೆಯಾಗುತ್ತಿದೆ. ಕವಿಯಾದವನೇ ಒಬ್ಬ ವಿಮರ್ಶಕನನ್ನು ತಯಾರು ಮಾಡಿಕೊಳ್ಳಬೇಕು. ಈ ನಿಟ್ಟಿನಲ್ಲಿ ಶಿವರಾಮ ಕಾರಂತರಿಂದ ಕಲಿತ ಪಾಠವನ್ನು ಪ್ರೊ.ಜಿ.ಹೆಚ್.ನಾಯಕ ಅವರು ಕಾರಂತರ ಕೃತಿಗಳ ಬಗ್ಗೆ ವಿಮರ್ಶಿಸಿದರು. ನವೋದಯ ಕಾವ್ಯ ಪರಂಪರೆಗೆ ಪ್ರತಿಯಾಗಿ ಬಂದ ನವ್ಯ ಪರಂಪರೆಯ ಸಾಹಿತ್ಯ ವಿಮರ್ಶೆಯಲ್ಲಿ ಪ್ರೊ.ಜಿ.ಹೆಚ್.ನಾಯಕರ ವಿಮರ್ಶನ ಕಾರ್ಯ ಮಹತ್ವದ್ದಾಗಿದೆ ಎಂದರು.

ಎಲ್ಲ ಲೇಖಕರ ಕೃತಿಗಳ ಬಗ್ಗೆ ನಿಷ್ಠುರವಾಗಿ ವಿಮರ್ಶೆ ಬರೆದ ಅವರು ವಿಮರ್ಶಾ ಸಾಹಿತ್ಯಕ್ಕೆ ಅನನ್ಯ ಕೊಡುಗೆ ನೀಡಿದರು. ಶಿವರಾಮ ಕಾರಂತರ ಕಾದಂಬರಿಗಳ ಕುರಿತು ನೇರವಾಗಿ ಟೀಕಿಸಿದ್ದರು. ಕಾರಂತರೂ ತಾಳ್ಮೆಯಿಂದ ನಾಯಕರ ಕಟು ವಿಮರ್ಶೆಯನ್ನು ಸಹಿಸಿದ್ದರು. ಕನ್ನಡ ಸಾಹಿತ್ಯದಲ್ಲಿ ಇತ್ತೀಚೆಗೆ ವಿಮರ್ಶಕರ ಸಂಖ್ಯೆ ಕಡಿಮೆಯಾಗುತ್ತಿದೆ. ಮೂರು ದಶಕದ ಹಿಂದೆ ಕಿ.ರಂ. ನಾಗರಾಜ, ಡಿ.ಆರ್.ನಾಗರಾಜ ಅವರಂಥ ಪ್ರಖರ ವಿಮರ್ಶಕರಿದ್ದರು. ಇದೀಗ ಅಂತಹವರ ಸಂಖ್ಯೆ ಬೆರಳೆಣಿಕೆಯಾಗಿದೆ. ಗಂಭೀರವಾಗಿ ವಿಮರ್ಶೆಯನ್ನೇ ಓದುವ ಹವ್ಯಾಸ ಬಹುತೇಕರಿಗೆ ಇಲ್ಲವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಕಾಲೇಜಿನ ಪ್ರಾಂಶುಪಾಲರಾದ ಡಾ. ಬಿ.ಆರ್.ಜಯಕುಮಾರಿ ಅಧ್ಯಕ್ಷತೆ ವಹಿಸಿದ್ದ ಕಾರ್ಯಕ್ರಮದಲ್ಲಿ ಪ್ರೊ. ಜಿ.ಎಚ್. ನಾಯಕರ ವಿಮರ್ಶೆ ಮತ್ತು ಬದುಕು ಕುರಿತು ಸಾಹಿತಿ ಪ್ರೊ.ಮೈಸೂರು ಕೃಷ್ಣಮೂರ್ತಿ, ಹಿರಿಯ ಪತ್ರಕರ್ತ ಜಿ.ಪಿ. ಬಸವರಾಜು ಮಾತನಾಡಿದರು.

ಚಿಂತನ ಚಿತ್ತಾರದ ಸಂಚಾಲಕ ನಿಂಗರಾಜು ಚಿತ್ತಣ್ಣನವರ್ ಆಶಯ ನುಡಿಗಳನ್ನಾಡಿದರು. ಜಿ.ಹೆಚ್ ನಾಯಕರ ಪುತ್ರಿ ಕೀರ್ತಿ ನಾಯಕ ಮತ್ತು ಅಳಿಯ ಮದನ್ ನಾಯಕ ಅವರು ಉಪಸ್ಥಿತರಿದ್ದರು. ಕನ್ನಡ ವಿಭಾಗದ ಮುಖ್ಯಸ್ಥ ಡಾ.ಹೆಚ್.ಆರ್.ತಿಮ್ಮೇಗೌಡ ಸ್ವಾಗತಿಸಿದರೆ, ಕನ್ನಡ ವಿಭಾಗದ ಸಹ ಪ್ರಾಧ್ಯಾಪಕರಾದ ಡಾ.ವಿನೋದಮ್ಮ ವಂದಿಸಿದರು. ಕಿರಣ್‌ಕುಮಾರ್ ನಿರೂಪಿಸಿದರು.



ಮೈಸೂರಿನ ಮಹಾಜನ ಕಾಲೇಜಿನಲ್ಲಿ ವಿಮರ್ಶಕ ಜಿ.ಹೆಚ್.ನಾಯಕ ಅವರ 89ನೇ ಜನ್ಮದಿನದ ಹಿನ್ನೆಲೆಯಲ್ಲಿ ಬುಧವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ 'ಜಿ.ಹೆಚ್.ನಾಯಕರ– ಶಿವರಾಮ ಕಾರಂತರ ಕಾದಂಬರಿಗಳಲ್ಲಿ ಆದರ್ಶ ಮತ್ತು ವಾಸ್ತವ' ಕೃತಿಯನ್ನು ಕನ್ನಡ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಎಲ್.ಎನ್.ಮುಕುಂದರಾಜ್ ಬಿಡುಗಡೆ ಮಾಡಿದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

'ಕೆಲಸದ ಸ್ಥಳದಲ್ಲಿ ಮಹಿಳೆಯರ ಸುರಕ್ಷತೆ'; ಮೈಸೂರಲ್ಲಿ ವಿಚಾರ ಸಂಕಿರಣ

ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಅಧಿಕಾರಿಗಳಿಂದ ವಿಷಯ ಮಂಡನೆ





ಮೈಸೂರಿನ ಪೂಜಾ ಭಾಗವತ್ ಮೆಮೋರಿಯಲ್ ಮಹಾಜನ ಪಿಜಿ ಸೆಂಟರ್‌ನಲ್ಲಿ ಬುಧವಾರ ಆಯೋಜಿಸಿದ್ದ ಕೆಲಸದ ಸ್ಥಳದಲ್ಲಿ ಮಹಿಳೆಯರ ಸುರಕ್ಷತೆ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣ ಹಾಗೂ ಸಂವಾದದಲ್ಲಿ (ಎಡದಿಂದ) ಮೈಸೂರು ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಮಹಾನಿರ್ದೇಶಕ ಅಜಯ್ ಭಟ್ನಾಗರ್, ಅಧ್ಯಕ್ಷೆ ವಿಜಯಾ ಭಾರತಿ ಸಯಾನಿ, ರಿಜಿಸ್ಟ್ರಾರ್ ಜೋಗಿಂದರ್ ಸಿಂಗ್ ಹಾಗೂ ಮಹಾಜನ ಎಜುಕೇಷನ್ ಸೊಸೈಟಿ ಅಧ್ಯಕ್ಷ ಟಿ. ಮುರಳೀಧರ ಭಾಗವತ್ ಪಾಲ್ಗೊಂಡಿದ್ದರು. ಬಲಚಿತ್ರದಲ್ಲಿ ಮಾಜಿ ಸಚಿವ ಎಸ್.ಎ.ರಾಮದಾಸ್, ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್ ಸೇರಿದಂತೆ ಇತರರನ್ನು ಕಾಣಬಹುದು.

ಮೈಸೂರು,ಸೆ.18(ಆರ್‌ಕೆ)–ದೇಶಾದ್ಯಂತ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆಗಟ್ಟಿ ಅವರು ಕೆಲಸ ಮಾಡುವ ಸ್ಥಳದಲ್ಲಿ ಕೈಗೊಳ್ಳಬೇಕಾದ ಸುರಕ್ಷಾ ಕ್ರಮಗಳ ಕುರಿತಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ (ಎನ್‌ಹೆಚ್‌ಆರ್‌ಸಿ)ದ ಉನ್ನತಾಧಿಕಾರಿಗಳು ಸಲಹೆ, ಮಾರ್ಗದರ್ಶನ ನೀಡಿದ್ದಾರೆ.

ಮುರಳೀಧರ ಭಾಗವತ್ ಚಾರಿಟಬಲ್ ಫೌಂಡೇಷನ್ ಮತ್ತು ವೀರವ್ರತಂ ಫೌಂಡೇಷನ್ ಸಂಯುಕ್ತಾಶ್ರಯದಲ್ಲಿ ಮೈಸೂರಿನ ಕೆಆರ್‌ಎಸ್ ರಸ್ತೆಯ ಜೆಕೆ ಟೈರ್ಸ್ ಎದುರಿನ ಪೂಜಾ ಭಾಗವತ್ ಸ್ಮಾರಕ ಮಹಾಜನ ಸ್ನಾತಕೋತ್ತರ ಪದವಿ ಕೇಂದ್ರದ ಪ್ರವಾಸೋದ್ಯಮ ವಿಭಾಗದ ಸಭಾಂಗಣದಲ್ಲಿ ಇಂದು 'ಕೆಲಸದಲ್ಲಿ ಮಹಿಳೆಯರ ಸುರಕ್ಷತೆ' ವಿಷಯ ಕುರಿತ ರಾಷ್ಟ್ರೀಯ ವಿಚಾರ ಸಂಕಿರಣ ಏರ್ಪಡಿಸಲಾಗಿತ್ತು.

ನವದೆಹಲಿಯ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷೆ ವಿಜಯಾ ಭಾರತಿ ಸಯಾನಿ ದೀಪ ಬೆಳಗಿಸುವ ಮೂಲಕ ವಿಚಾರ ಸಂಕಿರಣವನ್ನು ಉದ್ಘಾಟಿಸಿದರು. ಆಯೋಗದ ಮಹಾನಿರ್ದೇಶಕ ಅಜಯ್ ಭಟ್ನಾಗರ್, ರಿಜಿಸ್ಟ್ರಾರ್ ಜೋಗಿಂದರ್ ಸಿಂಗ್, ಮಹಾಜನ ಶಿಕ್ಷಣ ಸಂಘದ ಅಧ್ಯಕ್ಷ ಟಿ. ಮುರಳೀಧರ ಭಾಗವತ್, ಮೈಸೂರು ನಗರ ಪೊಲೀಸ್ ಆಯುಕ್ತರಾದ ಸೀಮಾ ಲಾಟ್ಕರ್, ವೀರವ್ರತಂ ಫೌಂಡೇಷನ್ ಅಧ್ಯಕ್ಷೆ ಛಾಯಾ ನಂಜಪ್ಪ ಸೇರಿದಂತೆ ಹಲವರು ಪಾಲ್ಗೊಂಡಿದ್ದರು.

ಮಹಿಳಾ ಸುರಕ್ಷತೆಗೆ ಆದ್ಯತೆ: ಈ ವೇಳೆ ಮಾತನಾಡಿದ ವಿಜಯಾ ಭಾರತಿ ಸಯಾನಿ, ಮಹಿಳೆಯರ ಸಬಲೀಕರಣಕ್ಕಾಗಿ ಕೇಂದ್ರ ಸರ್ಕಾರವು ಕಾನೂನಿನಲ್ಲಿ ಹೆಚ್ಚು ಅವಕಾಶ ಕಲ್ಪಿಸಿದ್ದು, ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗವೂ ಅವರ ರಕ್ಷಣೆ, ಸುರಕ್ಷತೆಗೆ ಆದ್ಯತೆ ಮೇಲೆ ಕಾರ್ಯನಿರ್ವಹಿಸುತ್ತಿದೆ ಎಂದರು.

ಮಹಿಳಾ ಸ್ವಾಭಿಮಾನಕ್ಕೆ ಧಕ್ಕೆ ಆಗಬಾರದು: ಮಹಿಳೆಯರು ಕೆಲಸ ಮಾಡುವ ಸರ್ಕಾರಿ, ಖಾಸಗಿ ಸಂಸ್ಥೆಗಳ ಕಚೇರಿ, ಉದ್ದಿಮೆಗಳಲ್ಲಿ, ಶಿಕ್ಷಣ ಸಂಸ್ಥೆ, ವಿಶ್ವವಿದ್ಯಾನಿಲಯ, ಸಂಶೋಧನಾ ಕೇಂದ್ರಗಳಲ್ಲಿ ಲೈಂಗಿಕ ದೌರ್ಜನ್ಯ, ಮಾನಸಿಕ ಮತ್ತು ದೈಹಿಕ ಕಿರುಕುಳ ತಪ್ಪಿಸಲು ಪೊಲೀಸ್, ತನಿಖಾ ಸಂಸ್ಥೆ, ಜಾರಿ ನಿರ್ದೇಶನಾಲಯಗಳಿಗೆ ಸಂಪೂರ್ಣ ಅಧಿಕಾರವನ್ನು ಕಾಯ್ದೆಗಳಲ್ಲೇ ನೀಡಲಾಗಿದೆ ಎಂದು ಅವರು ತಿಳಿಸಿದರು.

ಮಹಿಳೆಯರ ವಿರುದ್ಧ ನಡೆಯುವ ಅಪರಾಧ ಕೃತ್ಯಗಳ ವರದಿ ಪ್ರಕಟಿಸುವಾಗ ಮಾಧ್ಯಮ ಸಂಸ್ಥೆಗಳು ಎಚ್ಚರಿಕೆಯಿಂದ ಅವರ ಆತ್ಮವಿಶ್ವಾಸ, ಸ್ವಾಭಿಮಾನಕ್ಕೆ ಧಕ್ಕೆಯಾಗದಂತೆ ಗಮನಹರಿಸುವ ಅಗತ್ಯವಿದೆ ಎಂದ ಅವರು, ಸಾರ್ವಜನಿಕ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ಪ್ರಕರಣಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರಗಳು ಅಗತ್ಯ ಮೂಲಸೌಕರ್ಯ ಒದಗಿಸಬೇಕಾಗಿದೆ ಎಂದರು.

ದೆಹಲಿಯ 'ನಿರ್ಭಯ' ಪ್ರಕರಣದ ನಂತರ ಕೇಂದ್ರ ಸರ್ಕಾರವು 'ಮಿಷನ್ ಶಕ್ತಿ', 'ಬೇಟಿ ಬಚಾವ್–ಬೇಟಿ ಪಡಾವ್' ಯೋಜನೆ ಜಾರಿಗೆ ತಂದು ಸಾರ್ವಜನಿಕ ಸ್ಥಳಗಳು, ರಸ್ತೆಗಳಲ್ಲಿ ಬೀದಿದೀಪ, ಸಿಸಿಟಿವಿ ಕ್ಯಾಮರಾಗಳನ್ನು ಅಳವಡಿಸಿ ಪೊಲೀಸರ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲಾಗಿದೆ ಎಂದು ನುಡಿದರು.

ಮಹಿಳೆಯರಿಗೆ ರಕ್ಷಣೆ ಒದಗಿಸುವುದು, ಅವರ ಕೆಲಸದ ಸ್ಥಳಗಳಲ್ಲಿ ಶೌಚಾಲಯ, ಉತ್ತಮ ವಾತಾವರಣ, ಸಾರ್ವಜನಿಕ ಸ್ಥಳಗಳು, ಸಾರ್ವಜನಿಕ ಸಾರಿಗೆ ವ್ಯವಸ್ಥೆಗಳಾದ ರೈಲು, ಬಸ್, ಮೆಟ್ರೋಗಳಲ್ಲೂ ಮೂಲ ಸೌಲಭ್ಯ ಕಲ್ಪಿಸುವುದು ಸರ್ಕಾರದ ಕರ್ತವ್ಯವಾದರೂ, ಅದರಲ್ಲಿ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯೂ ಇರಬೇಕು ಎಂದು ವಿಜಯಾ ಭಾರತಿ ಸಯಾನಿ ಅಭಿಪ್ರಾಯಪಟ್ಟರು.

ಅಜಯ್ ಭಟ್ನಾಗರ್ ಮಾತನಾಡಿ, ಮಹಿಳೆಯರು ಮತ್ತು ಬಾಲಕಿಯರ ಸುರಕ್ಷತೆಯಲ್ಲಿ ಮಾಧ್ಯಮ ಮತ್ತು ಸಿನಿಮಾಗಳ ಪಾತ್ರ ಪ್ರಮುಖವಾಗಿದ್ದು, ಮಹಿಳೆಯ ವಿಷಯವನ್ನು ವೈಭವೀಕರಿಸುವುದರಿಂದ ಸಮಾಜದ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವ ಅಪಾಯವಿದೆ ಎಂದರು. ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್, ಮಾಜಿ ಸಚಿವ ಎಸ್.ಎ.ರಾಮದಾಸ್, ಶಿಕ್ಷಣ ತಜ್ಞರು, ಬೋಧನಾ ವೃತ್ತಿಪರರು, ಮಹಿಳಾ ಅಧ್ಯಯನ ವಿಭಾಗದ ಪ್ರಾಧ್ಯಾಪಕರು ಸೇರಿ ನೂರಕ್ಕೂ ಹೆಚ್ಚು ಮಂದಿ ವಿಚಾರ ಸಂಕಿರಣದಲ್ಲಿ ಪಾಲ್ಗೊಂಡಿದ್ದರು.

ಪತ್ನಿ ಹಂತಕನಿಗೆ ಜೀವಾವಧಿ ಶಿಕ್ಷೆ

ಮೈಸೂರು, ಸೆ.18(ಎಂಕೆ)– ಪತ್ನಿಯ ಮೇಲೆ ಅನುಮಾನಪಟ್ಟು ಆಕೆಯನ್ನು ಕೊಲೆ ಮಾಡಿದ್ದ ಪತಿಗೆ ಜೀವಾವಧಿ ಶಿಕ್ಷೆ ವಿಧಿಸಿ ಮೈಸೂರಿನ 5ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಆದೇಶಿಸಿದೆ.

ಹೆಚ್.ಡಿ.ಕೋಟೆ ತಾಲೂಕಿನ ಹೊನ್ನಮ್ಮನಕಟ್ಟೆ ಗ್ರಾಮದ ನಹೀಮ್ ಪಾಷಾ ಶಿಕ್ಷೆಗೆ ಗುರಿಯಾದವನಾಗಿದ್ದು, ಈತ ತನ್ನ ಪತ್ನಿ ಸಲ್ಮಾ ಬಾನು ಮೇಲಿನ ಅನುಮಾನದಿಂದ ಆಕೆಯನ್ನು ಸಿಮೆಂಟ್ ಕಾಂಕ್ರೀಟ್ ಇಟ್ಟಿಗೆ ಜೋರಾಗಿ ಗುದ್ದಿಸಿ ಕೊಲೆ ಮಾಡಿದ್ದ.

ಪ್ರೀತಿಸಿ ಮದುವೆಯಾಗಿದ್ದ ನಹೀಮ್ ಪಾಷಾ ಮತ್ತು ಸಲ್ಮಾ ಬಾನು 2 ವರ್ಷ ಅನ್ಯೋನ್ಯವಾಗಿದ್ದು, ಇಬ್ಬರು ಮಕ್ಕಳಿದ್ದರು. ನಂತರದ ದಿನಗಳಲ್ಲಿ ನಹೀಮ್, ಸಲ್ಮಾಳ ಮೇಲೆ ಹಲ್ಲೆ ಮಾಡಿದ್ದಾನೆ. ಬಳಿಕ ತವರು ಮನೆ ಸೇರಿದ್ದ ಸಲ್ಮಾಳನ್ನು ರಾಜಿ ಪಂಚಾಯಿತಿ ಮಾಡಿ ಕರೆದುಕೊಂಡು ಬಂದಿದ್ದ ನಹೀಮ್, 2020ರ ಡಿ.13ರ ಬೆಳಗ್ಗೆ 9 ಗಂಟೆ ವೇಳೆ ತನ್ನ ಹಳೆ ಮನೆಯಲ್ಲಿ ಸಲ್ಮಾಳನ್ನು ಸಿಮೆಂಟ್ ಕಾಂಕ್ರೀಟ್ ಇಟ್ಟಿಗೆಗೆ ಜೋರಾಗಿ ಗುದ್ದಿಸಿ ಕೊಲೆ ಮಾಡಿದ್ದಾನೆ. ನಂತರ ಕೊಲೆಯನ್ನು ಮುಚ್ಚಿ ಹಾಕಲು ಹಳೆಯ ಮನೆಯ ತುಂಡು ಗೋಡೆಯನ್ನು ಮೃತ ಸಲ್ಮಾಳ ಮೇಲೆ ಹಾರೆಯಿಂದ ತಳ್ಳಿ ಬೀಳಿಸಿದ್ದ.

ಈ ಸಂಬಂಧ ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಿದ ಹೆಚ್.ಡಿ. ಕೋಟೆ ಠಾಣೆಯ ಅಂಗಿನ ಸರ್ಕಲ್ ಇನ್ಸ್‌ಪೆಕ್ಟರ್ ಪುಟ್ಟಸ್ವಾಮಿ, ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು. ವಿಚಾರಣೆ ನಡೆಸಿದ ಮೈಸೂರಿನ 5ನೇ ಅಧಿಕ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರಾದ ಗುರುರಾಜ್ ಸೋಮಕ್ಕಳವರ್, ನಹೀಮ್‌ಗೆ ಜೀವಾವಧಿ ಶಿಕ್ಷೆ ಮತ್ತು 10 ಸಾವಿರ ರೂ. ದಂಡ ವಿಧಿಸಿ ತೀಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಬಿ.ಈ ಯೋಗೇಶ್ವರ ವಾದ ಮಂಡಿಸಿರುತ್ತಾರೆ.

ಜಮ್ಮು–ಕಾಶ್ಮೀರ ವಿಧಾನಸಭಾ ಚುನಾವಣೆ: ಶೇ.59ರಷ್ಟು ಶಾಂತಿಯುತ ಮತದಾನ



ಜಮ್ಮು–ಕಾಶ್ಮೀರದ ಮತಗಟ್ಟೆಯೊಂದರಲ್ಲಿ ಮತ ಚಲಾಯಿಸಲು ಮತದಾರರು ಸಾಲಾಗಿ ನಿಂತಿರುವುದು.

ಶ್ರೀನಗರ, ಸೆ.18– ಜಮ್ಮು ಮತ್ತು ಕಾಶ್ಮೀರ ವಿಧಾನಸಭಾ ಚುನಾವಣೆಯ ಮೊದಲ ಹಂತದ ಮತದಾನ ಬುಧವಾರ ನಡೆದಿದ್ದು, ಮತದಾರರು ಉಲ್ಲಾಸ, ಉತ್ಸಾಹದಿಂದ ಮತ ಚಲಾಯಿಸಿದರು. ರಾತ್ರಿ 7.30ರ ಮಾಹಿತಿ ಪ್ರಕಾರ ಶೇ 59ರಷ್ಟು ಮತದಾನ ನಡೆದಿದೆ.

ಇದು ಹಿಂದಿನ ಏಳು ಚುನಾವಣೆಗಳಲ್ಲಿ (ನಾಲ್ಕು ಲೋಕಸಭಾ ಮತ್ತು ಮೂರು ವಿಧಾನಸಭಾ ಚುನಾವಣೆ) ನಡೆದ ಮತದಾನಕ್ಕಿಂತ ಹೆಚ್ಚು ಎಂದು ಮುಖ್ಯ ಚುನಾವಣಾ ಅಧಿಕಾರಿ ಪಿ.ಕೆ.ಪೋಲ್ ತಿಳಿಸಿದರು.

ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮತಗಟ್ಟೆಗಳ ಬಳಿ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಬೆಳಿಗ್ಗೆ 7 ಗಂಟೆಗೆ ಆರಂಭವಾದ ಮತದಾನ ಪ್ರಕ್ರಿಯೆಯು ಬಹುತೇಕ ಶಾಂತಿಯುತವಾಗಿ ಮುಕ್ತಾಯವಾಯಿತು. ಎಲ್ಲೂ ಮರು ಮತದಾನ ನಡೆಸುವ ಅಗತ್ಯವಿಲ್ಲ ಎಂದರು.

ಕಣದಲ್ಲಿದ್ದ 219 ಅಭ್ಯರ್ಥಿಗಳು: ವಿಧಾನಸಭೆಯ 90 ಕ್ಷೇತ್ರಗಳ ಪೈಕಿ ಮೊದಲ ಹಂತದಲ್ಲಿ 7 ಜಿಲ್ಲೆಗಳ 24 ಕ್ಷೇತ್ರಗಳಿಗೆ ಮತದಾನ ನಿಗದಿಯಾಗಿತ್ತು. ಇದರಲ್ಲಿ ಕಾಶ್ಮೀರ ಕಣಿವೆ ಪ್ರದೇಶದ 16 ಮತ್ತು ಜಮ್ಮು ಪ್ರದೇಶದ 8 ಕ್ಷೇತ್ರಗಳಿಗೆ ಮತದಾನ ನಡೆಯಿತು. 90 ಪಕ್ಷೇತರ ಅಭ್ಯರ್ಥಿಗಳು, 9 ಮಹಿಳಾ ಮತದಾರರು ಸೇರಿದಂತೆ 219 ಅಭ್ಯರ್ಥಿಗಳು ಕಣದಲ್ಲಿದ್ದರು.

ಸೆಪ್ಟೆಂಬರ್ 25 ಮತ್ತು ಅಕ್ಟೋಬರ್ 1ರಂದು ಮುಂದಿನ ಹಂತದ ಚುನಾವಣೆಗಳು ನಡೆಯಲಿವೆ. ಅಕ್ಟೋಬರ್ 8ರಂದು ಮತ ಎಣಿಕೆ ನಡೆಯಲಿದೆ.

ಕಣಿವೆ ರಾಜ್ಯಕ್ಕೆ ಸಂವಿಧಾನದ 370ನೇ ವಿಧಿಯ ಅಡಿಯಲ್ಲಿ ನೀಡಿದ್ದ ವಿಶೇಷ ಸ್ಥಾನಮಾನವನ್ನು ಕೇಂದ್ರ ಸರ್ಕಾರ 2019ರ ಆಗಸ್ಟ್‌ನಲ್ಲಿ ಹಿಂಪಡೆದು, ರಾಜ್ಯವನ್ನು ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ವಿಭಜಿಸಿತು. ಆದಾದ ಬಳಿಕ ವಿಧಾನಸಭೆಗೆ ನಡೆಯುತ್ತಿರುವ ಮೊದಲ ಚುನಾವಣೆ ಇದಾಗಿದೆ.

ಬಹಿಷ್ಕಾರ ಕೊನೆಗಾಣಿಸಿದ ಮತದಾರರು: ದೀರ್ಘಕಾಲದಿಂದ ಚುನಾವಣೆಯನ್ನು ಬಹಿಷ್ಕರಿಸಿದ್ದ ದಕ್ಷಿಣ ಕಾಶ್ಮೀರ ಜಿಲ್ಲೆಯ ಬುಗಾಮ್ ಪ್ರದೇಶದ ಜನರು ಬಹಿಷ್ಕಾರವನ್ನು ಕೊನೆಗಾಣಿಸಿ ಚುನಾವಣೆಯಲ್ಲಿ ಮತ ಚಲಾಯಿಸಿದರು. ನಿಷೇಧಿತ ಜಮಾತ್–ಎ–ಇಸ್ಲಾಮಿ ಮತ್ತು ಹಿಜ್ಬುಲ್ ಮುಜಾಹಿದ್ದೀನ್ ಉಗ್ರಗಾಮಿ ಸಂಘಟನೆಗಳ ಜತೆಗಿನ ಸಂಬಂಧದಿಂದ ಈ ಪ್ರದೇಶ ಕುಖ್ಯಾತವಾಗಿದೆ. ಇಲ್ಲಿನ ಕುಲ್ಗಾಂ ಕ್ಷೇತ್ರದಲ್ಲಿ ಜಮಾತ್ ಬೆಂಬಲಿತ ಅಭ್ಯರ್ಥಿ ಸಯರ್ ಅಹ್ಮದ್ ರೇಶಿ ಪರ ದೊಡ್ಡ ರ‍್ಯಾಲಿ ಇಲ್ಲಿ ಆಯೋಜನೆಗೊಂಡಿತ್ತು.

1989ರ ಸಶಸ್ತ್ರ ಸಂಘರ್ಷದ ಬಳಿಕ ಬುಗಾಮ್ ಮತ್ತು ಸುತ್ತಮುತ್ತಲಿನ ನಿವಾಸಿಗಳು ಚುನಾವಣೆಗಳಲ್ಲಿ ಭಾಗವಹಿಸುತ್ತಿರಲಿಲ್ಲ. ಅದಾಗ್ಯೂ ಜಮಾತ್ ಬೆಂಬಲಿಗರು ಚುನಾವಣೆಯಲ್ಲಿ ಸ್ಪರ್ಧಿಸಿರುವುದು ಅನೇಕ ಮತದಾರರನ್ನು ಮತ ಚಲಾಯಿಸುವಂತೆ ಪ್ರೇರೇಪಿಸಿದೆ.

ಅಕ್ಟೋಬರ್ 1ರಿಂದಲೇ ಬಿಯರ್ ಪರಿಷ್ಕೃತ ದರ ಜಾರಿಗೆ ಸಾಧ್ಯತೆ!

ಬೆಂಗಳೂರು: ಒಂದೇ ವರ್ಷದ ಅವಧಿಯಲ್ಲಿ ಎರಡು ಬಾರಿ ಮದ್ಯ ಪ್ರಿಯರಿಗೆ ಶಾಕ್ ನೀಡಿದ್ದ ಸರ್ಕಾರ ಈಗ ಮತ್ತೊಮ್ಮೆ ಶಾಕ್ ಕೊಡಲು ಮುಂದಾಗಿದೆ. ಅಕ್ಟೋಬರ್ ಮೊದಲ ವಾರದಿಂದಲೇ ಮತ್ತೆ ಪರಿಷ್ಕೃತ ದರ ಜಾರಿ ಮಾಡುವ ಸಾಧ್ಯತೆಯಿದೆ ಎಂದು ಉನ್ನತ ಮೂಲಗಳಿಂದ ತಿಳಿದುಬಂದಿದೆ.

2023ರ ಜುಲೈನಲ್ಲಿ ಮಂಡಿಸಿದ್ದ ಬಜೆಟ್‌ನಲ್ಲಿ ಸಿಎಂ ಸಿದ್ದರಾಮಯ್ಯನವರು ಐಎಂಎಲ್ ಮೇಲೆ ಶೇ.20 ಮತ್ತು ಬಿಯರ್ ಮೇಲೆ ಶೇ.10 ಅಬಕಾರಿ ಸುಂಕ ಹೆಚ್ಚಿಸಿದ್ದರು. ಇದಕ್ಕೂ ಮುನ್ನ ರಾಜ್ಯದಲ್ಲಿ ತಯಾರಿಸಲಾದ ಅಥವಾ ಆಮದು ಮಾಡಿಕೊಳ್ಳುವ ಬಿಯರ್ ಬಾಟಲ್ ಮೇಲೆ ಹೆಚ್ಚುವರಿ ಅಬಕಾರಿ ಸುಂಕವನ್ನು ಶೇ.10ರಷ್ಟು ಹೆಚ್ಚಿಸಲಾಗಿತ್ತು. ಈಗ ಮತ್ತೊಮ್ಮೆ ಬಿಯರ್ ಬೆಲೆ ಏರಿಕೆ ಬಗ್ಗೆ ಅಬಕಾರಿ ಇಲಾಖೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ. ಇದಕ್ಕೆ ಸರ್ಕಾರ ಅಸ್ತು ಅಂದಿದ್ದು, ಅ.1ರಿಂದ ಬೆಲೆ ಏರಿಕೆಯಾಗುವ ಸಾಧ್ಯತೆ ಖಚಿತವಾದಂತಿದೆ. ಕಳೆದ ಆ.29ರಿಂದ ಪ್ರೀಮಿಯಂ, ಸೆಮಿ ಪ್ರೀಮಿಯಂ ಮದ್ಯದ ದರ ಇಳಿಸಿದ ಬೆನ್ನಲ್ಲೇ ಬಿಯರ್ ದರ ಹೆಚ್ಚಳಕ್ಕೆ ಸರ್ಕಾರ ಮುಂದಾಗಿದ್ದು, ಅ.1ರಿಂದ ಹೊಸ ದರಗಳು ಪರಿಷ್ಕರಣೆಗೊಳ್ಳುವ ಸಾಧ್ಯತೆ ಇದೆ.

ಸರೋದ್ ವಾದಕ ದಿವಂಗತ ಪಂಡಿತ್ ರಾಜೀವ್ ತಾರನಾಥ್‌ರಿಗೆ ಸಂಗೀತ ನಮನ



ಖ್ಯಾತ ಸರೋದ್ ವಾದಕ ದಿವಂಗತ ಪಂಡಿತ್ ರಾಜೀವ್ ತಾರನಾಥ್ ಅವರಿಗೆ ಸಂಗೀತ ನಮನ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು.

ಮೈಸೂರು, ಸೆ.18(ಎಂಕೆ)– ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ನಾದಬ್ರಹ್ಮ ಸಂಗೀತ ಸಭಾದಲ್ಲಿ ಜನಚೈತನ್ಯ ಫೌಂಡೇಷನ್ ವತಿಯಿಂದ ಅಂತರರಾಷ್ಟ್ರೀಯ ಖ್ಯಾತ ಸರೋದ್ ವಾದಕ ದಿವಂಗತ ಪಂಡಿತ್ ರಾಜೀವ್ ತಾರನಾಥ್ ಅವರಿಗೆ ಸಂಗೀತ ನಮನ ಸಲ್ಲಿಸಲಾಯಿತು.

ಜನಚೈತನ್ಯ ಫೌಂಡೇಷನ್ ಅಧ್ಯಕ್ಷ ಹಾಗೂ ವಕೀಲ ಆರ್.ಲಕ್ಷ್ಮಣ್ ನೇತೃತ್ವದಲ್ಲಿ ಗಾಯಕರಾದ ಜಾಯ್ಸ್ ವೈಶಾಖ್, ಸಿಂಚನ, ರವಿ ರಾಜ್, ಡಾ.ಎಸ್.ಆರ್. ತಿರುಮಲೇಶ್, ಪೂರ್ಣಿಮಾ, ಆರ್. ಪ್ರಮೋದ್, ಟಿ.ಬಬಿತ, ರಾಜೇಶ್ ಕಲ್ರೋ, ಪುಷ್ಪಲತಾ ಮತ್ತಿತರರು ಶ್ರೀ ಗುರುರಾಘವೇಂದ್ರ ಸ್ವಾಮಿಯ ಆರಾಧನೆಯೊಂದಿಗೆ ಭಾವಗೀತೆ, ಜನಪದ ಗೀತೆ, ರಂಗಗೀತೆಗಳನ್ನು ಹಾಡಿದರು.

ಇದಕ್ಕೂ ಮುನ್ನ ದಿವಂಗತ ಪಂಡಿತ್ ರಾಜೀವ್ ತಾರನಾಥ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಾಯಿತು. ಪಂಡಿತ್ ರಾಜೀವ್ ತಾರನಾಥ್ ಅವರ ಪುತ್ರಿ ಪ್ರೊ.ಕೃಷ್ಣಮನವಳ್ಳಿ, ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಪತ್ರಕರ್ತ ಅಂಶಿಪ್ರಸನ್ನಕುಮಾರ್, ಕರ್ನಾಟಕ ಸುಗಮ ಸಂಗೀತ ಪರಿಷತ್ ಜಿಲ್ಲಾಧ್ಯಕ್ಷ ಡಾ.ನಾಗರಾಜ್ ವಿ.ಬೈರಿ ಮತ್ತಿತರರು.

ರೋಟರಿ ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯದಲ್ಲಿ ಮೈಸೂರಿನ ತಂಡದ ಸಾಧನೆ



ರೋಟರಿ ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯ ವಿಜೇತರಿಗೆ ಹಿರಿಯ ನಟಿ ಬಿ.ಜಯಶ್ರೀ ಬಹುಮಾನ ವಿತರಿಸಿದರು.

ಮೈಸೂರು, ಸೆ.18–ರೋಟರಿ ಅಂತರ ಜಿಲ್ಲಾ ಕ್ರಿಕೆಟ್ ಪಂದ್ಯಾವಳಿಯಲ್ಲಿ ಭಾಗವಹಿಸಿದ್ದ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು (ರೋಟರಿ ಜಿಲ್ಲೆ 3181) ವಲಯ–8ರ ತಂಡ ಅದ್ಭುತ ಪ್ರದರ್ಶನ ನೀಡಿ ಜಯಭೇರಿ ಬಾರಿಸುವ ಮೂಲಕ ಪ್ರಥಮ ಸ್ಥಾನ ಪಡೆದುಕೊಂಡಿದೆ.

ಬೆಂಗಳೂರಿನ ಜೆ.ಪಿ.ನಗರದಲ್ಲಿರುವ ವಿಇಟಿ ಕಾಲೇಜು ಮೈದಾನದಲ್ಲಿ ಈ ಪಂದ್ಯಾವಳಿ ನಡೆಯಿತು. ರೋಟರಿ ಅಂತರ ಜಿಲ್ಲಾ ಅಂದರೆ ರೋಟರಿ ಜಿಲ್ಲೆಗಳಾದ 3191, 3192 ಮತ್ತು 3181 ರಿಂದ ಭಾಗವಹಿಸಿದ್ದ 8 ಕ್ರಿಕೆಟ್ ತಂಡಗಳ ಪೈಕಿ ಸಾಂಸ್ಕೃತಿಕ ನಗರಿ ಮೈಸೂರಿನ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು (ರೋಟರಿ ಜಿಲ್ಲೆ 3181) ತಂಡ ಕೂಡ ಒಂದಾಗಿದ್ದು, ಕ್ಲಬ್‌ನ ಆಟಗಾರರು ಆಡಿದ 5 ಪಂದ್ಯಗಳಲ್ಲೂ ಗೆಲುವು ಸಾಧಿಸಿ, ಪ್ರಶಂಸೆಗೊಳಗಾಗಿದ್ದಾರೆ.

ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರ್ ಅಧ್ಯಕ್ಷ ರೊ.ಆರ್.ರಾಜೇಶ್ ನೇತೃತ್ವದಲ್ಲಿ ಮತ್ತು ಕ್ಯಾಪ್ಟನ್ ರೊ. ನವೀನ್ ಚಂದ್ ನಾಯಕತ್ವದಲ್ಲಿ, ಕ್ರಿಕೆಟ್ ಆಟಗಾರರಾದ ರೊ.ವಿನಯ್, ರೊ.ಬಾಲಸುಬ್ರಹ್ಮಣ್ಯ, ರೊ.ಪೃಥ್ವಿ ರೊ.ಪ್ರೀತಮ್, ರೊ.ಸುನೀಲ್, ರೊ.ಸುಬ್ರಹ್ಮಣ್ಯ, ರೊ.ಅಶೋಕ, ರೊ.ಮಧು ಅತ್ಯದ್ಭುತ ಪ್ರದರ್ಶನ ನೀಡಿ, ಜಯದ ಕೀರಿಟ ತಮ್ಮದಾಗಿಸಿಕೊಂಡರು.

ತಂಡದ ಕ್ರಿಕೆಟ್ ಆಟಗಾರರಾದ ರೊ.ವಿನಯ್‌ಕುಮಾರ್ ಸರಣಿಯಲ್ಲಿ ಅತೀ ಹೆಚ್ಚು ರನ್ ಗಳಿಸಿ ಆಲ್‌ರೌಂಡರ್ ಪ್ರದರ್ಶನ ನೀಡಿ ಸರಣಿಶ್ರೇಷ್ಠ ಪ್ರಶಸ್ತಿಗೆ ಪಾತ್ರರಾದರಲ್ಲದೆ, ಉತ್ತಮ ಬೌಲರ್ ಆಗಿ ರೊ.ಪ್ರೀತಮ್ ಹೊರಹೊಮ್ಮಿದರು. ಹಾಗೆಯೇ ಪಂದ್ಯ ಪುರುಷೋತ್ತಮ ಪ್ರಶಸ್ತಿಗಳನ್ನು ರೊ.ಬಾಲಸುಬ್ರಹ್ಮಣ್ಯ, ರೊ. ವಿನಯ್‌ಕುಮಾರ್, ರೊ.ಸುನೀಲ್, ರೊ.ಪೃಥ್ವಿರಾಜ್, ರೊ.ಮಧು ಮತ್ತು ರೊ.ಪ್ರೀತಮ್ ಅವರು ಪಡೆದುಕೊಂಡರಲ್ಲದೆ, ತಂಡದ ನಾಯಕರಾದ ರೊ.ನವೀನ್ ತಂಡವನ್ನು ಮುನ್ನಡೆಸುವಲ್ಲಿ ಯಶಸ್ವಿಯಾದರು.

ರೋಟರಿ ಅಂತರ ಜಿಲ್ಲಾ ಕ್ರೀಡಾ ಕೂಟದ ನಿರ್ದೇಶಕರಾದ ರೊ.ಜಿ.ಎಸ್. ಬಸವರಾಜ್ ಈ ಟೆನ್ನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಿದ್ದು, ಈ ಒಂದು ಪಂದ್ಯಾವಳಿಗೆ ರೋಟರಿ ಜಿಲ್ಲೆ 3181 ರಿಂದ, ಮೈಸೂರಿನಿಂದ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರು ವಲಯ–08 ತಂಡ ಭಾಗವಹಿಸಿದ್ದಲ್ಲದೆ, ಉತ್ತಮ ಪ್ರದರ್ಶನ ನೀಡಿ ರೋಟರಿ ಕ್ಲಬ್ ಆಫ್ ಹೆರಿಟೇಜ್ ಮೈಸೂರ್‌ನ ಹಿರಿಮೆಯನ್ನು ಹೆರಿಟೇಜ್ ಕ್ರಿಕೆಟ್ ತಂಡ ಹೆಚ್ಚಿಸಿದ್ದಾರೆ. ಕಲಾವಿದೆ ಹಾಗೂ ಹಿರಿಯ ನಟಿ ಬಿ.ಜಯಶ್ರೀ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ವಿಜೇತರಿಗೆ ಬಹುಮಾನ ವಿತರಿಸಿದರು.

ಅರ್ಜಿ ಆಹ್ವಾನ

ಮೈಸೂರು, ಸೆ.18–ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಡಿಪ್ಲೊಮಾ ಪ್ರವೇಶಕ್ಕಾಗಿ ವಿವಿಧ ಕೋರ್ಸ್‌ಗಳಿಗೆ ಪ್ರವೇಶಾತಿಯನ್ನು ಪ್ರಾರಂಭ ಮಾಡಲಾಗಿದ್ದು, ಎಸ್‌ಎಸ್‌ಎಲ್‌ಸಿ ಪಾಸಾದ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಎಸ್‌ಎಸ್‌ಎಲ್‌ಸಿ ಪಾಸಾದ ಅಭ್ಯರ್ಥಿಗಳಿಗೆ ಡಿಪ್ಲೊಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಮ್ಯಾನುಫ್ಯಾಕ್ಚರಿಂಗ್ ಹಾಗೂ ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಕೋರ್ಸ್‌ಗಳು ಲಭ್ಯವಿದ್ದು, 3 ವರ್ಷ ಕೋರ್ಸ್ ಹಾಗೂ ಕಡ್ಡಾಯ 1 ವರ್ಷದ ಇಂಟರ್ನ್‌ಶಿಪ್ ತರಬೇತಿ ನೀಡಲಾಗುವುದು. ಅರ್ಜಿ ಸಲ್ಲಿಸಲು ಸೆ.25 ಕೊನೇ ದಿನ. ಮಾಹಿತಿಗೆ ದೂ.ಸಂ:821–2582750, ಸಹಾಯವಾಣಿ: 155267, ಮೊ.: 9980557205, 8660139259, 9141630315, 9880068986, https://gttc.karnataka.gov.in ಹಾಗೂ http://cetonline.karnataka.gov.in/kea ಅನ್ನು ಸಂಪರ್ಕಿಸಬಹುದು.

ಖೋ–ಖೋ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ



ಮೈಸೂರಿನ ವಿಜಯನಗರದಲ್ಲಿರುವ ಅನಂತಗೀತ ವಿದ್ಯಾಲಯದ ವಿದ್ಯಾರ್ಥಿಗಳು ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ಜಿಲ್ಲಾ ಪಂಚಾಯತ್ ಸಹಯೋಗದಲ್ಲಿ ಏರ್ಪಡಿಸಿದ್ದ ವಲಯ ಮಟ್ಟದ ಖೋ–ಖೋ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಗಳಿಸಿದ್ದಾರೆ. ವಿಜೇತ ವಿದ್ಯಾರ್ಥಿಗಳನ್ನು ಶಾಲೆಯ ಮುಖ್ಯ ಶಿಕ್ಷಕ ಲೋಕೇಶ್, ದೈಹಿಕ ಶಿಕ್ಷಕ ಹೆಚ್.ಪಿ.ಜಗದೀಶ್, ಶಿಕ್ಷಕರಾದ ಶಿಲ್ಪಾ, ಶಿಲ್ಪಶ್ರೀ, ಆಶಾ ಅಭಿನಂದಿಸಿದರು.

ರಾಜೇಂದ್ರ ಶ್ರೀಗಳು ಜ್ಞಾನದ ಜ್ಯೋತಿ ಮೂಲಕ ಅಜ್ಞಾನದ ಅಪಾಯ ತಡೆದರು



ಡಾ. ರಾಜೇಂದ್ರ ಶ್ರೀಗಳ ಜಯಂತಿ ಕಾರ್ಯಕ್ರಮದಲ್ಲಿ ದತ್ತಿ ಉಪನ್ಯಾಸ ನಡೆಯಿತು.

ಮೈಸೂರು,ಸೆ.18–ಕೆಡಕುಗಳಿಗೆ ಅಜ್ಞಾನ ಕಾರಣ. ಸುಶಿಕ್ಷಿತ ಯುವಕರಿದ್ದರೆ ದೇಶ ಸುಭಿಕ್ಷವಾಗುತ್ತದೆ ಎಂದು ತಿಳಿದು ಶ್ರೀ ಶಿವರಾತ್ರಿ ರಾಜೇಂದ್ರ ಸ್ವಾಮಿಗಳು ಜ್ಞಾನದ ಜ್ಯೋತಿ ಬೆಳಗಿದರು ಎಂದು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಹೇಳಿದರು.

ಸರಗೂರು ಬಿಡಗಲು–ಪಡುವಲು ಶ್ರೀವಿರಕ್ತ ಮಠದಲ್ಲಿ ಬುಧವಾರ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಏರ್ಪಡಿಸಿದ್ದ ರಾಜೇಂದ್ರ ಶ್ರೀಗಳ ಜಯಂತಿಯಲ್ಲಿ ಅವರು ದತ್ತಿ ಉಪನ್ಯಾಸ ನೀಡಿದರು.

ರಾಜೇಂದ್ರ ಶ್ರೀಗಳು ತ್ಯಾಗ ಮತ್ತು ಸೇವೆ ಎಂಬ ಎರಡು ಆದರ್ಶಗಳನ್ನು ತಮ್ಮ ಧ್ಯೇಯವಾಗಿಸಿಕೊಂಡು ತಾವು ಕಂಡ ಜ್ಞಾನಾನ್ನ ದಾಸೋಹವನ್ನು ನನಸು ಮಾಡಲು ಜೋಳಿಗೆ ಹಿಡಿದು ಭಿಕ್ಷೆ ಎತ್ತಿದರು. ಗ್ರಾಮೀಣ ಪ್ರದೇಶದಿಂದ ವಿದ್ಯೆ ಕಲಿಯಲು ಬಂದ ಮಕ್ಕಳು ಊಟ–ವಸತಿಗೆ ಪರದಾಡುವುದನ್ನು ಕಂಡು ಚಿನ್ನದ ರುದ್ರಾಕ್ಷಿ ಸರ, ಕರಡಿಗೆ, ಉಂಗುರು ಮಾರಿ ವಿದ್ಯಾರ್ಥಿನಿಲಯ ಆರಂಭಿಸಿದರು. ಅದೇ ಮುಂದೆ ಜೆಎಸ್‌ಎಸ್ ಮಹಾ ವಿದ್ಯಾಪೀಠವಾಗಿ ಇವತ್ತು 350ಕ್ಕೂ ಹೆಚ್ಚು ಸಂಸ್ಥೆಗಳ ಒಳಗೊಂಡು ಹೆಮ್ಮರವಾಗಿ ಬೆಳೆದು ನಿಂತಿದೆ. ಲಕ್ಷಾಂತರ ಮಂದಿಗೆ ವಿದ್ಯೆ ನೀಡಿದೆ. ಸಹಸ್ರಾರು ಮಂದಿಗೆ ಉದ್ಯೋಗ ನೀಡಿ, ಬದುಕು ಕಟ್ಟಿಕೊಳ್ಳಲು ದಾರಿ ಮಾಡಿಕೊಟ್ಟಿದೆ ಎಂದರು. ಈಗಿನ ಶ್ರೀ ದೇಶಿಕೇಂದ್ರ ಸ್ವಾಮಿಗಳು ಅದನ್ನು ಮುಂದುವರೆಸಿ, ಕನ್ಯಾಕುಮಾರಿಯಿಂದ ಕಾಶ್ಮೀರದವರೆಗೆ, ಭಾರತ ಮಾತ್ರವಲ್ಲದೇ ವಿದೇಶಗಳಲ್ಲೂ ಸಂಸ್ಥೆಗಳನ್ನು ವಿಸ್ತರಿಸಿದ್ದಾರೆ ಎಂದರು.

ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ನಾಳೆಯಿಂದ ಗಾಂಧಿ ಶಿಲ್ಪ ಬಜಾರ್; ಗರ್ವಿ ಗುರ್ಜರಿ ಕರಕುಶಲ ವಸ್ತುಪ್ರದರ್ಶನ



ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಆಯೋಜಿಸಿರುವ ಗಾಂಧಿ ಶಿಲ್ಪ ಬಜಾರ್ ಹಾಗೂ ಗರ್ವಿ ಗುರ್ಜರಿ ಕರಕುಶಲ ವಸ್ತುಪ್ರದರ್ಶನ ಮತ್ತು ಮಾರಾಟ ಮೇಳ.

ಮೈಸೂರು,ಸೆ.18(ಜಿಎ)–ಭಾರತ ಸರಕಾರದ ಜವಳಿ ಮಂತ್ರಾಲಯದ ವತಿಯಿಂದ ಗುಜರಾತ್ ರಾಜ್ಯ ಕೈಮಗ್ಗ ಮತ್ತು ಕರಕುಶಲ ಅಭಿವೃದ್ಧಿ ನಿಗಮದ ಪ್ರಾಯೋಜಕತ್ವದಲ್ಲಿ ಮೈಸೂರಿನ ರಿಂಗ್ ರಸ್ತೆಯಲ್ಲಿರುವ ಜೆಎಸ್‌ಎಸ್ ಅರ್ಬನ್ ಹಾತ್‌ನಲ್ಲಿ ಸೆ.20ರಿಂದ 26ರವರೆಗೆ ಗಾಂಧಿ ಶಿಲ್ಪ ಬಜಾರ್ ಹಾಗೂ ಗರ್ವಿ ಗುರ್ಜರಿ ಕರಕುಶಲ ವಸ್ತುಪ್ರದರ್ಶನ ಮತ್ತು ಮಾರಾಟವನ್ನು ಏರ್ಪಡಿಸಲಾಗಿದೆ ಎಂದು ಸಂಯೋಜಕ ರಾಕೇಶ್ ರೈ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮರದ ಕೆತ್ತನೆ, ಶಿಲಾ ಶಿಲ್ಪ, ಕಂಚಿನ ವಿಗ್ರಹಗಳು, ಮರದ ಕುಂದಣ ಕಲೆ, ಮಣ್ಣಿನ ಮಡಿಕೆಗಳು, ಪೇಪರ್, ರತ್ನಗಂಬಳಿ, ಹತ್ತಿ ಜಮಖಾನ, ಇಮಿಟೇಶನ್ ಆಭರಣಗಳು, ಮರದ ಅರಗಿನ ಕಲಾ ವಸ್ತುಗಳು, ಬಾಟಿಕ್, ಕಲಾಂಕಾರಿ ಚಿತ್ರಕಲೆ, ಚರ್ಮದ ಆಕರ್ಷಕ ವಸ್ತುಗಳು, ಕಲಾತ್ಮಕ ಚರ್ಮದ ಚಪ್ಪಲಿಗಳು, ಚನ್ನಪಟ್ಟಣದ ಗೊಂಬೆಗಳು, ಕಸೂತಿ ಕಲೆ, ಮಹೇಶ್ವರಿ, ಚಂದೇರಿ ಸೀರೆಗಳು, ಪಟ್ಟ ಚಿತ್ರ, ಬೆಳ್ಳಿಯ ಸೂಕ್ಷ್ಮ ವಿನ್ಯಾಸ ವಸ್ತುಗಳು, ಬಿದಿರು–ಬೆತ್ತದ ವಸ್ತುಗಳು, ಚಿಕನ್ ಎಂಬ್ರಾಯ್ಡರಿ, ಡ್ರೈ ಫ್ಲವರ್‌ಗಳು, ಕಲಾತ್ಮಕ ಕಲ್ಲಿನ ವಸ್ತುಗಳು, ಫುಲ್ಕಾರಿ ಬಟ್ಟೆಗಳು ಈ ಮೇಳದಲ್ಲಿ ಒಂದೇ ಸೂರಿನಡಿ ಖರೀದಿಗೆ ಸಿಗಲಿದೆ.

ವಸ್ತುಪ್ರದರ್ಶನವನ್ನು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಸೆ.20ರಂದು ಶುಕ್ರವಾರ ಸಂಜೆ 4 ಗಂಟೆಗೆ ಉದ್ಘಾಟಿಸಲಿದ್ದಾರೆ.

ಜೆಎಸ್‌ಎಸ್ ಮಹಾವಿದ್ಯಾಪೀಠದ ಕಾರ್ಯನಿರ್ವಾಹಕ ಕಾರ್ಯದರ್ಶಿ ಡಾ ಸಿ.ಜಿ.ಬೆಟಸೂರಮಠ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೈಮಗ್ಗ ಮತ್ತು ಜವಳಿ ಇಲಾಖೆ ಆಯುಕ್ತೆ ಶ್ರೀಮತಿ ಕೆ.ಜ್ಯೋತಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಕೆ.ಎಂ.ಗಾಯಿತ್ರಿ, ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕಿ ಶ್ರೀಮತಿ ಶಿಲ್ಪಿ ಅಗರ್ವಾಲ್, ಗುಜರಾತ್ ಸ್ಟೇಟ್ ಹ್ಯಾಂಡ್‌ಲೂಮ್ ಮತ್ತು ಹ್ಯಾಂಡಿಕ್ರಾಫ್ಟ್ಸ್ ಡೆವಲಪ್‌ಮೆಂಟ್ ಕಾರ್ಪೊರೇಷನ್ ಲಿಮಿಟೆಡ್ ನಿರ್ದೇಶಕ ಲಲಿತ್ ನಾರಾಯಣ್ ಸಿಂಗ್ ಸಂಡು, ಡಾ.ಪಾರುಲ್ ಮನ್ಸಟ, ಲಕ್ಷ್ಮಣ್‌ರಾವ್ ಅತುಕುರಿ, ಆರ್.ಆರ್.ಜಾದವ್, ಕೆ.ಎಸ್. ಸುನಿಲ್‌ಕುಮಾರ್ ಭಾಗವಹಿಸಲಿದ್ದಾರೆ. ಪ್ರದರ್ಶನವು ಬೆಳಗ್ಗೆ 10.30ರಿಂದ ರಾತ್ರಿ 9 ರವರೆಗೆ ತೆರೆದಿರುತ್ತದೆ. ಸುದ್ದಿಗೋಷ್ಠಿಯಲ್ಲಿ ಕೇಂದ್ರ ಕರಕುಶಲ ಉತ್ಪನ್ನಗಳ ಪ್ರಾಯೋಜಕ ಅಧಿಕಾರಿ ಸಬೀರ, ಜೆಎಸ್‌ಎಸ್ ಅರ್ಬನ್ ಹಾಥ್ ವ್ಯವಸ್ಥಾಪಕ ಶಿವನಂಜಸ್ವಾಮಿ ಉಪಸ್ಥಿತರಿದ್ದರು.

ಮೇಳದ ವಿಶೇಷತೆಗಳು

ಗುಜರಾತ್ ರಾಜ್ಯದ ವಿವಿಧ ಭಾಗಗಳ ಪ್ರಸಿದ್ಧ ಹಾಗೂ ಕ್ರಿಯಾಶೀಲರಾಗಿರುವ ಸುಮಾರು 30ಕ್ಕೂ ಹೆಚ್ಚು ಕುಶಲಕರ್ಮಿಗಳು ಮೇಳದಲ್ಲಿ ಭಾಗವಹಿಸುವರು. ಕುಶಲಕರ್ಮಿಗಳು ತಯಾರಿಸಿದ ಪಟೋಲ ಸೀರೆಗಳು, ಬಾಂದಿನಿ ಸೀರೆಗಳು, ಕಸೂತಿ ಮಾಡಿದ ಬೆಡ್‌ಶೀಟ್‌ಗಳು, ಟವಲ್‌ಗಳು, ಕುಶನ್ ಕವರ್‌ಗಳು, ಪರಿಸರ ಸ್ನೇಹಿ ಆಭರಣಗಳು, ಡ್ರೆಸ್ ಮೆಟೀರಿಯಲ್‌ಗಳು, ಮಣ್ಣಿನಿಂದ ತಯಾರಿಸಿದ ವಸ್ತುಗಳು, ಬೀಡ್ ವರ್ಕ್, ಮೆಟಲ್ ವರ್ಕ್, ಕುರ್ತಿಗಳು, ಚನಿಯಾ ಚೋಲಿ, ಬಾಂದಿನಿ ಹಾಗೂ ಇನ್ನಿತರ ಆಕರ್ಷಣೀಯ ಕರಕುಶಲ, ಕೈಮಗ್ಗ ಉತ್ಪನ್ನಗಳನ್ನು ಪ್ರದರ್ಶಿಸಿ ಮಾರಾಟ ಮಾಡಲಿದ್ದಾರೆ. ಮೇಳದ ವಿಶೇಷ ಎಂದರೆ ತಯಾರಕರಿಂದಲೇ ನೇರವಾಗಿ ಗ್ರಾಹಕರಿಗೆ ಕೈಗೆಟಕುವ ಬೆಲೆಯಲ್ಲಿ ಒದಗಿಸುವ ಪ್ರಯತ್ನವನ್ನು ಗುಜರಾತ್ ಸರ್ಕಾರ ಮಾಡುತ್ತಿದೆ. ಈ ಕಾರಣದಿಂದಾಗಿ ಮೈಸೂರು ಹಾಗೂ ಸುತ್ತಮುತ್ತಲಿನ ಗ್ರಾಹಕರಿಗೆ ಗುಜರಾತ್ ಸಂಸ್ಕೃತಿಯ ಉಡುಗೆ–ತೊಡುಗೆಗಳು ಮತ್ತು ಅಲಂಕಾರಿಕ ವಸ್ತುಗಳು ನೇರವಾಗಿ, ಉತ್ತಮ ಗುಣಮಟ್ಟದಲ್ಲಿ, ಕಡಿಮೆ ಬೆಲೆಗೆ ದೊರೆಯಲಿದೆ.

ಬೆಂಕಿ ತಗುಲಿ ಮೂರುವರೆ ಎಕರೆ ಕಬ್ಬು ಭಸ್ಮ



ಪಾಂಡವಪುರ ತಾಲೂಕಿನ ಚಂದ್ರೆ ಗ್ರಾಮದಲ್ಲಿ ಆಕಸ್ಮಿಕ ಬೆಂಕಿ ತಗುಲಿ ಸುಟ್ಟುಭಸ್ಮವಾಗಿರುವ ಕಬ್ಬಿನ ಗದ್ದೆ.

ಪಾಂಡವಪುರ: ಆಕಸ್ಮಿಕ ಬೆಂಕಿ ತಗುಲಿ ಮೂರುವರೆ ಎಕರೆ ಕಬ್ಬು ಸುಟ್ಟು ಭಸ್ಮವಾಗಿರುವ ಘಟನೆ ತಾಲೂಕಿನ ಚಂದ್ರೆ ಗ್ರಾಮದಲ್ಲಿ ಬುಧವಾರ ಬೆಳಿಗ್ಗೆ ಸಂಭವಿಸಿದೆ.

ಚಂದ್ರೆ ಗ್ರಾಮದ ನಿವಾಸಿಗಳಾದ ಸ್ವಾಮಿಗೌಡರ ಅರ್ಧ ಎಕರೆ, ಚಿಕ್ಕಮರೀಗೌಡರ ಒಂದು ಎಕರೆ, ಲೋಕೇಶ್ ಅವರ ಅರ್ಧ ಎಕರೆ, ದಾಳೇಗೌಡರ ಒಂದು ಎಕರೆ ಹಾಗೂ ಸತೀಶ್ ಅವರ ಅರ್ಧ ಎಕರೆಯಲ್ಲಿ ಬೆಳೆದಿದ್ದ ಕಬ್ಬು ಬೆಂಕಿಯಿಂದ ಸುಟ್ಟು ಭಸ್ಮವಾಗಿದೆ. ಇದರ ಜತೆಗೆ ಕಬ್ಬಿನ ಗದ್ದೆಯೊಳಗೆ ಹಾಕಿದ್ದ 100ಕ್ಕೂ ಅಧಿಕ ತೆಂಗಿನ ಸಸಿ ಹಾಗೂ ಹನಿ ನೀರಾವರಿಯ ಪೈಪ್‌ಗಳು ಸಂಪೂರ್ಣವಾಗಿ ಸುಟ್ಟು ಹೋಗಿದ್ದು ಲಕ್ಷಾಂತರ ರೂ.ನಷ್ಟವಾಗಿದೆ.

ಬುಧವಾರ ಬೆಳಿಗ್ಗೆ 11 ಗಂಟೆ ಸುಮಾರಿಗೆ ಕಬ್ಬಿಗೆ ಬೆಂಕಿ ತಗುಲಿದ್ದು ಅಕ್ಕಪಕ್ಕದ ರೈತರು ತಕ್ಷಣ ಕಬ್ಬಿನ ಗದ್ದೆ ಮಾಲೀಕರಿಗೆ ವಿಷಯ ಮುಟ್ಟಿಸಿದ್ದಾರೆ. ಕೂಡಲೆ ಅವರು ಅಗ್ನಿ ಶಾಮಕ ದಳದ ಸಿಬ್ಬಂದಿಗೆ ವಿಷಯ ತಿಳಿಸಿದ್ದಾರೆ. ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿಗಳು ತಕ್ಷಣ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು.

ತಪ್ಪಿದ ಬಾರಿ ಅನಾಹುತ: ಅಗ್ನಿ ಶಾಮಕ ದಳದ ಸಿಬ್ಬಂದಿಗಳು ಸಮಯದ ಸಮಯಕ್ಕೆ ಸ್ಥಳಕ್ಕೆ ಆಗಮಿಸಿ ಬೆಂಕಿ ನಂದಿಸದೇ ಹೋಗಿದ್ದರೆ ಇದೀಗ ಸುಟ್ಟುಹೋಗಿರುವ ಮೂರುವರೆ ಎಕರೆ ಕಬ್ಬು ಜತೆಗೆ ಅಕ್ಕಪಕ್ಕದ ಇನ್ನೂ ನಾಲ್ಕೈದು ಎಕರೆಯಷ್ಟು ಕಬ್ಬಿನ ಬೆಳೆಯ ಜತೆಗೆ ಪಕ್ಕದಲ್ಲೇ ಇದ್ದ ಕೋಳಿ ಫಾರಂಗಳು ಸಹ ಸುಟ್ಟು ಹೋಗುತ್ತಿತ್ತು ಎನ್ನಲಾಗಿದೆ.

ಅಧಿಕಾರಿಗಳು ಭೇಟಿ: ವಿಷಯ ತಿಳಿದ ಕಂದಾಯ ಇಲಾಖೆಯ ರೆವಿನ್ಯೂ ಇನ್ಸ್‌ಪೆಕ್ಟರ್, ಗ್ರಾಮ ಲೆಕ್ಕಾಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪರಿಶೀಲನೆ ನಡೆಸಿ ಸುಟ್ಟುಹೋಗಿರುವ ಕಬ್ಬಿನ ಗದ್ದೆಯ ಮಾಹಿತಿ ಪಡೆದುಕೊಂಡರು.

ರೈತ ದಾಳೇಗೌಡ ಮಾತನಾಡಿ, ಕಬ್ಬಿಗೆ ಆಕಸ್ಮಿಕ ಬೆಂಕಿ ತಗುಲಿ ನಾಲ್ವರು ಮಂದಿ ರೈತರ ಸುಮಾರು ಮೂರುವರೆ ಎಕರೆ ಕಬ್ಬು ಸುಟ್ಟುಭಸ್ಮವಾಗಿದೆ. ಕಬ್ಬಿನ ಜತೆಗೆ ಕಬ್ಬಿನ ಗದ್ದೆಯೊಳಗಿದ್ದ ಸುಮಾರು 70ಕ್ಕೂ ಅಧಿಕ ತೆಂಗಿನ ಸಸಿ ಹಾಗೂ ಹನಿನೀರಾವರಿ ಪದ್ಧತಿಯ ಪೈಪ್‌ಗಳು ಸಂಪೂರ್ಣವಾಗಿ ಸುಟ್ಟುಭಸ್ಮವಾಗಿದೆ. ಘಟನೆಯಿಂದ ರೈತರು ಸಂಕಷ್ಟಕ್ಕೆ ಒಳಗಾಗಿದ್ದು, ಸಂಬಂಧಿಸಿದ ಅಧಿಕಾರಿಗಳು ಸೂಕ್ತಪರಿಹಾರ ದೊರಕಿಸಿಕೊಡುವ ಮೂಲಕ ರೈತರ ಸಂಕಷ್ಟಕ್ಕೆ ನೆರವಾಗಬೇಕೆಂದು ಒತ್ತಾಯಿಸಿದ್ದಾರೆ.

ಸಾಹಿತ್ಯೇತರ ವ್ಯಕ್ತಿಗೆ ಸಮ್ಮೇಳನಾಧ್ಯಕ್ಷತೆ ನೀಡಿ

ಮಠಾಧೀಶರು, ರಾಜಕಾರಣಿಗಳು, ಪತ್ರಿಕೋದ್ಯಮಿಗಳಿಂದ ಹೆಚ್ಚಿದ ಒತ್ತಡ:ಜೋಶಿ



ಸಂವಾದದಲ್ಲಿ ಮಾತನಾಡುತ್ತಿರುವ ಡಾ.ಮಹೇಶ್ ಜೋಶಿ

ಮಂಡ್ಯ,ಸೆ.18– ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯೇತರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸಾಧಕರನ್ನೂ ಸಮ್ಮೇಳನಾಧ್ಯಕ್ಷರನ್ನಾಗಿ ಏಕೆ ಪರಿಗಣಿಸಬಾರದು ಎಂಬ ಒತ್ತಡ ಪರಿಷತ್ತಿನ ಮುಂದೆ ಬಂದಿದೆ ಎಂದು ಕಸಾಪ ರಾಜ್ಯಾಧ್ಯಕ್ಷ ನಾಡೋಜ ಡಾ.ಮಹೇಶ್ ಜೋಶಿ ತಿಳಿಸಿದರು.

ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಬುಧವಾರ ನಡೆದ ಸಂವಾದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ರಾಜ್ಯದ ಕೆಲವು ಪ್ರತಿಷ್ಠಿತ ಮಠಗಳ ಮಠಾಧೀಶರು, ರಾಜಕಾರಣಿಗಳು, ಪತ್ರಿಕೋದ್ಯಮಿಗಳು ಕೂಡ ನನ್ನ ಮುಂದೆ ಈ ಪ್ರಸ್ತಾವನ್ನಿಟ್ಟು ವಿಚಾರ ವಿನಿಮಯಕ್ಕೆ ಮುಂದಾಗಿದ್ದಾರೆ ಎಂದು ಹೇಳಿದರು.

ಕನ್ನಡ ನಾಡು, ನುಡಿ, ನೆಲ, ಜಲ, ಸಂಸ್ಕೃತಿ ಕ್ಷೇತ್ರದಲ್ಲಿ ನಾವೂ ಕೂಡ ನಮ್ಮದೇ ಆದ ಹೋರಾಟ ನಡೆಸಿಕೊಂಡು ಬರುತ್ತಿದ್ದೇವೆ. ಆ ಮೂಲಕ ಕನ್ನಡ ತಾಯಿಯ ಸೇವೆ ಮಾಡುತ್ತಿದ್ದೇವೆ. ಹೀಗಾಗಿ ನಮಗೂ ಏಕೆ ಅವಕಾಶ ನೀಡಬಾರದು ಎಂಬ ಚರ್ಚೆಗೆ ಕಾವು ನೀಡಿದ್ದಾರೆ. ವಾಸ್ತವದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಬೈಲಾ ಪ್ರಕಾರ ಕನ್ನಡ ನಾಡು, ನುಡಿ, ಜಲ, ನೆಲ, ಸಂಸ್ಕೃತಿಯ ಸೇವೆ ಮಾಡುತ್ತಿರುವವರು ಪರಿಷತ್ತಿನ ಸೇವಕರೇ ಆಗಿದ್ದಾರೆ ಎನ್ನುತ್ತದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಪರಿಷತ್ತನ್ನು ಸ್ಥಾಪಿಸಿದ ಉದ್ದೇಶವೂ ಸಾಹಿತ್ಯ ಮತ್ತು ನೆಲ, ಜಲ, ಭಾಷೆಯ ಸಂರಕ್ಷಣೆ ಆದ್ಯತೆ ಪಡೆದಿತ್ತು. ಇದನ್ನೇ ಸಾಹಿತ್ಯೇತರ ಕ್ಷೇತ್ರದವರು ಈಗ ಪ್ರಶ್ನೆ ಮಾಡುತ್ತಿದ್ದಾರೆ. ಪರಿಷತ್ತಿನ ರಾಜ್ಯಾಧ್ಯಕ್ಷನಾಗಿ ಇವೆಲ್ಲದರ ಅಭಿಪ್ರಾಯಗಳನ್ನೂ ಗೌರವದಿಂದ ಆಲಿಸಿದ್ದೇನೆ. ಮನವಿ ಸ್ವೀಕರಿಸಿದ್ದೇನೆ. ನಂತರದಲ್ಲಿ ಪರಿಷತ್ತಿನ ವೇದಿಕೆಯಲ್ಲಿ ಚರ್ಚಿಸಿ ಅಂತಿಮ ನಿರ್ಧಾರ ಕೈಗೊಳ್ಳುವುದು ಪರಿಷತ್ತಿನ ಪರಮಾಧಿಕಾರ ಎಂದು ವಿಶ್ಲೇಷಿಸಿದರು.

ಈಗಾಗಲೇ ಹಾವೇರಿ, ಗುಲ್ಬರ್ಗಾದಲ್ಲಿ ನಡೆದ ಸಾಹಿತ್ಯ ಸಮ್ಮೇಳನದಲ್ಲಿ ಸಾಹಿತ್ಯ ಪರಿಚಾರಕರಿಗೆ ಯಾವುದೇ ಸೌಲಭ್ಯದಲ್ಲೂ ಕಿಂಚಿತ್ತೂ ಕೊರತೆ ಕಾಡದಂತೆ ಎಚ್ಚರಿಕೆ ವಹಿಸಿ ಕಾರ್ಯಕ್ರಮ ಆಯೋಜಿಸಿ ಯಶಸ್ವಿಯಾಗಿದ್ದೇವೆ. ಇದರ ಅನುಭವದಲ್ಲಿ ಇದೀಗ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನವನ್ನು ಮಂಡ್ಯದಲ್ಲಿ ಇನ್ನೂ ಪರಿಪೂರ್ಣ ಯಶಸ್ವಿಯಾಗುವಂತೆ ಕಾರ್ಯಕ್ರಮ ರೂಪಿಸುವಲ್ಲಿ ನಾನು ಜವಾಬ್ದಾರಿ, ಉತ್ಸಾಹದಿಂದ ಹೆಜ್ಜೆ ಇರಿಸಿದ್ದೇನೆ. ಇದರ ನಡುವೆಯೂ ಕೆಲವರು ಸಮ್ಮೇಳನ ನಡೆಯುವ ಜಾಗದ ಬಗ್ಗೆ ಕೊಂಕು ಮಾತನಾಡಿರುವುದು ನನ್ನ ಗಮನಕ್ಕೆ ಬಂದಿದೆ. ಸಮ್ಮೇಳನ ಆಯೋಜಿಸುವುದು ಎಲ್ಲ ವಿಷಯಗಳ ಚಿಂತನ–ಮಂಥನ ನಡೆಸಿ ಕೈಗೊಳ್ಳುವ ನಿರ್ಧಾರವೇ ಹೊರತು ಯಾರೊಬ್ಬರ ವೈಯಕ್ತಿಕ ತೀರ್ಮಾನವಲ್ಲ ಎಂಬುದನ್ನು ಟೀಕಾಕಾರರು ಅರ್ಥ ಮಾಡಿಕೊಳ್ಳಬೇಕು ಎಂದು ತಾಕೀತು ಮಾಡಿದರು.

ಈ ಬಾರಿ ಮಂಡ್ಯದಲ್ಲಿ ನಡೆಯುವ 87ನೇ ಅಖಿಲ ಭಾರತ ಸಾಹಿತ್ಯ ಸಮ್ಮೇಳನಕ್ಕೆ ಅತ್ಯಾಧುನಿಕ ತಂತ್ರಜ್ಞಾನವನ್ನು ಬಳಸಲು ನಿರ್ಧರಿಸಲಾಗಿದೆ. ಇಡೀ ಕಾರ್ಯಕ್ರಮದಲ್ಲಿ ಯಾವುದೇ ನ್ಯೂನತೆ ಬಾರದಂತೆ ನಾನೇ ಹೊಣೆಗಾರಿಕೆ ತೆಗೆದುಕೊಳ್ಳುವೆ. ಪಾರದರ್ಶಕ ಖರ್ಚು, ವೆಚ್ಚ ಮಾಡುವುದಲ್ಲದೆ, ಹಿತಮಿತವಾಗಿ ಎಲ್ಲ ವ್ಯವಸ್ಥೆಯನ್ನೂ ಮಾಡಲಾಗುವುದು ಎಂದು ಭರವಸೆ ನೀಡಿದರು.

ಪರಿಷತ್ತಿನ ಸ್ಥಾಪನೆಗೆ ಕಾರಣರಾಗಿರುವ ನಾಲ್ವಡಿ ಕೃಷ್ಣರಾಜ ಒಡೆಯರ್, ಸರ್ ಎಂ.ವಿಶ್ವೇಶ್ವರಯ್ಯ, ಮಿರ್ಜಾ ಇಸ್ಮಾಯಿಲ್ ಅವರನ್ನು ಹೊರಗಿಟ್ಟು ಸಮ್ಮೇಳನ ನಡೆಸಲಾಗದು. ಮೈಸೂರು ರಾಜವಂಶಸ್ಥರನ್ನು ಸಮ್ಮೇಳನಕ್ಕೆ ವಿಶೇಷವಾಗಿ ಆಹ್ವಾನಿಸಲಾಗುವುದು. ಈಗಾಗಲೇ ಸಿಎಂ,ಡಿಸಿಎಂ ಅವರುಗಳನ್ನು ಆಹ್ವಾನಿಸಿದ್ದೇವೆ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಸಂವಾದದಲ್ಲಿ ಜಿಲ್ಲಾ ಕಸಾಪ ಸಮ್ಮೇಳನದ ಸಂಚಾಲಕಿ ಮೀರಾ ಶಿವಲಿಂಗಯ್ಯ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಪಿ.ಪ್ರಕಾಶ್, ಉಪಾಧ್ಯಕ್ಷರಾದ ಗಣಂಗೂರು ನಂಜೇಗೌಡ, ನವೀನ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಆನಂದ್ ಇದ್ದರು.

ಅ.2ರವರೆಗೆ ಸ್ವಚ್ಛತಾ ಕಾರ್ಯಕ್ರಮ

ಭಾರತೀನಗರದಲ್ಲಿ ಸ್ವಚ್ಛ ಇ-ಸೇವಾ ಕಾರ್ಯಕ್ರಮಕ್ಕೆ ಚಾಲನೆ



ಸ್ವಚ್ಛತಾ ಕಾರ್ಯಕ್ರಮಕ್ಕೆ ಜಿ.ಪಂ ಸಹಾಯಕ ನಿರ್ದೇಶಕ ಸಂಜೀವಪ್ಪ ಚಾಲನೆ ನೀಡಿದರು.

ಭಾರತೀನಗರ.ಸೆ.18– ಸ್ವಚ್ಛ ಇ–ಸೇವಾ ಕಾರ್ಯಕ್ರಮದ ಅಂಗವಾಗಿ ಮೆಳ್ಳಹಳ್ಳಿ ಬಳಿ ಭಾರತೀನಗರ ಗ್ರಾ.ಪಂ ವತಿಯಿಂದ ಹಮ್ಮಿಕೊಂಡಿದ್ದ ಸ್ವಚ್ಛತಾ ಕಾರ್ಯಕ್ರಮಕ್ಕೆ ಜಿ.ಪಂ ಸಹಾಯಕ ನಿರ್ದೇಶಕ ಸಂಜೀವಪ್ಪ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸೆ.17 ರಿಂದ ಅ.2 ವರೆಗೆ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು ಇದರಲ್ಲಿ ಪ್ರತೀ ಗ್ರಾಮ, ಧಾರ್ಮಿಕ ಸ್ಥಳ, ಶಾಲಾ–ಕಾಲೇಜಿನ ಆವರಣ, ಕೆರೆ ಕಟ್ಟೆಗಳು, ಕುಡಿಯುವ ನೀರಿನ ಟ್ಯಾಂಕ್‌ಗಳನ್ನು ಸ್ವಚ್ಛ ಮಾಡಲಾಗುವುದು. ಜೊತೆಗೆ ಪರಿಸರ ಸಂರಕ್ಷಣೆ ದೃಷ್ಟಿಯಿಂದ ಗಿಡ ನೆಡುವ ಕಾರ್ಯಕ್ರಮ ಹಾಗೂ ಆರೋಗ್ಯ ದೃಷ್ಟಿಯಿಂದ ಪೌರಕಾರ್ಮಿಕರಿಗೆ ಆರೋಗ್ಯ ತಪಾಸಣೆಯನ್ನು ಹಮ್ಮಿಕೊಳ್ಳಲಾಗುವುದೆಂದು ವಿವರಿಸಿದರು.

ತಾ.ಪಂ ಇಓ ರಾಮಲಿಂಗಯ್ಯ ಮಾತನಾಡಿ, ಗ್ರಾಮಸ್ವಚ್ಛತೆ, ಪರಿಸರ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಹಾಗಾಗಿ ಜನ ರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಸ್ವಚ್ಛತಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಇದೇ ವೇಳೆ ಪೌರಕಾರ್ಮಿಕರಿಗೆ, ಗ್ರಾ.ಪಂ ಸಿಬ್ಬಂದಿಗಳಿಗೆ ಮತ್ತು ಸದಸ್ಯರಿಗೆ ಪ್ರತಿಜ್ಞಾವಿಧಿ ಬೋಧಿಸಲಾಯಿತು.

ತಾ.ಪಂ ಸಹಾಯಕ ನಿರ್ದೇಶಕ ಮಂಜುನಾಥ್, ಬ್ಯಾಂಕ್ ಆಫ್ ಬರೋಡ ಲೀಡ್ ಬ್ಯಾಂಕ್ ಜಿಲ್ಲಾ ವ್ಯವಸ್ಥಾಪಕ ಎನ್.ಅರುಣ್ ಕುಮಾರ್, ಭಾರತೀನಗರ ಹಿರಿಯ ಶಾಖಾ ವ್ಯವಸ್ಥಾಪಕ ಮಹದೇಶ್, ಗ್ರಾ.ಪಂ ಸದಸ್ಯ ವೆಂಕಟೇಶ್, ವಿನಯ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎನ್.ಸುಧಾ ಭಾಗವಹಿಸಿದ್ದರು.

ಡ್ರಗ್ಸ್ ಹಾವಳಿ ತಡೆಗೆ ಸಮಿತಿ ರಚನೆ

ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡರ ಸಲಹೆಗೆ ಸ್ಪಂದಿಸಿದ ಮುಖ್ಯಮಂತ್ರಿ





ಬೆಂಗಳೂರು: ರಾಜ್ಯದಲ್ಲಿ ಮಾದಕ ವಸ್ತುಗಳ ಹಾವಳಿ ತಡೆಗಟ್ಟಲು ಸಮಿತಿಯೊಂದನ್ನು ರಚಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಆದೇಶಿಸಿದ್ದಾರೆ ಎಂದು ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ತಿಳಿಸಿದ್ದಾರೆ.

ಈ ಸಂಬಂಧ ಪತ್ರಿಕಾ ಹೇಳಿಕೆ ನೀಡಿರುವ ಅವರು, ತಮ್ಮ ಮನವಿಗೆ ಸ್ಪಂದಿಸಿ ಕ್ರಮ ವಹಿಸಿದ ಸಿಎಂ ಸಿದ್ದರಾಮಯ್ಯ ಅವರಿಗೆ ಪೋಷಕರ ಪರವಾಗಿ, ವಿದ್ಯಾರ್ಥಿಗಳ ಪರವಾಗಿ ಅಭಿನಂದನೆ ಸಲ್ಲಿಸುವುದಾಗಿ ತಿಳಿಸಿದ್ದಾರೆ. ಇದೇ ವರ್ಷ ಜನವರಿ 16ರಂದು ದಿನೇಶ್ ಗೂಳಿಗೌಡರು ಮುಖ್ಯಮಂತ್ರಿಗಳಿಗೆ ಪತ್ರ ಬರೆದು, ರಾಜ್ಯದಲ್ಲಿ ಮಾದಕ ದ್ರವ್ಯದ ಹಾವಳಿ ಹೆಚ್ಚುತ್ತಿದೆ. ಕಾಲೇಜುಗಳ ಸುತ್ತಲಿನ ಪ್ರದೇಶದಲ್ಲಿ ಗಾಂಜಾ ಮಾರಾಟ ನಡೆಯುತ್ತಿದೆ. ಭವಿಷ್ಯದ ಭಾರತದ ಕನಸುಗಳಾದ ಯುವ ಜನರು ದಾರಿ ತಪ್ಪುತ್ತಿದ್ದಾರೆ. ಇದನ್ನು ತಡೆಯಲು ಪೊಲೀಸ್ ಇಲಾಖೆ ಕ್ರಮವಹಿಸಬೇಕು. ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಮನವಿ ಮಾಡಿದ್ದರು. ಈ ಸಂಬಂಧ ಕ್ರಮವಹಿಸುವಂತೆ ಸಿಎಂ ಸಿದ್ದರಾಮಯ್ಯ ಅವರು ಪೊಲೀಸ್ ಮಹಾ ನಿರ್ದೇಶಕರಿಗೆ ಪತ್ರ ಬರೆದಿದ್ದರು. ಪತ್ರದ ಭಾಗವಾಗಿ ಬುಧವಾರ ವಿಧಾನ ಸೌಧದಲ್ಲಿ ಹಿರಿಯ ಪೊಲೀಸ್ ಅಧಿ ಕಾರಿಗಳ ಸಭೆ ನಡೆಸಿದ ಸಿಎಂ ಸಿದ್ದರಾಮಯ್ಯ ಅವರು ಈ ಮಾದಕ ದ್ರವ್ಯ ಹಾವಳಿ ತಡೆಯಲು ಉನ್ನತ ಮಟ್ಟದ ಸಮಿತಿಯನ್ನು ರಚಿಸಿದ್ದಾರೆ. ಮಾತ್ರವಲ್ಲದೇ, ಕ್ರಮ ವಹಿಸಲು ಪೊಲೀಸ್ ಮಹಾ ನಿರ್ದೇಶಕರಿಗೆ ಆದೇಶಿಸಿದ್ದಾರೆ. ಯುವ ಜನತೆಯ ಬಗ್ಗೆ ಕಾಳಜಿ ವಹಿಸಿದ ಮುಖ್ಯಮಂತ್ರಿಗಳಿಗೆ ಅಭಿನಂದನೆಗಳು ಎಂದು ದಿನೇಶ ಗೂಳಿಗೌಡ ತಿಳಿಸಿದ್ದಾರೆ

ಇಂದು ಮಂಡ್ಯದ ಕೆಲವೆಡೆ ವಿದ್ಯುತ್ ವ್ಯತ್ಯಯ

ಮಂಡ್ಯ,ಸೆ.18– ಕೆಐಎಡಿಬಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ನಾಳೆ (ಸೆ.19) ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆಯವರಿಗೆ ಕೆಲವು ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕೆಐಎಡಿಬಿ ವಿದ್ಯುತ್ ವಿತರಣಾ ಕೇಂದ್ರದ ನಗರ ಪ್ರದೇಶಗಳಾದ ಗುತ್ತಲು, ಫ್ಯಾಕ್ಟರಿ ವೃತ್ತ, ಕೈಗಾರಿಕ ಬಡಾವಣೆಗಳು, ಎಂ.ಸಿ ರಸ್ತೆ, ತಾವರೆಕೆರೆ, ನೆಹರು ನಗರ, ಉದಯಗಿರಿ, ಸಾದತ್ ಮೊಹಲ್ಲ, ಚನ್ನಯ್ಯ ಬಡಾವಣೆ, ಸಿದ್ದಾರ್ಥ ಬಡಾವಣೆ, ಬೆಂಗಳೂರು ಮುಖ್ಯ ರಸ್ತೆಯ ಹೆಬ್ಬಾಳು ಹಾಗೂ ಗ್ರಾಮಾಂತರ ಪ್ರದೇಶಗಳಾದ ಶ್ರೀನಿವಾಸಪುರ ಗೇಟ್, ಹನಕೆರೆ ಐ.ಪಿ ವ್ಯಾಪ್ತಿ, ಕೀಲಾರ ಐ.ಪಿ ವ್ಯಾಪ್ತಿ, ಬಸವನಪುರ ಐ.ಪಿ ವ್ಯಾಪ್ತಿ, ಬೂದನೂರು, ಭೂತನ ಹೊಸೂರು, ಚನ್ನಪ್ಪನ ದೊಡ್ಡಿ, ಹಂಬರಹಳ್ಳಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ನಾಗಮಂಗಲ ಗಲಭೆ: ಅಶೋಕ್, ಶೋಭಾ ವಿರುದ್ಧ ಎಫ್‌ಐಆರ್ ದಾಖಲು



ಆರ್.ಅಶೋಕ್



ಶೋಭಾ ಕರಂದ್ಲಾಜೆ



ಮಂಡ್ಯ: ನಾಗಮಂಗಲ ಕೋಮುಗಲಭೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಹಾಗೂ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ವಿರುದ್ಧ ನಾಗಮಂಗಲ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ನಾಗಮಂಗಲ ಕೋಮುಗಲಭೆ ಸಂಬಂಧ ಸುಳ್ಳು ಮಾಹಿತಿ ಹಂಚಿಕೆ ಆರೋಪಡಿ ಎಫ್‌ಐಆರ್ ದಾಖಲಾಗಿದ್ದು, ನಾಗಮಂಗಲ ಘಟನೆಗೆ ಸಂಬಂಧಿಸದ ವಿಡಿಯೋ, ಫೋಟೋ ಪೋಸ್ಟ್ ಹಿನ್ನೆಲೆಯಲ್ಲಿ ದೊಂಬಿ ಗಲಭೆಗೆ ಪ್ರಚೋದನೆ ಆರೋಪಡಿ ಪ್ರಕರಣ ದಾಖಲು ಮಾಡಲಾಗಿದೆ.

ಕಲ್ಲು ತೂರಿ, ಬೆಂಕಿ ಹಚ್ಚಿದವರನ್ನ ರಕ್ಷಿಸಿ, ಗಣೇಶನನ್ನ ಬಂಧಿಸಲಾಗಿದೆ ಎಂದು ಶೋಭಾ ಕರಂದ್ಲಾಜೆ, ಬೆಂಗಳೂರಿನಲ್ಲಿ ನಡೆದ ಘಟನೆಯನ್ನು ನಾಗಮಂಗಲದಲ್ಲಿ ನಡೆದ ಘಟನೆ ಎಂದು ಪೋಸ್ಟ್ ಹಾಕಿದ್ದಾರೆಂಬ ಆರೋಪದಡಿ ಪ್ರಕರಣ ದಾಖಲಾಗಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ನಾಗಮಂಗಲ ಘಟನೆ ವೇಳೆ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ ಬಗ್ಗೆ ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ ಎಂದು ಪೋಸ್ಟ್ ಹಾಕಿದ್ದ ಆರೋಪದಡಿ ಆರ್.ಅಶೋಕ್ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಬೇರೆಡೆ ನಡೆದ 2 ವಿಡಿಯೋ ಲಗತ್ತಿಸಿ ಆರ್.ಅಶೋಕ್ ಪೋಸ್ಟ್ ಹಾಕಿದ್ದಾರೆಂದು ಆರೋಪಿಸಿ, ಐಪಿಸಿ ಸೆಕ್ಷನ್ 192ರ ಅಡಿ ಪ್ರಕರಣ ದಾಖಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಒಂದು ದೇಶ ಒಂದು ಚುನಾವಣೆ ಒಕ್ಕೂಟ ವ್ಯವಸ್ಥೆಗೆ ವಿರುದ್ಧ ಮುಖ್ಯಮಂತ್ರಿ ಸಿದ್ದರಾಮಯ್ಯ ಕಿಡಿ



ಬೆಂಗಳೂರು, ಸೆ.18–ಕೇಂದ್ರ ಸಚಿವ ಸಂಪುಟ ಒಪ್ಪಿಗೆ ನೀಡಿರುವ 'ಒಂದು ದೇಶ ಒಂದು ಚುನಾವಣೆ' ಪ್ರಸ್ತಾವ ಒಕ್ಕೂಟ ವ್ಯವಸ್ಥೆಗೆ ವಿರುದ್ಧವಾದದ್ದು ಮಾತ್ರವಲ್ಲ ಅನುಷ್ಠಾನಗೊಳಿಸಲು ಅಸಾಧ್ಯವಾದದ್ದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಇಂತಹದ್ದೊಂದು ಮಹತ್ವದ ಪ್ರಸ್ತಾವದ ಬಗ್ಗೆ ವಿರೋಧ ಪಕ್ಷಗಳ ಜೊತೆ ಸಮಾಲೋಚನೆಯನ್ನೂ ಮಾಡದೆ ತರಾತುರಿಯಲ್ಲಿ ಅನುಷ್ಠಾನಕ್ಕೆ ತರಲು ಹೊರಟಿರುವುದು ನರೇಂದ್ರ ಮೋದಿ ಸರ್ಕಾರದ ದುಷ್ಟ ಉದ್ದೇಶವನ್ನು ಅನಾವರಣಗೊಳಿಸಿದೆ. ಒಂದು ಸರ್ಕಾರದ ಆದ್ಯತೆಗಳು ಏನಿರಬೇಕೆಂಬ ಸಾಮಾನ್ಯ ಜ್ಞಾನವೂ ಕೇಂದ್ರ ಸರ್ಕಾರಕ್ಕಾಗಲೀ, ಪ್ರಧಾನಮಂತ್ರಿಯವರಿಗಾಗಲೀ ಇದ್ದ ಹಾಗೆ ಕಾಣುವುದಿಲ್ಲ ಎಂದಿದ್ದಾರೆ.

ದೇಶಾದ್ಯಂತ ನಿರುದ್ಯೋಗ ತಾಂಡವವಾಡುತ್ತಿದೆ, ಹಣದುಬ್ಬರದಿಂದ ದೇಶದ ಆರ್ಥಿಕತೆ ತತ್ತರಿಸುತ್ತಿದೆ. ಅಗತ್ಯ ವಸ್ತುಗಳ ಬೆಲೆ ಏರಿಕೆಯಿಂದ ಜನ ಬವಣೆಪಡುತ್ತಿದ್ದಾರೆ. ದೇಶಾದ್ಯಂತ ಕಾನೂನು ಸುವ್ಯವಸ್ಥೆ ಮೇಲಿನ ನಿಯಂತ್ರಣ ತಪ್ಪಿಹೋಗಿದ್ದು, ದಲಿತರು ಮತ್ತು ಮಹಿಳೆಯರ ಮೇಲೆ ದೌರ್ಜನ್ಯಗಳು ಮಿತಿಮೀರಿ ಹೋಗುತ್ತಿದೆ. ಈ ಬಗ್ಗೆ ಯೋಚನೆ ಮಾಡಲು ಕೂಡಾ ಪುರುಸೊತ್ತಿಲ್ಲದ ಪ್ರಧಾನ ಮಂತ್ರಿಗಳು 'ಒಂದು ದೇಶ ಒಂದು ಚುನಾವಣೆ' ಎಂಬ ಗಿಮಿಕ್ ಮೂಲಕ ಜನರ ಗಮನವನ್ನು ಬೇರೆ ಕಡೆ ಸೆಳೆದು ತಮ್ಮ ವೈಫಲ್ಯವನ್ನು ಮುಚ್ಚಿಹಾಕಲು ಹೊರಟಿದ್ದಾರೆ. ಆಡಳಿತಾರೂಢ ಬಿಜೆಪಿ ಪಕ್ಷದ ಗುಪ್ತ ಅಜೆಂಡಾವನ್ನು ಒಳಗೊಂಡಿರುವ 'ಒಂದು ದೇಶ ಒಂದು ಚುನಾವಣೆ' ಪ್ರಸ್ತಾವವನ್ನು ಸಂಸತ್‌ನ ಒಳಗೆ ಮತ್ತು ಹೊರಗೆ ನಮ್ಮ ಪಕ್ಷ ಎದುರಿಸಲಿದೆ. ದೇಶದ ಜನಾಭಿಪ್ರಾಯವೂ 'ಒಂದು ದೇಶ ಒಂದು ಚುನಾವಣೆ' ವ್ಯವಸ್ಥೆಗೆ ವಿರುದ್ಧವಾಗಿದೆ. ಒಂದು ದೇಶ ಒಂದು ಚುನಾವಣೆಯ ವ್ಯವಸ್ಥೆ ಸಂಪೂರ್ಣವಾಗಿ ಪ್ರಜಾಪ್ರಭುತ್ವ ವಿರೋಧಿಯಾಗಿದೆ. ಲೋಕಸಭೆ ಇಲ್ಲವೆ ವಿಧಾನಸಭೆಯಲ್ಲಿ ಆಡಳಿತಾರೂಢ ಪಕ್ಷ ವಿಶ್ವಾಸಮತ ಗಳಿಸಲು ಸೋತುಹೋಗುವ ಸಂದರ್ಭದಲ್ಲಿ ಎದುರಾಗುವ ಬಿಕ್ಕಟ್ಟಿಗೆ ಪ್ರಸ್ತಾವದಲ್ಲಿ ಪರಿಹಾರ ಇಲ್ಲ. ಇಂತಹ ಸಂದರ್ಭದಲ್ಲಿ ಮಧ್ಯಂತರ ಚುನಾವಣೆಯೊಂದೇ ಯೋಗ್ಯ ಪರಿಹಾರವಾಗಿದೆ. ಇದರ ಬದಲಿಗೆ ಸದನದಲ್ಲಿ ವಿಶ್ವಾಸ ಮತ ಗಳಿಸಲು ವಿಫಲವಾದ ಅಲ್ಪಸಂಖ್ಯಾತ ಪಕ್ಷ ಅಧಿಕಾರದಲ್ಲಿ ಮುಂದುವರಿಯಲು ಅವಕಾಶ ನೀಡಿದರೆ ಅದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಬಗೆಯುವ ದ್ರೋಹವಾಗುತ್ತದೆ. ಇಡೀ ದೇಶದಲ್ಲಿ ಒಂದೇ ಬಾರಿ ಲೋಕಸಭೆ ಮತ್ತು ವಿಧಾನಸಭಾ ಚುನಾವಣೆಗಳನ್ನು ನಡೆಸುವ ಶಕ್ತಿ–ಸಾಮರ್ಥ್ಯ ನಮ್ಮ ಈಗಿನ ಚುನಾವಣಾ ಆಯೋಗಕ್ಕೆ ಇಲ್ಲ. ಇದಕ್ಕಾಗಿ ನಮ್ಮ ಚುನಾವಣಾ ವ್ಯವಸ್ಥೆಯನ್ನು ದುಪ್ಪಟ್ಟು ಪ್ರಮಾಣದಲ್ಲಿ ವಿಸ್ತರಿಸಬೇಕಾಗುತ್ತದೆ. ಇವೆಲ್ಲವೂ ಅವಸರದಿಂದ ಮಾಡುವ ಕೆಲಸ ಅಲ್ಲ. ಹೊಸ ಚುನಾವಣಾ ವ್ಯವಸ್ಥೆ ಜಾರಿಗೆ ಬರಬೇಕಾದರೆ ಮೊದಲು ಪ್ರಜಾಪ್ರತಿನಿಧಿ ಕಾಯ್ದೆಗೆ ತಿದ್ದುಪಡಿ ಮಾಡಬೇಕಾಗಿದೆ. ಇದರ ಜೊತೆಗೆ ಸಂವಿಧಾನದ ಕನಿಷ್ಠ ಐದು ಪರಿಚ್ಛೇದಗಳಿಗೆ ತಿದ್ದುಪಡಿ ತರಬೇಕಾಗಿದೆ. ಈಗಿನ ವ್ಯವಸ್ಥೆಯಲ್ಲಿ ಸಂವಿಧಾನ ತಿದ್ದುಪಡಿಗೆ ಬೇಕಾದಷ್ಟು ಸದಸ್ಯರ ಸಂಖ್ಯೆಯನ್ನು ಹೊಂದಿಸಿಕೊಳ್ಳುವುದು ಎನ್‌ಡಿಎಗೆ ಕೂಡಾ ಕಷ್ಟ ಸಾಧ್ಯ. ಇವೆಲ್ಲವೂ ನರೇಂದ್ರ ಮೋದಿ ಅವರ ಸರ್ಕಾರಕ್ಕೆ ಗೊತ್ತಿದ್ದರೂ ಕೇವಲ ಜನರಲ್ಲಿ ಗೊಂದಲವನ್ನು ಹುಟ್ಟುಹಾಕಿ ತಮ್ಮ ವೈಫಲ್ಯವನ್ನು ಮುಚ್ಚಿಹಾಕಲು ಈ ಪ್ರಸ್ತಾವವನ್ನು ಸಚಿವ ಸಂಪುಟ ಅಂಗೀಕರಿಸಿದೆ ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಮೋದಿ ಸರ್ಕಾರ ಐದು ವರ್ಷ ಪೂರೈಸಲ್ಲ

ಬೆಂಗಳೂರು, ಸೆ.18– ದೇಶದಲ್ಲಿ ನಡೆಯುತ್ತಿರುವ ಬೆಳವಣಿಗೆಗಳನ್ನು ನೋಡಿದರೆ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಐದು ವರ್ಷ ಪೂರೈಸಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಬುಧವಾರ ಭವಿಷ್ಯ ನುಡಿದರು.

ನಮಗೆ ಇರುವ ಮಾಹಿತಿ ಪ್ರಕಾರ ಕೇಂದ್ರ ಸರ್ಕಾರ ಪೂರ್ಣ ಅವಧಿ ಪೂರೈಸಲ್ಲ ಎಂದರು. ಕಳೆದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಹಿನ್ನಡೆಯಾಗಿದೆ. ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿಯವರು ನಮ್ಮ ಮೇಲೆ ಸುಳ್ಳು ಆರೋಪಗಳನ್ನು ಮಾಡಲು ಇಟ್ಟುಕೊಂಡಿದ್ದಾರೆ. ಇಪ್ಪತ್ತು ಸಾವಿರ ಕೋಟಿ ಹಗರಣ ಆಗಿದೆ ಎಂದು ಯಡಿಯೂರಪ್ಪ ವಿರುದ್ಧ ಆರೋಪ ಮಾಡಿದ್ದರು. ಆದರೂ ಯತ್ನಾಳ್ ವಿರುದ್ಧ ಏಕೆ ಕ್ರಮ ಆಗಿಲ್ಲ ಎಂದು ಪ್ರಶ್ನಿಸಿದರು.

ಒಂದನೇ ಪುಟದಿಂದ

ಪ್ರಧಾನಿ ಮೋದಿ ಸಂಪುಟ ಅನುಮೋದನೆ



2024ರ ಮಾರ್ಚ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಗೆ 'ಒಂದು ರಾಷ್ಟ್ರ ಒಂದು ಚುನಾವಣೆ' ವರದಿಯನ್ನು ಉನ್ನತ ಸಮಿತಿಯ ಅಧ್ಯಕ್ಷರೂ ಆದ ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಸಲ್ಲಿಸಿದ್ದರು. ಈ ವೇಳೆ ಗೃಹ ಸಚಿವ ಅಮಿತ್ ಶಾ ಉಪಸ್ಥಿತರಿದ್ದರು.

ಮತ್ತು ಲೋಕಸಭೆಗೆ ಪ್ರತ್ಯೇಕವಾಗಿ ಚುನಾವಣೆಗಳು ನಡೆಯುತ್ತಿವೆ. ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಬಿಜೆಪಿ ದಿಗ್ಗಜ ನಾಯಕರು 'ಒಂದು ದೇಶ ಒಂದು ಚುನಾವಣೆ'ಯನ್ನು ಬಹಳ ಸಮಯದಿಂದ ಪ್ರತಿಪಾದಿಸುತ್ತಲೇ ಬಂದಿದ್ದಾರೆ. ಕೊನೆಗೂ ಇದನ್ನು ಕಾರ್ಯರೂಪಕ್ಕೆ ತರಲು ಮುಂದಾಗಿದ್ದು, ಇದರ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಒನ್ ನೇಷನ್, ಒನ್ ಎಲೆಕ್ಷನ್ ಕಾಯ್ದೆ ಪ್ರಸ್ತಾವನೆಗೆ ಸಂಪುಟ ಅಸ್ತು ಎಂದಿದೆ. ಈ ಹಿಂದೆ 'ಒಂದು ದೇಶ, ಒಂದು ಚುನಾವಣೆ'ಯ ಬಗ್ಗೆ ಮಾತನಾಡಿದ್ದ ಪ್ರಧಾನಿ ನರೇಂದ್ರ ಮೋದಿ, ಕೋಟ್ಯಾಂತರ ಹಣ ಮತ್ತು ಸಮಯವನ್ನು ಉಳಿಸುವ ಸಲುವಾಗಿ 'ಒಂದು ರಾಷ್ಟ್ರ, ಒಂದು ಚುನಾವಣೆ' ಸಂಕಲ್ಪವನ್ನು ಸಾಧಿಸಲು ಎಲ್ಲರೂ ಒಗ್ಗೂಡಬೇಕೆಂದು ಜನರಲ್ಲಿ ಕೇಳಿಕೊಂಡಿದ್ದರು. ಲೋಕಸಭೆ ಚುನಾವಣೆಗೂ ಮುನ್ನ ಮಾಧ್ಯಮಗಳಿಗೆ ನೀಡಿದ ಸಂದರ್ಶನದಲ್ಲಿ ಸಂಪೂರ್ಣ ಐದು ವರ್ಷಗಳ ಸರ್ಕಾರದ ಅವಧಿಯಲ್ಲಿ ಚುನಾವಣೆಗಳನ್ನು ನಡೆಸಬಾರದು. ಮೂರ್ನಾಲ್ಕು ತಿಂಗಳು ಮಾತ್ರ ಚುನಾವಣೆ ನಡೆಸಬೇಕು ಎಂದು ಹೇಳಿದ್ದರು. ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯು 62 ರಾಜಕೀಯ ಪಕ್ಷಗಳನ್ನು ಸಂಪರ್ಕಿಸಿತ್ತು. ಈ ಪೈಕಿ 32 ಪಕ್ಷಗಳು 'ಒಂದು ದೇಶ, ಒಂದು ಚುನಾವಣೆ'ಯನ್ನು ಬೆಂಬಲಿಸಿದ್ದವು. ಆದರೆ, 15 ಪಕ್ಷಗಳು ಇದನ್ನು ವಿರೋಧಿಸಿದ್ದವು. ಇನ್ನೂ 15 ಪಕ್ಷಗಳು ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ. ಬಿಜೆಪಿ ಹೊರತುಪಡಿಸಿ, ಚಂದ್ರಬಾಬು ನಾಯ್ಡು ಅವರ ಟಿಡಿಪಿ, ನಿತೀಶ್ ಕುಮಾರ್ ಅವರ ಜೆಡಿಯು ಮತ್ತು ಚಿರಾಗ್ ಪಾಸ್ವಾನ್ ಅವರ ಎಲ್‌ಜೆಪಿ (ಆರ್) ಕೇಂದ್ರದ ಎನ್‌ಡಿಎ ಸರ್ಕಾರದ ದೊಡ್ಡ ಮಿತ್ರಪಕ್ಷಗಳಾಗಿವೆ. ಜೆಡಿಯು ಮತ್ತು ಎಲ್‌ಜೆಪಿ (ಆರ್) 'ಒಂದು ದೇಶ, ಒಂದು ಚುನಾವಣೆ'ಗೆ ಒಪ್ಪಿಗೆ ನೀಡಿದ್ದು, ಟಿಡಿಪಿ ಈ ಬಗ್ಗೆ ಯಾವುದೇ ಉತ್ತರ ನೀಡಿಲ್ಲ. ಜೆಡಿಯು ಮತ್ತು ಎಲ್‌ಜೆಪಿ (ಆರ್) 'ಒಂದು ದೇಶ, ಒಂದು ಚುನಾವಣೆ'ಗೆ ಸಮಯ ಮತ್ತು ಹಣವನ್ನು ಉಳಿಸುತ್ತದೆ ಎಂದು ಬೆಂಬಲಿಸಿದ್ದವು. ಕಾಂಗ್ರೆಸ್, ಸಮಾಜವಾದಿ ಪಕ್ಷ, ಆಮ್ ಆದ್ಮಿ ಪಕ್ಷ, ಸಿಪಿಎಂ, ಬಿಎಸ್‌ಪಿ ಸೇರಿದಂತೆ 15 ಪಕ್ಷಗಳು ಇದಕ್ಕೆ ವಿರೋಧ ವ್ಯಕ್ತಪಡಿಸಿದ್ದವು. ಆದರೆ ಜಾರ್ಖಂಡ್ ಮುಕ್ತಿ ಮೋರ್ಚಾ, ಟಿಡಿಪಿ, ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ ಸೇರಿದಂತೆ 15 ಪಕ್ಷಗಳು ಯಾವುದೇ ಉತ್ತರ ನೀಡಿಲ್ಲ.

ಒಂದು ದೇಶ ಒಂದು ಚುನಾವಣೆಗೆ ಸರ್ಕಾರ ಮೊದಲು ಮಸೂದೆ ತರಬೇಕು. ಈ ಮಸೂದೆಗಳು ಸಂವಿಧಾನವನ್ನು ತಿದ್ದುಪಡಿ ಮಾಡುವುದರಿಂದ, ಸಂಸತ್ತಿನ ಮೂರನೇ ಎರಡರಷ್ಟು ಸದಸ್ಯರ ಬೆಂಬಲವನ್ನು ಪಡೆದರೆ ಮಾತ್ರ ಅಂಗೀಕರಿಸಲ್ಪಡುತ್ತವೆ. ಅಂದರೆ, ಲೋಕಸಭೆಯಲ್ಲಿ ಈ ಮಸೂದೆಯನ್ನು ಅಂಗೀಕರಿಸಲು, ಕನಿಷ್ಠ 362 ಸದಸ್ಯರು ಮತ್ತು ರಾಜ್ಯಸಭೆಯಲ್ಲಿ 163 ಸದಸ್ಯರ ಬೆಂಬಲ ಬೇಕಾಗುತ್ತದೆ. ಈ ಮಸೂದೆಯು ಸಂಸತ್ತಿನಿಂದ ಅಂಗೀಕರಿಸಲ್ಪಟ್ಟ ನಂತರ, ಕನಿಷ್ಠ ಶಾಸಕಾಂಗ ಸಭೆಯ ಅನುಮೋದನೆಯ ಅಗತ್ಯವಿರುತ್ತದೆ. 15 ರಾಜ್ಯಗಳ ಶಾಸಕಾಂಗ ಸಭೆಯಿಂದಲೂ ಈ ಮಸೂದೆಯನ್ನು ಅಂಗೀಕರಿಸುವುದು ಅವಶ್ಯಕ. ಇದರ ನಂತರ, ರಾಷ್ಟ್ರಪತಿಗಳ ಅಂಕಿತದ ನಂತರವೇ ಈ ಮಸೂದೆಗಳು ಕಾನೂನಾಗುತ್ತವೆ. ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ನೇತೃತ್ವದ ಸಮಿತಿಯು ಕಳೆದ ಮಾರ್ಚ್‌ನಲ್ಲಿ ಸಲ್ಲಿಸಿದ್ದ 'ಒಂದು ರಾಷ್ಟ್ರ ಒಂದು ಚುನಾವಣೆ'ಯ ಸಾಧ್ಯತೆಗಳ ಕುರಿತ ವರದಿಗೆ ಜೈ ಎಂದಿದ್ದು, ಮುಂದಿನ ಚಳಿಗಾಲದ ಅಧಿವೇಶನದಲ್ಲಿ ಈ ಮಸೂದೆಯನ್ನು ಮಂಡಿಸುವ ಸಾಧ್ಯತೆ ಇದೆ.

ಜೀವಾವಧಿ ಶಿಕ್ಷೆ

ಸಚಿವ ದಿನೇಶ್ ಗುಂಡೂರಾವ್, ಶಿಕ್ಷಣ ಸಚಿವ ಡಾ.ಸುಧಾಕರ್, ವೈದ್ಯಕೀಯ ಶಿಕ್ಷಣ ಸಚಿವ ಶರಣಪ್ರಕಾಶ್ ಪಾಟೀಲ್ ಸದಸ್ಯರಾಗಿರುತ್ತಾರೆ. ಇವರು ಮೇಲಿಂದ ಮೇಲೆ ಸಭೆ ನಡೆಸಿ ಅಗತ್ಯ ಕಾರ್ಯ ತಂತ್ರ ರೂಪಿಸಲು ಸೂಚನೆ ನೀಡಲಾ ಗಿದೆ ಎಂದರು. ದಂಧೆಯ ಮಾಹಿತಿ ತಿಳಿಯಲು ಎನ್‌ಸಿಸಿ ಹಾಗೂ ಎನ್‌ಜಿಓ ಗಳನ್ನು ಬಲಗೊಳಿಸಿ, ಅವರು ಈ ದಂಧೆ ಬಗ್ಗೆ ಗಮನಹರಿಸಿ ಸಂಬಂಧಪಟ್ಟ ಠಾಣೆ ಮತ್ತು ಸರ್ಕಾರಕ್ಕೆ ಮಾಹಿತಿ ನೀಡುವಂತೆ ಮಾಡುತ್ತೇವೆ. ವಿದ್ಯಾರ್ಥಿಗಳು, ಯುವಜನರು ಮತ್ತು ಪೋಷಕರ ಸಹಭಾಗಿತ್ವದಲ್ಲಿ ಮಾಹಿತಿ ಸಂಗ್ರಹಿಸುವ ತೀರ್ಮಾನವನ್ನೂ ಕೈಗೊಳ್ಳಲಾಗಿದೆ. ಇದರಿಂದ ಡ್ರಗ್ ಪೆಡ್ಲರ್‌ಗಳ ಜೊತೆ ಶಾಮೀಲಾಗುವ ಪೊಲೀಸರ ವಿರುದ್ಧ ಮೇಲಧಿಕಾರಿಗಳು, ಸರ್ಕಾರಕ್ಕೆ ವರದಿ ನೀಡುವ ಅಧಿಕಾರ ನೀಡಲಾಗುವುದು. ದಂಧೆಗೆ ಪ್ರೋತ್ಸಾಹ ನೀಡುವುದನ್ನು ನಿಲ್ಲಿಸಿ ಪೆಡ್ಲರ್‌ಗಳನ್ನು ಹತ್ತಿಕ್ಕುವ ಕೆಲಸ ಮಾಡಬೇಕು. ತಪ್ಪಿದರೆ, ಸರ್ಕಾರಕ್ಕೆ ಬರುವ ಮಾಹಿತಿ ಆಧರಿಸಿ ಅವರ ವಿರುದ್ಧವೇ ಕ್ರಮ ಜರುಗಿಸಲಾಗುವುದು ಎಂದರು. ಜಾಗೃತಿ ಮತ್ತು ಕಾರ್ಯಾಚರಣೆಯನ್ನು ಇನ್ನಷ್ಟು ತೀವ್ರಗೊಳಿಸಲು ಸೂಚಿಸಲಾಗಿದೆ. ಒಡಿಸ್ಸಾ, ಆಂಧ್ರಪ್ರದೇಶ, ಉತ್ತರ ಪ್ರದೇಶ ಸೇರಿ ಹಲವು ರಾಜ್ಯಗಳಿಂದ ಮಾದಕ ವಸ್ತು ಕರ್ನಾಟಕಕ್ಕೆ ಪೂರೈಕೆಯಾಗುತ್ತಿದೆ. ಇದನ್ನು ತಡೆಯಲು ಹೊಸ ಕಾರ್ಯತಂತ್ರ ರೂಪಿಸುವಂತೆ ಪೊಲೀಸ್ ಅಧಿಕಾರಿಗಳಿಗೆ ಆದೇಶಿಸಲಾಗಿದೆ ಎಂದರು.

ನ.20ರವರೆಗೆ ಕಾಲಾವಕಾಶ

ಪ್ಲೇಟ್ ಅಳವಡಿಕೆ ಅವಧಿ ಯನ್ನು 2024ರ ನವೆಂಬರ್ 20ರವರೆಗೆ ವಿಸ್ತರಣೆ ಮಾಡಿ ಆದೇಶ ಹೊರಡಿಸಿದೆ. ಈವರೆಗೆ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಮಾಡದೇ ಆತಂಕದಲ್ಲಿದ್ದ ವಾಹನ ಸವಾರರಿಗೆ ಈ ಆದೇಶ ಸಂತಸ ತಂದಿದೆ.

ಕಾಲಾವಕಾಶ ಕೋರಿದ ವಕೀಲರು: ರಾಜ್ಯದಲ್ಲಿ ಇನ್ನೂ ಅರ್ಧದಷ್ಟು ವಾಹನ ಸವಾರರು ಹೆಚ್‌ಎಸ್ ಆರ್‌ಪಿ ನಂಬರ್ ಪ್ಲೇಟ್ ಅಳವಡಿಕೆ ಮಾಡಿಸಿಕೊಳ್ಳುವುದು ಬಾಕಿಯಿದೆ. ಈ ಹಿನ್ನೆಲೆಯಲ್ಲಿ ನಂಬರ್ ಪ್ಲೇಟ್ ಅಳವಡಿಕೆಗೆ ಕಾಲಾವಕಾಶ ನೀಡಬೇಕೆಂದು ಹಿರಿಯ ವಕೀಲ ದೇವದತ್ ಕಾಮತ್ ವಾಹನ ಮಾಲೀಕರ ಪರವಾಗಿ ನ್ಯಾಯಾಲಯದ ಮುಂದೆ ಮನವಿ ಮಾಡಿದರು. ಈ ಮನವಿ ಪರಿಗಣಿಸಿದ ನ್ಯಾಯಾಲಯ ನ. 20ಕ್ಕೆ ವಿಚಾರಣೆ ಮುಂದೂಡಿದೆ. ಹಾಗಾಗಿ ಹೆಚ್‌ಎಸ್‌ಆರ್‌ಪಿ ನಂಬರ್ ಪ್ಲೇಟ್ ಅಳ ವಡಿಕೆ ದಿನಾಂಕವೂ ವಿಸ್ತರಣೆಗೊಂಡಿದೆ.

ಜಾಮೀನಿನ ಮೇಲೆ ಬಿಡುಗಡೆ

ಆರೋಪಿ ಸಿ.ಆರ್. ಸುಪ್ರೀತ್‌ನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತಾದರೂ, ಅವರು ಜಾಮೀನಿನ ಮೇಲೆ ಬಿಡುಗಡೆಯಾಗಿದ್ದಾರೆ ಎಂದು ನಜರ್‌ಬಾದ್ ಠಾಣೆ ಪೊಲೀಸರು ತಿಳಿಸಿದ್ದಾರೆ.

ಅಮಾನತು: ಸಿಬ್ಬಂದಿಯ ಟಿಎ ಹಣವನ್ನು ತನ್ನ ವೈಯಕ್ತಿಕ ಖಾತೆಗೆ ವರ್ಗಾವಣೆ ಮಾಡಿ ಸರ್ಕಾರಿ ಹಣ ದುರುಪಯೋಗಪಡಿಸಿಕೊಂಡಿರುವ ಹೆಡ್ ಕಾನ್‌ಸ್ಟೇಬಲ್ ಸಿ.ಆರ್. ಸುಪ್ರೀತ್ ಹಾಗೂ ಕರ್ತವ್ಯದಲ್ಲಿ ನಿರ್ಲಕ್ಷ್ಯವಹಿಸಿದ ಎಫ್‌ಡಿಎ ಪೊನ್ನಣ್ಣರನ್ನು ವಿಚಾರಣೆ ಬಾಕಿ ಇರಿಸಿ ಕೆಎಸ್‌ಆರ್‌ಪಿ 5ನೇ ಪಡೆ ಕಮಾಂಡೆಂಟ್ ದೊರೆಮನಿ ಭೀಮಯ್ಯ ಸೇವೆಯಿಂದ ಅಮಾನತುಪಡಿಸಿದ್ದಾರೆ.

ಸಿಐಡಿ ತನಿಖೆ: ಟಿಎ ಬಿಲ್ ಹಣ ದುರುಪಯೋಗಪಡಿಸಿಕೊಂಡಿರುವ ಪ್ರಕರಣವನ್ನು ಕೆಎಸ್‌ಆರ್‌ಪಿ ಎಡಿಜಿಪಿ ಅವರ ನಿರ್ದೇಶನದಂತೆ ನಜರ್‌ಬಾದ್ ಠಾಣೆಯಿಂದ ಬೆಂಗಳೂರಿನ ಸಿಐಡಿಗೆ ಒಪ್ಪಿಸಲಾಗಿದ್ದು, ಅಧಿಕಾರಿಗಳು ತನಿಖೆ ಆರಂಭಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಒಂದು ದೇಶ ಒಂದು ಚುನಾವಣೆಯಿಂದ ಭಾರೀ ಹಣ ಉಳಿತಾಯ



ಬೆಂಗಳೂರು, ಸೆ.18– ಒಂದು ದೇಶ ಒಂದು ಚುನಾವಣೆಯಿಂದ ಅನಗತ್ಯ ವೆಚ್ಚ ತಪ್ಪಲಿದೆ. ಬಹಳ ಹಿಂದೆಯೇ ಈ ತೀರ್ಮಾನ ಮಾಡಬೇಕಿತ್ತು. ಈಗಲಾದರೂ ಈ ನಿರ್ಧಾರ ಮಾಡಲಾಗಿದೆ. ಇದನ್ನು ಸ್ವಾಗತಿಸುತ್ತೇನೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಹೇಳಿದ್ದಾರೆ.

ಒಂದು ದೇಶ ಒಂದು ಚುನಾವಣೆಗೆ ಕೇಂದ್ರದಿಂದ ಒಪ್ಪಿಗೆ ಕುರಿತು ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒಂದು ದೇಶ ಒಂದು ಚುನಾವಣೆಗೆ ಕೇಂದ್ರದಿಂದ ಒಪ್ಪಿಗೆ ಸಿಕ್ಕಿದೆ. ಮುಂದಿನ ಅಧಿವೇಶನದಲ್ಲಿ ಇದರ ಮಸೂದೆ ಮಂಡನೆ ಆಗಲಿದೆ. ಕೇಂದ್ರ ಸರ್ಕಾರದ ನಡೆಯನ್ನು ಸ್ವಾಗತ ಮಾಡುತ್ತೇವೆ. ಇದರಿಂದ ಕೋಟ್ಯಂತರ ಹಣ ಉಳಿತಾಯ ಆಗಲಿದೆ ಎಂದರು. ವಿಪಕ್ಷಗಳು ಒಂದು ದೇಶ ಒಂದು ಚುನಾವಣೆ ವಿರೋಧ ಮಾಡುತ್ತಿವೆ. ವಿಪಕ್ಷಗಳಿಗೆ ಮೋದಿಯವರ ಭಯ ಇದೆ. ಮತ್ತೆ ಮೋದಿಯವರೇ ಗೆದ್ದು ಬರುತ್ತಾರೆ ಅಂತ ಭಯ. ಹೀಗಾಗಿ ವಿಪಕ್ಷಗಳು ವಿರೋಧ ಮಾಡುತ್ತಿವೆ ಎಂದು ಲೇವಡಿ ಮಾಡಿದರು.

ದಿ.ನೇತ್ರರಾಜು ಪುತ್ರಿ ನಿತ್ಯಾ ಆತ್ಮಹತ್ಯೆ



ಮೈಸೂರು, ಸೆ.18(ಎಸ್‌ಪಿಎನ್)– ಖ್ಯಾತ ಛಾಯಾಗ್ರಾಹಕ ದಿವಂಗತ ನೇತ್ರರಾಜು ಅವರ ಪುತ್ರಿ ನಿತ್ಯಾ (26) ಮೈಸೂರಿನ ವಿದ್ಯಾರಣ್ಯಪುರಂನ ತಮ್ಮ ನಿವಾಸದಲ್ಲಿ ಬುಧವಾರ ಸಂಜೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇವರು ತಾಯಿ ಮಾಲ ಜೊತೆ ವಾಸವಾಗಿದ್ದರು. ವಿದ್ಯಾರಣ್ಯಪುರಂ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಂತರ ಪ್ರಕರಣ ದಾಖಲಿಸಿಕೊಂಡಿದ್ದಾರೆ.

ನಿತ್ಯಾ ಅವರ ಸಾವಿನ ಕುರಿತು ನಿಖರ ಕಾರಣ ತಿಳಿದು ಬಂದಿಲ್ಲ ಎಂದು ಪೊಲೀಸರು ತಿಳಿಸಿದ್ದಾರೆ. ಮೃತದೇಹವನ್ನು ಕೆ.ಆರ್.ಆಸ್ಪತ್ರೆ ಶವಾಗಾರಕ್ಕೆ ರವಾನಿಸಲಾಗಿದೆ. ನಿತ್ಯಾ ಸಹ ಛಾಯಾಗ್ರಾಹಕಿಯಾಗಿದ್ದರು.


ರೇಚಂಬಳ್ಳಿ ಶ್ರೀಗಳ ಲಿಂಗೈಕ್ಯ



ಚಾಮರಾಜನಗರ, ಸೆ.18–ತಾಲೂಕಿನ ರೇಚಂಬಳ್ಳಿ ಶ್ರೀ ಸಿದ್ದಮಲ್ಲೇಶ್ವರ ಪಟ್ಟದ ಮಠಾಧ್ಯಕ್ಷರಾದ ಶ್ರೀ ಮಹದೇವ ಸ್ವಾಮೀಜಿ (65) ಬುಧವಾರ ಲಿಂಗೈಕ್ಯರಾದರು.

ಶ್ರೀಗಳು ಮೂಲತಃ ನಂಜನಗೂಡು ತಾಲೂಕಿನ ಮುದ್ದಹಳ್ಳಿ ಗ್ರಾಮದವರು. ಶ್ರೀಮಠದ ಆಶ್ರಮಾಧಿಕಾರವಾದ ನಂತರ ಈ ಭಾಗದ ಧಾರ್ಮಿಕ–ಸಾಮಾಜಿಕ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿದ್ದರು. ಉತ್ತಮ ಹಾಡುಗಾರರಾಗಿದ್ದರು. ವಿಶೇಷವಾಗಿ ನಿಜಗುಣ ಕೈವಲ್ಯ ಪದಗಳನ್ನು ಅತ್ಯದ್ಭುತವಾಗಿ ಶುಶ್ರಾವ್ಯವಾಗಿ ಹಾಡುತ್ತಿದರು. ಜೊತೆಗೆ ಕೃಷಿ ಕಾಯಕದಲ್ಲೂ ತೊಡಗಿಸಿಕೊಂಡಿದ್ದರು.ಸ್ವಾಮೀಜಿ ಪಾರ್ಥಿವ ಶರೀರವನ್ನು ರೇಚಂಬಳ್ಳಿ ಮಠದಲ್ಲಿರಿಸಿದ್ದು, ಗುರುವಾರ ಅಂತ್ಯಕ್ರಿಯೆ ನಡೆಯಲಿದೆ ಎಂದು ಮಠಾದ ಭಕ್ತ ಮೂಲಗಳು ತಿಳಿಸಿವೆ. ಶ್ರೀ ಸರ್ಪಭೂಷಣಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ಸಂತಾಪ ಸೂಚಿಸಿದ್ದಾರೆ.

ನಿಧನ




ಪದ್ಮ

ಮೈಸೂರು, ಸೆ.18– ಮೈಸೂರು ಸುಣ್ಣದಕೇರಿಯ 9ನೇ ಕ್ರಾಸ್ ನಿವಾಸಿ ಶ್ರೀಮತಿ ಪದ್ಮ (57) ಬುಧವಾರ ಅನಾರೋಗ್ಯದಿಂದ ನಿಧನರಾದರು.

ಮೃತರು ಪತಿ ಹಾಗೂ ಇಬ್ಬರು ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ನಾಳೆ (ಸೆ.19) ಬೆಳಗ್ಗೆ 11 ಗಂಟೆಗೆ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿರುವ ರುದ್ರಭೂಮಿಯಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಯೋಗ ದಸರಾ: ವಿವಿಧ ಕಾರ್ಯಕ್ರಮಗಳ ಆಯೋಜನೆ


ಫೈಲ್ ಚಿತ್ರ

ಮೈಸೂರು, ಸೆ.18–ಮೈಸೂರು ದಸರಾ ಮಹೋತ್ಸವ, ಯೋಗ ದಸರಾ ಉಪಸಮಿತಿ ವತಿಯಿಂದ ಅ.4ರಿಂದ 12ರವರೆಗೆ ವಿವಿಧ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಅ.4ರಂದು ಸಂಜೆ 5ರಿಂದ 8ರವರೆಗೆ ಜೆ.ಕೆ.ಗ್ರೌಂಡ್ಸ್ ಪ್ಲಾಟಿನಂ ಜುಬಿಲಿ ಆಡಿಟೋರಿಯಂನಲ್ಲಿ ಯೋಗ ದಸರಾ ಉದ್ಘಾಟನೆ ಹಾಗೂ ಯೋಗ ನೃತ್ಯರೂಪಕ ಮನರಂಜನಾ ಕಾರ್ಯಕ್ರಮ ನಡೆಯಲಿದೆ. ಅ.5ರಂದು ಬೆಳಗ್ಗೆ 9ರಿಂದ ಸಂಜೆ 8ರವರೆಗೆ ಮೈಸೂರು ದಸರಾ ವಸ್ತುಪ್ರದರ್ಶನ ಪ್ರಾಧಿಕಾರದ ಪಿ.ಕಾಳಿಂಗರಾವ್ ಸಭಾಂಗಣದಲ್ಲಿ ರಾಜ್ಯ ಮಟ್ಟದ ದಸರಾ ಯೋಗಾಸನ ಸ್ಪರ್ಧೆ 2024 ನಡೆಯಲಿದೆ. ಅ.7ರಂದು ಬೆಳಗ್ಗೆ 6ರಿಂದ 8ರವರೆಗೆ ಮೈಸೂರು ಅರಮನೆ ಆವರಣದಲ್ಲಿ ಯೋಗ ಸರಪಳಿ ಪ್ರಜಾಪ್ರಭುತ್ವಕ್ಕಾಗಿ ಯೋಗ ಕಾರ್ಯಕ್ರಮ ನಡೆಯಲಿದೆ. ಅ.9ರಂದು ಬೆಳಗ್ಗೆ 6ರಿಂದ 8ರವರೆಗೆ ಚಾಮುಂಡಿಬೆಟ್ಟದ ತಪ್ಪಲು ಮತ್ತು ದೇವಸ್ಥಾನದ ಆವರಣದಲ್ಲಿ ಯೋಗ ಚಾರಣ ಮತ್ತು ದುರ್ಗಾ ನಮಸ್ಕಾರ ನಡೆಯಲಿದ್ದು, ಅ.12ರಂದು ಸಂಜೆ 6ರಿಂದ 8ರವರೆಗೆ ಬನ್ನಿಮಂಟಪದ ಕವಾಯಿತು ಮೈದಾನದಲ್ಲಿ ಯೋಗ ಗುಚ್ಛ ಸಾಮೂಹಿಕ ಯೋಗ ನೃತ್ಯರೂಪಕ ಕಾರ್ಯಕ್ರಮ ನಡೆಯಲಿದೆ ಎಂದು ಮೈಸೂರು ದಸರಾ ಮಹೋತ್ಸವ ಯೋಗ ದಸರಾ ಉಪಸಮಿತಿಯ ಕಾರ್ಯದರ್ಶಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಚಾಮುಂಡಿಬೆಟ್ಟ ಪ್ರಾಧಿಕಾರ ವಿರೋಧಿಸಿ ಪ್ರತಿಭಟನೆ

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆದಂತೆ ಇಲ್ಲೂ ಹಗರಣವಾಗಲಿದೆ


ಚಾಮುಂಡಿ ಬೆಟ್ಟ ಪ್ರಾಧಿಕಾರ ರಚನೆ, ಚಾಮುಂಡೇಶ್ವರಿ ದೇವಿ ದರ್ಶನಕ್ಕೆ ಸ್ಮಾರ್ಟ್ ಕಾರ್ಡ್ ಜಾರಿಗೊಳಿಸಲು ಮುಂದಾಗಿರುವುದನ್ನು ಖಂಡಿಸಿ ಕರ್ನಾಟಕ ಸೇನಾಪಡೆ ಹಳೆ ಡಿಸಿ ಕಚೇರಿ ಮುಂಭಾಗ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಸೆ.18(ಜಿಎ)–ಚಾಮುಂಡಿ ಬೆಟ್ಟ ಪ್ರಾಧಿಕಾರ ರಚನೆ ಹಾಗೂ ಚಾಮುಂಡೇಶ್ವರಿ ದೇವಿ ದರ್ಶನಕ್ಕೆ ಸ್ಮಾರ್ಟ್ ಕಾರ್ಡ್ ಜಾರಿಗೊಳಿಸಲು ಮುಂದಾಗಿರುವುದನ್ನು ಖಂಡಿಸಿ ಕರ್ನಾಟಕ ಸೇನಾ ಪಡೆ ಸದಸ್ಯರು ಜಿಲ್ಲಾಧಿಕಾರಿಗಳ ಹಳೆ ಕಚೇರಿ ಮುಂಭಾಗ ಬುಧವಾರ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರ ಚಾಮುಂಡೇಶ್ವರಿ ದೇವಿ ದರ್ಶನಕ್ಕೆ ಸ್ಮಾರ್ಟ್ ಕಾರ್ಡ್ ಜಾರಿಗೊಳಿಸಲು ಮುಂದಾಗಿರುವುದು ಖಂಡನೀಯ. ಮೈಸೂರು ಅರಸರು ಚಾಮುಂಡೇಶ್ವರಿ ದೇವಿ ಬೆಟ್ಟವನ್ನು ಅಭಿವೃದ್ಧಿಪಡಿಸಿದ್ದು, ಮುಮ್ಮಡಿ ಕೃಷ್ಣರಾಜ ಒಡೆಯರ್ ಬೆಟ್ಟದಲ್ಲಿ ದೇವಸ್ಥಾನಕ್ಕೆ ಪೂಜೆ ಮಾಡುವ ಅರ್ಚಕರಿಂದ ಹಿಡಿದು ಎಲ್ಲಾ ವರ್ಗದವರಿಗೂ ಆಗಿನ ಕಾಲದಲ್ಲಿಯೇ ಮನೆ ನಿರ್ಮಿಸಿ ಕೊಟ್ಟಿದ್ದಾರೆ ಎಂದರು.

ಚಾಮುಂಡಿ ಬೆಟ್ಟ ಈಗ ಗ್ರಾಮವಾಗಿ ಮಾರ್ಪಟ್ಟಿದೆ. ಪ್ರಾಧಿಕಾರ ರಚನೆಯಾದರೆ ಸುಮಾರು 300 ಮೀಟರ್ ಸುತ್ತಳತೆ ಅಭಿವೃದ್ಧಿ ಮಾಡುತ್ತೇವೆ ಎನ್ನುತ್ತಾರೆ. ಆಗ ಇಡೀ ಗ್ರಾಮವೇ ಇಲ್ಲದಂತಾಗುತ್ತದೆ. ಮಹಾರಾಜರು ಮೈಸೂರು ಅಭಿವೃದ್ಧಿಗಾಗಿ ಈಗಾಗಲೇ ಸಾವಿರಾರು ಎಕರೆಗಳನ್ನು ದಾನ ನೀಡಿದ್ದಾರೆ. ದೇವಸ್ಥಾನಗಳು ಮನಃಶಾಂತಿ ದೊರೆಯುವ ಸ್ಥಳವಾಗಬೇಕೇ ಹೊರತು ವ್ಯಾಪಾರದ ಸ್ಥಳವಾಗಬಾರದು' ಎಂದು ಆಗ್ರಹಿಸಿದರು.

ರಾಜ್ಯ ಸರ್ಕಾರ ಸ್ಮಾರ್ಟ್ ಕಾರ್ಡ್ ಹೆಸರಿನಲ್ಲಿ ದೇವರ ದರ್ಶನಕ್ಕೆ 10 ಸಾವಿರ, 25 ಸಾವಿರ ಹಾಗೂ 1 ಲಕ್ಷ ನಿಗದಿಪಡಿಸಲು ಉದ್ದೇಶಿಸಿರುವುದು ಖಂಡನೀಯ. ರಾಜ್ಯ ಸರ್ಕಾರ ಬಿಟ್ಟಿ ಭಾಗ್ಯಗಳಿಂದ ರಾಜ್ಯದ ಬೊಕ್ಕಸ ಖಾಲಿ ಮಾಡಿ, ಈಗ ದೇವರ ಹೆಸರಿನಲ್ಲಿ ಹಗಲು ದರೋಡೆ ಮಾಡಲು ಹೊರಟಿದೆ ಎಂದು ಆರೋಪಿಸಿದರು.

ಚಾಮುಂಡಿ ಬೆಟ್ಟಕ್ಕೆ ಪ್ರಾಧಿಕಾರದ ಅವಶ್ಯಕತೆಯೇ ಇಲ್ಲ. ಈ ಪ್ರಾಧಿಕಾರ ರಚನೆಯಿಂದ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಆದಂತೆ ಇಲ್ಲೂ ಹಗರಣಗಳಿಗೆ ದಾರಿ ಮಾಡಿ ಕೊಟ್ಟಂತಾಗುತ್ತದೆ. ಈಗಾಗಲೇ ಚಾಮುಂಡಿ ಬೆಟ್ಟ ಮುಜರಾಯಿ ಇಲಾಖೆ, ಧಾರ್ಮಿಕ ದತ್ತಿಗೆ ಒಳಪಟ್ಟು ಭಕ್ತಾದಿಗಳಿಂದ ಕೋಟ್ಯಂತರ ಆದಾಯ ಬರುತ್ತಿದೆ. ಚಾಮುಂಡಿ ಬೆಟ್ಟದ ಅಭಿವೃದ್ಧಿಗೆ ಈ ಹಣವನ್ನೇ ಸದ್ಬಳಕೆ ಮಾಡಿಕೊಳ್ಳಬೇಕು' ಎಂದು ಆಗ್ರಹಿಸಿದರು.

ಸಂಘಟನೆಯ ಜಿಲ್ಲಾಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ಪ್ರಭುಶಂಕರ್ ಎಂ.ಬಿ, ಪ್ರದೀಶ್, ಕೃಷ್ಣಪ್ಪ, ಸುರೇಶ್ ಗೋಲ್ಡ್, ಶಿವಲಿಂಗಯ್ಯ, ನಾರಾಯಣ ಗೌಡ, ನಾಗಣ್ಣ ಕೆಪಿ, ಕುಮಾರ್‌ಗೌಡ, ಸಿಂಧುವಳ್ಳಿ ಶಿವಕುಮಾರ್, ವರಕೋಡು ಕೃಷ್ಣೇಗೌಡ, ನಾಗರಾಜು, ಮಂಜುಳ, ಯೋಗಾದಿ ಸಿದ್ದೇಗೌಡ, ನೇಹಾ, ವಿಜಯೇಂದ್ರ, ಭಾಗ್ಯಮ್ಮ, ಅಂಬಾ ಅರಸ್, ರಘು ಅರಸ್, ರವಿ ಒಂಟಿಕೊಪ್ಪಲು, ರಾಮಕೃಷ್ಣಗೌಡ, ಎಳನೀರು ರಾಮಣ್ಣ, ಪ್ರದೀಪ್, ಪದ್ಮ, ಹನುಮಂತಯ್ಯ, ನಿತ್ಯಾನಂದ ಎಂಆರ್, ಶಂಕರ್ ಗುರು, ಶಿವನಾಯ್ಕ, ರಾಧಾಕೃಷ್ಣ, ಅಕ್ಬರ್, ತ್ಯಾಗರಾಜ್, ದಿನೇಶ್ ಮಹಾದೇವಸ್ವಾಮಿ ಗೌಡ, ಆನಂದ್ ಹಾಗೂ ಗಣೇಶ್‌ಪ್ರಸಾದ್ ಪಾಲ್ಗೊಂಡಿದ್ದರು.

ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ವಯೋಮಿತಿ ಹೆಚ್ಚಳಕ್ಕೆ ಆಗ್ರಹಿಸಿ ಪ್ರತಿಭಟನೆ


ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆ ನೇಮಕಾತಿ ವಯೋಮಿತಿ ಹೆಚ್ಚಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಡಿಸಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಸೆ.18(ಜಿಎ)–ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆ ನೇಮಕಾತಿ ವಯೋಮಿತಿ ಹೆಚ್ಚಿಸುವಂತೆ ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು. ದೇಶದ ಒಕ್ಕೂಟ ವ್ಯವಸ್ಥೆಯಲ್ಲಿ ಹಲವು ರಾಜ್ಯಗಳಲ್ಲಿ ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ವಯೋಮಿತಿ ಆಯಾ ವರ್ಗಗಳಿಗೆ ಒಂದೊಂದು ರೀತಿ ಇದೆ. ಎಲ್ಲಾ ರಾಜ್ಯಗಳಲ್ಲೂ 30–35 ವರ್ಷದ ಮೇಲೆ ಇದೆ. ಆದರೆ, ನಮ್ಮ ರಾಜ್ಯದಲ್ಲಿ 27 ವರ್ಷಕ್ಕೆ ಮಿತಿಗೊಳಿಸಲಾಗಿದೆ. ಬೇರೆ ರಾಜ್ಯಗಳಿಗೆ ಹೋಲಿಸಿದರೆ ನಮ್ಮ ರಾಜ್ಯದಲ್ಲಿ ಅತಿ ಕಡಿಮೆ ಎಂದು ಬೇಸರಿಸಿದರು.

ಪೊಲೀಸ್ ಕಾನ್ಸ್‌ಟೇಬಲ್ ನೇಮಕಾತಿ ವಯೋಮಿತಿಯನ್ನು ಸಾಮಾನ್ಯ ವರ್ಗಕ್ಕೆ 30, ಪ.ಜಾ, ಪ.ಪಂ ವಿದ್ಯಾರ್ಥಿಗಳಿಗೆ 33 ವರ್ಷಕ್ಕೆ ಏರಿಕೆ ಮಾಡಬೇಕು. ಪೊಲೀಸ್ ಇಲಾಖೆಯಲ್ಲಿ ಹಲವು ವರ್ಷಗಳಿಂದ ನೇಮಕಾತಿ ಆಗಿಲ್ಲ. ಕೂಡಲೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿ ರಾಜ್ಯದಲ್ಲಿರುವ ನಿರುದ್ಯೋಗ ಸಮಸ್ಯೆ ಬಗೆಹರಿಸಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಪೊಲೀಸ್ ಇಲಾಖೆಗೆ ಸೇರಲು ಅನುವು ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ಪ್ರವೀಣ್ ಕುಮಾರ್ ಇನ್ನಿತರರು ಪಾಲ್ಗೊಂಡಿದ್ದರು.

271ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮ


ಮೈಸೂರು ಶ್ರೀ ಸುತ್ತೂರು ಮಠದಲ್ಲಿ ಬುಧವಾರ ನಡೆದ 271ನೇ ಬೆಳದಿಂಗಳ ಸಂಗೀತ ಕಾರ್ಯಕ್ರಮದಲ್ಲಿ ವಿದುಷಿ ಪಾವನಿ ಭಾರದ್ವಾಜ್ ಗಾಯನ ಪ್ರಸ್ತುತಪಡಿಸಿದರು. ವಿದ್ವಾನ್ ಎಚ್.ಎಲ್.ಶಿವಶಂಕರಸ್ವಾಮಿ, ವಿದ್ವಾನ್ ಎಂ.ಎಸ್.ಜಯರಾಂ ಹಾಗೂ ವಿದ್ವಾನ್ ರೂಪನಗುಡಿ ರತ್ನತೇಜ ಅವರಿದ್ದಾರೆ.

ರಂಗಾಯಣದ ತಾತ್ಕಾಲಿಕ ಹುದ್ದೆಗೆ ಆಹ್ವಾನ

ಮೈಸೂರು,ಸೆ.18–ರಂಗಾಯಣ ರೆಪರ್ಟರಿಯ 2024–25ನೇ ಸಾಲಿಗೆ ಸಂಗೀತ ಸಂಯೋಜಕರು–2, ಬೆಳಕಿನ ವಿನ್ಯಾಸಕಾರರು–1, ಧ್ವನಿ ನಿರ್ವಾಹಕರು–1 ಹಾಗೂ ಬಡಗಿ–1 ಹುದ್ದೆಯ ಅವಶ್ಯಕತೆಯಿದ್ದು, ಸದರಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಿಕೊಳ್ಳಲು ಯೋಜಿಸಲಾಗಿದೆ. ಈ ಹುದ್ದೆಗಳು ತಾತ್ಕಾಲಿಕವಾಗಿದ್ದು, ಆಸಕ್ತರು ತಮ್ಮ ವ್ಯಕ್ತಿಗತ ವಿವರಗಳನ್ನು ಒಳಗೊಂಡ ಅರ್ಜಿಯನ್ನು ಸೆ.23ರೊಳಗೆ ನಿರ್ದೇಶಕರು, ರಂಗಾಯಣ ಇವರಿಗೆ ಸಲ್ಲಿಸಲು ತಿಳಿಸಿದೆ. ಅಭ್ಯರ್ಥಿಗಳ ಆಯ್ಕೆಗಾಗಿ ಸಂದರ್ಶನವನ್ನು ಸೆ.25ರಂದು ನಡೆಸಲಾಗುತ್ತದೆ. ವಿದ್ಯಾಭ್ಯಾಸ, ಅನುಭವ ಹಾಗೂ ವಿವರಗಳಿಗೆ ರಂಗಾಯಣದ ಕಚೇರಿ ದೂ.0821–2512639 ಸಂಪರ್ಕಿಸಬಹುದು.

ವಿಶ್ವಕರ್ಮ ಜಯಂತಿ...


ಮೈಸೂರು ತಾಲೂಕಿನ ಜಯಪುರದ ಸಿದ್ದಪ್ಪಾಜಿ ರಸ್ತೆಯ ಆದಿಜಾಂಬವ ಸಮುದಾಯದ ವತಿಯಿಂದ ವಿಶ್ವಕರ್ಮ ದೇವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ, ವಿಶ್ವಕರ್ಮ ಜಯಂತಿ ಆಚರಿಸಲಾಯಿತು. ವಿಶ್ವಕರ್ಮ ಪತ್ತಿನ ಸಹಕಾರ ಸಂಘದ ನಿರ್ದೇಶಕ, ಜಯಪುರ ಹಾಲಿನ ಡೇರಿ ಕಾರ್ಯದರ್ಶಿ ಪಿ.ಬಸವರಾಜು, ಗ್ರಾಪಂ ಅಧ್ಯಕ್ಷ ಮಾದೇವಯ್ಯ, ಛಾಯಾಗ್ರಾಹಕ ಮಾವಿನಹಳ್ಳಿ ರಮೇಶ್, ಹಿರಿಯ ಮುಖಂಡ ಸಿದ್ದಯ್ಯ, ಸಮುದಾಯದ ಬಾಂಧವರು ಉಪಸ್ಥಿತರಿದ್ದರು.

ಮೈಸೂರಲ್ಲಿ ಲೋಕಾಯುಕ್ತ ಪೊಲೀಸರಿಂದ ಸಾರ್ವಜನಿಕರ ಅಹವಾಲು ವಿಚಾರಣೆ


ಹಿರಿಯ ನಾಗರಿಕರೊಬ್ಬರು ಲೋಕಾಯುಕ್ತ ಪೊಲೀಸರಿಗೆ ಅಹವಾಲು ಸಲ್ಲಿಸಿದರು.

ಮೈಸೂರು, ಸೆ.18 (ಆರ್‌ಕೆ)– ಮೈಸೂರಿನ ನಜರ್‌ಬಾದ್‌ನಲ್ಲಿರುವ ತಾಲೂಕು ಕಚೇರಿ (ಮಿನಿ ವಿಧಾನಸೌಧ) ಸಭಾಂಗಣದಲ್ಲಿ ಲೋಕಾಯುಕ್ತ ಎಸ್‌ಪಿ ಉದೇಶ್ ನೇತೃತ್ವದಲ್ಲಿ ಇಂದು ಸಾರ್ವಜನಿಕರ ಅಹವಾಲುಗಳ ವಿಚಾರಣೆ ನಡೆಸಲಾಯಿತು.

ಮೈಸೂರು ನಗರ ವ್ಯಾಪ್ತಿಯಲ್ಲಿ 6 ಹಾಗೂ ಮೈಸೂರು ತಾಲೂಕು ವ್ಯಾಪ್ತಿಯಲ್ಲಿ 5 ಸೇರಿ ಒಟ್ಟು 11 ದೂರು ಅರ್ಜಿಗಳು ಸ್ವೀಕೃತಗೊಂಡಿದ್ದವು. ಮುಡಾ ಸಂಬಂಧಪಟ್ಟ 2 ಅರ್ಜಿಗಳಿಗೆ ಸೂಕ್ತ ಕ್ರಮ ವಹಿಸಬೇಕು. ಸಾಧ್ಯವಾಗದಿದ್ದರೆ, ಸಕಾರಣದೊಂದಿಗೆ ಅರ್ಜಿದಾರರಿಗೆ ಹಿಂಬರಹ ನೀಡಲು ಲೋಕಾಯುಕ್ತ ಎಸ್ಪಿ ಸೂಚನೆ ನೀಡಿದರು.

ಉಳಿದಂತೆ ಶಿಕ್ಷಣ ಇಲಾಖೆ, ಎಪಿಎಂಸಿ, ಮೈಸೂರು ಮಹಾನಗರ ಪಾಲಿಕೆಗೆ ಸಂಬಂಧಿಸಿದ 3 ದೂರುಗಳಿಗೆ ಸ್ಥಳದಲ್ಲಿದ್ದ ಅಧಿಕಾರಿಗಳು, ಕಚೇರಿಯಲ್ಲಿ ದಾಖಲೆಗಳನ್ನು ಪರಿಶೀಲಿಸಿ, ವಿಲೇವಾರಿ ಮಾಡುವುದಾಗಿ ತಿಳಿಸಿದರು.

ಅದೇ ರೀತಿ ಮೈಸೂರು ತಾಲೂಕು ವ್ಯಾಪ್ತಿಯ ಭೂ ಮಾಪನಾ ಇಲಾಖೆ, ಶ್ರೀರಾಂಪುರ ಪಟ್ಟಣ ಪಂಚಾಯಿತಿ, ಆರ್‌ಟಿಓ, ವಿಶೇಷ ಭೂಸ್ವಾಧೀನಾಧಿಕಾರಿ ಕಚೇರಿಗಳಿಗೆ ಸಂಬಂಧಿಸಿದಂತೆ ಸೇವೆ ಕೋರಿ ಅರ್ಜಿ ಸಲ್ಲಿಸಿದ್ದರೂ, ಅಧಿಕಾರಿಗಳು ಕ್ರಮ ವಹಿಸದಿರುವ ಬಗ್ಗೆ ಸಾರ್ವಜನಿಕರು ದೂರಿದರು. ನಿಗದಿತ ಅವಧಿಯೊಳಗೆ ಸಾರ್ವಜನಿಕರ ಅರ್ಜಿಗಳನ್ನು ವಿಲೇವಾರಿ ಮಾಡಬೇಕು, ಕಾನೂನಾತ್ಮಕ ಅಥವಾ ತಾಂತ್ರಿಕ ತೊಂದರೆ ಇದ್ದಲ್ಲಿ ಅರ್ಜಿದಾರರಿಗೆ ಹಿಂಬರಹ ನೀಡಬೇಕು. ಅನಗತ್ಯವಾಗಿ ಜನರಿಗೆ ತೊಂದರೆ ಕೊಡಬಾರದು ಎಂದು ಉದೇಶ್ ಸಲಹೆ ನೀಡಿದರು.

ಲೋಕಾಯುಕ್ತ ಡಿವೈಎಸ್‌ಪಿಗಳಾದ ಕೃಷ್ಣಯ್ಯ, ಮಾಲತೇಶ್, ಇನ್‌ಸ್ಪೆಕ್ಟರ್‌ಗಳಾದ ಉಮೇಶ್, ರವಿಕುಮಾರ್, ಅಶೋಕ್ ಕುಮಾರ್, ರೂಪಶ್ರೀ ಸೇರಿದಂತೆ ಹಲವರು ಈ ಸಂದರ್ಭ ಉಪಸ್ಥಿತರಿದ್ದರು.

ನಾಳೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಮೈಸೂರು,ಸೆ.18–ವಿವಿಮೊಹಲ್ಲಾ ವಿಭಾಗ ವ್ಯಾಪ್ತಿ ನಿರ್ವಹಣಾ ಕಾರ್ಯ ನಿಮಿತ್ತ ಸೆ.20ರಂದು ಬೆಳಗ್ಗೆ 10ರಿಂದ ಸಂಜೆ 6ರವರೆಗೆ ವಿಜಯನಗರ 4ನೇ ಹಂತ, ಕೆಹೆಚ್‌ಬಿ ಕಾಲೋನಿ, ಹೂಟಗಳ್ಳಿ, ಬೆಳವಾಡಿ, ಬಸವನಪುರ, ಮರಟಿಕ್ಯಾತನಹಳ್ಳಿ, ಪಂಚಚಾರ್ಯ ಲೇಔಟ್, ಕೆ.ಹೆಮ್ಮನಹಳ್ಳಿ, ಲಿಂಗದೇವರಕೊಪ್ಪಲು, ಇಲವಾಲ, ಹೂಟಗಳ್ಳಿ ಕೆಆರ್.ಎಸ್. ರೋಡ್, ಆದಿತ್ಯಾ ಬಡಾವಣೆ, ಎಸ್‌ಆರ್‌ಎಸ್ ಕಾಲೋನಿ, ಕೂರ್ಗಳ್ಳಿ, ಎನ್.ಹೆಚ್.ಬಿ ಕಾಲೋನಿ, ಬೆಳವಾಡಿ ಕೈಗಾರಿಕಾ ಪ್ರದೇಶ, ಶಾಹಿ ಗಾರ್ಮೆಂಟ್ಸ್, ಹೂಟಗಳ್ಳಿ ಕೈಗಾರಿಕಾ ಪ್ರದೇಶ, ಕೂರ್ಗಳ್ಳಿ ಕೈಗಾರಿಕಾ ಪ್ರದೇಶ, ಗ್ರ್ಯಾಂಡ್ ಮೌರ್ಯ ಹೋಟೆಲ್, ರಿಲಾಯನ್ಸ್, ಮಾಸ್ ಫರ್ನಿಚರ್, ಯಶಸ್ವಿನಿ ಕಲ್ಯಾಣ ಮಂಟಪ, ಸೌಪರ್ಣಿಕ ಅಪಾರ್ಟ್‌ಮೆಂಟ್ ಹಿನಕಲ್, ಎಸ್.ವಿ.ಇ.ಐ ಕಾಲೇಜು, ಜಟ್ಟಿಹುಂಡಿ ಹಾಗೂ ಸುತ್ತಮುತ್ತ.

ಡಿ.ಎಂ.ಜಿ.ಹಳ್ಳಿ, ಕಮರಹಳ್ಳಿ, ಮಾಣಿಕ್ಯಪುರ, ದೊಡ್ಡಹಟ್ಟಿಹುಂಡಿ, ಮರಿಯ್ಯನಹುಂಡಿ, ಕಟ್ಟೆಹುಂಡಿ, ಶೆಟ್ಟಿನಾಯಕನಹಳ್ಳಿ ಹಾಗೂ ಸುತ್ತಮುತ್ತ. ಶ್ರೀರಾಂಪುರ 2ನೇ ಹಂತ, ರಮಾಭಾಯಿನಗರ, ಮಹದೇವಪುರ, ಜಯನಗರ 1ರಿಂದ 20ನೇ ಕ್ರಾಸ್, ಪರಸಯ್ಯನಹುಂಡಿ, ಶಿವಪುರ, ಕುವೆಂಪು ನಗರ ಕೆ ಬ್ಲಾಕ್, ಅಪೋಲೊ ಆಸ್ಪತ್ರೆ ಸುತ್ತಮುತ್ತ. ಚಿಕ್ಕಹರ ದನಹಳ್ಳಿ, ಗೊರೂರು, ಕಳಲ ವಾಡಿ, ಕೋಟೆಹುಂಡಿ, ಯಡಹಳ್ಳಿ, ರಾಯನಕೆರೆ, ಸರಸ್ವತಿಪುರಂ 1ನೇ ಮುಖ್ಯ ರಸ್ತೆಯಿಂದ 6ನೇ ಮುಖ್ಯ ರಸ್ತೆ, ಭಾಗಶಃ ಕೆ.ಜಿ.ಕೊಪ್ಪಲು ಹಾಗೂ ಸುತ್ತಮುತ್ತ. ಸೌತ್ (ದಕ್ಷಿಣ) ವಿದ್ಯುತ್ ವಿತರಣಾ ಕೇಂದ್ರದ ಪ್ರದೇಶಗಳಾದ ವಿದ್ಯಾರಣ್ಯಪುರಂ 25ರಿಂದ 30ನೇ ಕ್ರಾಸ್, ಕನಕಗಿರಿ, ವೀವರ್ಸ್ ಕಾಲೋನಿ, ಸ್ಟರ್ಲಿಂಗ್ ಸುತ್ತ–ಮುತ್ತ, ಇಂಡಸ್ಟ್ರಿಯಲ್ ಸಬರ್ಬ್ 01ರಿಂದ 03ನೇ ಹಂತ, ಚಾಮುಂಡಿಪುರಂ ವೃತ್ತ, ಸಿಲ್ಕ್ ಫ್ಯಾಕ್ಟರಿ ಸುತ್ತಮುತ್ತ, ಅಶೋಕಪುರಂ, ಕೃಷ್ಣ ಮೂರ್ತಿಪುರಂ, ಮೇದರಕೇರಿ, ಆರ್.ಟಿ.ಓ ಸುತ್ತಮುತ್ತ, ಬಲ್ಲಾಳ್ ವೃತ್ತ, ನಂಜುಮಳಿಗೆ ಸುತ್ತಮುತ್ತ, ಬಂಡಿಪಾಳ್ಯ, ಹೊಸಹುಂಡಿ, ಗುಡುಮಾದನಹಳ್ಳಿ, ಉತ್ತನಹಳ್ಳಿ, ಏಳಿಗೆ ಹುಂಡಿ, ಆಲನಹಳ್ಳಿ ರಿಂಗ್ ರಸ್ತೆ ಸುತ್ತ–ಮುತ್ತ ನಾಚನಹಳ್ಳಿ ಪಾಳ್ಯ, ಕವಿತಾ ಬೇಕರಿ ಸರ್ಕಲ್, ಜೆಪಿನಗರ ಎ.ಬಿ.ಸಿ.ಡಿ ಅಂಡ್ ಇ ಬ್ಲಾಕ್, ಗೊಬ್ಬಳಿಮರ, ಪೊಲೀಸ್ ಬೂತ್ ವೃತ್ತ, ಓಂಕಾರ್ ಬಡಾವಣೆ, ಸಿದ್ದಲಿಂಗೇಶ್ವರ ಬಡಾವಣೆ, ಅಮೋಘ ಬಡಾವಣೆ, ಪ್ಯಾಲೆಸ್ ಹತ್ತಿರ ಹಾಗೂ ಸುತ್ತಮುತ್ತ ವಿದ್ಯುತ್ ವ್ಯತ್ಯಯವಾಗಲಿದೆ.

ಸೆಸ್ಕ್-ಪಾಲಿಕೆ ನಡುವೆ ಸಮನ್ವಯದ ಕೊರತೆ

ತೆರವುಗೊಳ್ಳದೇ ಫುಟ್‌ಪಾತ್ ಮೇಲೆ ಬಿದ್ದಿರುವ ಮರದ ರಂಬೆಗಳ ರಾಶಿ; ಪಾದಚಾರಿಗಳು ಪರದಾಟ


ಜೆಎಲ್‌ಬಿ ರಸ್ತೆಯ ಫುಟ್‌ಪಾತ್‌ನಲ್ಲಿ ಬಿದ್ದಿರುವ ಮರದ ರಂಬೆಗಳು.

ಮೈಸೂರು,ಸೆ.18(ಪಿಎಂ)– ಎರಡು ಇಲಾಖೆಗಳು ತಮ್ಮ ಕರ್ತವ್ಯದಲ್ಲಿ ಸಮನ್ವಯದ ಕೊರತೆ ಹೊಂದಿದ್ದರೆ ತಮ್ಮದಲ್ಲದ ತಪ್ಪಿಗೆ ಸಾರ್ವಜನಿಕರು ಹೇಗೆ ಸಮಸ್ಯೆ ಅನುಭವಿಸುತ್ತಾರೆ ಎಂಬುದಕ್ಕೆ ನಗರದ ಕೆಲ ರಸ್ತೆಗಳ ಫುಟ್‌ಪಾತ್ ಮೇಲೆ ಬಿದ್ದಿರುವ ಮರದ ರೆಂಬೆಗಳ ರಾಶಿಯೇ ಸಾಕ್ಷಿಯಾಗಿದೆ.

ಹುಣಸೂರು ರಸ್ತೆ ಹಾಗೂ ಜೆಎಲ್‌ಬಿ ರಸ್ತೆಯ ಫುಟ್‌ಪಾತ್ ಮೇಲೆ ಹೆಜ್ಜೆ ಇಡಲಾಗದಂತೆ ಮರದ ರಂಬೆಗಳು ರಾಶಿ ಹಿಡಿದಿವೆ. ವಿದ್ಯುತ್ ತಂತಿ ಮತ್ತು ಕಂಬಕ್ಕೆ ಮರದ ರಂಬೆಗಳು ತಾಗುವು ದನ್ನು ತಡೆಗಟ್ಟಲು ಸೆಸ್ಕ್ ಸಿಬ್ಬಂದಿ ಅವುಗಳ ತೆರವು ಕಾರ್ಯಾಚರಣೆ ನಡೆಸುತ್ತಿದ್ದಾರೆ. ರಂಬೆ ಕೊಂಬೆಗಳು ವಿದ್ಯುತ್ ತಂತಿಗೆ ತಾಗಿ ಅನಾಹುತ ಆಗುವುದನ್ನು ತಪ್ಪಿಸಲು ಇದು ಸೂಕ್ತ ಕಾರ್ಯವೇ. ಆದರೆ ಅವುಗಳನ್ನು ಫುಟ್‌ಪಾತ್ ಮೇಲೆ ಹಾಕಿ ಪಾದಚಾರಿಗಳು ಓಡಾಡಲು ಕಿರಿಕಿರಿ ಉಂಟು ಮಾಡಿರುವುದು ಮಾತ್ರ ದುರಂತವೇ ಸರಿ.

ಜೊತೆಗೆ ದಸರಾ ಮಹೋತ್ಸವದ ವಿದ್ಯುತ್ ದೀಪಾಲಂಕಾರಕ್ಕಾಗಿಯೂ ನಗರದ ಹೃದಯ ಭಾಗ ಮಾತ್ರವಲ್ಲದೆ, ಹಲವೆಡೆ ರಸ್ತೆ ಬದಿಯಲ್ಲಿ ಮರದ ರಂಬೆಗಳನ್ನು ಕಡಿಯಲಾಗುತ್ತಿದೆ. ಆದರೆ ಅವುಗಳನ್ನು ತ್ವರಿತವಾಗಿ ತೆರವುಗೊಳಿಸದೇ ಫುಟ್‌ಪಾತ್ ಮೇಲೆ ಬಿಡಲಾಗಿದೆ. ಫುಟ್‌ಪಾತ್ ಮೇಲೆಯೇ ರಂಬೆಗಳು ಬಿದ್ದಿರುವುದು ಓಡಾಡುವ ಸಾರ್ವಜನಿಕರು ರಾತ್ರಿ ವೇಳೆ ಅಪಾಯಕ್ಕೆ ಒಳಗಾಗುವ ಸಂಭವವೂ ಇದೆ.


ಹುಣಸೂರು ರಸ್ತೆಯ ಪಡುವಾರಹಳ್ಳಿ ಬಳಿ ಫುಟ್‌ಪಾತ್‌ನಲ್ಲಿ ಬಿದ್ದಿರುವ ಮರದ ರೆಂಬೆಗಳು.

ಹೀಗೆ ರಂಬೆಗಳು ರಾಶಿ ಹಿಡಿದಿರುವ ಸ್ಥಳಗಳಲ್ಲಿ ಸ್ಥಳೀಯರು ಇಂತಹ ಅವೈಜ್ಞಾನಿಕ ಕ್ರಮದ ವಿರುದ್ಧ ಹಿಡಿಶಾಪ ಹಾಕುತ್ತಿದ್ದು, ಸೆಸ್ಕ್‌ನವರು ಕಡಿದು, ಪಾಲಿಕೆಯವರು ಬಂದು ತೆರವು ಮಾಡುತ್ತಾರೆ ಎಂದು ಹೇಳಿ ಹೋದರು. ಆದರೆ ಇನ್ನು ಕ್ರಮ ವಹಿಸಿಲ್ಲ ಎಂದು ಸ್ಥಳೀಯರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಇನ್ನು ಹುಣಸೂರು ರಸ್ತೆಯ ಜಲದರ್ಶಿನಿ ಅತಿಥಿಗೃಹದ ಬಳಿ ರಾಶಿಯಾಗಿ ರಂಬೆಗಳು ಬಿದ್ದಿದ್ದು, ಅವುಗಳಲ್ಲಿ ಅನೇಕ ರಂಬೆಯ ಕಾಂಡಗಳು ರಸ್ತೆಯಲ್ಲಿಯೂ ಬಿದ್ದಿವೆ. ಇದರಿಂದ ವಾಹನ ಸವಾರರಿಗೂ ತೊಡಕು ಉಂಟಾಗಿದೆ. ಪಾದಚಾರಿಗಳಾಗಲಿ, ವಾಹನ ಸವಾರರೇ ಆಗಲಿ ಇಂತಹ ಸ್ಥಳದಲ್ಲಿ ಎಚ್ಚರದಿಂದ ಹೆಜ್ಜೆ ಇಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಪಾಲಿಕೆಯ ಆಮೆಗತಿ ಕ್ರಮ ಯಾವಾಗ ನಡೆಯುತ್ತದೋ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದು, ಇನ್ನಾದರೂ ಸೆಸ್ಕ್ ಹಾಗೂ ಪಾಲಿಕೆ ಅಧಿಕಾರಿ ವರ್ಗ ಈ ಬಗ್ಗೆ ಗಮನ ಹರಿಸಿ ಸಮನ್ವಯದೊಂದಿಗೆ ತ್ವರಿತವಾಗಿ ಕಾರ್ಯನಿರ್ವಹಿಸಬೇಕಿದೆ.



ಹುಣಸೂರು ರಸ್ತೆಯ ಫುಟ್‌ಪಾತ್‌ನಲ್ಲಿ ಬಿದ್ದಿರುವ ಮರದ ರಂಬೆಗಳು.

ದೇಶ - ವಿದೇಶ

ಜನರ ಹಸಿವು ನೀಗಿಸಲು ನೂರಾರು ಆನೆಗಳ ಹತ್ಯೆಗೆ ಜಿಂಬಾಬ್ವೆ ನಿರ್ಧಾರ!



ಜಿಂಬಾಬ್ವೆ: ಆಫ್ರಿಕಾ ಖಂಡದ ದಕ್ಷಿಣ ಭಾಗದ ದೇಶಗಳು ಕಂಡರಿಯದ ಬರಗಾಲ ಎದುರಿಸುತ್ತಿವೆ. ಜನರು ಹಸಿವಿನಿಂದ ವಿಲವಿಲ ಒದ್ದಾಡುವ ಪರಿಸ್ಥಿತಿ ತಲೆದೋರಿದೆ. ಜನರ ಹಸಿವು ನೀಗಿಸುವ ಉದ್ದೇಶದಿಂದ ಇದೀಗ ಜಿಂಬಾಬ್ವೆ ಮತ್ತು ನಮೀಬಿಯಾ ದೇಶಗಳು ನೂರಾರು ಕಾಡಾನೆಗಳು ಹಾಗೂ ಇತರೆ ಪ್ರಾಣಿಗಳ ಹತ್ಯೆಗೆ ನಿರ್ಧಾರ ಕೈಗೊಂಡಿವೆ.

ಇವುಗಳ ಮಾಂಸದಿಂದ ಜನರ ಹಸಿವು ನೀಗಿಸಲು ಮುಂದಾಗಿವೆ. ನಾವು ಸುಮಾರು 200 ಆನೆಗಳನ್ನು ಕೊಲ್ಲುತ್ತೇವೆ. ಅವುಗಳ ಮಾಂಸವನ್ನು ಅವಶ್ಯವಿರುವ ಸಮುದಾಯಗಳ ಜನರಿಗೆ ಹಂಚುತ್ತೇವೆ ಎಂದು ಜಿಂಬಾಬ್ವೆ ತಿಳಿಸಿದೆ. ಇದೇ ರೀತಿ ನಮೀಬಿಯಾ ದೇಶ ಕೂಡ ವಾರದ ಹಿಂದೆ ಇಂತಹುದ್ದೇ ಕ್ರಮಕ್ಕೆ ಮುಂದಾಗಿತ್ತು. 700ಕ್ಕೂ ಹೆಚ್ಚು ಕಾಡುಪ್ರಾಣಿಗಳನ್ನು ಕೊಲ್ಲಲು ನಿರ್ಧರಿಸಿತ್ತು. ಈ ಪೈಕಿ 83 ಆನೆಗಳನ್ನು ಕೊಲ್ಲುವ ಕಾರ್ಯ ಅಲ್ಲಿ ನಡೆಯುತ್ತಿದೆ. ಆನೆಗಳನ್ನು ಕೊಂದು ಅವುಗಳ ಮಾಂಸವನ್ನು ಒಣಗಿಸಿ ಪ್ರೋಟೀನ್ ಅವಶ್ಯಕತೆ ಇರುವವರಿಗೆ ಕೊಡುವ ಬಗ್ಗೆ ಚರ್ಚಿಸಲಾಗುತ್ತಿದೆ ಎಂದು ಜಿಂಬಾಬ್ವೆ ಪರಿಸರ ಸಚಿವ ಸಿತೆಂಬಿಸೋ ನಿಯೋನಿ ಹೇಳಿದ್ದಾರೆ.

ಬಿಹಾರದ ಸರ್ಕಾರಿ ಕಚೇರಿಯಲ್ಲಿ 135 ಕಾರ್ಟನ್ ಮದ್ಯದ ಬಾಟಲಿಗಳು ವಶಕ್ಕೆ



ಪಾಟ್ನಾ: ಬಿಹಾರದ ಮುಜಾಫರ್‌ಪುರ ಜಿಲ್ಲೆಯ ಪಾರು ಪ್ರದೇಶದ ಸರ್ಕಾರಿ ಕಚೇರಿಯ ಆವರಣದಲ್ಲಿ 130ಕ್ಕೂ ಹೆಚ್ಚು ಕಾರ್ಟನ್‌ಗಳ ಮದ್ಯದ ಬಾಟಲಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಘಟನೆಗೆ ಸಂಬಂಧಿಸಿದಂತೆ ಚಿಂತಮನ್‌ಪುರ ಪಂಚಾಯತ್‌ನ 'ಮುಖಿಯ' (ಗ್ರಾಮದ ಮುಖ್ಯಸ್ಥ) ಪತಿ ಸೇರಿದಂತೆ ಏಳು ಜನರನ್ನು ಬಂಧಿಸಲಾಗಿದೆ.

ಸುಳಿವಿನ ಮೇರೆಗೆ ಅಧಿಕಾರಿಗಳು ಪರು ಪ್ರದೇಶದ ಫಂಡಾ ಗ್ರಾಮದ ಸರ್ಕಾರಿ ಕಟ್ಟಡದ ಆವರಣದ ಮೇಲೆ ದಾಳಿ ನಡೆಸಿದರು. 135 ಕಾರ್ಟನ್‌ಗಳ ವಿದೇಶಿ ನಿರ್ಮಿತ ಮದ್ಯದ ಬಾಟಲಿಗಳನ್ನು ವಶಪಡಿಸಿಕೊಂಡಿದ್ದಾರೆ. ರಟ್ಟಿನ ಪೆಟ್ಟಿಗೆಗಳನ್ನು ಗೋಣಿ ಚೀಲಗಳಿಂದ ಮುಚ್ಚಲಾಗಿದೆ ಎಂದು ನಿಷೇಧ ಮತ್ತು ಅಬಕಾರಿ ಇಲಾಖೆಯ ನಿರೀಕ್ಷಕ ಶಿವೇಂದ್ರ ಕುಮಾರ್ ಹೇಳಿದ್ದಾರೆ. ಪಂಚಾಯತ್ ಇಲಾಖೆಗೆ ಸಂಬಂಧಿಸಿದ ಚಟುವಟಿಕೆಗಳಿಗೆ ಆವರಣದ ಬಳಕೆಯನ್ನು ಉದ್ದೇಶಿಸಲಾಗಿತ್ತು ಮತ್ತು ಕಟ್ಟಡದ ಉಸ್ತುವಾರಿಯನ್ನು 'ಮುಖಿ' ಹೊಂದಿದ್ದರು ಎಂದು ಕುಮಾರ್ ಹೇಳಿದ್ದಾರೆ.

ಡ್ರೋನ್ ದಾಳಿ: ರಷ್ಯಾದ ಉಗ್ರಾಣದಲ್ಲಿದ್ದ ಸಾವಿರಾರು ಕ್ಷಿಪಣಿ, ಬಾಂಬ್‌ಗಳ ನಾಶ



ಕೀವ್: ರಷ್ಯಾ ನೆಲದಲ್ಲಿ ಕಾರ್ಯಾಚರಣೆ ನಡೆಸಿರುವ ಉಕ್ರೇನ್ ಸೇನೆಯ ಡ್ರೋನ್‌ಗಳು, ಭಾರಿ ದೊಡ್ಡ ಸ್ಫೋಟಕ್ಕೆ ಕಾರಣವಾಗಿವೆ. ರಷ್ಯಾದ ಟ್ವೆರ್ ಪ್ರಾಂತ್ಯದ ಟೊರೊಪೆಟ್ಸ್ ನಗರದಲ್ಲಿ ಈ ಸ್ಫೋಟ ನಡೆದಿದ್ದು, ಸ್ಫೋಟದ ತೀವ್ರತೆಗೆ ಈ ಭಾಗದ ನಿವಾಸಿಗಳನ್ನು ಸೇನೆ ತ್ವರಿತವಾಗಿ ತೆರವು ಮಾಡಿದೆ. ರಷ್ಯಾ ರಾಜಧಾನಿ ಮಾಸ್ಕೋ ನಗರದಿಂದ 250 ಮೈಲು (400 ಕಿ.ಮೀ.) ದೂರದಲ್ಲಿ ಈ ಸ್ಫೋಟ ಸಂಭವಿಸಿದೆ.

ಈ ವೇಳೆ ರಷ್ಯಾ ಸೇನೆಯ ಉಗ್ರಾಣದಲ್ಲಿದ್ದ ಕ್ಷಿಪಣಿಗಳು ಹಾಗೂ ಫಿರಂಗಿಗಳು ನಾಶವಾಗಿವೆ. ಈ ಉಗ್ರಾಣದಲ್ಲಿ ಅಪಾರ ಪ್ರಮಾಣದಲ್ಲಿ ಸ್ಫೋಟಕಗಳನ್ನು ಸಂಗ್ರಹಿಸಿಟ್ಟಿದ್ದ ಕಾರಣ ದೊಡ್ಡ ಸ್ಫೋಟ ಸಂಭವಿಸಿ ಆಸುಪಾಸಿನ ಪ್ರದೇಶಗಳಲ್ಲಿ ಬೆಂಕಿ ಹೊತ್ತಿಕೊಂಡಿತ್ತು. ಉಗ್ರಾಣದಲ್ಲಿ ಅತ್ಯಾಧುನಿಕ 'ಇಸ್ಕಾಂಡರ್ ಟ್ಯಾಕ್ಟಿಕಲ್' ಕ್ಷಿಪಣಿ ವ್ಯವಸ್ಥೆಯನ್ನು ಸಂಗ್ರಹ ಮಾಡಲಾಗಿತ್ತು. ಅಷ್ಟೇ ಅಲ್ಲ, ಟೋಚ್ಕಾ–ಯು ಟ್ಯಾಕ್ಟಿಕಲ್ ಕ್ಷಿಪಣಿಗಳೂ ಅಲ್ಲಿದ್ದವು. ವಾಯು ಮಾರ್ಗದಲ್ಲಿ ದಾಳಿ ನಡೆಸಲು ಬಳಕೆಯಾಗುವ ಬಾಂಬ್‌ಗಳು ಹಾಗೂ ಫಿರಂಗಿಗಳ ಮದ್ದು ಗುಂಡುಗಳೂ ಇಲ್ಲಿದ್ದವು. ಉಕ್ರೇನ್ ಸೇನೆಯ ಡ್ರೋನ್‌ಗಳು ಈ ಗೋದಾಮಿನ ಮೇಲೆ ದಾಳಿ ನಡೆಸಿದ ಕೂಡಲೇ ಅಲ್ಲಿದ್ದ ಸ್ಫೋಟಕಗಳು ಸಿಡಿದವು.

ಸಿಎಎಫ್ ಯೋಧನಿಂದ ಗುಂಡಿನ ದಾಳಿ; ಇಬ್ಬರು ಸಹೋದ್ಯೋಗಿಗಳ ಸಾವು



ಬಲರಾಮ್‌ಪುರ: ಛತ್ತೀಸ್‌ಗಢದ ಬಲರಾಮ್‌ಪುರ ಜಿಲ್ಲೆಯ ಛತ್ತೀಸ್‌ಗಢ ಸಶಸ್ತ್ರ ಪಡೆ (ಸಿಎಎಫ್)ಯ ಶಿಬಿರದಲ್ಲಿ ಬುಧವಾರ ಯೋಧನೊಬ್ಬ ಸಹೋದ್ಯೋಗಿಗಳ ಮೇಲೆ ಗುಂಡಿನ ದಾಳಿ ನಡೆಸಿದ್ದು, ಇಬ್ಬರು ಯೋಧರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ರಾಯ್‌ಪುರದಿಂದ ಸುಮಾರು 400 ಕಿಮೀ ದೂರದಲ್ಲಿರುವ ಸಮ್ರಿ ಪಥ್ ಪೊಲೀಸ್ ಠಾಣಾ ವ್ಯಾಪ್ತಿಯ ಭೂತಾಹಿ ಮೋಡ್ ಪ್ರದೇಶದಲ್ಲಿ ಸಿಎಎಫ್‌ನ 11ನೇ ಬೆಟಾಲಿಯನ್‌ನ 'ಬಿ' ಕಂಪನಿಯ ಶಿಬಿರದಲ್ಲಿ ಬೆಳಗ್ಗೆ 11 ಗಂಟೆ ಸುಮಾರಿಗೆ ಈ ಘಟನೆ ನಡೆದಿದೆ ಎಂದು ಪೊಲೀಸ್ ಮಹಾ ನಿರೀಕ್ಷಕ(ಸುರ್ಗುಜಾ ಶ್ರೇಣಿ) ಅಂಕಿತ್ ಗಾರ್ಗ್ ಹೇಳಿದ್ದಾರೆ. ಪ್ರಾಥಮಿಕ ಮಾಹಿತಿ ಪ್ರಕಾರ, ಕಾನ್‌ಸ್ಟೆಬಲ್ ಅಜಯ್ ಸಿದರ್ ತನ್ನ ಸರ್ವಿಸ್ ರಿವಾಲ್ವರ್‌ನಿಂದ ಸಹೋದ್ಯೋಗಿಗಳ ಮೇಲೆ ಗುಂಡು ಹಾರಿಸಿದ್ದಾನೆ ಎಂದು ಅಧಿಕಾರಿ ತಿಳಿಸಿದ್ದಾರೆ. ಘಟನೆಯಲ್ಲಿ ಕಾನ್‌ಸ್ಟೆಬಲ್ ರೂಪೇಶ್ ಪಟೇಲ್ ಸ್ಥಳದಲ್ಲೇ ಮೃತಪಟ್ಟರೆ, ಇನ್ನೋರ್ವ ಕಾನ್‌ಸ್ಟೆಬಲ್ ಸಂದೀಪ್ ಪಾಂಡೆ ಗಾಯಗೊಂಡು ಆಸ್ಪತ್ರೆಗೆ ಸಾಗಿಸುವ ವೇಳೆ ಸಾವನ್ನಪ್ಪಿದ್ದಾರೆ ಎಂದು ಹೇಳಿದ್ದಾರೆ.

ಮುಂಬೈನಲ್ಲಿ 37,000ಕ್ಕೂ ಹೆಚ್ಚು ಗಣೇಶ ಮೂರ್ತಿಗಳ ವಿಸರ್ಜನೆ



ಮುಂಬೈ: ವಾಣಿಜ್ಯ ನಗರಿ ಮುಂಬೈ ಜನತೆ ಈ ಬಾರಿ ತಮ್ಮ ನೆಚ್ಚಿನ ಗಣೇಶನಿಗೆ ಅದ್ಧೂರಿ ವಿದಾಯ ಹೇಳಿದ್ದು, ಬುಧವಾರ ಬೆಳಿಗ್ಗೆ ನಗರಾದ್ಯಂತ 37,000ಕ್ಕೂ ಹೆಚ್ಚು ಗಣೇಶ ಮತ್ತು ಗೌರಿ ಮೂರ್ತಿಗಳನ್ನು ವಿಸರ್ಜನೆ ಮಾಡಲಾಯಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಗಣೇಶ ಹಬ್ಬದ ಕೊನೆಯ ದಿನವಾದ ಮಂಗಳವಾರ ಬೆಳಗ್ಗೆ ಆರಂಭವಾದ ವಿಸರ್ಜನೆ ಮೆರವಣಿಗೆಗಳು ರಾತ್ರಿಯಿಡೀ ಸುಗಮವಾಗಿ ನಡೆದಿದ್ದು, ನಗರದ ಕಡಲತೀರಗಳು, ಕೆರೆಗಳು ಮತ್ತು ಕೃತಕ ಕೊಳಗಳಲ್ಲಿ ಗಣೇಶ ಮೂರ್ತಿಗಳ ವಿಸರ್ಜನೆ ನಡೆಯಿತು.

ಪ್ರತಿ ವರ್ಷದಂತೆ ಲಕ್ಷಾಂತರ ಭಕ್ತರನ್ನು ಸೆಳೆಯುತ್ತಿದ್ದ ಲಾಲ್‌ಬಾಗ್ ಚಾ ರಾಜ ಗಣೇಶನ ಮೂರ್ತಿಯನ್ನು ದಕ್ಷಿಣ ಮುಂಬೈನ ಗಿರ್‌ಗಾಂವ್ ಬೀಚ್‌ನಲ್ಲಿ ಬೆಳಗ್ಗೆ 10.30ರ ಸುಮಾರಿಗೆ ಅರಬ್ಬಿ ಸಮುದ್ರದಲ್ಲಿ ಮುಳುಗಿಸಲಾಯಿತು. ದೇವರ ದರ್ಶನಕ್ಕಾಗಿ ಸಾವಿರಾರು ಜನರು ಹರಸಾಹಸಪಟ್ಟರು. ಬುಧವಾರ ಬೆಳಗ್ಗೆ 6 ಗಂಟೆ ವೇಳೆಗೆ ಮುಂಬೈನ ವಿವಿಧ ಕಡೆಗಳಲ್ಲಿ ಒಟ್ಟು 37,064 ಗಣೇಶ ಮತ್ತು ಗೌರಿಯ ಮೂರ್ತಿಗಳನ್ನು ವಿಸರ್ಜನೆ ಮಾಡಲಾಯಿತು. ಇವುಗಳಲ್ಲಿ 5,762 'ಸಾರ್ವಜನಿಕ' ಮೂರ್ತಿಗಳು ಸೇರಿವೆ.

ಪೊನ್ನಂಪೇಟೆ ಕ್ರೀಡಾ ವಸತಿ ನಿಲಯ ನಿರ್ಮಾಣಕ್ಕೆ

ಸರ್ಕಾರದಿಂದ 5 ಕೋಟಿ ರೂ.ಬಿಡುಗಡೆ

• ಕಾಮಗಾರಿಗೆ ಶೀಘ್ರ ಚಾಲನೆ • ಶಾಸಕ ಎ.ಎಸ್.ಪೊನ್ನಣ್ಣ ಮಾಹಿತಿ

ಮಡಿಕೇರಿ, ಸೆ.18–ಪೊನ್ನಂಪೇಟೆ ಕ್ರೀಡಾ ವಸತಿ ನಿಲಯ ನಿರ್ಮಾಣಕ್ಕೆ ಸರ್ಕಾರದಿಂದ 5 ಕೋಟಿ ರೂ. ಬಿಡುಗಡೆಯಾಗಿದ್ದು, ಪ್ರಸಕ್ತ ವರ್ಷದಲ್ಲಿ ಕ್ರೀಡಾ ವಸತಿ ನಿಲಯ ನಿರ್ಮಾಣ ಸಂಬಂಧ ಶಾಸಕ ಎ.ಎಸ್.ಪೊನ್ನಣ್ಣ ಬುಧವಾರ ಅಧಿಕಾರಿಗಳ ಸಭೆ ನಡೆಸಿದರು.

ಪೊನ್ನಂಪೇಟೆ ತಹಸೀಲ್ದಾರ್ ಕಚೇರಿ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಮೂಕಳೇರ ಕುಶಾಲಪ್ಪ ಮಾತನಾಡಿ, ಸ್ವಾತಂತ್ರ್ಯ ಪೂರ್ವದಿಂದಲೂ ಪೊನ್ನಂಪೇಟೆಯಲ್ಲಿ ಪ್ರೌಢಶಾಲೆ ಇತ್ತು. ಪ್ರೌಢಶಾಲೆಗೆ ಒಂದು ಇತಿಹಾಸವಿದ್ದು, ಇದರ ಅಸ್ತಿತ್ವವನ್ನು ಉಳಿಸಿಕೊಳ್ಳುವಂತಾಗಬೇಕು. ಜೊತೆಗೆ ಇಲ್ಲಿನ ವಿದ್ಯಾರ್ಥಿಗಳಿಗೂ ಅನುಕೂಲವಾಗಬೇಕು ಎಂದು ಮನವಿ ಮಾಡಿದರು.

ನಂತರ ಶಾಸಕ ಎ.ಎಸ್.ಪೊನ್ನಣ್ಣ ಮಾತನಾಡಿ, ಸರ್ಕಾರದಿಂದ ಪೊನ್ನಂಪೇಟೆ ಕ್ರೀಡಾ ವಸತಿ ನಿಲಯ ನಿರ್ಮಾಣಕ್ಕೆ ಬಜೆಟ್‌ನಲ್ಲಿ 5 ಕೋಟಿ ರೂ. ಪ್ರಕಟಿಸಲಾಗಿತ್ತು. ಅದರಂತೆ ಸರ್ಕಾರ ಅನುದಾನ ಬಿಡುಗಡೆ ಮಾಡಿದ್ದು, ಪ್ರಸಕ್ತ ವರ್ಷದಲ್ಲಿ ಕ್ರೀಡಾ ವಸತಿ ನಿಲಯ ಆರಂಭಕ್ಕೆ ಚಾಲನೆ ನೀಡಬೇಕಿದೆ. ಆ ನಿಟ್ಟಿನಲ್ಲಿ ಅಗತ್ಯ ಭೂಮಿಯನ್ನು ಕ್ರೀಡಾ ಇಲಾಖೆಗೆ ಒದಗಿಸಬೇಕಿದೆ ಎಂದು ತಿಳಿಸಿದರು.

ಬಳಿಕ ಪೊನ್ನಂಪೇಟೆ ಕ್ರೀಡಾ ವಸತಿ ನಿಲಯ ಆವರಣದ ಜಾಗ ವೀಕ್ಷಿಸಿದ ಶಾಸಕ ಪೊನ್ನಣ್ಣ, ಅಗತ್ಯ ಭೂಮಿ ಸರ್ವೆ ಮಾಡಿ ನೀಲನಕ್ಷೆ ತಯಾರಿಸುವಂತೆ ಸಂಬಂಧಪಟ್ಟ ಇಂಜಿನಿಯರ್‌ಗಳಿಗೆ ಸೂಚಿಸಿದರು. ಪೊನ್ನಂಪೇಟೆಯ ಕ್ರೀಡಾ ವಸತಿ ನಿಲಯ ನಿರ್ಮಾಣಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ವಿಶೇಷವಾಗಿ 5 ಕೋಟಿ ರೂ. ಬಿಡುಗಡೆ ಮಾಡಿದ್ದು, ಅದನ್ನು ಸದ್ಬಳಕೆ ಮಾಡಬೇಕು. ಶೀಘ್ರ ಕ್ರೀಡಾ ವಸತಿ ನಿಲಯ ನಿರ್ಮಾಣಕ್ಕೆ ಚಾಲನೆ ನೀಡಲಾಗುವುದು ಎಂದರು.

ಸಭೆಯಲ್ಲಿ ತಹಸೀಲ್ದಾರ್ ಮೋಹನ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕಿ ವಿ.ಟಿ.ವಿಸ್ಮಯಿ, ಪೊನ್ನಂಪೇಟೆ ಪಟ್ಟಣ ಪಂಚಾಯಿತಿ ಅಧ್ಯಕ್ಷ ಹರೀಶ್, ಪ್ರಮುಖರಾದ ಪಿ.ಕೆ.ಪೊನ್ನಪ್ಪ, ಪ್ರಮೋದ್ ಗಣಪತಿ, ಸಾಜಿ ಅಚ್ಚುತ್ತನ್, ಭೂ ದಾಖಲೆಗಳ ಸಹಾಯಕ ನಿರ್ದೇಶಕರು ಇತರರು ಇದ್ದರು.


ಪೊನ್ನಂಪೇಟೆ ಕ್ರೀಡಾ ವಸತಿ ನಿಲಯ ಆವರಣದ ಜಾಗವನ್ನು ಶಾಸಕ ಪೊನ್ನಣ್ಣ ವೀಕ್ಷಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದರು.

ಕಾಫಿ ಬೆಳೆಗಾರರ ಸಂಘಕ್ಕೆ 28.90 ಲಕ್ಷ ನಿವ್ವಳ ಲಾಭ


ಸುದ್ದಿಗೋಷ್ಠಿಯಲ್ಲಿ ಕೊಡಗು ಕಾಫಿ ಬೆಳೆಗಾರರ ಸಹಕಾರ ಸಂಘದ ಅಧ್ಯಕ್ಷ ಎಂ.ಬಿ.ದೇವಯ್ಯ ಮಾತನಾಡಿದರು.

ಮಡಿಕೇರಿ, ಸೆ.18–ಕೊಡಗು ಕಾಫಿ ಬೆಳೆಗಾರರ ಸಹಕಾರ ಸಂಘ 2023–24ನೇ ಸಾಲಿನಲ್ಲಿ ದಶಕಗಳ ಬಾಕಿ ಸಾಲಗಳನ್ನು ಹೊರತುಪಡಿಸಿದಂತೆ 28.90 ಲಕ್ಷ ರೂ. ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಎಂ.ಬಿ.ದೇವಯ್ಯ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲಾ ಕೇಂದ್ರ ಸಹಕಾರ ಸಂಘಕ್ಕೆ 114.47 ಲಕ್ಷ ರೂ. ಸಾಲ ಮರುಪಾವತಿ ಬಾಕಿ ಇದೆ. ಸರ್ಕಾರದ ಸಾಲ 203.94 ಲಕ್ಷ ರೂ.ಗಳಿದೆ. ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗೆ ಪ್ರತಿತಿಂಗಳು 3.11 ಲಕ್ಷ ರೂ. ಮರುಪಾವತಿಯಾಗಬೇಕಾಗಿದೆ. ಈ ನಿಟ್ಟಿನಲ್ಲಿ ಸಂಘಕ್ಕೆ ಸರ್ಕಾರ ಅಗತ್ಯ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

ಸಂಘ ಪೆಟ್ರೋಲ್ ಬಂಕ್ ವ್ಯವಹಾರ ನಡೆಸುತ್ತಿದ್ದು, ಹುಣಸೂರು ಬಂಕ್‌ನಿಂದ 42.54 ಲಕ್ಷ ರೂ. ಮತ್ತು ಹೆಬ್ಬಾಲೆ ಬಂಕ್‌ನಿಂದ 14.12 ಲಕ್ಷ ರೂ. ಆದಾಯ ಬಂದಿದೆ. ಕಾಫಿ ಪುಡಿ ಮಾರಾಟದಲ್ಲಿ ಒಟ್ಟು 7486 ಕೆಜಿ ಕಾಫಿ ಪುಡಿ ಮಾರಾಟ ಮಾಡಿ 1.58 ಲಕ್ಷ ರೂ. ಲಾಭ ಗಳಿಸಲಾಗಿದೆ. ಕಾಫಿ ಸಂಸ್ಕರಣಾ ವ್ಯವಹಾರದಿಂದ 3.68 ಲಕ್ಷ ರೂ. ಲಾಭ, ಜೇನು ಮಾರಾಟದಿಂದ 49 ಸಾವಿರ ರೂ. ಆದಾಯ ಹಾಗೂ ಸಂಘದ ಬಾಡಿಗೆ ಕಟ್ಟಡಗಳಿಂದ 103 ಲಕ್ಷ ರೂ. ಆದಾಯ ಗಳಿಸಿರುವುದಾಗಿ ಮಾಹಿತಿ ನೀಡಿದರು.

ಸಂಸದರಿಗೆ ಮನವಿ: ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಸಕ್ತ ಸಾಲಿನ ಮುಂಗಾರಿನ ಭಾರಿ ಮಳೆಯಿಂದ ಕಾಫಿ, ಕರಿಮೆಣಸು, ಏಲಕ್ಕಿ ಕೃಷಿಗೆ ಅಪಾರ ಹಾನಿಯಾಗಿದೆ. ಈ ಸಂದರ್ಭ ಅಗತ್ಯ ಸೂಕ್ತ ಸರ್ವೇ ಕಾರ್ಯ ನಡೆಸಿ, ಪರಿಹಾರ ಒದಗಿಸುವಂತೆ ಸಂಸದ ಯದುವೀರ್ ಅವರಿಗೆ ಮನವಿ ಸಲ್ಲಿಸಿರುವುದಾಗಿ ತಿಳಿಸಿದರು.

ಮಹಾಸಭೆ: ಕೊಡಗು ಕಾಫಿ ಬೆಳೆಗಾರರರ ಸಹಕಾರ ಸಂಘದ ವಾರ್ಷಿಕ ಮಹಾಸಭೆ ಸೆ.20 ರಂದು ಬೆಳಗ್ಗೆ 11 ಗಂಟೆಗೆ ನಗರದ ಕೊಡವ ಸಮಾಜದಲ್ಲಿ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ನಿರ್ದೇಶಕರಾದ ನಾಪಂಡ ರವಿ ಕಾಳಪ್ಪ, ಚೆಟ್ರಂಡ ಲೀಲಾ ಮೇದಪ್ಪ, ಎಂ.ಎಂ.ಧರ್ಮಾವತಿ, ನಾಯಕಂಡ ಅಯ್ಯಣ್ಣ, ವ್ಯವಸ್ಥಾಪಕ ನಾಣಯ್ಯ ಉಪಸ್ಥಿತರಿದ್ದರು.

ಸಿದ್ದಾಪುರದಲ್ಲಿ ಗೌರಿ–ಗಣೇಶ ವಿಸರ್ಜನೋತ್ಸವ

ಸಿದ್ದಾಪುರ, ಸೆ.18–ಶ್ರೀರಾಮ ಮಂದಿರದಲ್ಲಿ ಪ್ರತಿಷ್ಠಾಪಿಸಿದ್ದ ಶ್ರೀ ಗೌರಿ–ಗಣೇಶ ವಿಸರ್ಜನೋತ್ಸವ ಅದ್ದೂರಿಯಾಗಿ ಸಿದ್ದಾಪುರದಲ್ಲಿ ನಡೆಯಿತು.

85ನೇ ವರ್ಷದ ಗೌರಿ–ಗಣೇಶ ವಿಸರ್ಜನೋತ್ಸವ ಅಂಗವಾಗಿ ಅಲಂಕೃತ ರಥದಲ್ಲಿ ಶ್ರದ್ಧಾ ಭಕ್ತಿಯಿಂದ ಗೌರಿ–ಗಣೇಶ ಮೂರ್ತಿಗಳನ್ನು ಕುಳ್ಳಿರಿಸಿ, ದಕ್ಷಿಣಕನ್ನಡ ಜಿಲ್ಲೆಯ ಗೊಂಬೆ ಕುಣಿತ, ಕೀಲುಕುದುರೆ ಸೇರಿದಂತೆ ಮೈಸೂರಿನ ವಾದ್ಯಮೇಳಗಳೊಂದಿಗೆ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಲಾಯಿತು. ಬಳಿಕ ಕಾವೇರಿ ಹೊಳೆಯಲ್ಲಿ ವಿಸರ್ಜಿಸಲಾಯಿತು. ಮೆರವಣಿಗೆ ಉದ್ದಕ್ಕೂ ಭಕ್ತರು ಕುಣಿದು ಸಂಭ್ರಮಿಸಿದರು.


ಸಿದ್ದಾಪುರದಲ್ಲಿ ಗೌರಿ–ಗಣೇಶ ಮೂರ್ತಿಗಳನ್ನು ಕಲಾ ತಂಡಗಳೊಂದಿಗೆ ಮೆರವಣಿಗೆ ನಡೆಸಲಾಯಿತು.

ಮಡಿಕೇರಿ ದಸರಾ ಸಿದ್ಧತೆ ಪರಿಶೀಲನೆ


ಮಡಿಕೇರಿ ಪಂಪಿನ ಕೆರೆಗೆ ಶಾಸಕ ಡಾ.ಮಂತರ್ ಗೌಡ, ಜಿಲ್ಲಾಧಿಕಾರಿ ವೆಂಕಟ್‌ರಾಜಾ ಭೇಟಿ ನೀಡಿ, ದಸರಾ ಸಿದ್ಧತೆ ಪರಿಶೀಲಿಸಿದರು.

ಮಡಿಕೇರಿ, ಸೆ.18–ಐತಿಹಾಸಿಕ ಮಡಿಕೇರಿ ದಸರಾ ಆಚರಣೆ ಹಿನ್ನೆಲೆಯಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳುವ ನಿಟ್ಟಿನಲ್ಲಿ ಶಾಸಕ ಡಾ.ಮಂತರ್ ಗೌಡ, ದಸರಾ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿ ವೆಂಕಟ್‌ರಾಜಾ ಅವರು ದಸರಾ ದಶಮಂಟಪ, ವಿವಿಧ ಉಪಸಮಿತಿಗಳ ಪದಾಧಿಕಾರಿಗಳೊಂದಿಗೆ ಬುಧವಾರ ನಗರದ ಪಂಪಿನ ಕೆರೆಗೆ ಭೇಟಿ ನೀಡಿ, ಪರಿಶೀಲಿಸಿದರು.

ಇದೇ ವೇಳೆ ದಶಮಂಟಪಗಳು ಹೊರಡುವ ದೇವಾಲಯಗಳು ಹಾಗೂ ಕರಗ ಮಹೋತ್ಸವ ಆರಂಭಗೊಳ್ಳುವ, ರಸ್ತೆಗಳ ನಿರ್ವಹಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ದಸರಾ ಸಮಿತಿಯ ಪ್ರಮುಖರು ಶಾಸಕರ ಗಮನ ಸೆಳೆದರು.

ನಗರದ ಪಂಪಿನ ಕೆರೆಯಲ್ಲಿ ಆರಂಭಗೊಳ್ಳುವ ದಸರಾ ಕರಗೋತ್ಸವ ವೀಕ್ಷಿಸಲು ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಅಗತ್ಯ ಕಾಮಗಾರಿ ಕೈಗೊಳ್ಳುವಂತೆ ಶಾಸಕರು ಸಂಬಂಧಿಸಿದವರಿಗೆ ಸೂಚನೆ ನೀಡಿದರು.

ನಗರದ ರಸ್ತೆ ಗುಂಡಿಗಳನ್ನು ಮುಚ್ಚುವ ಕಾರ್ಯ ಮಳೆ ವಾತಾವರಣದಿಂದ ತಡೆ ಉಂಟಾಗಿದ್ದು, ಮಳೆ ಬಿಡುವು ನೀಡಿದ ತಕ್ಷಣ ಗುಂಡಿ ಮುಚ್ಚುವ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕರು ತಿಳಿಸಿದರು.

ವಿಶ್ವದ ಅತ್ಯುನ್ನತ ವಿಜ್ಞಾನಿಗಳ ಪಟ್ಟಿಯಲ್ಲಿ

ಡಾ.ಜೆ.ಜಿ.ಮಂಜುನಾಥಗೆ ಸ್ಥಾನ


ಡಾ.ಮಂಜುನಾಥ


ಮಡಿಕೇರಿ, ಸೆ.18–ಯುಎಸ್‌ಎಯ ಸ್ಟ್ಯಾನ್‌ಫೋರ್ಡ್ ವಿವಿ ಮತ್ತು ಎಲ್ಸ್‌ವಿಯರ್ ಸಂಸ್ಥೆ ಸಹಯೋಗದೊಂದಿಗೆ ಪ್ರಕಟಿಸಿರುವ ವಿಶ್ವದ ಅತ್ಯುನ್ನತ ವಿಜ್ಞಾನಿಗಳ ಪಟ್ಟಿಯಲ್ಲಿ ಡಾ.ಜೆ.ಜಿ. ಮಂಜುನಾಥ ಸತತ 5ನೇ ಬಾರಿ ಸ್ಥಾನ ಪಡೆದಿದ್ದಾರೆ.

ಮಡಿಕೇರಿ ಫೀಲ್ಡ್ ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜ್‌ನ ರಸಾಯನ ಶಾಸ್ತ್ರ ವಿಭಾಗದ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಡಾ.ಜೆ.ಜಿ. ಮಂಜುನಾಥ, 'ಅನಾಲಿಟಿಕಲ್ ಕೆಮಿಸ್ಟ್ರಿ ಆ್ಯಂಡ್ ಎನರ್ಜಿ' ವಿಷಯಗಳಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಪ್ರಕಟಿಸಿರುವ ಸಂಶೋಧನಾ ಲೇಖನಗಳ ಆಧಾರದ ಮೇಲೆ ಇವರು 2024ರ ಸಾಲಿನ ಅತ್ಯುನ್ನತ ವಿಜ್ಞಾನಿಗಳ ಪಟ್ಟಿಯಲ್ಲಿ 8257ನೇ ಸ್ಥಾನ ಮತ್ತು ವಿಶ್ವದ ವೃತ್ತಿ ಜೀವಮಾನ ಸಾಧಕರ ಪಟ್ಟಿಯಲ್ಲಿ 65,119ನೇ ಸ್ಥಾನ ಪಡೆದಿದ್ದಾರೆ.

ಇವರು 194 ಅಂತಾರಾಷ್ಟ್ರೀಯ ಲೇಖನಗಳನ್ನು ಅತ್ಯಂತ ಪ್ರತಿಷ್ಠಿತ ಜರ್ನಲ್‌ಗಳಲ್ಲಿ ಪ್ರಕಟಿಸಿದ್ದು, 25 ಪುಸ್ತಕಗಳನ್ನು ಹೊರ ತಂದಿದ್ದಾರೆ. 27 ಜರ್ನಲ್‌ಗಳಲ್ಲಿ ಎಡಿಟೋರಿಯಲ್ ಬೋರ್ಡ್‌ಮೆಂಬರ್ ಹಾಗೂ ಸಂಪಾದಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇವರ ಈ ಸಾಧನೆ ಫೀಲ್ಡ್‌ಮಾರ್ಷಲ್ ಕೆ.ಎಂ.ಕಾರ್ಯಪ್ಪ ಕಾಲೇಜ್‌ಗೆ ಹೆಮ್ಮೆ ತಂದಿದೆ ಎಂದು ಮಂಗಳೂರು ಮತ್ತು ಕೊಡಗು ವಿಶ್ವವಿದ್ಯಾಲಯ ಕುಲಪತಿ, ಕುಲಸಚಿವರು, ಪ್ರಾಂಶುಪಾಲರು, ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

ಎಥಿಕ್ಸ್ ಸಮಿತಿ ಅಧ್ಯಕ್ಷರಾಗಿ ಡಾ.ಗಣಪತಿ ನೇಮಕ


ಡಾ.ಎ.ಸಿ.ಗಣಪತಿ

ಸಿದ್ದಾಪುರ, ಸೆ.18–ಕೊಡಗು ವೈದ್ಯಕೀಯ ಮಹಾವಿದ್ಯಾಲಯದ ಎಥಿಕ್ಸ್ ಸಮಿತಿ ಅಧ್ಯಕ್ಷರಾಗಿ ಪಾಲಿಬೆಟ್ಟದ ಡಾ.ಎ.ಸಿ.ಗಣಪತಿ ಅವರನ್ನು ನೇಮಕ ಮಾಡಲಾಗಿದೆ.

ಕಾವೇರಿ ವಿದ್ಯಾಸಂಸ್ಥೆಯ ಮಾಜಿ ಅಧ್ಯಕ್ಷ ಹಾಗೂ ಸಮಾಜ ಸೇವಕರಾದ ಡಾ.ಎ.ಸಿ.ಗಣಪತಿ ಅವರನ್ನು ಮಹಾವಿದ್ಯಾಲಯ ನಿರ್ದೇಶಕ ಹಾಗೂ ಡೀನ್ ಡಾ.ವಿಶಾಲ್ ಕುಮಾರ್ ನೇಮಕಗೊಳಿಸಿದ್ದಾರೆ. ಮಹಾವಿದ್ಯಾಲಯದ ಎಲ್ಲಾ ಸಂಶೋಧನೆ, ಅಧ್ಯಯನಗಳ ನಿಯಂತ್ರಣ ಮತ್ತು ಮೇಲ್ವಿಚಾರಣೆ ನಿರ್ವಹಿಸುವ ಸಲುವಾಗಿ 13 ಸದಸ್ಯರ ತಂಡ ರಚಿಸಲಾಗಿದ್ದು, ಸದಸ್ಯ ಕಾರ್ಯದರ್ಶಿಯಾಗಿ ಔಷಧ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಈಶ, ವಕೀಲ ಕೆ.ಪಿ.ಬಾಲ ಸುಬ್ರಹ್ಮಣ್ಯ, ಸಾಮಾಜಿಕ ಕಾರ್ಯಕರ್ತೆ ಎ.ಎಸ್.ಹೇಮಲತಾ, ವಿನಯಕುಮಾರ್, ರೆವ್ ಫಾದರ್ ನವೀನ್ ಕುಮಾರ್, ಚಿಕಿತ್ಸಾ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಎ.ಜಿ.ಲೋಕೇಶ್, ಸಮುದಾಯ ವೈದ್ಯಕೀಯ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ರಾಮಚಂದ್ರ ಕಾಮತ್, ಜೀವಪ್ರಕ್ರಿಯೆ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ನರಸಿಂಹ, ಪೆಥಾಲಜಿ ವಿಭಾಗದ ಮುಖ್ಯಸ್ಥೆ ಡಾ.ಗಾಯತ್ರಿ, ಮಕ್ಕಳ ತಜ್ಞ ಡಾ.ಪುರುಷೋತ್ತಮ್, ಶಸ್ತ್ರಚಿಕಿತ್ಸೆ ವಿಭಾಗದ ಮುಖ್ಯಸ್ಥ ಡಾ.ಪ್ರವೀಣ್ ಕುಮಾರ್, ಮನೋರೋಗ ತಜ್ಞ ವಿಭಾಗದ ಮುಖ್ಯಸ್ಥ ಡಾ.ರೂಪೇಶ್ ಗೋಪಾಲ್ ಅವರನ್ನು ನಾಮನಿರ್ದೇಶನ ಮಾಡಲಾಗಿದೆ.

ಬೋಳ್ತಜಿರ ಮಾದಪ್ಪ ಬಾಬು ನಿಧನ



ನಾಪೋಕ್ಲು, ಸೆ.18– ಮೂರ್ನಾಡು ಕಾಂತೂರು ಗ್ರಾಮದ ಬೋಳ್ತಜಿರ ಮಾದಪ್ಪ ಬಾಬು(76) ಅನಾರೋಗ್ಯದಿಂದ ಬುಧವಾರ ನಿಧನರಾದರು. ಮೃತರು ಪತ್ನಿ ಸಾವಿತ್ರಿ ಹಾಗೂ ಇಬ್ಬರು ಪುತ್ರರನ್ನು ಅಗಲಿದ್ದಾರೆ. ಕಾಂತೂರು ಗ್ರಾಮದ ಮೃತರ ಸ್ವಗೃಹದಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ರೈತರ ಪ್ರತಿಭಟನೆ


ಚಾಮರಾಜನಗರದಲ್ಲಿ ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ರೈತ ಸಂಘದ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ಚಾಮರಾಜನಗರ, ಸೆ.18–ವಿವಿಧ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿ ಜಿಲ್ಲಾ ರೈತ ಸಂಘ ಹಾಗೂ ಹಸಿರು ಸೇನೆ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತಿಭಟನೆ ನಡೆಸಿದರು.

ನಗರದ ಚಾಮರಾಜೇಶ್ವರ ದೇವಸ್ಥಾನದ ಎದುರು ಜಮಾಯಿಸಿದ ಪ್ರತಿಭಟನಾಕಾರರು, ಅಲ್ಲಿಂದ ಜಿಲ್ಲಾಡಳಿತ ಭವನದ ವರೆಗೆ ಮೆರವಣಿಗೆ ನಡೆಸಿದರು. ಮೆರವಣಿಗೆಯುದ್ದಕ್ಕೂ ರೈತರ ಜ್ವಲಂತ ಸಮಸ್ಯೆಗಳನ್ನು ಬಗೆಹರಿಸುವಂತೆ ಘೋಷಣೆ ಕೂಗಿದರು. ಬಳಿಕ ಜಿಲ್ಲಾಡಳಿತದ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ರೈತ ಸಂಘದ ಜಿಲ್ಲಾಧ್ಯಕ್ಷ ಹೊನ್ನೂರು ಬಸವಣ್ಣ ಮಾತನಾಡಿ, ಕೃಷಿಯ ಮೇಲಿನ ಕಾರ್ಪೋರೇಟ್ ಆಕ್ರಮಣ ನಿಲ್ಲಬೇಕು. ರೈತರ ಬೆಳೆಗಳಿಗೆ ಎಂಎಸ್‌ಪಿ ಖಾತ್ರಿಯಾಗಬೇಕು. ರೈತರ ಮತ್ತು ಜನಸಾಮಾನ್ಯರ ಬದುಕಿಗೆ ಕಂಟಕವಾಗಿರುವ ವಿದ್ಯುತ್ ಖಾಸಗೀಕರಣ ರದ್ದಾಗಬೇಕು. ಕಂಪನಿಗಳ ಹಿತ ಕಾಯಲು ಜಾರಿಗೆ ತಂದಿರುವ ಕಾರ್ಮಿಕ ವಿರೋಧಿ ನಾಲ್ಕು ಕೋಡ್‌ಗಳು ರದ್ದುಗೊಳಿಸಿ, ಉದ್ಯೋಗ ಭದ್ರತೆಗೊಳಿಸಬೇಕು ಎಂದು ಆಗ್ರಹಿಸಿದರು.

ಲಾಭದ ದುರಾಸೆಗೆ ಮಹಿಳೆಯರನ್ನು ಭೋಗದ ವಸ್ತುವಿನಂತೆ ಬಿಂಬಿಸಿ ಅತ್ಯಾಚಾರ ಸರಮಾಲೆಗೆ ಕಾರಣವಾಗಿರುವ ಕಾರ್ಪೋರೇಟ್ ಸಂಸ್ಕೃತಿ ನಾಶವಾಗಬೇಕು. ವಯನಾಡು ಭೂ ಕುಸಿತ, ಅತಿವೃಷ್ಟಿಯಂತಹ ಪ್ರಕೃತಿ ವಿಕೋಪಗಳಿಗೆ ದೇಶವನ್ನು ತಳ್ಳುತ್ತಿರುವ ಕಾರ್ಪೋರೇಟ್ ಮಾದರಿ ಅಭಿವೃದ್ಧಿ ಕೊನೆಗೊಳ್ಳಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕುಮಾರ್, ಸಂಘಟನಾ ಕಾರ್ಯದರ್ಶಿ ವಿಜಯಕುಮಾರ್, ಶಿವಮಲ್ಲಪ್ಪ, ರುದ್ರೇಶ್, ಪಿ.ಮಹೇಶ್, ಮಲ್ಲೇಶ್, ಮಾದಪ್ಪ, ಸತೀಶ್, ಶಿವರುದ್ರಪ್ಪ, ಸಿದ್ದರಾಜು, ಕಪ್ಪಶೆಟ್ಟರು, ಸುರೇಶ್‌ನಾಯ್ಕ, ಸಿದ್ದೇಶ್ ಇತರರು ಭಾಗವಹಿಸಿದ್ದರು.

ಸಂಕಷ್ಟಕ್ಕೆ ಆತ್ಮಹತ್ಯೆಯೇ ಪರಿಹಾರವಲ್ಲ

ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆಯಲ್ಲಿ ನ್ಯಾಯಾಧೀಶ ಈಶ್ವರ್ ಸಲಹೆ

> “ಸಾವು ಸ್ವಾಭಾವಿಕವಾಗಿರಬೇಕು. ಜೀವನದ ಜಿಗುಪ್ಸೆಯಿಂದ ಮಾಡಿಕೊಳ್ಳುವುದೇ ಆತ್ಮಹತ್ಯೆಯಾಗಿದೆ. ಯುವಕರು ಹೆಚ್ಚಾಗಿ ಆತ್ಮಹತ್ಯೆಗೆ ಬಲಿಯಾಗುತ್ತಿದ್ದಾರೆ. ಪ್ರತಿವರ್ಷ 7 ಲಕ್ಷ ಆತ್ಮಹತ್ಯೆ ಸಂಭವಿಸುತ್ತಿದ್ದು, ಕೋವಿಡ್ ಬಳಿಕ ಇದು ಇನ್ನೂ ಹೆಚ್ಚಾಗಿದೆ. ಪ್ರತಿ 40 ಸೆಕೆಂಡ್‌ಗೆ 1 ಆತ್ಮಹತ್ಯೆ ಪ್ರಕರಣ ದಾಖಲಾಗುತ್ತಿದೆ. ಆತ್ಮಹತ್ಯೆಯನ್ನು ಪರಿಣಾಮಕಾರಿಯಾಗಿ ತಡೆಯಲು ಪ್ರತಿ ತಾಲೂಕಿನಲ್ಲಿ ಮನೋಚೈತನ್ಯ ಕ್ಲಿನಿಕ್ ತೆರೆದು ಮಾನಸಿಕ ಖಿನ್ನತೆಗೆ ಒಳಗಾದವರಿಗೆ ಸ್ಥೈರ್ಯ ತುಂಬಲಾಗುತ್ತಿದೆ.
> –ಡಾ.ಚಂದ್ರಶೇಖರ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ


ಚಾಮರಾಜನಗರ ವಿವಿಯ ಸುವರ್ಣ ಗಂಗೋತ್ರಿಯಲ್ಲಿ ಆಯೋಜಿಸಿದ್ದ ಆತ್ಮಹತ್ಯೆ ತಡೆ ದಿನಾಚರಣೆಯಲ್ಲಿ ಆತ್ಮಹತ್ಯೆ ತಡೆ ಕುರಿತು ಪ್ರತಿಜ್ಞಾ ವಿಧಿ ಬೋಧಿಸಲಾಯಿತು.

ಚಾಮರಾಜನಗರ, ಸೆ.18–ಸಮಸ್ಯೆ ಹಾಗೂ ಸಂಕಷ್ಟಗಳಿಗೆ ಆತ್ಮಹತ್ಯೆಯೇ ಪರಿಹಾರವಲ್ಲ. ಮನುಷ್ಯ ಜೀವನ ಪಕ್ವತೆ ಹಾಗೂ ಪರಿಪೂರ್ಣತೆಗೆ ಸಾಧನೆಗೈದು ಬದುಕು ಸಾರ್ಥಕಪಡಿಸಿಕೊಳ್ಳಬೇಕು ಎಂದು ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಈಶ್ವರ್ ಸಲಹೆ ನೀಡಿದರು.

ಚಾಮರಾಜನಗರ ವಿಶ್ವವಿದ್ಯಾನಿಲಯ ಸುವರ್ಣ ಗಂಗೋತ್ರಿಯ ನಿಜಗುಣ ಸಭಾಂಗಣದಲ್ಲಿ ಬುಧವಾರ ರಾಷ್ಟ್ರೀಯ ಮಾನಸಿಕ ಆರೋಗ್ಯ ಕಾರ್ಯಕ್ರಮದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೊಸೈಟಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ವಿಶ್ವ ಆತ್ಮಹತ್ಯೆ ತಡೆ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪ್ರತಿಯೊಬ್ಬರಿಗೂ ಸಮಸ್ಯೆ, ಸಂಕಷ್ಟಗಳು ಇದ್ದೇ ಇರುತ್ತವೆ. ಹಾಗಂತ ಯಾರೂ ಆತ್ಮಹತ್ಯೆಗೆ ಮುಂದಾಗಬಾರದು. ಕೌಟುಂಬಿಕ ಕಲಹ, ಪ್ರೀತಿ–ಪ್ರೇಮ, ಸಾಲ ಆತ್ಮಹತ್ಯೆಗೆ ಪ್ರಚೋದಿಸಬಹುದು. ಇಂತಹ ಸಂದರ್ಭಗಳಲ್ಲಿ ನೊಂದವರಿಗೆ ಸಮಾಧಾನ, ಸಾಂತ್ವನ ಅವಶ್ಯವಾಗಿದೆ ಎಂದು ತಿಳಿಸಿದರು.

ಮನುಷ್ಯನ ಜೀವನ ಬಾಲ್ಯ, ಯೌವ್ವನ, ಮುಪ್ಪು ಈ ಮೂರು ಹಂತಗಳನ್ನು ಒಳಗೊಂಡಿದ್ದು, ಸ್ವಾಭಾವಿಕ ಸಾವು ಬರುವ ತನಕ ನಾವು ಬದುಕಲೇಬೇಕಾಗಿದೆ. ಈಸಬೇಕು, ಇದ್ದು ಜಯಿಸಬೇಕು ಎಂಬಂತೆ ಏನಾದರೂ ಸಾಧನೆಗೈದು ಪರಿಪೂರ್ಣ ಜೀವನ ನಮ್ಮದಾಗಿಸಿಕೊಳ್ಳಬೇಕು ಎಂದರು.

ಮನುಷ್ಯನ ಹುಟ್ಟು ಆಕಸ್ಮಿಕ, ಸಾವು ಖಚಿತ, ಆತ್ಮಹತ್ಯೆ ಮಹಾಪಾಪ. ಜೀವನದಲ್ಲಿ ಎದುರಾಗುವ ಸಮಸ್ಯೆಗಳಿಗೆ ಧೃತಿಗೆಡದೆ ಪರಿಹಾರೋಪಾಯ ಕಂಡುಕೊಳ್ಳಬೇಕೇ ವಿನಾ ಆತ್ಮಹತ್ಯೆ ಮಾಡಿಕೊಳ್ಳಬಾರದು. ಮಾನಸಿಕ ಖಿನ್ನತೆಗೆ ಮನೋವೈದ್ಯರನ್ನು ಸಂಪರ್ಕಿಸಿ, ಅಗತ್ಯ ಸಲಹೆ ಪಡೆದುಕೊಂಡು ಸಮಸ್ಯೆಗಳಿಗೆ ಪರಿಹಾರ ಪಡೆದುಕೊಳ್ಳಬೇಕು. ಪ್ರಕೃತಿ ವಿರುದ್ಧವಾಗಿ ಯಾರೂ ಹೋಗಬಾರದು. ಸ್ವಾಭಾವಿಕ, ಸಹಜ ಹಾಗೂ ಸರಳ ಜೀವನ ರೂಢಿಸಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಬಿ.ಟಿ.ಕವಿತಾ ಮಾತನಾಡಿ, ಭೂಮಿಯ ಮೇಲಿನ ಒಂದೇ ಜನ್ಮ ನಮ್ಮದಾಗಿದೆ ಯಾರೂ ಸಹ ಆತ್ಮಹತ್ಯೆಗೆ ಮುಂದಾಗಬಾರದು. ಮಾನಸಿಕ ಆರೋಗ್ಯದ ಬಗ್ಗೆ ಪ್ರತಿಯೊಬ್ಬರಿಗೂ ಜಾಗೃತಿ ಮೂಡಿಸಬೇಕು. ವೈದ್ಯರು, ಸ್ನೇಹಿತರಿಂದ ಮಾನಸಿಕ ಖಿನ್ನತೆಗೆ ಸಲಹೆ ಪಡೆದು ಆತ್ಮಹತ್ಯೆ ಮನೋಭಾವದಿಂದ ಹೊರಬರಬೇಕು. ಜೀವನ ಪ್ರೀತಿ ರೂಪಿಸಿಕೊಳ್ಳಬೇಕು. ಒತ್ತಡ ಜೀವನ ಶೈಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸರಳ ಬದುಕು ಕಟ್ಟಿಕೊಳ್ಳಬೇಕು. ಬದುಕನ್ನು ಅರ್ಥಪೂರ್ಣ ಮಾಡಿಕೊಳ್ಳಬೇಕು. ದೈಹಿಕ, ಮಾನಸಿಕ ಸದೃಢತೆ ಹೊಂದಬೇಕು ಎಂದರು.

ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿದ್ದ ಮನೋರೋಗ ತಜ್ಞ ಡಾ.ಎಂ.ಎನ್.ರಾಜೇಶ್ ಆತ್ಮಹತ್ಯೆ ಕುರಿತು ಸವಿವರವಾಗಿ ತಿಳಿಸಿದರು. ಇದೇ ವೇಳೆ ಚಾಮರಾಜನಗರ ವಿಶ್ವವಿದ್ಯಾನಿಲಯ ಕುಲಪತಿ ಪ್ರೊ.ಎಂ.ಆರ್.ಗಂಗಾಧರ್ ಆತ್ಮಹತ್ಯೆ ತಡೆ ಕುರಿತು ಪ್ರತಿಜ್ಞಾ ವಿಧಿ ಬೋಧಿಸಿದರು. ತಾಲೂಕು ಆರೋಗ್ಯಾಧಿಕಾರಿ ಡಾ.ಶ್ರೀನಿವಾಸ್, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ದೊರೆಸ್ವಾಮಿ ನಾಯಕ್ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ಟಿಪ್ಪರ್‌ಗಳ ಹಾವಳಿ ತಡೆಗಟ್ಟುವಂತೆ ಆಗ್ರಹಿಸಿ ಮೆರವಣಿಗೆ


ಗುಂಡ್ಲುಪೇಟೆಯಲ್ಲಿ ಟಿಪ್ಪರ್‌ಗಳ ಹಾವಳಿ ತಡೆಗಟ್ಟುವಂತೆ ಒತ್ತಾಯಿಸಿ ವಿವಿಧ ಕನ್ನಡಪರ ಸಂಘಟನೆಗಳ ಕಾರ್ಯಕರ್ತರು ಮೆರವಣಿಗೆ ನಡೆಸಿದರು.

ಗುಂಡ್ಲುಪೇಟೆ, ಸೆ.18–ತಾಲೂಕಿನಲ್ಲಿ ಅಕ್ರಮ ಗಣಿಗಾರಿಕೆ ಹಾಗೂ ಟಿಪ್ಪರ್‌ಗಳ ಹಾವಳಿ ತಡೆಗಟ್ಟುವಂತೆ ಒತ್ತಾಯಿಸಿ ವಿವಿಧ ಕನ್ನಡಪರ ಸಂಘಟನೆ ಹಾಗೂ ರೈತ ಸಂಘಟನೆ ಕಾರ್ಯಕರ್ತರು ಬುಧವಾರ ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ರೈತ ಸಂಘದ ಕಾರ್ಯಕರ್ತರು ರಸ್ತೆ ಸಂಚಾರ ತಡೆ ನಡೆಸಿದರೆ, ಕನ್ನಡಪರ ಸಂಘಟನೆಗಳಾದ ಕರುನಾಡ ಯುವಸೇನೆ, ಕರ್ನಾಟಕ ರಕ್ಷಣಾ ವೇದಿಕೆ, ಕರ್ನಾಟಕ ಕಾವಲುಪಡೆ ಸೇರಿದಂತೆ ವಿವಿಧ ಪ್ರಗತಿಪರ ಸಂಘಗಳ ಪದಾಧಿಕಾರಿಗಳು ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿದರು.

ನಂತರ ಟಿಪ್ಪರ್‌ಗಳ ಹಾವಳಿ ತಡೆಗಟ್ಟುವಂತೆ ತಹಸೀಲ್ದಾರ್ ಟಿ.ರಮೇಶ್ ಬಾಬು ಅವರಿಗೆ ಮನವಿ ಸಲ್ಲಿಸಿದರು. ಇದಕ್ಕೂ ಮುನ್ನ ಸಾರಿಗೆ ಬಸ್ ನಿಲ್ದಾಣ ಎದುರು ಮಾನವ ಸರಪಳಿ ರಚಿಸಿದ ರೈತ ಸಂಘದ ಕಾರ್ಯಕರ್ತರು ಹೆದ್ದಾರಿಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಪಡಿಸಿದರು.

ಸಂಘದ ತಾಲೂಕು ಅಧ್ಯಕ್ಷ ನಾಗಪ್ಪ ಮಾತನಾಡಿ, ತಾಲೂಕಿನಲ್ಲಿ ಕಲ್ಲು, ಮಣ್ಣುಗಳನ್ನು ಅಕ್ರಮವಾಗಿ ಎಗ್ಗಿಲ್ಲದೆ ಸಾಗಿಸಲಾಗುತ್ತಿದೆ. ಅಧಿಕಾರಿಗಳು ಕಣ್ಣುಮುಚ್ಚಿ ಕುಳಿತ್ತಿದ್ದಾರೆ. ಗ್ರಾಮಾಂತರ ಪ್ರದೇಶದ ಎಲ್ಲಾ ರಸ್ತೆಗಳು ಹಾಳಾಗಿದ್ದು, ಪದೇ ಪದೆ ಅಪಘಾತಗಳು ಸಂಭವಿಸಿ ಸಾವು–ನೋವುಗಳು ಸಂಭವಿಸುತ್ತಿವೆ. ಮಂಗಳವಾರ ಪಟ್ಟಣದ ಸುಲ್ತಾನ್ ಬತ್ತೇರಿ ರಸ್ತೆಯಲ್ಲಿ ಬೈಕ್‌ನಲ್ಲಿ ಹೋಗುತ್ತಿದ್ದ ಕೇರಳ ಮೂಲದ ಒಂದೇ ಕುಟುಂಬದ ಮೂವರ ಮೇಲೆ ಚಾಲಕನ ಅಜಾಗರೂಕತೆಯಿಂದ ಟಿಪ್ಪರ್ ಹರಿದಿದೆ. ಇದರಿಂದ ಪತಿ, ಪತ್ನಿ ಹಾಗೂ ಪುತ್ರ ದಾರುಣವಾಗಿ ಸಾವಿಗೀಡಾಗಿದ್ದಾರೆ. ಈ ಎಲ್ಲಾ ಘಟನೆಗಳನ್ನು ಜಿಲ್ಲಾಡಳಿತ ಸೂಕ್ಷ್ಮವಾಗಿ ಗಮನಿಸಿ, ಅಕ್ರಮ ಗಣಿಗಾರಿಕೆ ತಡೆಗಟ್ಟದಿದ್ದರೆ ಉಗ್ರ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ಕರವೇ ಜಿಲ್ಲಾಧ್ಯಕ್ಷ ಆರ್.ಮೋಹನ್, ವಿವಿಧ ಸಂಘಟನೆಗಳ ನಾಗೇಶ್, ಮಾಲೀಕ್, ಮುಬಾರಕ್, ಮುನೀರ್, ಷಣ್ಮುಖ ಸ್ವಾಮಿ, ಶ್ರೀನಿವಾಸ್, ಸ್ವಾಮಿ, ಸೋಮಶೇಖರ್, ಲೋಕೇಶ್ ಇತರರು ಭಾಗವಹಿಸಿದ್ದರು.

ನಾಗರತ್ನಮ್ಮ ನಿಧನ



ಕೊಳ್ಳೇಗಾಲ, ಸೆ.18–ಕೊಳ್ಳೇಗಾಲ ಬಿಜೆಪಿ ನಗರ ಮಂಡಲ ಮಾಜಿ ಅಧ್ಯಕ್ಷ ರಮೇಶ್ ಮುರಾರಿ ಅವರ ತಾಯಿ ಪಿ.ಕೆ.ನಾಗರತ್ನಮ್ಮ (70) ಬುಧವಾರ ನಿಧನರಾದರು.

ಮೃತರು ಪುತ್ರ ರಮೇಶ್ ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಪಟ್ಟಣದಲ್ಲಿ ದೇವಾಂಗ ಸಮಾಜದ ವಿಧಿವಿಧಾನಗಳೊಂದಿಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

30ನೇ ವಾರ್ಡ್‌ನಲ್ಲಿ ಗಣೇಶ ಮೂರ್ತಿ ವಿಸರ್ಜನೆ


ಚಾಮರಾಜನಗರ ರಾಮಸಮುದ್ರ ಬಡಾವಣೆಯಲ್ಲಿ ಪ್ರತಿಷ್ಠಾಪಿಸಿದ ಗಣೇಶ ಮೂರ್ತಿ.

ಚಾಮರಾಜನಗರ, ಸೆ.18– ರಾಮಸಮುದ್ರ ಬಡಾವಣೆಯ 30ನೇ ವಾರ್ಡ್‌ನಲ್ಲಿ ಡಾ.ಬಾಬು ಜಗಜೀವನ ರಾಂ ಯುವಕರ ಸಂಘದ ವತಿಯಿಂದ ಪ್ರತಿಷ್ಠಾಪಿಸಿದ ಗಣೇಶ ಮೂರ್ತಿಯನ್ನು ವಿಸರ್ಜಿಸಲಾಯಿತು.

ಪ್ರಮುಖ ಬೀದಿಗಳಲ್ಲಿ ಅಲಂಕೃತ ವಾಹನದಲ್ಲಿ ಗಣೇಶ ಮೂರ್ತಿ ಮೆರವಣಿಗೆ ಮಾಡಿ, ನಂತರ ನಗರದ ದೊಡ್ಡರಸನ ಕೊಳದಲ್ಲಿ ವಿಸರ್ಜಿಸಲಾಯಿತು.

ಅಂಬೇಡ್ಕರ್ ಅಭಿವೃದ್ಧಿ ನಿಗಮದ ಮಾಜಿ ನಿರ್ದೇಶಕ ಎಂ.ಶಿವಮೂರ್ತಿ, ಜಗಜೀವನ ರಾಂ ಯುವಕರ ಸಂಘದ ಅಧ್ಯಕ್ಷ ರಾಚಯ್ಯ, ಗೌರವಾಧ್ಯಕ್ಷ ಆರ್.ಕೆ. ಶಿವಕುಮಾರ್, ಉಪಾಧ್ಯಕ್ಷ ಲಕ್ಷ್ಮಣ್ ಕುಮಾರ್, ಕಾರ್ಯದರ್ಶಿ ಆರ್.ಎಂ.ಶಿವಕುಮಾರ್, ಖಜಾಂಚಿ ಪ್ರಸಾದ್, ಸಂಘಟನಾ ಕಾರ್ಯದರ್ಶಿ ನಾರಾಯಣ್, ಕುಮಾರ್, ನಾಗಣ್ಣ, ಸುನೀಲ್, ತಮಟೆ ನಾಗಣ್ಣ , ಪ್ರವೀಣ್, ರವೀಶ್, ರಮೇಶ್, ಲಿಂಗಣ್ಣ, ಮಲ್ಲೇಶ್, ಸುಬ್ಬಣ್ಣ ರಾಜೇಶ್, ಸಂಜಯ್, ಮಂಜು, ರಾಜು, ಲಿಂಗರಾಜು, ನವೀನ್, ಎಸ್. ಸುನೀಲ್ ಕುಮಾರ್, ಸೋಮೇಶ್ ಹಾಜರಿದ್ದರು.

ಮಗುವಿನೊಂದಿಗೆ ತಾಯಿ ನಾಪತ್ತೆ


ನೌರಿನ್ ತಾಜ್

ಕೊಳ್ಳೇಗಾಲ, ಸೆ.18–ಪಟ್ಟಣದ ನೂರ್ ಮೊಹಲ್ಲಾ ಬಡಾವಣೆಯ ಮಹಿಳೆ ತನ್ನ ಮಗುವಿನೊಂದಿಗೆ ನಾಪತ್ತೆಯಾಗಿರುವ ಕುರಿತು ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬಡಾವಣೆಯ ಆಸೀಫ್ ಪಾಷಾ ಅವರ ಪತ್ನಿ ನೌರಿನ್ ತಾಜ್(23) ಹಾಗೂ ಇವರ ಮಗು ಅರ್ಮಾನ್ ಪಾಷಾ(4) ನಾಪತ್ತೆಯಾಗಿದ್ದು, ಪತ್ನಿ ನೌರಿನ್ ತಾಜ್ ಮಗುವಿನೊಂದಿಗೆ ಕಳೆದ ತಿಂಗಳು ನಾಪತ್ತೆಯಾಗಿದ್ದಾರೆ.

ಎಲ್ಲಾ ಸಂಬಂಧಿಕರ ಮನೆಯಲ್ಲಿ ಹುಡುಕಾಟ ನಡೆಸಿದರೂ ಇದುವರೆಗೂ ಪತ್ತೆಯಾಗಿಲ್ಲ ಎಂದು ಪತಿ ಆಸಿಫ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ನಾಳೆ ದರಾ ಬೇಂದ್ರೆ, ಅವರ ಅರಳು ಮರಳು ಕೃತಿ ಕುರಿತು ನೇರ ಫೋನ್-ಇನ್ ಕಾರ್ಯಕ್ರಮ



ಮೈಸೂರು, ಸೆ.18- ಜೆಎಸ್‌ಎಸ್ ರೇಡಿಯೋ, ಸಮುದಾಯ ಬಾನುಲಿ ಕೇಂದ್ರವು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ ಮೈಸೂರು ಹಾಗೂ ಆಲೂರು ವೆಂಕಟರಾವ್ ಭಾಷಾ ಕೌಶಲ ಕೇಂದ್ರದ ಸಹಯೋಗ ದೊಂದಿಗೆ ಕನ್ನಡ ನಾಡು ನುಡಿಗೆ ಕೀರ್ತಿ ತಂದ ಜ್ಞಾನ ಪೀಠ ಪ್ರಶಸ್ತಿ ಮತ್ತು ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರ ಕೃತಿ ಮತ್ತು ಕರ್ತೃವಿನ ಪರಿಚಯಾತ್ಮಕ ಸರಣಿ ಕಾರ್ಯಕ್ರಮದಲ್ಲಿ ಸೆ.20 ರಂದು ಕನ್ನಡ ನಾಡಿನ 2ನೇ ಜ್ಞಾನಪೀಠ ಪ್ರಶಸ್ತಿ ಪುರಸ್ಕೃತರು ಹಾಗೂ 3ನೇ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಪುರಸ್ಕೃತರೂ ಆದ ದರಾ ಬೇಂದ್ರೆ ಮತ್ತು ಅವರ ಕೃತಿಗಳ ಕುರಿತು ನೇರ ಫೋನ್-ಇನ್ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಡಾ.ಜಯಪ್ಪ ಹೊನ್ನಾಳಿ (ಜಯಕವಿ), ಮೈಸೂರು ಭಾಗವಹಿಸಲಿದ್ದು, ಸಾಹಿತ್ಯಾಸಕ್ತರು ಮತ್ತು ವಿದ್ಯಾರ್ಥಿಗಳು ನೇರವಾಗಿ ಈ ಕಾರ್ಯಕ್ರಮವನ್ನು ಆಲಿಸಬಹುದು. ಈ ವಿಷಯಕ್ಕೆ ಸಂಬಂಧಿಸಿದಂತೆ ಯಾವುದೇ ವಿಚಾರಗಳು, ಅಭಿಪ್ರಾಯಗಳಿದ್ದಲ್ಲಿ ನಮ್ಮ ಜೊತೆ ನೇರವಾಗಿ ಹಂಚಿಕೊಳ್ಳಬಹುದು. ಅದಕ್ಕಾಗಿ ನೀವು ಕರೆ ಮಾಡಬಹುದಾದ ನಮ್ಮ ನಿಲಯದ ದೂ.ಸಂಖ್ಯೆ: 8296725912, 0821-2546563.

ಜೆಎಸ್‌ಎಸ್ ರೇಡಿಯೋವನ್ನು ಪ್ಲೇಸ್ಟೋರ್‌ನಲ್ಲಿ ಲಭ್ಯವಿರುವ ಆ್ಯಪ್ ಮೂಲಕ ವಿಶ್ವದ ಯಾವುದೇ ಮೂಲೆಯಲ್ಲಾದರೂ ಆಲಿಸಬಹುದು ಹಾಗೂ ಈ ವಿಶೇಷ ಸರಣಿ ಕಾರ್ಯಕ್ರಮವನ್ನು ಜೆಎಸ್‌ಎಸ್ ರೇಡಿಯೋ ಕೇಂದ್ರದ ಯೂಟ್ಯೂಬ್ ಚಾನಲ್ ಮೂಲಕವೂ ಸಹ ನೇರವಾಗಿ ವೀಕ್ಷಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಕೆಪಿಟಿಸಿಎಲ್ ಇಂಜಿನಿಯರ್‌ಗಳ ವರ್ಗಾವರ್ಗಿ

ಮೈಸೂರು, ಸೆ.18(ಎಸ್‌ಪಿಎನ್)-ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ಆರು ಸಹಾಯಕ ಇಂಜಿನಿ ಯರ್‌ಗಳನ್ನು ವರ್ಗಾವಣೆ ಮಾಡಿ ಕವಿಪ್ರನಿನಿ ನಿರ್ದೇಶಕರು ಆದೇಶಿಸಿದ್ದಾರೆ.

ಹಾಸನದ ಮಗ್ಗೆ 66/11 ಕೆವಿ ಉಪ ಕೇಂದ್ರದ ಟಿ.ಎಸ್.ಕಿರಣ್‌ಕುಮಾರ್ ಅವರನ್ನು ಹಾಸನದ ಕಾರ್ಯ ಮತ್ತು ಪಾಲನ ಹಾಸನ ಉಪ ವಿಭಾಗದ ಖಾಲಿ ಹುದ್ದೆಗೆ, ಮೈಸೂರು ಕುವೆಂಪುನಗರ ನಿವೇದಿತಾ ನಗರ ಶಾಖೆಯ ಸೆಸ್ಕಾಂ ಉಪವಿಭಾಗದ ಕಾರ್ಯ ಮತ್ತು ಪಾಲನ ಉಪವಿಭಾಗದ ಕೆ.ವಿ.ಮುರುಳಿ ಅವರನ್ನು ಮೈಸೂರು ಸೆಸ್ಕಾಂ ಜಾಗೃತದಳದ ಖಾಲಿ ಹುದ್ದೆಗೆ, ಹೊಳೆನರಸೀಪುರ ಕಾರ್ಯ ಮತ್ತು ಪಾಲನ ವಿಭಾಗದ ಟಿ.ವಿ.ವಿಜಯ ರಾಜ್ ಅರಸ್ ಅವರನ್ನು ಹಾಸನದ ಸಾಲ ಗಾಮೆ 66/11 ಕೆವಿ ವಿದ್ಯುತ್ ಉಪ ಕೇಂದ್ರದ ಖಾಲಿ ಹುದ್ದೆಗೆ, ಬೆಂಗಳೂರು ಬೆವಿಕಂ ಕಾರ್ಯ ಮತ್ತು ಪಾಲನ ಉಪವಿಭಾಗದ ಹೆಚ್.ಎಸ್.ರಾಧಿಕ ಅವ ರನ್ನು ಮೈಸೂರು ಸೆಸ್ಕಾಂ ಕಂಪನಿಯ ಕಾರ್ಯಾಲಯದ ಪ್ರವ್ಯ(ತಾಂ)ಅವರ ಶಾಖೆಯ ಖಾಲಿಗೆ ವರ್ಗಾಯಿಸಲಾಗಿದೆ.

ಇಂದು ಮುನಿರತ್ನ ಜಾಮೀನು ಅರ್ಜಿ ತೀರ್ಪು



ಬೆಂಗಳೂರು, ಸೆ.18(ಕೆಎಂಶಿ)- ಪರಿಶಿಷ್ಟ ಜಾತಿ ನಿಂದನೆ, ಲಂಚಕ್ಕೆ ಬೇಡಿಕೆ ಹಾಗೂ ಕೊಲೆ ಬೆದರಿಕೆ ಆರೋಪದಡಿ ನ್ಯಾಯಾಂಗ ಬಂಧನದಲ್ಲಿರುವ ಬಿಜೆಪಿ ಶಾಸಕ ಮುನಿರತ್ನ ಜಾಮೀನು ಅರ್ಜಿ ವಿಚಾರಣೆ ಪೂರೈಸಿದ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ನಾಳೆ ತೀರ್ಪು ನೀಡಲಿದೆ.

ಕ್ರಿಮಿನಲ್ ಪ್ರಕರಣಗಳ ವಿಚಾರಣೆ ನಡೆಸಿದ ಸಂತೋಷ್ ಗಜಾನನ ಭಟ್, ವಾದ-ಪ್ರತಿವಾದ ಆಲಿಸಿ ತೀರ್ಪು ಕಾಯ್ದಿರಿಸಿದರು. ಜಾತಿ ನಿಂದನೆ, ಲಂಚ ಹಾಗೂ ಕೊಲೆ ಬೆದರಿಕೆ ಆರೋಪ ಹೊತ್ತಿರುವ ಮುನಿರತ್ನ ಅವರಿಗೆ ಜಾಮೀನು ನೀಡಬಾರದೆಂದು ಸರ್ಕಾರಿ ವಕೀಲರು ಪ್ರಬಲ ವಾದ ಮಂಡಿಸಿದರು. ಮುನಿರತ್ನ ಪರ ಹೈಕೋರ್ಟ್‌ನ ಹಿರಿಯ ವಕೀಲ ಅಶೋಕ್ ಹಾರ್ನಳ್ಳಿ ವಾದ ಮಂಡಿಸಿ, ನಮ್ಮ ಕಕ್ಷಿದಾರರ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಲಾಗಿದೆ, ಇದು ರಾಜಕೀಯ ಕುತಂತ್ರ. ನ್ಯಾಯಾಂಗ ಬಂಧನದಲ್ಲಿರುವ ಇವರಿಗೆ ಜಾಮೀನು ನೀಡಬೇಕೆಂದು ಮನವಿ ಮಾಡಿದರು.

ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ ರೂ. 600+30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821-2496522/23

ಲಾವಣ್ಯ ವಧು-ವರರ ಮಾಹಿತಿ ಕೇಂದ್ರ
BA, BSc, B.Com, MA, MSc, MBA, MCA, Doctor, Engineers MBBS, Engg. 2nd Marriage Also
91647-43059

ಶ್ರೀ ಭುವನೇಶ್ವರಿ ಸೌಹಾರ್ದ ಪತ್ತಿನ ಸಹಕಾರಿ ನಿಯಮಿತ
ನಂ. 622, 'ಆನಂದ ಮಠ' 1ನೇ ಹಂತ, ವಿಶ್ವೇಶ್ವರನಗರ, ಮೈಸೂರು-8. ದೂ. 0821-2481718
2023-24ನೇ ಸಾಲಿನ ವಾರ್ಷಿಕ ಮಹಾಸಭೆ
ದಿನಾಂಕ: 22-9-2024ನೇ ಭಾನುವಾರ, ಬೆಳಿಗ್ಗೆ 10.30ಕ್ಕೆ
ಸ್ಥಳ: ನಿತ್ಯಾನಂದ ಕಲ್ಯಾಣ ಮಂಟಪ (ಮಿನಿ), ಸ್ಟರ್ಲಿಂಗ್ ಟಾಕೀಸ್ ರಸ್ತೆ, ಮೈಸೂರು-8
ನಮ್ಮ ಸಹಕಾರಿಯ ಅಧ್ಯಕ್ಷರಾದ ಶ್ರೀಮತಿ ಎಂ. ವಿಜಯಲಕ್ಷ್ಮಿ ರವರ ಅಧ್ಯಕ್ಷತೆಯಲ್ಲಿ ಸಭೆ ನಡೆಯಲಿದೆ. ಆಹ್ವಾನ ಪತ್ರಿಕೆ ತಲುಪದೇ ಇರುವವರು ಇದನ್ನೇ ಆಹ್ವಾನ ಪತ್ರಿಕೆ ಎಂದು ಭಾವಿಸಿ ಸಭೆಗೆ ಆಗಮಿಸಬೇಕಾಗಿ ಕೋರುತ್ತೇವೆ.

ಉದ್ಯೋಗವಕಾಶ
ಮೈಸೂರಿನಲ್ಲಿ ನೂತನವಾಗಿ ಆರಂಭವಾಗಿರುವ AW Group of Comapany ಗೆ 219 ಅಭ್ಯರ್ಥಿಗಳನ್ನು ನೇರ ಸಂದರ್ಶನದೊಂದಿಗೆ Direct Appointment ಮಾಡಿಕೊಳ್ಳುತ್ತಿದೆ.
ವಿದ್ಯಾರ್ಹತೆ: SSLC, PUC, ITI, Diploma, any Degree, Etc.
ವಯೋಮಿತಿ: 18 to 32 Years
ತಿಂಗಳಿಗೆ: 21,500-26500
(ಉಚಿತ ಊಟ+ವಸತಿ ಸೌಲಭ್ಯವಿದೆ)
ಸ್ಫೂರ್ತಿಗೌಡ 7349699460

ಸೈಟು ಮಾರಾಟಕ್ಕಿದೆ
ಲಾರ್ಡ್ ಲಿಫ್ಟ್ ಪ್ರೈವೆಟ್ ಲಿಮಿಟೆಡ್ ಗಂಗೋತ್ರಿ ಬಡಾವಣೆ 30x40,30x45, 40x60 ಗೌರ್ಮೆಂಟ್ ಸ್ಕೂಲ್, ಎದುರು ಹೆಚ್.ಡಿ.ಕೋಟೆ, ಮೇನ್ ರಸ್ತೆ, ಟಿ.ಎನ್.ಎನ್.ಆದರ್ಶ ಪಿ.ಯು.ಕಾಲೇಜು ಹತ್ತಿರ, ಹಂಪಾಪುರ, ಮೈಸೂರು
9945887522
8147043080

Part time job opportunity
for House wives, Retired Person. Work at your convenient time and earn good income.
9740535942
9611822225

Learn
Product Design, Architectural BIM, Interior Design, Digital Marketing
6 Month Course.
9880908444
CADD CENTRE 30 YEARS OF SKILLING WORLD

ಬೇಕಾಗಿದ್ದಾರೆ
ಅಶೋಕ ರಸ್ತೆ, ಗಾಂಧಿ ಚೌಕದ ಬಳಿಯಿರುವ ಹಾರ್ಡ್‌ವೇರ್ ಅಂಗಡಿಗೆ 20 ರಿಂದ 35 ವರ್ಷದ ಯುವಕರು ಕೆಲಸಕ್ಕೆ ಬೇಕಾಗಿದ್ದಾರೆ.
ಸಮಯ: ಬೆಳಗ್ಗೆ 9.30 ರಿಂದ ರಾತ್ರಿ 8.00 ರವರೆಗೆ.
ಭಾನುವಾರ ರಜೆ. ಉತ್ತಮ ಸಂಬಳ
ಸಂಪರ್ಕಿಸಿ 11am-5pm :
99015 18513

ಉಚಿತ ತರಬೇತಿ
ಮನೆಯಿಂದಲೇ ಬಟ್ಟಲು ಸಾಂಬ್ರಾಣಿ ಮತ್ತು ಅಣಬೆ ತಯಾರಿಸಿ ನಮಗೆ ಮರಳಿಸಿ ಪ್ರತಿದಿನ 500 ರಿಂದ 800 ರೂ. ವರೆಗೆ ಗಳಿಸಿ.
ತರಬೇತಿಗಾಗಿ:
7406375196, 9880548596

30x60 West Face SITE for SALE
SHIVAMOGGA
@ Prime Location
Ranganatha Badavane, Gopala Shivamogga. (Behind Vidhatri Bhavan)
9845017569, 9845114560

Hiring Freshers
BE. Civil /Mech CAD Trainers. Candidates with multiple Cad software knowledge preferred.
Job location Mysore
9880908444
CADD CENTRE 30 YEARS OF SKILLING WORLD

SUMP TANK CLEANING
Mob: 9113601866

ಉದ್ಯೋಗ ಅವಕಾಶ
ಬಂದ ದಿನವೇ ಕೆಲಸ (ಮಾರ್ಕೆಟಿಂಗ್ ಅಲ್ಲ) ಮೈಸೂರಿನ ಪ್ರತಿಷ್ಠಿತ MNC ಹಾಗೂ IT ಕಂಪನಿಗಳಿಗೆ 4th, SSLC, PUC, ITI, Any Degree ಪಾಸ್ / ಫೇಲ್ ಆದ ಯುವಕ / ಯುವತಿಯರು ಇಂದೇ ಬೇಕಾಗಿದ್ದಾರೆ. ESI / PF ನೊಂದಿಗೆ ಊಟ, ವಸತಿಯಿರುತ್ತದೆ. ಸಂಬಳ + ಓಟಿ, 15200 - 86,000.
7411565140, 7892046990

ನಿರುದ್ಯೋಗಿಗಳಿಗೊಂದು ಸುವರ್ಣಾವಕಾಶ
ಮನೆಯಲ್ಲೇ ಕುಳಿತು ಟಾರ್ಗೆಟ್ ಇಲ್ಲದೆ ಬರವಣಿಗೆ ಮೂಲಕ 9 ರಿಂದ 30 ಸಾವಿರದವರೆಗೆ ಹಣಗಳಿಸುವ ಸುವರ್ಣಾವಕಾಶ. ಆಸಕ್ತರು ಸಂಪರ್ಕಿಸಿ:
6361056646, 7676844160

WANTED TEACHERS
Pavaman Innovative School
Nursery : 2, Primary School : 2, (Social and Science) Qualification: NST, Montessori, D.Ed/ B.Ed or any Degree. English communication, computer knowledge is a must.
#105/3, 7th cross, 3rd main, B.M. Shree Nagara, Metagalli, Mysore, Karnataka
Contact : 8197695840 / 8431891316

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 6360485921

ಹೊಸ ಮನೆ ಮಾರಾಟಕ್ಕಿದೆ
30x40 5 BHK Duplex NF ಆರಾಧ್ಯ ಬಡಾವಣೆ ಮೂಡ 1.19 Cr. Bank Loan available. 20x30 2BHK 39 Lakh, Bank Loan Available, Mysore
9379056972

ವಾರ್ಷಿಕ ಮಹಾಸಭೆ
ಫಾಲ್ಸನ್ ಟೈರ್ಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ 2023-2024ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ದಿ.22-9-2024ರಂದು ಭಾನುವಾರ ಬೆ.10.30ರ ವೇಳೆಗೆ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನ ಮುಡಾ ಗ್ರೌಂಡ್ ಆವರಣದ ಪಕ್ಕ, ವಿದ್ಯಾವರ್ಧಕ ಇಂಜಿನಿಯರಿಂಗ್ ಕಾಲೇಜ್ ರಸ್ತೆ, ವಿಜಯನಗರ 1ನೇ ಹಂತ, ಮೈಸೂರು-570018 ಇಲ್ಲಿ ಏರ್ಪಡಿಸಲಾಗಿದೆ. ಆದ್ದರಿಂದ ಸಂಘದ ಸದಸ್ಯರೆಲ್ಲರೂ ಸಭೆಗೆ ಹಾಜರಾಗಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಕೋರಲಾಗಿದೆ. ವಿ.ಸೂ.: ಸಂಘದ ಸದಸ್ಯರು ಕಡ್ಡಾಯವಾಗಿ ಗುರುತಿನ ಚೀಟಿ ತರತಕ್ಕದ್ದು.
ಆಡಳಿತ ಮಂಡಳಿಯ ಅಪ್ಪಣೆ ಮೇರೆಗೆ
ಸಹಿ/- ಕಾರ್ಯದರ್ಶಿ

SITE FOR SALE
60x45 West face, J.C. Nagara, Chamundi Hill Main Road, 5 km from City Bus Stand. Rs. 3500 per sq.ft.
9448589862, 7022135656

REQUIRED
TELECALLERS
FIELD EXECUTIVES
MALE / FEMALE
FRESHER / EXPERIENCED FOR BANK COLLECTIONS
91410 78285
FIXED SALARY + INCENTIVES
LOCATION : NEW KANTHARAJ URS ROAD NEAR SHARADADEVI NAGAR - MYSORE 570022

ಬೇಕಾಗಿದ್ದಾರೆ
ಮೈಸೂರಿನ ಪ್ರಸಿದ್ಧ ಶೋರೂಮ್‌ಗಳಿಗೆ ಮತ್ತು ಕಂಪನಿ ಕೆಲಸಕ್ಕೆ, ಆಫೀಸ್ ಕೆಲಸಕ್ಕೆ, ತಕ್ಷಣ ಯುವಕ, ಯುವತಿಯರು, ಬೇಕಾಗಿದ್ದಾರೆ, ಮೊದಲು ಬಂದವರಿಗೆ ಮೊದಲ ಆದ್ಯತೆ. ಯಾವುದೇ ಎಜುಕೇಶನ್ ಇರಬಹುದು, AGE ಲಿಮಿಟ್ 18 TO 55, SALARY 18000 TO 38000 ಇರುತ್ತದೆ, ಹೆಚ್ಚಿನ ಮಾಹಿತಿಗೆ ಇಂದೇ ಸಂಪರ್ಕಿಸಿ. HR MADAM
9902230976, 8296845328

ಕೊಳ್ಳೇಗಾಲದ ಜ್ಯೋತಿಷ್ಯರು
ಪಂ. ಎಸ್. ಕುಮಾರಸ್ವಾಮಿ (ಮೋಡಿ ಮಾಂತ್ರಿಕರು)
MOB: 9880583804
ಇವರು ಕೊಳ್ಳೇಗಾಲದ ಚೌಡಿ, ಭೂತರಾಯ ಅಘೋಚರ ಶಕ್ತಿಯಿಂದ ಸ್ತ್ರೀ ಪುರುಷ ಪ್ರೇಮ, ದಾಂಪತ್ಯ ಸಮಸ್ಯೆ, ಶತ್ರು ದೋಷ, ಸಾಲ ಬಾಧೆ, ಯಾವುದೇ ಸಮಸ್ಯೆಗಳಿಗೆ ಮೋಡಿ ಮಾಂತ್ರಿಕ ಶಕ್ತಿಯಿಂದ ಚೌಡಿ ಮತ್ತು ಭೂತರಾಯನ ಪ್ರಯೋಗದಿಂದ ಎರಡೇ ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ವಿಳಾಸ: ಎಟಿಎಂ ಪಕ್ಕ, ಟಿಕೆಟ್ ಬುಕ್ಕಿಂಗ್ ಕೌಂಟರ್ ಹತ್ತಿರ (ರಿಲಾಯನ್ಸ್ ಮಾಲ್) (ಕೆ.ಎಸ್.ಆರ್.ಟಿ.ಸಿ) ಸಬರ್ಬ್ ಬಸ್ ಸ್ಟ್ಯಾಂಡ್, ಮೈಸೂರು-1

JOBNET
ಮೊಬೈಲ್‌ನಲ್ಲಿ ಕೆಲಸ
ಮನೆಯಲ್ಲೇ ಕುಳಿತು ಮೊಬೈಲ್ ಮೂಲಕ ಫಾರಂ ಫಿಲ್ಲಿಂಗ್ ಮಾಡಿ ಪ್ರತಿ ತಿಂಗಳಿಗೆ 10,000 ರಿಂದ 20,000 ಸಂಪಾದಿಸಿ
9731891409

ಸಂಪು ಮತ್ತು ಟ್ಯಾಂಕ್
ಕ್ಲೀನಿಂಗ್‌ಗಾಗಿ ಸಂಪರ್ಕಿಸಿ
Mob: 7204494854

ಪ್ರಸಿದ್ಧ ಕೇರಳ ಶ್ರೀ ಭಗವತಿ ಜ್ಯೋತಿಷ್ಯರು
ಪಂ|| ಕುಮಾರ್ ಪ್ರಸಾದ್ ಗುರೂಜಿ
Mob: 9731839596
ಸ್ತ್ರೀ-ಪುರುಷಪ್ರೇಮ, ಸಂತಾನ, ದಾಂಪತ್ಯ, ಸಮಸ್ಯೆ, ನಿಮ್ಮ ಯಾವುದೇ ಗುಪ್ತ, ಸಮಸ್ಯೆಗಳಿಗೆ, ಅಷ್ಟಮಂಗಳ ಪ್ರಶ್ನೆಯಿಂದ, ನೇರ ಉತ್ತರ ಹಾಗೂ ಶಾಶ್ವತ, ಪರಿಹಾರಕ್ಕಾಗಿ, ಚೋಟನೀಕರ, ಭಗವತಿ ತಾಯಿ, ರಾಜರಾಜೇಶ್ವರಿ, ಕುಟ್ಟಿಚೇತನ್, ಕೇರಳದ, ಮಾಂತ್ರಿಕ ಶಕ್ತಿಯಿಂದ, 1 ದಿನದಲ್ಲಿ ಪರಿಹಾರ ಮಾಡಿಕೊಡುತ್ತಾರೆ.
ಖಾಯಂ ಮನೆ ವಿಳಾಸ: ಲಕ್ಷ್ಮಿ ನಿವಾಸ ನಂ.19/D2, ಬುದ್ಧ ಮಾರ್ಗ, ಹೋಟೆಲ್ ದೋಸೆ ಕಾರ್ನರ್ ಪಕ್ಕ, ಹೊಸ DC ಆಫೀಸ್ ಎದುರು, ಸಿದ್ಧಾರ್ಥ ಲೇಔಟ್, ಮೈಸೂರು

ಬೇಕಾಗಿದ್ದಾರೆ
ಕುರುಬ ಜಾತಿಯ ಮಹಿಳೆ ಅಡುಗೆ ಮಾಡಲು ಮತ್ತು ಮನೆ ಕೆಲಸ ಮಾಡಲು ಪೂರ್ಣ ಸಮಯ, ಸರಸ್ವತಿಪುರಂ, ಅಕ್ಷಯ ಭಂಡಾರ ಹತ್ತಿರ. ಸಂಪರ್ಕಿಸಿ:
ಮೊ: 9738825249

ತಕ್ಷಣ ಬೇಕಾಗಿದ್ದಾರೆ
ಸೆಕ್ಯೂರಿಟಿ ಗಾರ್ಡ್ ಸೆಕ್ಯೂರಿಟಿ ಸೂಪರ್ ವೈಸರ್ ಫೀಲ್ಡ್ ಆಫೀಸರ್ ಮಾರ್ಕೆಟಿಂಗ್ ಮ್ಯಾನೇಜರ್ ಬೇಕಾಗಿದ್ದಾರೆ. ಮೊದಲು ಬಂದವರಿಗೆ ಆದ್ಯತೆ ಊಟ ವಸತಿ ಸೌಲಭ್ಯ ಇರುತ್ತದೆ
8951661568
9632049421

WANTED IMMEDIATELY
RRR MEDIA
Computer Operator Tele callers, Receptionist Graphic designer
Location: Agrahara, MYSORE
9738591367

ಬೇಕಾಗಿದ್ದಾರೆ
ನಂಜನಗೂಡು ಕೈಗಾರಿಕಾ ಪ್ರದೇಶದಲ್ಲಿ ಕೆಲಸ ಮಾಡಲು ಗಾರ್ಡನ್ ಸೂಪರ್‌ವೈಸರ್‌ಗಳು, ಹೌಸ್‌ಕೀಪಿಂಗ್‌ಗಳು ಬೇಕಾಗಿದ್ದಾರೆ. ಆಕರ್ಷಕ ಸಂಬಳದೊಂದಿಗೆ ESI / PF ಸೌಲಭ್ಯವಿರುತ್ತದೆ.
9606908376, 9606970941

Receptionist / Supervisor
WANTED FOR A DELUXE LODGE
63621 34879
Hotel Dewans Residency, Dewans Road (Opp. Hotel Shringar), Devaraja Mohalla, Mysore-1

Corner Site for Sale
40x60 MUDA Approved, S/E Corner & N/E Corner, Parashurama Nagara, Bannur Road, Mysore.
BALAJI PROPERTIES
8105819378, 6366219378

ಪ್ರಮಾಣ ಪತ್ರ
ಮೈಸೂರು ಜಿಲ್ಲೆ, ಟಿ. ನರಸೀಪುರ ತಾಲ್ಲೂಕು, ರಂಗಸಮುದ್ರ ಪೋಸ್ಟ್, ರಂಗನಾಥಪುರ ಗ್ರಾಮದಲ್ಲಿ ವಾಸವಾಗಿರುವ ಸುಂದ್ರಮ್ಮ (Sundramma) (ಆಧಾರ್ ಕಾರ್ಡ್ ನಂ. 6082 9515 5436) ಪ್ರಮಾಣೀಕರಿಸುವುದೇನೆಂದರೆ, ಪ್ಯಾನ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ಪಡಿತರ ಚೀಟಿ, ಆಧಾರ್ ಕಾರ್ಡ್ ಮತ್ತು ದಾಖಲಾತಿಗಳಲ್ಲಿ ಸುಂದ್ರಮ್ಮ ಎಂದು ನಮೂದಾಗಿರುತ್ತದೆ. ಆದರೆ ನಾನು ಕೆಲಸ ಮಾಡುತ್ತಿರುವ ಮೈಸೂರಿನಲ್ಲಿರುವ ದುರ್ಗಾಂಭ ಎಂಟರ್‌ಪ್ರೈಸಸ್ ಎಂಬ ಹೆಸರಿನಲ್ಲಿ ಪ್ರಾರಂಭಿಸಿದ್ದ ಪ್ರಸ್ತುತ ಸೌಂದರ್ಯ ಎಂಟರ್ ಪ್ರೈಸಸ್, ಮೈಸೂರು ಎಂದು ಬದಲಾಗಿರುವ ಸಂಸ್ಥೆಯ ದಾಖಲಾತಿಗಳಲ್ಲಿ ಮತ್ತು ಪಿಎಫ್ ಕಛೇರಿಯಲ್ಲಿ ನನ್ನ ಹೆಸರು ಮಮತ (Mamatha) ಎಂದು ನಮೂದಾಗಿರುತ್ತದೆ. ಮೇಲ್ಕಂಡ ಸುಂದ್ರಮ್ಮ ಮತ್ತು ಮಮತ ಎರಡೂ ಹೆಸರುಗಳು ನನ್ನದೇ ಆಗಿರುತ್ತದೆ ಎಂದು ನೋಟರಿ ಮಣಿಮಾಲಾ ಎಸ್.ಎಸ್.ರವರು ಎದುರು ಪ್ರಮಾಣೀಕರಿಸುತ್ತೇನೆ.
ಸಹಿ/- ಸುಂದ್ರಮ್ಮ

40x60 Site For Sale
Somanath Nagar (Dattagalli Attach)
9880273834

ಮನೆ ಬಾಡಿಗೆಗೆ ಇದೆ
ಶ್ರೀರಾಂಪುರ ರಿಂಗ್ ರಸ್ತೆ ಯುನಿವರ್ಸಿಟಿ ಬಡಾವಣೆ ಎದುರು ಗಾಯಿತ್ರಿ ಬಡಾವಣೆಯಲ್ಲಿ 1ನೇ ಮಹಡಿ, 2 BHK 2ನೇ ಮಹಡಿ 1BHK, ಬಾಡಿಗೆಗೆ ಇದೆ
9108946647
9448092818

ಬೇಕಾಗಿದ್ದಾರೆ
ಮೈಸೂರು ವಧುವರರ ವೇದಿಕೆ ಮತ್ತು ರಿಯಲ್ ಎಸ್ಟೇಟ್ ಕಛೇರಿಯಲ್ಲಿ ಕೆಲಸ ಮಾಡಲು ಮಹಿಳಾ ಸಹಾಯಕಿ ಬೇಕಾಗಿದ್ದಾರೆ. ವಿದ್ಯಾರ್ಹತೆ SSLC
ಸಂಪರ್ಕಿಸಿ:
8861042449

ಮೊಬೈಲ್‌ನಲ್ಲಿ ಕೆಲಸ ವಾರದ ಸಂಬಳ
NO TARGET, TYPING WORK
ತಿಂಗಳಿಗೆ ರೂ.10,000 ರಿಂದ ರೂ.25,000 ಗಳಿಸಬಹುದು.
8884439666

ಕೂಡಲೇ ಬೇಕಾಗಿದ್ದಾರೆ
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಹುಡುಗಿಯರು ಬೇಕಾಗಿದ್ದಾರೆ.
ಸಂಪರ್ಕಿಸಿ:
ಶ್ರೀ ಭಗವಾನ್ ಸಿಲ್ಕ್ಸ
ಕೆ.ಆರ್.ಸರ್ಕಲ್, ಮೈಸೂರು

FOR SALE
1. Properties at Kuvempu Nagar Starting @ 45L
2. 20x30 Site @Vijaya Nagar 4th stg
3. 14x100 Old Hs @ Ramavilas Rd
4. Old Hs @ Krishnamurthy Puram
5. Properties For Sale at Vidyaranyapuram
6. 20x30 Site Near SBM Lyt, Bogadhi
7. Ready to Move Apartments @ Hebbal
8. 100x100 Farm House @ KRS Back Water Attach 20L
PRAKRUTHI PROPERTIES
95386 90359, 90359 90359

ಬೇಕಾಗಿದ್ದಾರೆ
ಬಸ್ ಡ್ರೈವರ್
ಹೆವಿ ಡ್ರೈವಿಂಗ್ ಲೈಸೆನ್ಸ್ ಹೊಂದಿರುವ ಹಾಗೂ ಅನುಭವವುಳ್ಳ ಚಾಲಕರು ಬೇಕಾಗಿದ್ದಾರೆ.
ಸ್ಥಳ: ತಿರುಮಲ ಪಬ್ಲಿಕ್ ಸ್ಕೂಲ್, ಸರ್ದಾರ್ ವಲ್ಲಭಾಯ್ ಪಟೇಲ್ ನಗರ, ಮೈಸೂರು
9148102123

ತಿಂಗಳಿಗೆ 25000/-ಲಾಭ
ಉತ್ತಮವಾಗಿ ನಡೆಯುತ್ತಿರುವ ಬಿಜಿನೆಸ್ 2ನೇ ಬ್ರಾಂಚ್ ತೆರೆಯಲು ಬಂಡವಾಳ ಹಾಕುವವರು ಬೇಕಾಗಿದ್ದಾರೆ. ಮೊದಲು ಬಂದವರಿಗೆ ಆದ್ಯತೆ
9741098837

ಕೆಲಸಕ್ಕೆ ಬೇಕಾಗಿದ್ದಾರೆ
ಕಬಾಬ್ ಅಂಗಡಿಗೆ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ
ಸ್ಥಳ: ಮೈಸೂರು
7019905079
8618396601

ಬಾಡಿಗೆಗೆ
2BHK Solar
ಗಣೇಶ್ ನಗರ, (ಎನ್.ಆರ್.ಮೊಹಲ್ಲಾ)
9731930520

ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ
ವಿದ್ಯಾರ್ಹತೆ 7th, 10th, PUC, ITI, Diploma, Any Degree Pass or Fail
ಸಂಬಳ: 18000 - 30000/-
ಪುರುಷ ಅಭ್ಯರ್ಥಿಗಳಿಗೆ ಮತ್ತು ಅವಕಾಶ ವಯಸ್ಸು 35 ವರ್ಷ ಒಳಗಡೆ
9880151303

ಡ್ರೈವರ್‌ಗಳು ಬೇಕಾಗಿದ್ದಾರೆ
ಗೂಡ್ಸ್ ವಾಹನಕ್ಕೆ ಡ್ರೈವರ್‌ಗಳು ಬೇಕಾಗಿದ್ದಾರೆ. ವಸತಿ ಸೌಲಭ್ಯವಿದೆ.
ಸಂಬಳ: 15,000/- ರೂ.ಗಳು ಮತ್ತು ಸಹಾಯಕರು ಬೇಕಾಗಿದ್ದಾರೆ ಪ್ರತ್ಯೇಕ ಭತ್ಯೆ
8884179981

ತಕ್ಷಣ ಬೇಕಾಗಿದ್ದಾರೆ
ದತ್ತನಗರ ಮತ್ತು ಗಣಪತಿ ಆಶ್ರಮ ಏರಿಯಾದಲ್ಲಿ ಕೆಲಸ ಮಾಡಲು ಸೆಕ್ಯೂರಿಟಿ ಗಾರ್ಡ್‌ಗಳು ಬೇಕಾಗಿದ್ದಾರೆ.
ವಿದ್ಯಾರ್ಹತೆ: SSLC ಮತ್ತು ಮೇಲ್ಪಟ್ಟು
ಸಂಬಳ: ಆಕರ್ಷಕವಾಗಿರುತ್ತದೆ.
ಊಟ ತಿಂಡಿ ಸೌಲಭ್ಯವಿರುತ್ತದೆ.
9620667819
9620777819

ಬೇಕಾಗಿದ್ದಾರೆ
1) ಅನುಭವವುಳ್ಳ ಇಬ್ಬರು ಅರ್ಚಕರು ಬೇಕಾಗಿದ್ದಾರೆ.
2) ದೇವಸ್ಥಾನದ ಕಛೇರಿ ಕೆಲಸಕ್ಕೆ ಅನುಭವವುಳ್ಳ ಒಬ್ಬರು ಗುಮಾಸ್ತರು ಬೇಕಾಗಿದ್ದಾರೆ.
ಸಂಪರ್ಕಿಸಬೇಕಾದ ವಿಳಾಸ:
ಶ್ರೀ ಚಾಮುಂಡೇಶ್ವರಿ ಅಮ್ಮನವರ ದೇವಸ್ಥಾನ ಚಾಮುಂಡಿ ವನಂ, ವಿದ್ಯಾರಣ್ಯಪುರಂ, ಮೈಸೂರು-8
9448053321

SITE FOR SALE
30x50 S/F Brahmananda Sagara phase-1
8050821108

ಜಮೀನು ಮಾರಾಟಕ್ಕಿದೆ
ಹುಣಸೂರು ತಾಲ್ಲೂಕು ಗಾವಡಗೆರೆ ಹೋಬಳಿ ಮುಳ್ಳೂರು ಗ್ರಾಮ 5 ಎಕರೆ 20 ಕುಂಟೆ ಒಂದೆ ಸಮತಟ್ಟಾದ ಭೂಮಿ ಹಾಗೂ ಈ ಜಮೀನು ಗ್ರಾಮಕ್ಕೆ ಹೊಂದಿಕೊಂಡಂತೆ ಇದೆ. ನಿಮಗೆ ಆಸಕ್ತಿ ಇದ್ದರೆ ಸಂಪರ್ಕಿಸಿ:
9945031435
6360689685

LAND FOR SALE
38.5 Gunta Land for Sale Near Kaveri Hospital Opp. to Sri Chaitanya School Bannur main Road, Call Interested Buyers Only.
9739474724
8762204610

ಬೇಕಾಗಿದ್ದಾರೆ
ಮೈಸೂರಿನ ಮೇಟಗಳ್ಳಿ ಮತ್ತು ಹೆಬ್ಬಾಳು ಕೈಗಾರಿಕ ಪ್ರದೇಶದಲ್ಲಿರುವ ಪ್ರತಿಷ್ಠಿತ ಕಾರ್ಖಾನೆಗಳಿಗೆ ಹುಡುಗರು ಬೇಕಾಗಿದ್ದಾರೆ.
ವಯಸ್ಸು: 18 ರಿಂದ 35 ವರ್ಷ
ವಿದ್ಯಾರ್ಹತೆ: 7 ರಿಂದ PUC ಮತ್ತು ITI
ರಿಯಾಯಿತಿ ದರದಲ್ಲಿ ಊಟ ಮತ್ತು ವಸತಿ ಸೌಲಭ್ಯವಿರುತ್ತದೆ.
8277047300

ಬೇಕಾಗಿದ್ದಾರೆ
ಕಂಪ್ಯೂಟರ್ ಅಂಗಡಿಯಲ್ಲಿ Online Application ಹಾಕಲು ಬೇಕಾಗಿದ್ದಾರೆ.
ಸಂಬಳ: 10,000/-
ಸಮಯ: 9am to 5.30
ಸ್ಥಳ: ಮೈಸೂರು
9480918242

ಸೈಟು ಮಾರಾಟಕ್ಕಿದೆ
20x40 N/F Opp Park
ಬಸವ ನಿವಾಸ ಬಡಾವಣೆ ಚಿಕ್ಕನಹಳ್ಳಿ ರಸ್ತೆ ಇಲವಾಲ
9448958332

WANTED IMMEDIATELY
female receptionist therapist and beautician with good looking experience or fresher immediately appointment Salary up to 15000
7090655790
7019911976

WANTED
A reputed ladge in the heart of the city is looking for a receptionist role, those having previous experience & freshers also can apply (Having computer & hotel Industry knowlede prefered
9663747452
9663427888

RRR
ಆರ್.ಆರ್.ಆರ್.ಎಸ್ಟೇಟ್
ಬನ್ನೂರು ರಸ್ತೆ, ಟಿ.ನರಸೀಪುರ ರಸ್ತೆ ಲಲಿತಾದ್ರಿಪುರ ರಿಂಗ್ ರಸ್ತೆ ಸುತ್ತ ಮುತ್ತಲು ನಿವೇಶನ ಮನೆ ಮಾರಾಟ ಮಾಡಲು ಹಾಗೂ ಕೊಳ್ಳಲು
90355-65773

SHOP SPACE FOR RENT
At Vijayanagar 2nd Stage Prime Location, 8x14 sq
Rent Rs. 10,000/- advance 5 Months
9741584156

LOOKING FOR
worker who works in hotel, he / she may be experienced worker works in full time.. Job position-south indian Cheff,North indian Cheff, Roti maker, Helpers, table service Qualifications-10th or PUC Address- Vijaya nagar 1st stage, Near Chandrakala Hospital, KD road, Mysore
Channappa : 9945540882
Sanjay TC : 9718515635

ಕೇರಳ ಪ್ರವಾಸ
ಹೊರಡುವ ದಿನಾಂಕ: 05 October 2024 (04 ದಿನಗಳು) ಒಬ್ಬರಿಗೆ 8000/- ರೂಪಾಯಿಗಳು ಮಾತ್ರ
ತಮಿಳುನಾಡು ಪ್ರವಾಸ
ಹೊರಡುವ ದಿನಾಂಕ: 15 November 2024 (06 ದಿನಗಳು) ಒಬ್ಬರಿಗೆ 15500/- ರೂಪಾಯಿಗಳು ಮತ್ರ
ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ:
7022271023

28x40 S/W ಕಾರ್ನರ್
DTCP 'A' ಖಾತೆ (Rera Approved)
ಸೈಟು ಮಾರಾಟಕ್ಕಿದೆ
15 ಲಕ್ಷದ 25 ಸಾವಿರಗಳು
GSS ಲೇಔಟ್ TVS ಫ್ಯಾಕ್ಟರಿ ಹತ್ತಿರ ಮೈಸೂರು
9972557534

ವಧು-ವರರಿಗೆ ಸಂಪರ್ಕಿಸಿ
ಒಕ್ಕಲಿಗ, ಕುರುಬ, ಲಿಂಗಾಯತ, ನಾಯಕ ಎಲ್ಲಾ ಜಾತಿಯ ವಧು-ವರರು, ವಿಚ್ಛೇದಿತರು ವಿಧವಾ-ವಿಧವೆಯರು
ಸಂಪರ್ಕಿಸಿ:
9980273659
9731066259

ಮರು ಮದುವೆ
ಗೋಕುಲ ಮ್ಯಾಟ್ರಿಮೆನಿಯಲ್ ಸರ್ವಿಸಸ್ ವತಿಯಿಂದ ಒಕ್ಕಲಿಗ ಗೌಡ, ವೀರಶೈವ ಲಿಂಗಾಯತ, ಹಾಲು ಮತ ಕುರುಬ ಜನಾಂಗದ ವಿಧವೆ/ವಿದುರ ವಿಚ್ಛೇದಿತರಿಗೆ ಮಾತ್ರ, ನೋಂದಾಣಿಗೆ ಸಂಪರ್ಕಿಸಿ:
ಕುವೆಂಪುನಗರ & ರಾಮಸ್ವಾಮಿಸರ್ಕಲ್
9591163666
8951275148,8371414184

ಬೇಕಾಗಿದ್ದಾರೆ
ಮೈಸೂರಿನ ಕಾಳಿದಾಸ ರಸ್ತೆ - ಜಯಲಕ್ಷ್ಮೀಪುರಂದಲ್ಲಿ ಇರುವ ಶುದ್ಧ ಸಸ್ಯಾಹಾರಿ ಹೋಟೆಲ್‌ಗೆ ಅನುಭವ ಇರುವ ಕೌಂಟರ್ -ಪ್ಯಾಕಿಂಗ್ (Parcel packing Boys) - 2, ಸರ್ವಿಸ್ (supplier) - 2, ಸೌತ್ ಷೆಫ್ ಭಟ್ಟ (South Chef) - 1, ಸೌತ್ ಕಿಚನ್ allrounder (South Assistant) - 1, ನಾರ್ತ್ ಭಟ್ಟಗೆ ಸಹಾಯಕ (North Assistant) - 1, ಚಾಟ್ ಮಾಸ್ಟರ್ (Chat Master) 1, ಕೆಲಸಕ್ಕೆ ಬೇಕಾಗಿದ್ದಾರೆ. ಉತ್ತಮ ಸಂಬಳ, ಊಟ ಮತ್ತು ವಸತಿ ಸೌಲಭ್ಯ ಇದೆ.
7899028086

ಬೇಕಾಗಿದ್ದಾರೆ
ಧೃಡಕಾಯದ ಪುರುಷ (ನಿವೃತ್ತಿ ಹೊಂದಿರುವವರು) ಕಂಪ್ಯೂಟರ್ ಬಲ್ಲ ಹುಡುಗಿಯರು
ಚೇತನ್ ಬುಕ್ ಹೌಸ್ ಮೈಸೂರು

HIRING IMMEDIATELY
SAPTHAGIRI SERVICES, MYSORE
MALE CANDIDATES WITH COMPUTER KNOWLEDGE
SALARY - 12,000-20,000/-
AGE BELOW 30 YEARS
9880151303

ಇಂದೇ ಸಂಪರ್ಕಿಸಿ
ಮೈಸೂರಿನ ಪ್ರಸಿದ್ಧ ಆಫೀಸ್ ಮತ್ತು ಶೋರೂಂ & ಕಂಪನಿಗಳಿಗೆ 7th, 10th, PUC, ITI, Diploma, Pass/Fail ಆದಯುವಕ / ಯುವಕರು Packing, Helper, Telecalling Data Entry Receptionist, Line Incharge, Billing ಮುಂತಾದ ಕೆಲಸಗಳಿಗೆ ಬೇಕಾಗಿದ್ದಾರೆ. ಷರತ್ತು ಅನ್ವಯ ಸಂಬಳ: 14500/-39000/- (ESI+PF OT) ಸೇರಿ
9164052361
9740463212

ಅರ್ಚಕರು ಬೇಕಾಗಿದ್ದಾರೆ
ಮೈಸೂರಿನ ಗೋಕುಲಂ 1ನೇ ಹಂತದಲ್ಲಿರುವ ಶ್ರೀ ಶನೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಪೂಜಾ ವಿಧಿಗಳನ್ನು ಸಲ್ಲಿಸಲು 5 ರಿಂದ 6 ವರ್ಷಗಳ ಅನುಭವವಿರುವ 50 ವರ್ಷ ಮೇಲ್ಪಟ್ಟ ಅವಿವಾಹಿತ ಅಯ್ಯಂಗಾರ ಅಥವಾ ಬ್ರಾಹ್ಮಣ ಅರ್ಚಕರು ಸಂಬಳ:6500/- ರೂಪಾಯಿಗಳು ಮತ್ತು ಉಚಿತ ವಸತಿ ಸೌಲಭ್ಯ
9916312261

ಸೈಟು ಬೇಕಾಗಿದೆ
20x30 E/N Face
ವಿಜಯನಗರ 4ನೇ ಹಂತ, 2ನೇ ಫೇಸ್.
ಮಾರಾಟ ಮಾಡುವ Owner ಕರೆಮಾಡಿ.
Mob: 9448958332

ಮೈಸೂರು ಮಿತ್ರ 45 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮೈಸೂರು ಮಿತ್ರ

ಮಕ್ಕಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಿ

ಸಾಹಿತಿ ಮಹದೇವಸ್ವಾಮಿ



ಮಲ್ಲುಂಡಿ ಸರ್ಕಾರಿ ಶಾಲೆಯಲ್ಲಿ ಪ್ರತಿಭಾ ಕಾರಂಜಿ ಕಾರ್ಯಕ್ರಮ ನಡೆಯಿತು.

ಮಲ್ಲುಂಡಿ, ಸೆ.18– ಮಕ್ಕಳಲ್ಲಿ ಅಡಗಿರುವ ಪ್ರತಿಭೆಯನ್ನು ಗುರುತಿಸುವುದು ಶಿಕ್ಷಕರ ಕರ್ತವ್ಯ ಎಂದು ಸಾಹಿತಿ ಮಹದೇವಸ್ವಾಮಿ ಹೇಳಿದರು.

ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಆಯೋಜಿಸಿದ್ದ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಪಠ್ಯೇತರ ಚಟುವಟಿಕೆಗಳಿಗೂ ಶಾಲೆಗಳಲ್ಲಿ ಆದ್ಯತೆ ನೀಡಬೇಕು. ಇದರಿಂದ ಮಕ್ಕಳಲ್ಲಿನ ಪ್ರತಿಭೆ ಹೊರ ಬರಲು ಸಾಧ್ಯ. ಅವುಗಳನ್ನು ಗುರುತಿಸಿ ಪ್ರೋತ್ಸಾಹಿಸಬೇಕು ಇದಕ್ಕೆ ಪೋಷಕರು ಶಿಕ್ಷಕರು ಆಸಕ್ತಿ ವಹಿಸಬೇಕು ಎಂದರು.

ಇದರಿಂದ ಮಕ್ಕಳ ಉನ್ನತ ಮಟ್ಟದ ಸಾಧನೆ ಸಾಧ್ಯ. ಪ್ರತಿಯೊಂದು ಮಗುವಿನಲ್ಲೂ ಒಂದಲ್ಲ ಒಂದು ಸಾಂಸ್ಕೃತಿಕ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಅನಾವರಣ ಮಾಡುವ ಮೂಲಕ ಮಕ್ಕಳು ಸರ್ವಾಂಗೀಣ ಬೆಳವಣಿಗೆ ಸಾಧಿಸಲು ಅವಕಾಶ ಕಲ್ಪಿಸಬೇಕು. ಸೋಲು ಗೆಲುವಿನ ಬಗ್ಗೆ ಯೋಚಿಸದೆ ಸ್ಪರ್ಧೆಗಳಲ್ಲಿ ಎಲ್ಲಾ ವಿದ್ಯಾರ್ಥಿಗಳು ಭಾಗವಹಿಸಬೇಕು ಎಂದರು.

ತಾಪಂ ಮಾಜಿ ಸದಸ್ಯ ಎಸ್.ಬಸವರಾಜ್ ಮಾತನಾಡಿ, ಗ್ರಾಮೀಣ ಭಾಗದ ಮಕ್ಕಳು ತಮ್ಮ ಪ್ರತಿಭೆಯನ್ನು ಹೊರ ಹಾಕಲು ಇಂತಹ ವೇದಿಕೆ ಬಹಳ ಮುಖ್ಯ. ಪ್ರತಿಯೊಬ್ಬ ವಿದ್ಯಾರ್ಥಿ ಎಲ್ಲಾ ಕಾರ್ಯಕ್ರಮದಲ್ಲೂ ಭಾಗವಹಿಸಬೇಕು. ಸೋಲು–ಗೆಲುವನ್ನು ಲೆಕ್ಕಿಸದೆ ಸೋಲನ್ನೇ ಗೆಲುವು ಎಂದು ಸ್ವೀಕರಿಸಿ ಭಾಗವಹಿಸುವ ಮೂಲಕ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತರುವ ಮೂಲಕ ವಿದ್ಯಾರ್ಥಿಗಳು ಮುಂದೆ ಬರಬೇಕು ಎಂದು ಸಲಹೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಹೇಶ್, ಶಿಕ್ಷಕರ ಸಂಘದ ಅಧ್ಯಕ್ಷ ಧರ್ಮರತ್ನಕರ, ರಮೇಶ್, ಪುಟ್ಟರಾಜು, ರಂಗನಾಥ್, ಮುಖಂಡರುಗಳಾದ ಎಂ.ಪುಟ್ಟಸ್ವಾಮಿ, ಗುರುಮಲ್ಲಪ್ಪ, ಸಣ್ಣಮಾದಪ್ಪ, ಎಂ.ವಿ.ಶಿವಕುಮಾರ್, ಎಂ.ಎನ್.ಸತೀಶ್, ದಸಂಸ ಮುಖಂಡ ಕೃಷ್ಣ ಎಂ.ಸಿ. ರಮೇಶ್, ಪುಟ್ಟಬುದ್ಧಿ, ಹುರ ಗಾಯಿತ್ರಿ ವಿದ್ಯಾಸಂಸ್ಥೆಯ ಕಾರ್ಯದರ್ಶಿ ನಟರಾಜ್, ಗ್ರಾಪಂ ಅಧ್ಯಕ್ಷೆ ದೇವಮ್ಮ, ಎಸ್‌ಡಿಎಂಸಿ ಅಧ್ಯಕ್ಷ ಶಿವಮೂರ್ತಿ, ಮುಖ್ಯ ಶಿಕ್ಷಕ ಸೋಮು ಸೇರಿದಂತೆ ಪ್ರಮುಖರು ಹಾಜರಿದ್ದರು.

20 ಕೋಟಿ ವೆಚ್ಚದಲ್ಲಿ ಹುರಾ ಮುಖ್ಯರಸ್ತೆ ಅಭಿವೃದ್ಧಿ

ಶಾಸಕ ದರ್ಶನ್ ಧ್ರುವನಾರಾಯಣ್ ಅವರಿಂದ ಗುದ್ದಲಿಪೂಜೆ



ಮುಖ್ಯ ರಸ್ತೆಯ ಅಭಿವೃದ್ಧಿಗೆ ಶಾಸಕ ದರ್ಶನ್ ಗುದ್ದಲಿಪೂಜೆ ಮಾಡಿದರು.

ನಂಜನಗೂಡು, ಸೆ.18– 20 ಕೋಟಿ ರೂ ವೆಚ್ಚದಲ್ಲಿ ಹುಲ್ಲಹಳ್ಳಿಯಿಂದ ಮಾದಾಪುರ, ಕಾರ್ಯ ಮಾರ್ಗವಾಗಿ ಹುರಾಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯ ಅಭಿವೃದ್ಧಿಗೆ ಗುದ್ದಲಿಪೂಜೆ ನೆರವೇರಿಸಲಾಗಿದ್ದು, ಶೀಘ್ರದಲ್ಲಿ ರಸ್ತೆ ಕಾಮಗಾರಿ ಮುಕ್ತಾಯಗೊಂಡು ಸಾರ್ವಜನಿಕರಿಗೆ ಉಪಯೋಗವಾಗಲಿದೆ ಎಂದು ಶಾಸಕ ದರ್ಶನ್‌ಧ್ರುವನಾರಾಯಣ್ ಹೇಳಿದರು.

ಹುಲ್ಲಹಳ್ಳಿ ಗ್ರಾಮದಲ್ಲಿ 20 ಕೋಟಿ ವೆಚ್ಚದಲ್ಲಿ ಹುರಾ ಮುಖ್ಯ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು. ಹುರಾ ಗ್ರಾಮದ ಮುಖ್ಯರಸ್ತೆ ಹುಲ್ಲಹಳ್ಳಿಯಿಂದ ಮಾದಾಪುರ, ಕಾರ್ಯ ಗ್ರಾಮದ ಬಳಿ ಸಂಪೂರ್ಣ ಹಾಳಾಗಿತ್ತು. ಇದರಿಂದ ವಾಹನ ಸವಾರರಿಗೆ ತೊಂದರೆಯುಂಟಾಗಿತ್ತು. ಈ ರಸ್ತೆ ಅಭಿವೃದ್ಧಿಪಡಿಸುವಂತೆ ಸಾರ್ವಜನಿಕ ಕೂಗು ಕೇಳಿ ಬಂದಿದ್ದು, ರಸ್ತೆ ಅಭಿವೃದ್ಧಿಪಡಿಸುವುದು ಅನಿವಾರ್ಯವಾಗಿತ್ತು. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಮನವರಿಕೆ ಮಾಡಿದ್ದರಿಂದಾಗಿ 20 ಕೋಟಿ ಅನುದಾನ ನೀಡಿದ್ದಾರೆ. ಇದರಿಂದ ದುಗ್ಗಹಳ್ಳಿ ಗೇಟ್‌ವರೆಗೆ ಸುಮಾರು 6 ಕಿಮೀ ಉದ್ದದವರೆಗೆ ರಸ್ತೆ ಅಭಿವೃದ್ಧಿಪಡಿಸಲಾಗುವುದು ಎಂದರು.

ಸಿದ್ದಾಮಯ್ಯ ಆಶೀರ್ವಾದದಿಂದ ಕ್ಷೇತ್ರಕ್ಕೆ 150 ಕೋಟಿ ಅನುದಾನ: ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕ್ಷೇತ್ರದಲ್ಲಿ ಯಾವ ಅಭಿವೃದ್ಧಿ ಕೆಲಸಗಳೂ ಕೂಡ ನಡೆಯುತ್ತಿಲ್ಲ ಎಂದು ವಿಪಕ್ಷದವರು ಟೀಕೆ ಮಾಡುತ್ತಿದ್ದಾರೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಆಶೀರ್ವಾದದಿಂದ 1 ವರ್ಷದಲ್ಲಿ 150 ಕೋಟಿಗೂ ಹೆಚ್ಚಿನ ಅನುದಾನವನ್ನು ಕ್ಷೇತ್ರಕ್ಕೆ ತಂದಿದ್ದೇನೆ. ಸುಮಾರು 90 ಕೋಟಿ ವೆಚ್ಚದಲ್ಲಿ ದೇವನೂರು ಏತ ನೀರಾವರಿ ಯೋಜನೆ ಮೂಲಕ ಕೆರೆ ತುಂಬಿಸಲಾಗುವುದು. ಎಪಿಎಂಸಿ ಅಭಿವೃದ್ಧಿಗೆ 3 ಕೋಟಿ, ಸಣ್ಣ ನೀರಾವರಿ ಯೋಜನೆಯಡಿ ಹುಲ್ಲಹಳ್ಳಿ ಮತ್ತು ನಂಜನಗೂಡಿನಲ್ಲಿ ತಡೆಗೋಡೆ ನಿರ್ಮಾಣಕ್ಕೆ 5 ಕೋಟಿ, 3 ಕೋಟಿ ವೆಚ್ಚದಲ್ಲಿ ನೀರಾವರಿ ಯೋಜನೆ ಕಾಮಗಾರಿ ಅಲ್ಲದೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ 25 ಕೋಟಿ ಬಿಡುಗಡೆಯಾಗಿದ್ದು, ಈ ಅನುದಾನದಲ್ಲಿ ವಿವಿಧ ಗ್ರಾಮಗಳಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿಗೆ ಮೀಸಲಿಡಲಾಗಿದೆ ಎಂದರು.

63 ಕೋಟಿ ವೆಚ್ಚದಲ್ಲಿ ಬದನವಾಳು ಬಳಿಯಿರುವ ಖಾದಿ ಮತ್ತು ಗ್ರಾಮೋದ್ಯೋಗ ಕೇಂದ್ರದ ಅಭಿವೃದ್ಧಿಗೆ ಬಜೆಟ್‌ನಲ್ಲಿ ಘೋಷಣೆಯಾಗಿದೆ. ಇದಲ್ಲದೆ ಸುಮಾರು 30 ಕೋಟಿ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿಗೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಲಾಗಿದೆ. 2017ರಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಘೋಷಣೆಯಾಗಿದ್ದ ಹುರಾ ಕೆರೆ ತುಂಬಿಸುವ ಯೋಜನೆ ನಿಂತು ಹೋಗಿತ್ತು. ಕೆಲವೇ ತಿಂಗಳುಗಳಲ್ಲಿ ಮತ್ತೆ ಕಾಮಗಾರಿ ಆರಂಭವಾಗಲಿದ್ದು, ನನ್ನ ತಂದೆ ಆರ್.ಧ್ರುವನಾರಾಯಣ್ ಅವರಿಗೆ ಅಭಿವೃದ್ಧಿಯೇ ಮಾನದಂಡವಾಗಿತ್ತು. ನಾನು ಕೂಡ ಅವರ ಹಾದಿಯಲ್ಲೇ ಸಾಗುತ್ತೇನೆ ಎಂದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕುರಹಟ್ಟಿ ಮಹೇಶ್, ಹುಲ್ಲಹಳ್ಳಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶ್ರೀಕಂಠನಾಯಕ, ನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸಿ.ಎಂ.ಶಂಕರ್, ಜಿಪಂ ಮಾಜಿ ಸದಸ್ಯ ಕೆ.ಮಾರುತಿ, ಗ್ರಾಪಂ ಅಧ್ಯಕ್ಷೆ ರೇವಮ್ಮ, ಸದಸ್ಯರಾದ ಅನ್ಸರ್ ಅಹಮದ್, ಮುಖಂಡರಾದ ಎಂ. ಮಾದಪ್ಪ, ಶಿವ ನಾಗಪ್ಪ, ಅಭಿನಂದನ್ ಪಟೇಲ್, ಮಡಿಕೆ ಹುಂಡಿ ಶಿವಣ್ಣ, ಲೋಕೋಪಯೋಗಿ ಇಲಾಖೆ ಎಇಇ ಸತ್ಯನಾರಾಯಣ, ಎಇ ಬಸವ ರಾಜು, ಮಾರ್ಕಂಡೇಯ, ರೇವಣ್ಣ ಸೇರಿ ದಂತೆ ಹಲವಾರು ಪ್ರಮುಖರು ಇದ್ದರು.

ಸ್ವಂತ ಖರ್ಚಿನಲ್ಲಿ ರಸ್ತೆ ರಿಪೇರಿ ಮಾಡಿಸಿದ ವಿಶ್ವಕರ್ಮ ಸಮಾಜದ ಮುಖಂಡ

ನಂಜನಗೂಡು, ಸೆ.18– ನಗರದ ನಂಜನಗೂಡು –ಹುಲ್ಲಹಳ್ಳಿ ಹೆದ್ದಾರಿಯಲ್ಲಿ ಹಳ್ಳ ಬಿದ್ದು ಹಾಳಾಗಿದ್ದ ರಸ್ತೆಯನ್ನು ವಿಶ್ವಕರ್ಮ ನಿಗಮ ಮಾಜಿ ಅಧ್ಯಕ್ಷ ನಂದಕುಮಾರ್ ತಮ್ಮ ಸ್ವಂತ ಖರ್ಚಿನಲ್ಲಿ ರಿಪೇರಿ ಕಾರ್ಯ ನಡೆಸುವ ಮೂಲಕ ರಾಜಕಾರಣಿಗಳು, ಗಣ್ಯರಿಗೆ ಮಾದರಿಯಾದರು.



ರಸ್ತೆಯಲ್ಲಿ ಹಾದು ಹೋಗಿರುವ ನೀರಿನ ಪೈಪ್ ಲೈನ್ ಒಡೆದು ಹಾಳಾಗಿ, ರಸ್ತೆ ಗುಂಡಿ ಬಿದ್ದು ವಾಹನ ಸಂಚಾರಕ್ಕೆ ಅಡ್ಡಿಯಾಗಿತ್ತು, ಅಲ್ಲದೆ ಹಲವಾರು ಬೈಕ್ ಸವಾರರೂ ಕೂಡ ಬಿದ್ದು ಗಾಯ ಗೊಂಡಿದ್ದರು. ಇದರಿಂದ ರಸ್ತೆಯ ಅರ್ಧ ಭಾಗವನ್ನು ಬ್ಯಾರಿಕೇಡ್ ಅಳವಡಿಸಿ ಮುಚ್ಚಲಾಗಿತ್ತು. ಸಾರ್ವಜನಿಕರು ಹಲವಾರು ಬಾರಿ ನಗರಸಭೆ ಹಾಗೂ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಗೆ ಈ ಬಗ್ಗೆ ದೂರು ನೀಡಿದರೂ ಕೂಡ ಯಾವುದೇ ಪ್ರಯೋಜನವಾಗಿರಲಿಲ್ಲ, ಇದನ್ನು ಮನಗಂಡ ವಿಶ್ವಕರ್ಮ ನಿಗಮ ಮಾಜಿ ಅಧ್ಯಕ್ಷ ಹಾಗೂ ಉದ್ಯಮಿ ನಂದಕುಮಾರ್ ಜೆಸಿಬಿ ಹಾಗೂ ರೋಡ್ ರೋಲರ್ ಬಳಸಿ ರಸ್ತೆಯನ್ನು ರಿಪೇರಿ ಮಾಡಿಸಿ ಸುಗಮ ವಾಹನ ಸಂಚಾರಕ್ಕೆ ನೆರವಾಗಿದ್ದಾರೆ, ನಗರದ ನಾಗರಿಕರು ಅವರ ಸೇವಾ ಕಾರ್ಯಕ್ಕೆ ಮೆಚ್ಚುಗೆ ಸೂಚಿಸಿದ್ದಾರೆ.



ನಂದಕುಮಾರ್

ಪೋಷಕಾಂಶ ಆಹಾರ ಸೇವನೆಯಿಂದ ತಾಯಿ, ಶಿಶುವಿನ ಆರೋಗ್ಯ ಉತ್ತಮ



ಸರಗೂರಿನ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಪೋಷಣ್ ಅಭಿಯಾನ–2024 ಕಾರ್ಯಕ್ರಮದಲ್ಲಿ ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್‌ರವರು ಮಾತನಾಡಿದರು

ಸರಗೂರು, ಸೆ.18– ಪಟ್ಟಣದ ಸಮುದಾಯ ಆರೋಗ್ಯ ಕೇಂದ್ರದಲ್ಲಿ, ತಾಲೂಕು ಆರೋಗ್ಯ ಇಲಾಖೆ ಹಾಗೂ ಸಮುದಾಯ ಆರೋಗ್ಯ ಕೇಂದ್ರ (ಸರಗೂರು) ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಏರ್ಪಡಿಸಲಾಗಿದ್ದ ಪೋಷಣ್ ಅಭಿಯಾನ–2024 ಕಾರ್ಯಕ್ರಮವನ್ನು ತಾಲೂಕು ಆರೋಗ್ಯಾಧಿಕಾರಿ ಡಾ. ರವಿಕುಮಾರ್ ಉದ್ಘಾಟಿಸಿದರು.

ನಂತರ ಮಾತನಾಡಿದ ಅವರು, ಪೋಷಣ್ ಅಭಿಯಾನವನ್ನು ರಾಷ್ಟ್ರಾದ್ಯಂತ ಸೆಪ್ಟೆಂಬರ್ ಮಾಹೆಯಲ್ಲಿ ನಡೆಸಲಾಗುತ್ತದೆ. ಈ ಕಾರ್ಯಕ್ರಮದ ಉದ್ದೇಶ, ಗರ್ಭಿಣಿಯರು, ಬಾಣಂತಿಯರು ಮತ್ತು ಮಕ್ಕಳು ಸಮುದಾಯದ ಪ್ರತಿಯೊಬ್ಬರಿಗೂ ಪೋಷಕಾಂಶಯುಕ್ತ ಆಹಾರ ಸೇವನೆ ಬಗ್ಗೆ ಅರಿವು ಮೂಡಿಸಿ ಜನ ಸಾಮಾನ್ಯರ ಆರೋಗ್ಯ ಮಟ್ಟವನ್ನು ಉತ್ತಮ ಪಡಿಸುವುದು ಹಾಗೂ ಪೋಷಕಾಂಶದ ಕೊರತೆಯಿಂದ ಗರ್ಭಿಣಿಯರು ಮತ್ತು ಮಕ್ಕಳು ರಕ್ತಹೀನತೆಯಿಂದ ಬಳಲಿ (ಅನಿಮಿಯಾ) ತಾಯಿ ಮರಣ ಶಿಶು ಮರಣವನ್ನು ತಪ್ಪಿಸುವುದು ಇದರ ಬಹುಮುಖ್ಯ ಉದ್ದೇಶವಾಗಿದೆ ಎಂದರು.

ಈಗ ಹೆಚ್ಚು ಮಳೆ ಬರುವುದರಿಂದ ತರಕಾರಿ ಮತ್ತು ಸೊಪ್ಪುಗಳು ಹೆಚ್ಚಾಗಿ ಸಿಗುವುದರಿಂದ ಜನರು ಸ್ಥಳೀಯವಾಗಿ ಸಿಗುವ ಸೊಪ್ಪು ತರಕಾರಿ, ಮೊಳಕೆ ಕಾಳುಗಳನ್ನು ಸೇವಿಸಬೇಕು. ಇವು ಗಳಿಂದ ಪ್ರೊಟೀನ್, ವಿಟಮಿನ್, ಮಿನರಲ್ಸ್‌ಗಳು ಸಿಗುತ್ತವೆ. ಆದುದರಿಂದ ಜನರು ಹೆಚ್ಚಾಗಿ ಇವುಗಳನ್ನು ಸೇವಿಸಬೇಕು. ಅಂಗನವಾಡಿಯಲ್ಲಿ ಕೊಡುವ ಆಹಾರ ಪದಾರ್ಥವನ್ನು ಸೇವಿಸಬೇಕು. ಆಶಾ ಮತ್ತು ಅಂಗನವಾಡಿ ಕಾರ್ಯಕರ್ತೆಯರು ಮನೆ ಭೇಟಿ ಮಾಡುವಾಗ ಜನರಿಗೆ ಪೌಷ್ಟಿಕ ಆಹಾರದ ಬಗ್ಗೆ ಅರಿವು ಮೂಡಿಸಬೇಕು ಎಂದು ಅವರು ಹೇಳಿದರು.

ನಂತರ ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞರಾದ ಭಾಗ್ಯಲಕ್ಷ್ಮಿ ಮಾತನಾಡಿ, ಗರ್ಭಿಣಿಯರು ಸಮತೋಲನ ಆಹಾರವನ್ನು ಸೇವಿಸಬೇಕು ಹಾಗೂ ಮೊಳಕೆ ಕಟ್ಟಿದ ಕಾಳುಗಳನ್ನು ಸೇವಿಸಬೇಕು. ಸೇವಿಸಿದಾಗ ಹುಟ್ಟುವಂತ ಮಗು ಆರೋಗ್ಯವಾಗಿ ಹುಟ್ಟುತ್ತದೆ ಎಂದರು. ಮಗು ಹುಟ್ಟಿದ ತಕ್ಷಣ ತಾಯಿಯ ಎದೆ ಹಾಲನ್ನು ಬಿಟ್ಟು ಬೇರೇನೂ ನೀಡಬಾರದು. ಆರು ತಿಂಗಳ ನಂತರ ಎದೆ ಹಾಲಿನ ಜೊತೆಗೆ ಪೂರಕ ಆಹಾರವನ್ನು ನೀಡಬೇಕು ಮತ್ತು ಕಾಲಕಾಲಕ್ಕೆ ರಕ್ಷಣಾ ಚುಚ್ಚುಮದ್ದನ್ನು ಮಗುವಿಗೆ ಕೊಡಿಸಬೇಕು ಎಂದು ತಿಳಿಸಿದರು.

ಸಮುದಾಯ ಆಸ್ಪತ್ರೆಯ ಆಡಳಿತ ವೈದ್ಯಾಧಿಕಾರಿಗಳಾದ ಡಾ.ಪಾರ್ಥಸಾರಥಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಮುದಾಯ ಆರೋಗ್ಯ ಕೇಂದ್ರದ ಸಿಬ್ಬಂದಿ ವರ್ಗದ ಹರೀಶ್, ರವಿರಾಜ್, ಶಾಂತಿ, ಪುಷ್ಪ, ಜಗದೀಶ್, ಹರೀಶ್, ಮಹೇಶ್, ಮಹದೇವ, ಮಾನಸ, ಶ್ವೇತ, ಸಹನಾ, ಮಂಜುಳಾ, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಗರ್ಭಿಣಿಯರು, ತಾಯಂದಿರು, ಮಕ್ಕಳು ಇನ್ನಿತರರು ಹಾಜರಿದ್ದರು.

ಒಕ್ಕೂಟದ ಪಶು ಆಹಾರ ಬಳಸಿ ಹಸುಗಳ ಆರೋಗ್ಯ ಕಾಪಾಡಿ

ಮೈಮುಲ್ ವಿಸ್ತರಣಾಧಿಕಾರಿ ಅನಿತಾ



ಸರ್ವ ಸದಸ್ಯರ ವಾರ್ಷಿಕ ಸಭೆಯನ್ನು ಸಂಘದ ಅಧ್ಯಕ್ಷೆ ಜಯಮ್ಮ ಉದ್ಘಾಟಿಸಿದರು.

ತಿ.ನರಸೀಪುರ, ಸೆ.18– ರೈತರು ರಾಸುಗಳ ಪ್ರಾಣಕ್ಕೆ ಕಂಟಕ ತರುವ ಕಳಪೆ ಗುಣಮಟ್ಟದ ಪಶು ಆಹಾರದ ಮೊರೆ ಹೋಗದೆ ಒಕ್ಕೂಟದಲ್ಲಿ ದೊರಕುವ ಪಶು ಆಹಾರಗಳನ್ನು ಬಳಸಿ ಹಸುಗಳ ಆರೋಗ್ಯ ಕಾಪಾಡಿಕೊಳ್ಳುವಂತೆ ಮೈಮುಲ್ ವಿಸ್ತರಣಾಧಿಕಾರಿ ಅನಿತಾ ತಿಳಿಸಿದರು.

ತಾಲೂಕಿನ ಕೋಣಗಳ್ಳಿ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘದ ಆವರಣದಲ್ಲಿ ನಡೆದ 2023–24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಅವರು ಮಾತನಾಡಿದರು.

ಇತ್ತೀಚೆಗೆ ರೈತರು ಕಡಿಮೆ ಬೆಲೆಗೆ ದೊರಕುತ್ತದೆ ಎಂಬ ಕಾರಣಕ್ಕೆ ಬಿಯರ್ ವೇಸ್ಟ್ ಎಂಬ ಕಳಪೆ ಪಶು ಆಹಾರವನ್ನು ತಮ್ಮ ಹಸುಗಳಿಗೆ ಮೇವಾಗಿ ನೀಡುತ್ತಿದ್ದಾರೆ. ಆದರೆ ಇದು ಹಸುಗಳ ಆರೋಗ್ಯದ ಮೇಲೆ ತೀವ್ರ ಪರಿಣಾಮ ಬೀರಿ ಹಸು ಮರಣ ಹೊಂದುವ ಸಾಧ್ಯತೆ ಇದೆ. ಅಲ್ಲದೇ ಬಿಯರ್ ವೇಸ್ಟ್ ನೀಡುವುದರಿಂದ ರಾಸುಗಳ ಗರ್ಭ ನಿಲ್ಲುವುದಿಲ್ಲ. ಬಹು ಬೇಗ ಆರೋಗ್ಯ ಕೆಡುತ್ತದೆ. ತಾತ್ಕಾಲಿಕವಾಗಿ ಇದು ಆರ್ಥಿಕವಾಗಿ ಸ್ವಲ್ಪ ಲಾಭ ತಂದುಕೊಡಬಹುದು. ಆದರೆ ಭವಿಷ್ಯದಲ್ಲಿ ಇದು ಬಹು ಅಪಾಯಕಾರಿಯಾಗಿದ್ದು ಯಾರೂ ತಮ್ಮ ರಾಸುಗಳಿಗೆ ಬಿಯರ್ ವೇಸ್ಟ್ ನೀಡಬಾರದು. ಬದಲಿಗೆ ಒಕ್ಕೂಟ ನೀಡುವ ಪಶು ಆಹಾರ ನೀಡಿ ಹಸುಗಳ ಆರೋಗ್ಯ ಕಾಪಾಡಿಕೊಳ್ಳಲು ಮುಂದಾಗುವಂತೆ ಸಲಹೆ ನೀಡಿದರು.

ಇದೇ ವೇಳೆ ಬೋನಸ್ ಹಣ 40 ಸಾವಿರ ರೂ.ಗಳನ್ನು ಷೇರುದಾರರಿಗೆ ಹಂಚಿಕೆ ಮಾಡದೇ ಹಾಲು ಉತ್ಪಾದಕರ ನೂತನ ಕಟ್ಟಡ ನಿರ್ಮಾಣಕ್ಕೆ ಬಳಸಿಕೊಳ್ಳಲು ಸಭೆಯಲ್ಲಿ ಷೇರುದಾರರು ಸಮ್ಮತಿಸಿದರು. ಸಂಘದ ಸಿಇಓ ರಶ್ಮಿ ಸಂಘದ ವಾರ್ಷಿಕ ವರದಿ ಮಂಡಿಸಿ ಸಂಘವು ಪ್ರಸಕ್ತ ಸಾಲಿನಲ್ಲಿ 1,06,057 ರೂ. ನಿವ್ವಳ ಲಾಭ ಗಳಿಸಿರುವುದಾಗಿ ಮಾಹಿತಿ ನೀಡಿದರು. ಸಭೆಯಲ್ಲಿ ಅಧ್ಯಕ್ಷೆ ಜಯಮ್ಮ, ಉಪಾಧ್ಯಕ್ಷೆ ಗಿರಿಜಮ್ಮ, ನಿರ್ದೇಶಕರಾದ ಭಾಗ್ಯಮ್ಮ, ಲಕ್ಷ್ಮೀ, ಮಂಜುಳಾ, ರತ್ನಮ್ಮ ಶಿವಮ್ಮ, ನಂಜಮ್ಮಣಿ, ಶೈಲಜಾ, ರತ್ನಮ್ಮ, ಹಾಲು ಪರೀಕ್ಷಕಿ ಲೀಲಾವತಿ ಸೇರಿದಂತೆ ಗ್ರಾಮಸ್ಥರು ಹಾಜರಿದ್ದರು.

ತಿ.ನರಸೀಪುರ ಪುರಸಭೆ ವ್ಯಾಪ್ತಿಯಲ್ಲಿ ತೆರಿಗೆ ವಸೂಲಿಗೆ ನಿರ್ಧಾರ

ಬಿಡಾಡಿ ದನಗಳು, ಬೀದಿನಾಯಿಗಳ ಹಾವಳಿ ತಡೆದು, ಸ್ವಚ್ಛತೆಗೆ ಆದ್ಯತೆ ನೀಡಲು ಕ್ರಮ



ತಿ.ನರಸೀಪುರ ಪಟ್ಟಣ ಪುರಸಭೆ ಸಭಾಂಗಣದಲ್ಲಿ ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರರವರ ಅಧ್ಯಕ್ಷತೆಯಲ್ಲಿ ಪುರಸಭೆ ಅಧಿಕಾರಿಗಳು ಹಾಗೂ ಪೌರಕಾರ್ಮಿಕರ ಸಭೆ ನಡೆಯಿತು.

ತಿ.ನರಸೀಪುರ, ಸೆ.18– ಪಟ್ಟಣ ಪುರಸಭೆ ವ್ಯಾಪ್ತಿಯಲ್ಲಿ ವಾಣಿಜ್ಯೋದ್ಯಮಿಗಳಿಂದ ಪುರಸಭೆಗೆ ಬರಬೇಕಿರುವ ತೆರಿಗೆ ಹಣವನ್ನು ವಸೂಲಿ ಮಾಡುವ ಬಗ್ಗೆ ನಿರ್ಧಾರ ಕೈಗೊಳ್ಳಲಾಯಿತು.

ಪಟ್ಟಣ ಪುರಸಭೆಯ ಸಭಾಂಗಣದಲ್ಲಿ ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರ ಅವರು ಕರೆದಿದ್ದ ಪುರಸಭೆ ಅಧಿಕಾರಿಗಳು ಹಾಗೂ ಪೌರಕಾರ್ಮಿಕರ ಸಭೆಯಲ್ಲಿ ವಾರ್ಷಿಕ ಆದಾಯದ ಬಗ್ಗೆ ಚರ್ಚೆ ನಡೆಯಿತು. ಪುರಸಭೆಗೆ ಬರಬೇಕಾದ ತೆರಿಗೆ ಹಣ ವಸೂಲಿ ಮಾಡುವ ಕುರಿತು ಹಾಗೂ ಪಟ್ಟಣದ ಸ್ವಚ್ಛತೆಗೆ ಆದ್ಯತೆ ನೀಡುವ ಕುರಿತಂತೆ ಸಭೆಯಲ್ಲಿ ಚರ್ಚೆ ನಡೆಸಲಾಯಿತು.

ಸಭೆಯಲ್ಲಿ ಉಪಾಧ್ಯಕ್ಷೆ ರಾಜೇಶ್ವರಿ ರಾಘವೇಂದ್ರ ಮಾತನಾಡಿ, ಪಟ್ಟಣದಲ್ಲಿ ವಾಣಿಜ್ಯೋದ್ಯಮಿಗಳು ಪುರಸಭೆಗೆ ಸಲ್ಲಿಸಬೇಕಾದ ತೆರಿಗೆ ಹಣವನ್ನು ಹಲವಾರು ವರ್ಷಗಳಿಂದ ಬಾಕಿ ಉಳಿಸಿಕೊಂಡಿದ್ದಾರೆ. ಪೆಟ್ರೋಲ್ ಬಂಕ್, ಅಕ್ಕಿ ಗಿರಣಿ ಮಾಲೀಕರು ತೆರಿಗೆ ಬಾಕಿದಾರರಾಗಿದ್ದಾರೆ. ಹೆಚ್ಚಿನ ತೆರಿಗೆ ಹಣ ಬಾರದ ಹಿನ್ನೆಲೆಯಲ್ಲಿ ಪುರಸಭೆ ನಷ್ಟ ಅನುಭವಿಸುವಂತಾಗಿದೆ. ಕೂಡಲೇ ಅಧಿಕಾರಿಗಳು ತೆರಿಗೆ ವಸೂಲಿ ಮಾಡಲು ಕ್ರಮ ತೆಗೆದುಕೊಳ್ಳುವಂತೆ ಸೂಚಿಸಿದರು.

ಪಟ್ಟಣದಲ್ಲಿ ಬಿಡಾಡಿ ದನಗಳು ಎಲ್ಲೆಂದರಲ್ಲಿ ಅಡ್ಡಾಡುತ್ತಿರುವುದರಿಂದ ಸಾರ್ವಜನಿಕರಿಗೆ ತೀವ್ರ ತೊಂದರೆ ಉಂಟಾಗಿದೆ. ಸಂಬಂಧಪಟ್ಟ ದನಗಳ ಮಾಲೀಕರಿಗೆ ನೋಟಿಸ್ ನೀಡಿ, ಅವರಿಂದ ಸ್ಪಂದನೆ ಸಿಗದಿದ್ದಲ್ಲಿ ಬೀಡಾಡಿ ದನಗಳನ್ನು ಪಿಂಜ್ರಾಪೋಲ್‌ಗೆ ಸಾಗಿಸಲು ಕ್ರಮಜರುಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಪಟ್ಟಣದ ವಿನಾಯಕ ಕಾಲೋನಿಯಲ್ಲಿರುವ ಗುಜರಿಯನ್ನು ತೆರವು ಮಾಡಿಸುವ ಕುರಿತು ಚರ್ಚೆ ನಡೆದು ಈಗಾಗಲೇ ಗುಜರಿ ಮಾಲೀಕರಿಗೆ ಅಂತಿಮ ನೋಟಿಸ್ ನೀಡಲಾಗಿದೆ. ನೋಟೀಸ್‌ಗೆ ಉತ್ತರ ನೀಡಿ, ಅವರೇ ತೆರವು ಮಾಡದಿದ್ದಲ್ಲಿ ಪುರಸಭೆ ವತಿಯಿಂದ ಗುಜರಿ ತೆರವುಗೊಳಿಸಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಯಿತು.

ಪಟ್ಟಣದಲ್ಲಿ ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದರೂ ಅವುಗಳನ್ನು ನಿಯಂತ್ರಿಸಲು ಸಾಧ್ಯವಾಗುತ್ತಿಲ್ಲ. ಪ್ರಾಣಿ ಸಂರಕ್ಷಣಾ ಕಾಯ್ದೆಯಡಿ ಕೋರ್ಟ್‌ನಲ್ಲಿ ಕೇಸ್ ಇರುವುದರಿಂದ ಕೋರ್ಟ್ ಆದೇಶಕ್ಕೆ ಚ್ಯುತಿ ತರದಂತೆ ನಾಯಿಗಳನ್ನು ನಿಯಂತ್ರಿಸಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆಯೂ ಚರ್ಚೆ ನಡೆಸಲಾಯಿತು.

ಪಟ್ಟಣದ ಅಭಿವೃದ್ಧಿ ದೃಷ್ಟಿಯಿಂದ ಸಚಿವ ಡಾ.ಹೆಚ್.ಸಿ.ಮಹದೇವಪ್ಪ ಹಾಗೂ ಸಂಸದ ಸುನೀಲ್ ಬೋಸ್ ಅವರನ್ನು ಪುರಸಭೆ ಸದಸ್ಯರು ಹಾಗೂ ಕಾರ್ಯಕರ್ತರ ನಿಯೋಗ ಭೇಟಿ ಮಾಡಿ ಹೆಚ್ಚಿನ ಅನುದಾನಕ್ಕೆ ಬೇಡಿಕೆ ಸಲ್ಲಿಸಲು ಚಿಂತನೆ ನಡೆಸಲಾಗಿದೆ ಎಂದು ರಾಜೇಶ್ವರಿ ರಾಘವೇಂದ್ರ ತಿಳಿಸಿದರು.

ಸಭೆಯಲ್ಲಿ ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ, ಆರೋಗ್ಯ ನಿರೀಕ್ಷಕ ಮಧು, ಆರ್.ಐ.ಅಶೋಕ್, ವ್ಯವಸ್ಥಾಪಕ ಮಹೇಂದ್ರ, ತ್ರಿವೇಣಿ, ವಿನಯ್ ಸೇರಿದಂತೆ ಪೌರಕಾರ್ಮಿಕರು ಹಾಜರಿದ್ದರು.

ತಂದೆ–ತಾಯಿ ಜನ್ಮ ನೀಡಿದರೂ, ಸ್ವರೂಪ ನೀಡುವವರು ಶಿಕ್ಷಕರು

ಹೆಚ್.ಡಿ.ಕೋಟೆ ಶಿಕ್ಷಕರ ದಿನಾಚರಣೆಯಲ್ಲಿ ಶಾಸಕ ಅನಿಲ್ ಚಿಕ್ಕಮಾದು ಅಭಿಪ್ರಾಯ



ಹೆಚ್.ಡಿ.ಕೋಟೆ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪಡೆದ ಶಿಕ್ಷಕರನ್ನು ಶಾಸಕ ಅನಿಲ್ ಚಿಕ್ಕಮಾದು ಅಭಿನಂದಿಸಿದರು.

ಹೆಚ್.ಡಿ.ಕೋಟೆ, ಸೆ.18– ಮಕ್ಕಳಿಗೆ ತಂದೆ ತಾಯಿ ಜನ್ಮ ನೀಡುತ್ತಾರೆ. ಆದರೆ ಆ ಮಕ್ಕಳಿಗೆ ಸ್ವರೂಪ ಕೊಡುವವರೇ ಶಿಕ್ಷಕರು ಎಂದು ಶಾಸಕ ಅನಿಲ್ ಚಿಕ್ಕಮಾದು ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಮತ್ತು ಪ್ರೌಢಶಾಲಾ ಶಿಕ್ಷಕರ ಸಂಘದ ವತಿಯಿಂದ ಆಯೋಜಿಸಿದ್ದ ತಾಲೂಕು ಮಟ್ಟದ ಶಿಕ್ಷಕರ ದಿನಾಚರಣೆಯನ್ನು ಉದ್ದೇಶಿಸಿ ಮಾತನಾಡಿದ ಅವರು ಶಿಕ್ಷಣವನ್ನು ಪಡೆಯಲು ವಯಸ್ಸಿನ ಅಂತರವಾಗಲಿ, ಜಾತಿಯ ಅಂತರವಾಗಲಿ ಇರುವುದಿಲ್ಲ ಎಂದರು.

ರಾಷ್ಟ್ರಪತಿಗಳಾಗಿ ಸೇವೆ ಸಲ್ಲಿಸಿದ್ದ ಡಾ.ಸರ್ವಪಲ್ಲಿ ರಾಧಾಕೃಷ್ಣನ್ ಅವರು ನಮ್ಮ ಜಿಲ್ಲೆಯ ಮಹಾರಾಜ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದ್ದರು ಎಂಬುದು ನಮಗೆ ಹೆಮ್ಮೆಯ ವಿಷಯ. ಕಳೆದ ಐದು ವರ್ಷಗಳ ಅವಧಿಯಲ್ಲಿ 250 ಕ್ಕೂ ಹೆಚ್ಚು ಕೊಠಡಿಗಳ ನಿರ್ಮಾಣ ಮತ್ತು 400 ಕೊಠಡಿಗಳನ್ನು ರಿಪೇರಿ ಮಾಡಿಸಲಾಗಿದೆ. ಗುರುಭವನ ಪುನರುಜ್ಜೀವನ ಮಾಡುವ ಗುರಿ ಹೊಂದಲಾಗಿದ್ದು, ಉತ್ತಮ ಸುಸಜ್ಜಿತವಾದ ಕಟ್ಟಡವನ್ನು ಸರಗೂರು ಮತ್ತು ಕೋಟೆ ಪಟ್ಟಣದಲ್ಲಿ ನಿರ್ಮಿಸಲಾಗುವುದು ಎಂದರು.

ಗ್ರಾಮ ಪಂಚಾಯಿತಿಯ ಕ್ಲಸ್ಟರ್ ಮಟ್ಟದಲ್ಲಿ ಸಭೆ ಕರೆದು ಚರ್ಚಿಸಿ, ಶಿಥಿಲಗೊಂಡಿರುವ ಕೊಠಡಿಗಳನ್ನು ರಿಪೇರಿ ಮಾಡಿಸಲಾಗುವುದು. ಶಿಕ್ಷಣ ಇಲಾಖೆಯಲ್ಲಿ ನಾನು ರಾಜಕೀಯ ಮಾಡುವ ಗೋಜಿಗೆ ಹೋಗಿಲ್ಲ, ಅದೇ ರೀತಿ ಶಿಕ್ಷಕರು ಸಹ ರಾಜಕೀಯ ಮಾಡದೇ ಮಕ್ಕಳಿಗೆ ಹೆಚ್ಚಿನ ಅಂಕ ಗಳಿಸುವ ಸ್ಥೈರ್ಯವನ್ನು ತುಂಬಿಸಬೇಕು, ನಾನು ನನ್ನ ಮಗಳ ಹುಟ್ಟುಹಬ್ಬ ಸಂದರ್ಭದಲ್ಲಿ ಸರ್ಕಾರಿ ಶಾಲೆಯನ್ನು ದತ್ತು ತೆಗೆದುಕೊಂಡಿದ್ದೆ. ಆಗ 30 ಮಕ್ಕಳು ಮಾತ್ರ ಶಾಲೆಯಲ್ಲಿದ್ದರೂ, ಆದರೆ ಈಗ 300 ಮಕ್ಕಳು ಆ ಶಾಲೆಯಲ್ಲಿ ವ್ಯಾಸಂಗ, ಮಾಡುವಂತ ಕೆಲಸವನ್ನು ಮಾಡಲು ಮುಂದಾಗಿದ್ದೇನೆ, ಅದರಂತೆ ಎಲ್ಲಾ ಶಿಕ್ಷಕರು ಒಗ್ಗೂಡಿ ಸರ್ಕಾರಿ ಶಾಲೆಯಲ್ಲಿ ಯಶಸ್ವಿ ಕಾಣಲು ಮುಂದಾಗಬೇಕು ಎಂದು ಶಿಕ್ಷಕರಿಗೆ ಸಲಹೆ ನೀಡಿದರು.

ಮುಖ್ಯ ಭಾಷಣಕಾರರಾಗಿ ಗುಂಡ್ಲುಪೇಟೆಯ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಡಾ.ಎ.ಆರ್. ಮದನ್ ಕುಮಾರ್ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸೇವೆಯಿಂದ ವಯೋ ನಿವೃತ್ತಿ ಹೊಂದಿದ 34 ಮಂದಿ ಶಿಕ್ಷಕರು, ಮುಖ್ಯ ಶಿಕ್ಷಕರನ್ನು ಹಾಗೂ ಜಿಲ್ಲಾ ಉತ್ತಮ ಶಿಕ್ಷಕರನ್ನು ಅಭಿನಂದಿಸಲಾಯಿತು. ಜೊತೆಗೆ ಎಚ್.ಡಿ. ಕೋಟೆ ಮತ್ತು ಸರಗೂರು ತಾಲೂಕಿನ 18 ಶಾಲೆಗಳನ್ನು ಗುರುತಿಸಿ ಉತ್ತಮ ಶಾಲೆ ಬಹುಮಾನ ನೀಡಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸಹ ಅಭಿನಂದಿಸಲಾಯಿತು.

ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಕಾಂತರಾಜ್, ಕೋಟೆ ಪುರಸಭಾ ಸದಸ್ಯರಾದ ಮಧುಕುಮಾರ್, ಐಡಿಯಾ ವೆಂಕಟೇಶ್, ಸರಗೂರು ಪಟ್ಟಣ ಪಂಚಾಯಿತಿ ಸದಸ್ಯರಾದ ಸಣ್ಣತಾಯಮ್ಮ, ಶ್ರೀನಿವಾಸ್, ನೂರಾಳಸ್ವಾಮಿ, ಚೆಲುವಕೃಷ್ಣ, ಶಿವಕುಮಾರ್, ಸ್ವಾಮಿ, ರಾಮಚಂದ್ರ, ಕರ್ನಾಟಕ ರಾಜ್ಯ ನೌಕರರ ಸಂಘದ ಎ.ಎಸ್. ಮಹದೇವು, ರಾಜು, ನಾಗೇಂದ್ರ, ನಾರಾಯಣಸ್ವಾಮಿ, ಭೀಮಪ್ಪ ಮಲ್ಲಪ್ಪ ಮಾದಾರ, ಬಿ.ಎನ್.ಸತೀಶ್, ಎಸ್.ಪಿ. ಸೋಮಸುಂದರ್, ಎಸ್.ವಸಂತ ಕುಮಾರ್, ಎಚ್.ಎಸ್.ಪ್ರಕಾಶ್, ಮಹೇಶ್, ಭೋಗನಂಜಯ್ಯ, ನಾಗರಾಜು, ಪ್ರತಿಭಾ, ಸಣ್ಣಸ್ವಾಮಯ್ಯ, ಎಚ್.ಎಂ.ಪುಟ್ಟರಾಜು, ಪ್ರಸನ್ನಕುಮಾರ್, ಚಂದ್ರಕುಮಾರ್, ಎಂ.ಯಶ್ವಂತ್ ಕುಮಾರ್, ಬಿ.ಎಸ್. ರಾಮೇಗೌಡ, ರೂಪ ಪ್ರವೋದ್, ಜ್ಯೋತಿ, ಪ್ರವೋದ್ ಕುಮಾರ್, ಎನ್.ಎಸ್.ಪ್ರಸನ್ನ, ಬಬಿತಾ ರಾಣಿ, ಎನ್.ವಿ. ಸುರೇಶ್, ನಾಗನಾಯಕ, ಬಿ.ಎಂ.ಸುರೇಶ್‌ಕುಮಾರ್, ಜಯರಾಮೇಗೌಡ, ಲಿಂಗರಾಜು, ಬಿ.ಆರ್. ಸುಮಾ, ಎಸ್.ದೊರೆಸ್ವಾಮಿ, ಸಿದ್ದರಾಜು, ಬಿ.ಎಸ್.ಮಂಜು, ಬಿ.ಜಿ. ರವಿಕುಮಾರ್, ಎಂ.ನಾರಾಯಣ, ಜಗದಾಂಭ, ವಾಸುದೇವ, ಹೇಮಲತಾ, ರೇಖಾ, ಆನಂದ, ಮುದ್ದನಾಯಕ, ಅಶೋಕ್, ನಂದಕುಮಾರ್ ಇದ್ದರು.

ಬಸ್ ಡಿಕ್ಕಿ: ಮೊಪೆಡ್ ಸವಾರ ಸಾವು

ಸಾಲಿಗ್ರಾಮ, ಸೆ.18– ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದು ಮೊಪೆಡ್ ಸವಾರ ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ಸಾಲಿಗ್ರಾಮ ತಾಲೂಕಿನ ಮುಂಜನಹಳ್ಳಿ ಸಮೀಪ ಹಾಸನ–ಮೈಸೂರು ರಾಜ್ಯ ಹೆದ್ದಾರಿಯಲ್ಲಿ ಬುಧವಾರ ಸಂಭವಿಸಿದೆ.



ಮುಂಜನಹಳ್ಳಿ ಗ್ರಾಮದ ಯಜಮಾನ್ ನಂಜುಂಡನಾಯಕ (73) ಮೃತ ದುರ್ದೈವಿ. ತಮ್ಮ ಜಮೀನಿನಲ್ಲಿ ಕೆಲಸ ಮುಗಿಸಿ ಹಾಸನ–ಮೈಸೂರು ರಾಜ್ಯ ಹೆದ್ದಾರಿಯಲ್ಲಿ ಟಿವಿಎಸ್ ಎಕ್ಸೆಲ್‌ನಲ್ಲಿ ಮುಂಜನಹಳ್ಳಿ ಮನೆ ಕಡೆಗೆ ಬರುತ್ತಿದ್ದಾಗ ವೇಗವಾಗಿ ಹಿಂದಿನಿಂದ ಬಂದ ಕೆಎಸ್‌ಆರ್‌ಟಿಸಿ ಬಸ್ ಡಿಕ್ಕಿ ಹೊಡೆದಿದೆ. ಇದರಿಂದ ತೀವ್ರವಾಗಿ ಗಾಯಗೊಂಡು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಈ ಸಂಬಂಧ ಅವರ ಮಗ ಸುರೇಶ್ ಸಾಲಿಗ್ರಾಮ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದಾರೆ. ಮೃತರ ಅಂತ್ಯಕ್ರಿಯೆ ಬುಧವಾರ ಗ್ರಾಮದಲ್ಲಿ ನಡೆಯಿತು. ಮೃತರಿಗೆ ಪತ್ನಿ ರತ್ನಮ್ಮ, ಓರ್ವ ಪುತ್ರ, ಇಬ್ಬರು ಪುತ್ರಿಯರು ಇದ್ದಾರೆ.

ಕಾರೆಹುಂಡಿಯಲ್ಲಿ ಸ್ವರ್ಣ ಗೌರಿ–ಗಣೇಶ ಮೂರ್ತಿ ವಿಸರ್ಜನೆ



ಹಂಪಾಪುರ, ಸೆ.18– ಶ್ರೀ ಸ್ವರ್ಣ ಗೌರಿ ಹಾಗೂ ಗಣೇಶ ಮೂರ್ತಿಯನ್ನು ಹೂವಿನ ಪಲ್ಲಕ್ಕಿ ಉತ್ಸವ ದೊಂದಿಗೆ ಕಾರೆಹುಂಡಿಯಲ್ಲಿ ಮಂಗಳವಾರ ಮೆರವಣಿಗೆ ನಡೆಸಿ ವಿಸರ್ಜನೆ ಮಾಡಲಾಯಿತು. ಗ್ರಾಮಸ್ಥರ ಆರಾಧ್ಯ ದೇವಿ ಗೌರಮ್ಮನ ಮೂರ್ತಿಯನ್ನು ಹಬ್ಬದ ದಿನ ಬಸವೇಶ್ವರ ಗುಡಿ ದೇವಾಲಯದಲ್ಲಿ ಪ್ರತಿಷ್ಠಾಪನೆ ಮಾಡಲಾಗಿತ್ತು. ದೇಗುಲದಲ್ಲಿ 12 ದಿನಗಳ ಕಾಲ ಪ್ರತಿದಿನ ವಿಶೇಷ ಪೂಜೆ, ನಿತ್ಯ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಮೂರ್ತಿ ವಿಸರ್ಜನೆ ಅಂಗವಾಗಿ ಪ್ರಮುಖ ಬೀದಿಗಳನ್ನು ವಿದ್ಯುತ್ ದೀಪ, ತಳಿರು ತೋರಣಗಳಿಂದ ಸಿಂಗರಿಸಲಾಗಿತ್ತು. ಡೊಳ್ಳು ಕುಣಿತ, ಸಾಂಸ್ಕೃತಿಕ ಕಲಾತಂಡಗಳೊಂದಿಗೆ ಮೆರವಣಿಗೆ ನಡೆಯಿತು. ವಿಘ್ನೇಶ್ವರ ವಿನಾಯಕ ಸಂಘ, ಊರಿನ ಗ್ರಾಮಸ್ಥರು ಭಾಗವಹಿಸಿದ್ದರು.

ಸಂಗೀತ ಕಾರ್ಯಕ್ರಮ

ಹುಣಸೂರು, ಸೆ.18– ನಗರದ ಮುನೇಶ್ವರ ಕಾವಲ್ ಮೈದಾನದಲ್ಲಿ ಸಾರ್ವಜನಿಕ ಭಕ್ತ ವಿನಾಯಕ ಮಂಡಲಿ ವತಿಯಿಂದ 57ನೇ ವರ್ಷದ ಗಣೇಶೋತ್ಸವ ಕಾರ್ಯಕ್ರಮದ ಅಂಗವಾಗಿ ನಿರ್ಮಿಸಿರುವ ವೇದಿಕೆಯಲ್ಲಿ ನಾಳೆ (ಸೆ.19) ಸಂಜೆ 7 ಗಂಟೆಗೆ ಸಮಾಜ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಹುಣಸೂರಿನ ಅರ್ಚನ ಮತ್ತು ಸಿಂಗೇಶ್ ತಂಡದವರಿಂದ ಭಕ್ತಿಗೀತೆ, ಭಾವಗೀತೆ ಮತ್ತು ಹಳೆಯ ಕನ್ನಡ ಹಾಡುಗಳ ಕಾರ್ಯಕ್ರಮ ನಡೆಯಲಿದೆ.

ಸೆ.23 ವಾರ್ಷಿಕ ಮಹಾಸಭೆ

ಮಲ್ಲುಂಡಿ, ಸೆ.18– ನಂಜನಗೂಡು ತಾಲೂಕಿನ ಹೆಡಿಯಾಲ ಗ್ರಾಮದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ 2023–24ನೇ ಸಾಲಿನ ವಾರ್ಷಿಕ ಮಹಾಸಭೆಯು ಸಂಘದ ಅಧ್ಯಕ್ಷ ಮಡುವಿನಹಳ್ಳಿ ಮಂಜುನಾಥ್ ಅವರ ಅಧ್ಯಕ್ಷತೆಯಲ್ಲಿ ಸೆ.23ರಂದು ಸಂಘದ ಆವರಣದಲ್ಲಿ ನಡೆಯಲಿದ್ದು, ಗ್ರಾಮಸ್ಥರು ಭಾಗವಹಿಸಬೇಕೆಂದು ಸಿಇಓ ಹೆಚ್.ಡಿ. ಶಿವಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಮೈಸೂರು ಮಿತ್ರ

ಆತ್ಮಹತ್ಯೆ ತಡೆಗೆ ಮೌಲ್ಯಾಧಾರಿತ ಜೀವನ ಮದ್ದು

● ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿನೇಶ್ ಕಿವಿಮಾತು ● ಮೈಸೂರಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ

ಮೈಸೂರು, ಸೆ.18(ಬಿಎಲ್‌ಯು)– ಇತ್ತೀಚೆಗೆ ಯುವಕರು ಹೆಚ್ಚಾಗಿ ಆತ್ಮಹತ್ಯೆಗೆ ಶರಣಾಗುತ್ತಿದ್ದು, ಇದರಿಂದ ಪಾರಾಗಲು ಮೌಲ್ಯಾಧಾರಿತ ಜೀವನ ಕ್ರಮ ಅಳವಡಿಸಿಕೊಳ್ಳಬೇಕು ಎಂದು ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್ ಸಲಹೆ ನೀಡಿದರು.

ನಗರದ ಯುವರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಇಂದು ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿಯೊಂದು ಕ್ಷೇತ್ರದಲ್ಲೂ ಒತ್ತಡವಿರುವ ಕಾರಣ ಕೆಲವರು ಆತ್ಮಹತ್ಯೆಯ ಹಾದಿ ಹಿಡಿಯುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಇತ್ತೀಚಿನ ತಂತ್ರಜ್ಞಾನದಿಂದ ಮನೆಯಲ್ಲಿ ಬಾಂಧವ್ಯ ಹಾಗೂ ಸಂಪರ್ಕ ಸಮನ್ವಯತೆ ಇಲ್ಲದಂತಾಗಿದೆ. ಇದರಿಂದ ಮಕ್ಕಳನ್ನು ಬೆಳೆಸುವ ರೀತಿ ಕೂಡ ಬೇರೆಯಾಗಿರಬಹುದು. ಇದರ ಜೊತೆಗೆ ಮಕ್ಕಳ ಬಗ್ಗೆ ಅವಶ್ಯಕತೆಗಿಂತ ಹೆಚ್ಚಾಗಿ ಕಾಳಜಿ ಕೂಡ ವಹಿಸಲಾಗುತ್ತಿದೆ ಎಂದರು.

ಮಕ್ಕಳು ತಂದೆ-ತಾಯಿ ಜೊತೆ ಮುಕ್ತವಾಗಿ ಅಭಿಪ್ರಾಯ, ಅನಿಸಿಕೆ ಹಂಚಿಕೊಳ್ಳುವ ವಾತಾವರಣವನ್ನು ಪೋಷಕರು ಸೃಷ್ಟಿಸಬೇಕು. ಜೊತೆಗೆ ಮಕ್ಕಳು ಹೇಳುವುದನ್ನು ಪೋಷಕರು ಮುಕ್ತ ಮನಸ್ಸಿನಿಂದ ಕೇಳಿಸಿಕೊಳ್ಳಬೇಕು. ಆಗ ಮಕ್ಕಳು ತಪ್ಪು ನಿರ್ಧಾರ ತೆಗೆದುಕೊಳ್ಳದಂತೆ ತಡೆಗಟ್ಟಬಹುದು ಎಂದು ದಿನೇಶ್ ಹೇಳಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ ಜೊತೆಗೆ ಯೋಗ, ಧ್ಯಾನ, ಕ್ರೀಡೆ, ವ್ಯಾಯಾಮದಂತಹ ಪಠ್ಯೇತರ ಚಟುವಟಿಕೆಯಲ್ಲಿ ತೊಡಗಿಸಿಕೊಳ್ಳಲು ಪೋಷಕರು ಅವಕಾಶ ಮಾಡಿಕೊಡಬೇಕು. ಇದಕ್ಕೆ ಶಾಲೆಯಲ್ಲಿ ಕೂಡ ಮುಕ್ತ ವಾತಾವರಣ ಕಲ್ಪಿಸಬೇಕು. ಮಕ್ಕಳಲ್ಲಿ ನಕಾರಾತ್ಮಕ ಆಲೋಚನೆ ದೂರ ಮಾಡಲು ಶಿಕ್ಷಕರ ಪಾತ್ರ ಎಷ್ಟಿದೆಯೋ ಪೋಷಕರ ಪಾತ್ರವೂ ಅಷ್ಟೇ ಇರುತ್ತದೆ ಎಂದು ದಿನೇಶ್ ಅಭಿಪ್ರಾಯಪಟ್ಟರು.

ಈ ವೇಳೆ ಮಾತನಾಡಿದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ, ವಿದ್ಯಾರ್ಥಿಗಳ ಆತ್ಮಹತ್ಯೆ ಚಿಂತನೆ ದೂರ ಮಾಡುವಲ್ಲಿ ಪೋಷಕರು ಹಾಗೂ ಶಿಕ್ಷಕರ ಪಾತ್ರ ದೊಡ್ಡದಿದೆ ಎಂದು ಅಭಿಪ್ರಾಯಪಟ್ಟರು.

ಇತ್ತೀಚೆಗೆ ಆತ್ಮಹತ್ಯೆ ಪ್ರಕರಣಗಳು ಹೆಚ್ಚಾಗುತ್ತಿವೆ. ಬದುಕಿನ ಸ್ಥೈರ್ಯ ಕಡಿಮೆಯಾಗುತ್ತಿರುವುದು ಇದಕ್ಕೆ ಪ್ರಮುಖ ಕಾರಣವಾಗಿದೆ. ಈ ಹಿನ್ನೆಲೆಯಲ್ಲಿ ಆತ್ಮಹತ್ಯೆ ತಡೆಗಟ್ಟುವ ನಿಟ್ಟಿನಲ್ಲಿ ಇಂತಹ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಸಮಸ್ಯೆಗಳಿಗೆ ಆತ್ಮಹತ್ಯೆ ಒಂದೇ ಪರಿಹಾರವಲ್ಲ. ಎದುರಾಗುವ ಕಷ್ಟಗಳನ್ನು ಸಮರ್ಥವಾಗಿ ಎದುರಿಸುವ ಧೈರ್ಯ ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಮನೆ, ಕಚೇರಿ, ಸಾಮಾಜಿಕ ಜೀವನದಲ್ಲಿ ಸಮಸ್ಯೆಗಳು ಎದುರಾದಾಗ ಅದನ್ನು ಮೆಟ್ಟಿ ನಿಂತು ಕೆಲಸ ಮಾಡಬೇಕು. ಮೌಲ್ಯಯುತ ಶಿಕ್ಷಣ ಕಲಿಯ ಬೇಕು. ಆತ್ಮಸ್ಥೈರ್ಯದಿಂದ ಸಮಸ್ಯೆ ಪರಿಹಾರ ಮಾಡಿಕೊಂಡು ಜೀವನದ ಹಾದಿಯುಲ್ಲಿ ಸಾಗಿದರೆ ಸುಂದರ ಬದುಕು ರೂಪಿಸಿಕೊಳ್ಳಬಹುದು ಎಂದು ಗಾಯತ್ರಿ ಸಲಹೆ ನೀಡಿದರು.

ಇದೇ ಸಂದರ್ಭ ಮಾತನಾಡಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಪಿ.ಸಿ.ಕುಮಾರಸ್ವಾಮಿ, ಇತ್ತೀಚೆಗೆ ಮಕ್ಕಳು ಆತ್ಮಹತ್ಯೆ ಹಾದಿ ಹಿಡಿಯುತ್ತಿ ದ್ದಾರೆ. ಇದನ್ನು ತಡೆಯಲು ಪೋಷಕರು ಹಾಗೂ ಶಿಕ್ಷಕರು ಮಕ್ಕಳ ಮಾನಸಿಕ ಒತ್ತಡದ ಲಕ್ಷಣವನ್ನು ಆರಂಭದಲ್ಲೇ ಗುರುತಿಸಿ ಪರಿಹರಿಸಿ, ಅವರಲ್ಲಿ ಆತ್ಮವಿಶ್ವಾಸ ಮೂಡಿಸಬೇಕು. ಆಗ ಮಕ್ಕಳನ್ನು ಆತ್ಮಹತ್ಯೆಯಿಂದ ಪಾರು ಮಾಡಬಹುದು ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಜೆಎಸ್‌ಎಸ್ ಆಸ್ಪತ್ರೆ ಮನೋರೋಗ ವಿಭಾಗದ ಪ್ರಾಧ್ಯಾಪಕ ಡಾ.ಟಿ.ಎಸ್.ಸತ್ಯನಾರಾಯಣರಾವ್, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮಾಧಿಕಾರಿ ಡಾ.ಬಿ.ಬೃಂದಾ, ಪ್ರೊ.ಎಂ.ಕೆ.ಮಹೇಶ್, ಪ್ರೊ.ಸೋಮಶೇಖರಪ್ಪ ವೇದಿಕೆಯಲ್ಲಿ ಉಪಸ್ಥಿತರಿದ್ದರು.



ಮೈಸೂರಿನ ಯುವರಾಜ ಕಾಲೇಜಿನ ಶತಮಾನೋತ್ಸವ ಭವನದಲ್ಲಿ ಬುಧವಾರ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನಾಚರಣೆ ಕಾರ್ಯಕ್ರಮವನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಕೆ.ಎಂ.ಗಾಯತ್ರಿ ಉದ್ಘಾಟಿಸಿದರು.

ಕೆ.ಆರ್.ಆಸ್ಪತ್ರೆಯಲ್ಲಿ ಅಪರಿಚಿತ ವ್ಯಕ್ತಿ ಸಾವು

ಮೈಸೂರು, ಸೆ.18– ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಅಪರಿಚಿತ ವ್ಯಕ್ತಿ ಸಾವನ್ನಪ್ಪಿರುವ ಬಗ್ಗೆ ವರದಿಯಾಗಿದೆ.



ಈ ವ್ಯಕ್ತಿ ಸೆ.15ರಂದು ಆಲನಹಳ್ಳಿ ಮುಖ್ಯ ರಸ್ತೆಯ ಎಸ್‌ಎನ್‌ಎಸ್ ಶಾಲೆ ಬಳಿ ಅಸ್ವಸ್ಥನಾಗಿ ಬಿದ್ದಿರುವುದು ಕಂಡು ಬಂದಿದ್ದು, ಆಲನಹಳ್ಳಿ ಠಾಣೆ ಪೊಲೀಸರು ಆತನನ್ನು ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಈ ವ್ಯಕ್ತಿ ಸೆ.16ರಂದು ಬೆಳಗ್ಗೆ 6.15ರಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾನೆ.

ಸುಮಾರು 30 ರಿಂದ 35 ವರ್ಷದ ಈ ವ್ಯಕ್ತಿಯ ಎಡಗೈನಲ್ಲಿ 'ಮಾದಶೆಟ್ಟಿ', ಬಲಗೈನಲ್ಲಿ 'ಸುರಿ' ಮತ್ತು 'ಕಾವ್ಯ' ಹಚ್ಚೆ ಇದೆ. ಈತನ ವಾರಸುದಾರರು ಆಲನಹಳ್ಳಿ ಠಾಣೆ ದೂರವಾಣಿ ಸಂಖ್ಯೆ 0821-2418311 ಅಥವಾ ಠಾಣೆಯ ಪೊಲೀಸ್ ಇನ್ಸ್‌ಪೆಕ್ಟರ್ ಸಂಖ್ಯೆ 9480802257 ಅನ್ನು ಸಂಪರ್ಕಿಸುವಂತೆ ಪೊಲೀಸ್ ಪ್ರಕಟಣೆ ಕೋರಿದೆ.

ದಸರಾ ಕ್ರೀಡಾಕೂಟದಲ್ಲಿ ವಿಶೇಷಚೇತನರು, ಗ್ರಾಮೀಣ ಕ್ರೀಡೆಗೆ ಅವಕಾಶ!

ಮೈಸೂರು, ಸೆ.18(ಎಂಕೆ)– ವಿಶ್ವ ವಿಖ್ಯಾತ ಮೈಸೂರು ದಸರಾ ಕ್ರೀಡಾಕೂಟದ ಸಿದ್ಧತೆ ಭರದಿಂದ ಸಾಗಿದ್ದು, ಪುಟಾಣಿ ಮಕ್ಕಳಿಗೆ, ವಿಶೇಷಚೇತನರಿಗೆ ಹಾಗೂ ಗ್ರಾಮೀಣ ಕ್ರೀಡೆಗಳಿಗೂ ಅವಕಾಶ ನೀಡುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಸೈಕಲ್ ಪೋಲೊ, ಕರಾಟೆ, ದೇಹದಾರ್ಢ್ಯ, ವೇಟ್ ಲಿಫ್ಟಿಂಗ್, ಆಫ್ ಮ್ಯಾರಥಾನ್(10 ಕಿ.ಮೀ), ಭೂ ಸಾಹಸ ಕ್ರೀಡೆಗಳು, ಸ್ಕೇಟಿಂಗ್, ಕ್ರಿಕೆಟ್, ಚಿಣ್ಣರ ಕ್ರೀಡಾಕೂಟ, ವಿಶೇಷಚೇತನರಿಗಾಗಿ ಚೆಸ್, ಅಂಧರ ಚೆಸ್, ಗ್ರಾಮೀಣ ಕ್ರೀಡೆಯಾದ ಲಗೋರಿ ಆಟಕ್ಕೂ ಪ್ರಸ್ತಾವನೆ ಸಲ್ಲಿಸಲಾಗಿದೆ.


ರಾಜ್ಯಮಟ್ಟದ ಕ್ರೀಡಾಂಗಣವಾಗಿ ಗುರ್ತಿಸಿಕೊಂಡಿರುವ ಚಾಮುಂಡಿವಿಹಾರ ಕ್ರೀಡಾಂಗಣ ಸೇರಿದಂತೆ ವಿವಿಧ ಮೈದಾನಗಳಲ್ಲಿ ದಸರಾ ಕ್ರೀಡಾಕೂಟ ನಡೆಯಲಿದ್ದು, ಮೊದಲ ಬಾರಿಗೆ ಮೈಸೂರು ವಿವಿ ಆವರಣದಲ್ಲಿರುವ ಕ್ರಿಕೆಟ್ ಮೈದಾನದಲ್ಲಿ ದಸರಾ ಕ್ರಿಕೆಟ್ ಪಂದ್ಯಾವಳಿಯನ್ನು ಆಯೋಜಿಸಲು ಚಿಂತನೆ ನಡೆಸಲಾಗಿದೆ.

ಈಗಾಗಲೇ ತಾಲೂಕು, ಜಿಲ್ಲಾ ಮತ್ತು ವಿಭಾಗ ಮಟ್ಟದ ಕ್ರೀಡಾಕೂಟಗಳು ಆರಂಭವಾಗುತ್ತಿದ್ದು, ರಾಜ್ಯಮಟ್ಟದ ದಸರಾ ಕ್ರೀಡಾಕೂಟಕ್ಕೆ ಪೂರ್ವ ಸಿದ್ಧತೆಗಳು ನಡೆದಿವೆ. ಪ್ರಸ್ತಾವನೆ ಜೊತೆ ಜೊತೆಗೆ ಚಾಮುಂಡಿವಿಹಾರ ಕ್ರೀಡಾಂಗಣದ ಹಾಕಿ ಮೈದಾನ, ಒಳಾಂಗಣ ಕ್ರೀಡಾಂಗಣದ ನವೀಕರಣ ಕಾಮಗಾರಿಯೂ ಚುರುಕಾಗಿ ಸಾಗಿದೆ.

ಸುಮಾರು 5 ಕೋಟಿ ರೂ.ವೆಚ್ಚದಲ್ಲಿ ಚಾಮುಂಡಿವಿಹಾರ ಒಳಾಂಗಣ ಕ್ರೀಡಾಂಗಣದ ಚಾವಣಿಗೆ ಪಾರದರ್ಶಕ ಫೈಬರ್ ಶೀಟ್‌ಗಳನ್ನು ಅಳವಡಿಸಿ ಗ್ಲಾಸ್ ಹೌಸ್ ಮಾದರಿಯ ಟ್ರಾನ್ಸ್‌ಪರೆಂಟ್ ಒಳಾಂಗಣ ಕ್ರೀಡಾಂಗಣವಾಗಿ ಪರಿವರ್ತಿಸಲಾಗುತ್ತಿದೆ. ಇದರಿಂದ ಸೂರ್ಯನ ಬೆಳಕಿನಲ್ಲಿಯೇ ಕ್ರೀಡೆಗಳ ನಡೆಸಲು ಅನುಕೂಲವಾಗುತ್ತದೆ. ಈಗಾಗಲೇ ಶೇ.90ರಷ್ಟು ಕೆಲಸ ಮುಕ್ತಾಯವಾಗಿದ್ದು, ದಸರಾ ಕ್ರೀಡಾಕೂಟ ಉದ್ಘಾಟನೆ ವೇಳೆ ಸಿದ್ಧವಾಗಲಿದೆ.

ರಸ್ತೆ ಅಭಿವೃದ್ಧಿ: ಸುಮಾರು 2 ಕೋಟಿ ರೂ. ವೆಚ್ಚದಲ್ಲಿ ಚಾಮುಂಡಿವಿಹಾರ ಕ್ರೀಡಾಂಗಣದ ಆವರಣದಲ್ಲಿ ಇಡೀ ಕ್ರೀಡಾಂಗಣ ಸುತ್ತುವರೆದಿರುವ(ಸುತ್ತಲಿನ ಕಾಂಪೌಂಡ್ ಬಳಿ) ರಸ್ತೆ ಅಭಿವೃದ್ಧಿ ಕಾಮಗಾರಿಗೆ ಕೈಗೊಳ್ಳಲಾಗಿದೆ. ಹಾಗೆಯೇ ಅಥ್ಲೆಟಿಕ್ಸ್ ನಡೆಯುವ ಮೈದಾನದ ಸುತ್ತಲೂ ಸ್ವಚ್ಛತಾ ಕಾರ್ಯಗಳು ಭರದಿಂದ ಸಾಗಿವೆ.





ದಸರಾ ಕ್ರೀಡಾಕೂಟಕ್ಕೆ ಸಿದ್ಧವಾಗುತ್ತಿರುವ ಚಾಮುಂಡಿವಿಹಾರ ಕ್ರೀಡಾಂಗಣದ ಹಾಕಿ ಮೈದಾನ ಮತ್ತು ಒಳಾಂಗಣ ಕ್ರೀಡಾಂಗಣ

> ಬೆಂಗಳೂರಿನ ಕೋರಮಂಗಲದಲ್ಲಿರುವ ಕ್ರೀಡಾಂಗಣವನ್ನು ಹೊರತುಪಡಿಸಿದರೆ ಈ ಮಾದರಿ ಅತ್ಯಾಧುನಿಕ ಫೈಬರ್ ಶೀಟ್ ಅಳವಡಿಸುತ್ತಿರುವ ರಾಜ್ಯದ 2ನೇ ಕ್ರೀಡಾಂಗಣ ಇದಾಗಿದೆ. ಕೆಲವೇ ದಿನಗಳಲ್ಲಿ ಬಳಕೆಗೆ ಮುಕ್ತಗೊಳಿಸಲಾಗುವುದು. ಹಾಗೆಯೇ ಈ ಬಾರಿಯ ದಸರಾ ಕ್ರೀಡಾಕೂಟದಲ್ಲಿ ಸೈಕಲ್ ಪೋಲೊ, ಕರಾಟೆ, ದೇಹದಾರ್ಢ್ಯ, ವೇಟ್ ಲಿಫ್ಟಿಂಗ್, ಆಫ್ ಮ್ಯಾರಥಾನ್(10 ಕಿ.ಮೀ), ಭೂ ಸಾಹಸ ಕ್ರೀಡೆಗಳು, ಸ್ಕೇಟಿಂಗ್, ಕ್ರಿಕೆಟ್, ಚಿಣ್ಣರ ಕ್ರೀಡಾಕೂಟ, ವಿಶೇಷಚೇತನರಿಗಾಗಿ ಚೆಸ್, ಅಂಧರ ಚೆಸ್, ಗ್ರಾಮೀಣ ಕ್ರೀಡೆಯಾದ ಲಗೋರಿ ಆಟಕ್ಕೂ ಪ್ರಸ್ತಾವನೆ ಸಲ್ಲಿಸಲಾಗಿದೆ.
> – ಭಾಸ್ಕರ ನಾಯ್ಕ, *ಸಹಾಯಕ ನಿರ್ದೇಶಕ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.*

ಕೊಳಚೆ ನೀರು ಜಮೀನಿಗೆ ಹರಿಸಿದ ಮುಡಾ

ಅರವಿಂದನಗರ ನಿವಾಸಿಗಳು ಹೈರಾಣ





ಮೈಸೂರಿನ ಅರವಿಂದನಗರದ 9ನೇ ಮುಖ್ಯ ರಸ್ತೆಯ ಮನೆ ಮುಂದೆ ತುಂಬಿರುವ ಯುಜಿಡಿ ನೀರು.

ಮೈಸೂರು, ಸೆ.18(ಜಿಎ)–ಸೂಕ್ತ ಯುಜಿಡಿ ಸಂಪರ್ಕವಿಲ್ಲದೇ ನೀರನ್ನು ಮುಡಾ ಅಧಿಕಾರಿಗಳು ಜಮೀನಿಗೆ ಹರಿಸಿರುವ ಪರಿಣಾಮ ಮೈಸೂರಿನ ಅರವಿಂದನಗರದ 9ನೇ ಮುಖ್ಯ ರಸ್ತೆಯ ನಿವಾಸಿಗಳು ನಿತ್ಯವೂ ನರಕಯಾತನೆ ಅನುಭವಿಸುತ್ತಿದ್ದಾರೆ.

ಎಂ ಬ್ಲಾಕ್‌ನಿಂದ ಹರಿದು ಬರುವ ಯುಜಿಡಿ ನೀರು ಈ ರಸ್ತೆಯಲ್ಲಿರುವ ಜಮೀನಿನ ಮೂಲಕ ಹಾದು ಹೋಗಿ ರಾಜಕಾಲುವೆ ಸೇರ್ಪಡೆಯಾಗುವಂತೆ ಯುಜಿಡಿ ವ್ಯವಸ್ಥೆ ಮಾಡಲಾಗಿದೆ. ಆದರೆ, ಮೂರು ವರ್ಷಗಳಿಂದ ಈ ಮಾರ್ಗದಲ್ಲಿ ಯುಜಿಡಿ ನೀರು ಸಮರ್ಪಕವಾಗಿ ಹಾದು ಹೋಗದೇ ಅರ್ಧದಲ್ಲಿಯೇ ನಿಂತು ಈ ಅರವಿಂದನಗರದ 9ನೇ ಮುಖ್ಯ ರಸ್ತೆ, 2ನೇ ಕ್ರಾಸ್‌ನ ಮನೆಗಳ ಮುಂದಿರುವ ಮೋರಿಗೆ ಬಂದು ಸೇರಿಕೊಳ್ಳುತ್ತಿದೆ.

ಈ ಕೊಳಚೆ ನೀರಿನ ಪ್ರಮಾಣ ಹೆಚ್ಚಾದಾಗ ಅಥವಾ ಮಳೆ ನೀರು ಸೇರ್ಪಡೆಯಾದಾಗ ಮೋರಿಯಿಂದ ನೀರು ರಸ್ತೆಗೆ ಬಂದು ಕೆರೆಯೇ ನಿರ್ಮಾಣಗೊಂಡು ನಂತರ ಮನೆಗಳಿಗೂ ಸಿವೇಜ್ ಪೈಪ್‌ಗಳ ಮೂಲಕ ಬರುವುದು ವಾಡಿಕೆಯಾಗಿದ್ದು, ಈ ಸಂಬಂಧ ಪಾಲಿಕೆ ಅಧಿಕಾರಿಗಳ ಗಮನಕ್ಕೆ ತಂದರೆ ಇದು ಮುಡಾ ವ್ಯಾಪ್ತಿಗೆ ಬರಲಿದೆ ಎಂದು ಅಲೆಸುತ್ತಿದ್ದಾರೆ ಎಂದು ನಿವಾಸಿ ಕವಿತಾ 'ಮೈಸೂರು ಮಿತ್ರ'ನ ಬಳಿ ದೂರಿದರು.

ಮಳೆ ಸಂದರ್ಭದಲ್ಲಿ ಈ ರಸ್ತೆಯಲ್ಲಿ ಸಂಚರಿಸುವುದು ಕಷ್ಟಸಾಧ್ಯವಾಗಿದ್ದು, ಮತ್ತೊಂದೆಡೆ ಈ ಮೋರಿಯಲ್ಲಿ ಯುಜಿಡಿ ನೀರು ಸಂಗ್ರಹವಾಗುತ್ತಿರುವುದರಿಂದ ಸೊಳ್ಳೆಗಳ ಕಾಟ ಹೆಚ್ಚಳವಾಗಿದೆ. ಡೆಂಗ್ಯೂ ಸೇರಿದಂತೆ ಇತರೆ ಸಾಕ್ರಮಿಕ ರೋಗಗಳ ಭೀತಿ ಮಹಿಳೆಯರು ಮತ್ತು ಮಕ್ಕಳನ್ನು ಕಾಡುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಈ ಮೋರಿ ಮುಂಭಾಗ ಖಾಸಗಿ ವ್ಯಕ್ತಿ ಜಮೀನಿದ್ದು, ಅವರು ಈ ಹಿಂದೆ ಮೋರಿಯಿಂದ ದೂರಕ್ಕೆ ತಡೆಗೋಡೆಗಳನ್ನು ಹಾಕಿಕೊಂಡಿದ್ದರು. ಆಗ ಮೋರಿಯಲ್ಲಿ ತುಂಬಿದ ಯುಜಿಡಿ ನೀರು ರಸ್ತೆ ಮೇಲೆ ಬರುವ ಬದಲು ಅವರ ಜಮೀನು ಮೂಲಕ ಹಾದು ಹೋಗುತ್ತಿತ್ತು. ಆದರೆ, ಕೆಲವು ತಿಂಗಳ ಹಿಂದೆ ಮೋರಿ ಪಕ್ಕದಲ್ಲಿಯೇ ತಡೆಗೋಡೆ ನಿರ್ಮಿಸಿದ ಪರಿಣಾಮ ನೀರು ರಸ್ತೆ ಮೇಲೆ ಹರಿದು ಬರುತ್ತಿದೆ ಎಂದರು.

ಯುಜಿಡಿ ನೀರು ಸರಾಗವಾಗಿ ಹೋಗದೆ ಇರುವುದರ ಬಗ್ಗೆ ಈ ಹಿಂದೆ ಪಾಲಿಕೆ ಮಾಜಿ ಸದಸ್ಯರ ಗಮನಕ್ಕೆ ತಂದಾಗ ಜಮೀನಿನ ಮಾಲೀಕರಾದ ಚಂದ್ರಶೇಖರ್ ಎಂಬುವರ ಜೊತೆ ಚರ್ಚಿಸಿ, ತಾತ್ಕಾಲಿಕವಾಗಿ ನೀರು ಹರಿದು ಹೋಗುವಂತೆ ಸಣ್ಣ ಪೈಪ್‌ಗಳನ್ನು ಅಳವಡಿಸಿದ ಪರಿಣಾಮ ಸ್ವಲ್ಪ ದಿನದ ಮಟ್ಟಿಗೆ ಈ ಸಮಸ್ಯೆ ಕಡಿಮೆ ಆಗಿತ್ತು. ಆದರೆ, ಈಗ ಮತ್ತಷ್ಟು ಹೆಚ್ಚಾಗುತ್ತಿದ್ದು, ಈ ರಸ್ತೆಯಲ್ಲಿ ಮೂಗು ಮುಚ್ಚಿಕೊಂಡು ಸಂಚರಿಸುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

> “ಈ ಬಗ್ಗೆ ಪಾಲಿಕೆಗೆ ನಿವಾಸಿಗಳು ಪತ್ರ ಬರೆದಾಗ ನಗರಪಾಲಿಕೆ ಅಧಿಕಾರಿಗಳು ಇದು ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಮುಡಾ ಸಂಪರ್ಕಿಸಿ ಎಂದು ಹೇಳಿ ಕಳುಹಿಸಿದರು. ತದನಂತರ ಮುಡಾ ಆಯುಕ್ತರಿಗೂ ಪತ್ರ ಬರೆದರೂ ಯಾವುದೇ ಪ್ರಯೋಜನವಾಗಿಲ್ಲ. ಅಧಿಕಾರಿಗಳು ಸಮಸ್ಯೆಯನ್ನು ಕೇಳುತ್ತಾರೆ. ಆದರೆ, ಪರಿಹರಿಸುವ ಗೋಜಿಗೆ ಹೋಗುತ್ತಿಲ್ಲ. –ಚೌಡಯ್ಯ, ನಿವಾಸಿ

> “ಮಳೆ ಬಂದ ಸಂದರ್ಭದಲ್ಲಿ ಯುಜಿಡಿ ನೀರು ಮನೆಗೆ ನುಗ್ಗುತ್ತಿದ್ದು, ಸಂಪ್‌ಗೂ ತುಂಬಿಕೊಳ್ಳುತ್ತಿದೆ. ಇದನ್ನು ಸ್ವಚ್ಛಗೊಳಿಸಲು ಹೋಗಿ ಕೈ ಮುರಿದುಕೊಂಡಿದ್ದೇನೆ. ಆದರೆ, ಅಧಿಕಾರಿಗಳು ನಮ್ಮ ಸಮಸ್ಯೆ ಬಗೆಹರಿಸುತ್ತಿಲ್ಲ.
> – ರಾಜೇಶ್ವರಿ, ನಿವಾಸಿ

> “ಜನರಿಗೆ ಒಳ್ಳೆದು ಆಗಲಿ ಎಂದು ನಮ್ಮ ಜಮೀನಿನಲ್ಲಿ ಯುಜಿಡಿ ನೀರು ಹರಿದು ಹೋಗಲು ನಾವೇ ಸ್ಥಳಾವಕಾಶ ನೀಡಿದ್ದೇವೆ. ಆದರೆ, ಅದು ತಾತ್ಕಾಲಿಕವಾಗಿ ನಿರ್ಮಾಣ ಮಾಡಿರುವುದರಿಂದ ಪದೇ ಪದೆ ನೀರು ಹೋಗುವುದು ಸ್ಥಗಿತವಾಗುತ್ತಿದೆ. ಇದರಿಂದ ನಮ್ಮ ಜಮೀನಿಗೆ ಯಾವುದೇ ತೊಂದರೆಯಾಗಿಲ್ಲ. ಮೂರು ವರ್ಷಗಳ ಹಿಂದೆ ಮುಡಾ ಅಧಿಕಾರಿಗಳು ಸಭೆ ಕರೆದು ತಮ್ಮ ಜಮೀನಿನ ಜಾಗ ಬಿಟ್ಟುಕೊಟ್ಟರೆ ಪರಿಹಾರವಾಗಿ 50:50 ಅನುಪಾತದಡಿ ಬೇರೆಡೆ ಸ್ಥಳ ಕಲ್ಪಿಸುವುದಾಗಿ ಹೇಳಿದ್ದರು. ನಾನು ಅದಕ್ಕೆ ಒಪ್ಪಿಕೊಂಡಿದ್ದೆ. ಆದರೆ, ಮುಂದೆ ಈ ಬಗ್ಗೆ ಯಾವುದೇ ಚರ್ಚೆಯಾಗಿಲ್ಲ. ನಾಳೆಯೇ ಬಂದು ಸರ್ವೆ ಮಾಡಿ ಅವರಿಗೆ ಬೇಕಿರುವಷ್ಟು ಜಾಗ ತೆಗೆದುಕೊಂಡು ನಮಗೆ ಪರಿಹಾರ ರೂಪದಲ್ಲಿ ಬದಲಿ ಸ್ಥಳ ಮಂಜೂರು ಮಾಡಿದರೆ ಅದಕ್ಕೆ ನನ್ನ ಸಮ್ಮತಿ ಇದೆ. ಜನರಿಗೆ ಒಳ್ಳೆದು ಆದರೆ ಸಾಕು. –ಚಂದ್ರಶೇಖರ್, ಜಮೀನಿನ ಮಾಲೀಕ

> “ಈ ಸಮಸ್ಯೆ ನನ್ನ ಗಮನದಲ್ಲಿದ್ದು, ಮುಡಾ ಅಧ್ಯಕ್ಷ ಮರಿಗೌಡ ಮತ್ತು ಮುಡಾ ಹಿಂದಿನ ಆಯುಕ್ತ ದಿನೇಶ್‌ಕುಮಾರ್ ಅವರನ್ನು ಸ್ಥಳಕ್ಕೆ ಕರೆದುಕೊಂಡು ಹೋಗಿ ಸ್ಥಳ ಪರಿಶೀಲನೆ ಮಾಡಲಾಗಿದೆ. ಅಲ್ಲಿನ ಜಮೀನನ್ನು ಮುಡಾ ಭೂಸ್ವಾಧೀನಪಡಿಸಿಕೊಂಡು ನಂತರ ಹೊಸದಾಗಿ ಯುಜಿಡಿ ಪೈಪ್‌ಲೈನ್ ಅಳವಡಿಸಬೇಕಿದೆ. ಈಗ ಮುಡಾ ಹಗರಣದಿಂದ ಯಾವುದೇ ಚಟುವಟಿಕೆಗಳು ನಡೆಯದ ಕಾರಣ ಮೂರು ತಿಂಗಳ ನಂತರ ಕ್ರಮ ಕೈಗೊಳ್ಳಲಾಗುತ್ತದೆ. ಸದ್ಯಕ್ಕೆ ತಾತ್ಕಾಲಿಕವಾಗಿ ಸಮಸ್ಯೆಯನ್ನು ಬಗೆಹರಿಸಲು ಕ್ರಮ ಕೈಗೊಳ್ಳುತ್ತೇನೆ. ಇದೇ ರೀತಿ ಕ್ಷೇತ್ರದಲ್ಲಿ ಯುಜಿಡಿ ಸಮಸ್ಯೆ ಸಾಕಷ್ಟಿದ್ದು, ಅದನ್ನು ಸರಿಪಡಿಸಲು ಯೋಜನೆ ರೂಪಿಸುತ್ತೇನೆ. –ಟಿ.ಎಸ್. ಶ್ರೀವತ್ಸ, ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ

ರಾಷ್ಟ್ರ ಪ್ರಶಸ್ತಿ ವಿಜೇತ ನಿರ್ಮಾಪಕ ಕೋಡಳ್ಳಿ ಶಿವರಾಮ್ ನಿಧನ



ಬೆಂಗಳೂರು: ಕನ್ನಡ ಚಿತ್ರರಂಗದಲ್ಲಿ ಸಾಕಷ್ಟು ಹೆಸರು ಮಾಡಿದ್ದ ಕೋಡಳ್ಳಿ ಶಿವರಾಮ್ ಸೆ.17ರ ರಾತ್ರಿ ನಿಧನ ಹೊಂದಿದ್ದಾರೆ. 1978ರಲ್ಲಿ 'ಗ್ರಹಣ' ಹೆಸರಿನ ಚಿತ್ರಕ್ಕೆ ಕಥೆ ಬರೆದಿದ್ದು ಕೋಡಳ್ಳಿ ಶಿವರಾಮ್. ಈ ಚಿತ್ರವನ್ನು ಟಿಎಸ್ ನಾಗಾಭರಣ ಅವರು ನಿರ್ದೇಶನ ಮಾಡಿದ್ದರು. ಈ ಸಿನಿಮಾಗೆ ರಾಷ್ಟ್ರ ಹಾಗೂ ರಾಜ್ಯ ಪ್ರಶಸ್ತಿ ಸಿಕ್ಕಿತ್ತು. ಕೋಡಳ್ಳಿ ಶಿವರಾಮ್ ಕನ್ನಡ ಚಿತ್ರರಂಗದಲ್ಲಿ ತಮ್ಮದೇ ಚಿತ್ರಗಳನ್ನು ನಿರ್ಮಿಸಿ, ನಿರ್ದೇಶಿಸಿ ಗಮನ ಸೆಳೆದಿದ್ದಾರೆ. ಅವರಿಗೆ ರಾಜ್ಯ ಹಾಗೂ ರಾಜ್ಯ, ರಾಷ್ಟ್ರ ಪ್ರಶಸ್ತಿಗಳು ಕೂಡ ಸಿಕ್ಕಿವೆ. ಪ್ರಶಸ್ತಿ ಆಯ್ಕೆ ಸಮಿತಿಯಲ್ಲೂ ಅವರು ಇದ್ದರು.

ಅ.3ರಿಂದ ಬೊಂಬೆ ಜೋಡಣೆ ಸ್ಪರ್ಧೆ

ಮೈಸೂರು,ಸೆ.18–ಮೈಸೂರಿನ ಬಡಗನಾಡು ಬಳಗದ ವತಿಯಿಂದ ಅ.3ರಿಂದ 12ರವರೆಗೆ ದಸರಾ ಹಬ್ಬದ ಅಂಗವಾಗಿ ಬೊಂಬೆ ಜೋಡಣೆ ಸ್ಪರ್ಧೆ ಆಯೋಜಿಸಲಾಗಿದೆ. ಭಾಗವಹಿಸಲು ಇಚ್ಛಿಸುವವರು ಸೆ.30ರೊಳಗೆ ತಮ್ಮ ಹೆಸರನ್ನು ನೋಂದಾಯಿಸಿ ಕೊಳ್ಳಬಹುದು. ಮಾಹಿತಿಗೆ ಮೊ.9480104969, 9845698495 ಸಂಪರ್ಕಿಸಿ.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಭೀಮಾ (ಕ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ರಾಯನ್ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಡಬ್ಬಲ್ ಇಸ್ಮಾರ್ಟ್ (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೀಮ (ಕ)	4 ಪ್ರದರ್ಶನಗಳು
ಗಾಯಿತ್ರಿ	
ರಾಣಿ (ಕ)	4 ಪ್ರದರ್ಶನಗಳು
ರಾಜಕಮಲ್	
ಎಆರ್‌ಎಂ (ತ)	4 ಪ್ರದರ್ಶನಗಳು
ಸಂಗಂ	
ಭೀಮಾ (ಕ)	4 ಪ್ರದರ್ಶನಗಳು
ಲಿಡೋ	
ಕಳಿಂಗ (ತೆ)	4 ಪ್ರದರ್ಶನಗಳು
ತಿಬ್ಬಾದೇವಿ	
ಸ್ತ್ರೀ-2 (ಹಿ)	4 ಪ್ರದರ್ಶನಗಳು
ಪ್ರಭಾ	
ಖೈದಿ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್

ದೂ : 4240422/4241800

ಸ್ಕ್ರೀನ್ 1	ದಿ ಬಕಿಂಗ್ಹ್ಯಾಮ್ ಮರ್ಡರ್ಸ್ (ಹಿಂ): ಬೆ.10.45ಕ್ಕೆ, ಶಾಲಿವಾಹನ ಶಕೆ (ಕ): ಮ.1.05ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಸಂ.4ಕ್ಕೆ, ಎಆರ್‌ಎಂ (3ಡಿ) (ಮ): ರಾ.7.05ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ರಾ.9.55ಕ್ಕೆ.
ಸ್ಕ್ರೀನ್ 2	ಕಾಲಾಪತ್ಥರ್ (ಕ): ಬೆ.11.10ಕ್ಕೆ, ಸ್ತ್ರೀ 2 (ಹಿಂ): ಮ.1.35ಕ್ಕೆ, ಕಲ್ಜಿಗ (ಕ): ಸಂ.4.35ಕ್ಕೆ, ದಿ ಬಕಿಂಗ್ಹ್ಯಾಮ್ ಮರ್ಡರ್ಸ್ (ಹಿಂ): ರಾ.7.05ಕ್ಕೆ, ಕೊಂಡಲ್ (ಮ): ರಾ.9.55ಕ್ಕೆ.
ಸ್ಕ್ರೀನ್ 3	ರಾಣಿ (ಕ): ಬೆ.10.45ಕ್ಕೆ, ಮ.1.45ಕ್ಕೆ, ಅನ್ನ (ಕ): ಸಂ.4.45ಕ್ಕೆ, ಲಾಫಿಂಗ್ ಬುದ್ಧ (ಕ): ರಾ.7.20ಕ್ಕೆ, ಕಿಷ್ಕಿಂಧಾ ಖಂಡಂ (ಮ): ರಾ.10ಕ್ಕೆ.
ಸ್ಕ್ರೀನ್ 4	ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಬೆ.10.15ಕ್ಕೆ, ಸಂ.6.45ಕ್ಕೆ, ರಾ.10.10ಕ್ಕೆ, ವಿಕಾಸಪರ್ವ (ಕ): ಮ.1.40ಕ್ಕೆ, ಉತ್ಸವಂ (ತೆ): ಸಂ.4ಕ್ಕೆ.

ಐನಾಕ್ಸ್ ಮೂವೀಸ್

INOX LIVE THE MOVIE

ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ

ದೂ : 0821–2973519

ಸ್ಕ್ರೀನ್ 1	ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಬೆ.10.25ಕ್ಕೆ, ರಾ.9.30ಕ್ಕೆ, ರಾಣಿ (ಕ): ಮ1.45ಕ್ಕೆ, ಕಾಲಾಪತ್ಥರ್ (ಕ): ಸಂ.4.35ಕ್ಕೆ, ಮಾತು ವದಲಾರ 2 (ತೆ): ಸಂ.6.50ಕ್ಕೆ.
ಸ್ಕ್ರೀನ್ 2	ಕಾಲಾಪತ್ಥರ್ (ಕ): ಬೆ.10.20ಕ್ಕೆ, ಇಬ್ಬನಿ ತಬ್ಬಿದ ಇಳೆಯಲಿ (ಕ): ಮ.12.35ಕ್ಕೆ, ಸಂ.6.45ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.3.40ಕ್ಕೆ, ಎಆರ್‌ಎಂ (3ಡಿ) (ಮ): ರಾ.9.50ಕ್ಕೆ.
ಸ್ಕ್ರೀನ್ 3	ಇಬ್ಬನಿ ತಬ್ಬಿದ ಇಳೆಯಲಿ (ಕ): ಬೆ.10.45ಕ್ಕೆ, ಎಆರ್‌ಎಂ (3ಡಿ) (ಮ): ಮ.3.20ಕ್ಕೆ, ದಿ ಗ್ರೇಟೆಸ್ಟ್ ಆಫ್ ಆಲ್ ಟೈಂ (ತ): ಸಂ.6.15ಕ್ಕೆ, ಕಳಿಂಗ (ತೆ): ರಾ.9.35ಕ್ಕೆ.
ಸ್ಕ್ರೀನ್ 4	ಶಾಲಿವಾಹನ ಶಕೆ (ಕ): ಬೆ.10.40ಕ್ಕೆ, ಕೃಷ್ಣಂ ಪ್ರಣಯ ಸಖಿ (ಕ): ಮ.1.20ಕ್ಕೆ, ಕಲ್ಜಿಗ (ಕ): ಸಂ.4.25ಕ್ಕೆ, ರಾಣಿ (ಕ): ಸಂ.6.40ಕ್ಕೆ, ಉತ್ಸವಂ (ತೆ): ರಾ.9.30ಕ್ಕೆ.

ಪಿವಿಆರ್ ಸಿನಿಮಾಸ್

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ರೇಸ್



5ನೇ ದಿನ, ಗುರುವಾರ, 19–9–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.30 ಗಂಟೆಗೆ

I. ಎಕ್ಲಿಪ್ ಪ್ಲೇಟ್–1200 ಮೀ. ರೇಟೆಡ್ 00 ರಿಂದ 25. (ಮೈಸೂರು ಬೇಸ್ಡ್ ಹಾರ್ಸ್). ಮಧ್ಯಾಹ್ನ 2.30ಕ್ಕೆ
1. ಎಕೋ ಸಿಸ್ಟಮ್ 2. ಸಿಟಿ ಆಫ್ ಹಸ್ಟಲ್ 3. ಅನುಸ್ತುಭ

II. ಕಾಸರಗೋಡು ಪ್ಲೇಟ್ –1800 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1. ಸೂಪರ್ ಮಾರ್ ವೇಲಾ 2. ಐರಿಷ್ ರಾಕ್‌ಸ್ಟಾರ್ 3. ಹಬೀಬ್ ಟಿ

III. ಬಿ.ಎ.ನಾಣಯ್ಯ ಮೆಮೋರಿಯಲ್ ಟ್ರೋಫಿ–1200 ಮೀ. ರೇಟೆಡ್ 60 ಮತ್ತು ಮೇಲ್ಪರ್ಗ. ಮಧ್ಯಾಹ್ನ 3.30ಕ್ಕೆ
1. ರಿಕಾರ್ಡೋ 2. ಆ್ಯಶ್ ಫಿಷಿಯಸ್ ಕ್ವೀನ್ 3. ಟ್ರಿಪಿ ಟಿಕಾ

IV. ಹೆಚ್.ಹೆಚ್.ಶ್ರೀ ಚಾಮರಾಜ ಒಡೆಯರ್ ಮೆಮೋರಿಯಲ್ ಟ್ರೋಫಿ –1200 ಮೀ. 3 ವರ್ಷ (ಟರ್ಮ್ಸ್). ಸಂ.4.00ಕ್ಕೆ
1. ಸೆಂಟೋರಿಯನ್ 2. ಮಾನೆ ಮ್ಯಾಜಿಕ್ 3. ರಾಯಲ್ ಡೆಕನ್

V. ಫ್ಲೀಟ್ ಇಂಡಿಯನ್ ಪ್ಲೇಟ್–1600 ಮೀ. ರೇಟೆಡ್ 40 ರಿಂದ 65. ಸಂ.4.30ಕ್ಕೆ
1. ಮಶ್ಹಾಲ್ ಟೌವ್ 2. ಫ್ರೀ ಟು ಪ್ಲೇ 3. ಕ್ರಿಮ್‌ಸನ್ ಫ್ಲೇಮ್

VI. ಪೇರ್ ವುಡ್ ಪ್ಲೇಟ್ –1400 ಮೀ. ರೇಟೆಡ್ 40 ರಿಂದ 65. (ಮೈಸೂರು ಬೇಸ್ಡ್ ಹಾರ್ಸ್). ಸಂ.5.00ಕ್ಕೆ
1. ರೋಮನ್ ರೀಜನ್ 2. ರೈಸ್ ಎ ಬಕ್ 3. ಹೀರೋಯಿಸಮ್

ದಿನದ ಅತ್ಯುತ್ತಮ	ಸೆಂಟೋರಿಯನ್
ಡಬ್ಬಲ್	ರಿಕಾರ್ಡೋ, ಮಶ್ಹಾಲ್ ಟೌವ್
ಜಾಕ್‌ಪಾಟ್	2, 3, 4, 5 ಮತ್ತು 6
ಮಿನಿ ಜಾಕ್‌ಪಾಟ್	3, 4, 5 ಮತ್ತು 6
I ಟ್ರಿಬಲ್	1, 2 ಮತ್ತು 3
II ಟ್ರಿಬಲ್	4, 5 ಮತ್ತು 6
ಎಕ್ಸ್‌ಆಕ್ಟ್	1 ರಿಂದ 6

ಟಿಪ್‌ಸ್ಟರ್ ಪಿಜಿಸಿ

ಮರದ ಅಂಬಾರಿ ಹೊತ್ತು ನಿರಾಯಾಸ ಹೆಜ್ಜೆ ಹಾಕಿದ ಅಭಿಮನ್ಯು

- 1,000ದಿಂದ 1,100 ಕೆಜಿ ಭಾರ ಹೊತ್ತು ನಿರಾಳವಾಗಿ ಹೆಜ್ಜೆ ಹಾಕಿದ ಕ್ಯಾಪ್ಟನ್
- ಕುಮ್ಕಿ ಆನೆಗಳಾಗಿ ಬಲಭಾಗದಲ್ಲಿ ಲಕ್ಷ್ಮಿ, ಎಡಭಾಗದಲ್ಲಿ ಹಿರಣ್ಯ ಹೆಜ್ಜೆ ಹಾಕಿದವು



ಅಭಿಮನ್ಯು ಆನೆ ಬುಧವಾರ ಮರದ ಅಂಬಾರಿ ಹೊತ್ತು ಹೆಜ್ಜೆ ಹಾಕಿತು.

ಮೈಸೂರು,ಸೆ.18(ಪಿಎಂ)– ಅದೇ ಗತ್ತು–ಗಮ್ಮತ್ತು ಮತ್ತು ಗಾಂಭೀರ್ಯದಿಂದ ನಿರಾಯಾಸವಾಗಿ ದಸರಾ ಗಜಪಡೆ ಕ್ಯಾಪ್ಟನ್ ಅಭಿಮನ್ಯು ಮರದ ಅಂಬಾರಿ ಹೊರುವ ತಾಲೀಮು ಪೂರ್ಣಗೊಳಿಸಿತು. ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೆ ನಿರಾಳವಾಗಿ ಬುಧವಾರ ಮರದ ಅಂಬಾರಿ ಹೊತ್ತು ಸಾಗುವ ಮೂಲಕ ವಿಜಯದಶಮಿಯ ಜಂಜೂಸವಾರಿಯಲ್ಲಿ 750 ಕೆಜಿ ತೂಕದ ಚಿನ್ನದ ಅಂಬಾರಿ ಹೊರಲು ಸಮರ್ಥ ನೆಂದು ಸಾಬೀತುಪಡಿಸಿತು.

ಅರಮನೆಯಿಂದ ಬನ್ನಿಮಂಟಪದ ಪಂಜಿನ ಕವಾಯತು ಮೈದಾನದ ಐದು ಕಿ.ಮೀ. ಅಂತರವನ್ನು ಸುಮಾರು ಒಂದೂವರೆ ಗಂಟೆ ಅವಧಿಯಲ್ಲಿ ತಲುಪುವ ಮೂಲಕ ಅಭಿಮನ್ಯು ತನ್ನ ದಸರಾ ಉಸ್ತುವಾರಿಗಳಲ್ಲಿ ವಿಶ್ವಾಸ ಮೂಡಿಸಿತು. ಮರದ ಅಂಬಾರಿ ಹೊತ್ತಿದ್ದ ಅಭಿಮನ್ಯು ಬಲಭಾಗದಲ್ಲಿ ಲಕ್ಷ್ಮಿ ಮತ್ತು ಎಡಭಾಗದಲ್ಲಿ ಹಿರಣ್ಯ ಕುಮ್ಕಿ ಆನೆಗಳಾಗಿ ಹೆಜ್ಜೆ ಹಾಕಿದವು. ದಸರಾ ಗಜಪಡೆಯ ಉಳಿದೆಲ್ಲಾ ಆನೆಗಳು ಈ ಮೂರು ಆನೆಗಳ ಮುಂದೆ ಹೆಜ್ಜೆ ಹಾಕಿ ಪಂಜಿನ ಕವಾಯತು ಮೈದಾನ ತಲುಪಿದವು. ವಿಜಯ ದಶಮಿಯ ಜಂಬೂಸವಾರಿ ಮಾದರಿಯಲ್ಲಿಯೇ ಇಂದು ಪೂರ್ಣ ಪ್ರಮಾಣದಲ್ಲಿ ತಾಲೀಮು ನಡೆಸಲಾಯಿತು.

ಚಾಪು, ಗಾದಿ ಮತ್ತು ನಮ್ದಾ ಸೇರಿದಂತೆ ಸುಮಾರು 180 ಕೆಜಿ, ಮರದ ಅಂಬಾರಿ ಸುಮಾರು 250 ಕೆಜಿ, ಸುಮಾರು 500 ಕೆಜಿ ಮರಳು ಬ್ಯಾಗ್‌ಗಳು, ಮಾವುತ ಮತ್ತು ಮತ್ತೊಬ್ಬ ಸಹಾಯಕ ಸೇರಿದಂತೆ 1,000ದಿಂದ 1,100 ಕೆಜಿ ಭಾರ ಹೊತ್ತು ಅಭಿಮನ್ಯು ಆರಾಮವಾಗಿ ಸಾಗಿತು. ಜಂಬೂ ಸವಾರಿ ದಿನದಂದು ಹೊರುವ ಚಿನ್ನದ ಅಂಬಾರಿ 750 ಕೆಜಿ ತೂಕವಿದ್ದರೆ, ಇಂದು ಅದಕ್ಕೂ ಅಧಿಕ ಪ್ರಮಾಣದ ತೂಕ ಹೊರಿಸಿ, ಅಭಿಮನ್ಯು ಅನ್ನು ಸಜ್ಜುಗೊಳಿಸಲಾಯಿತು.

ಮೊದಲಿಗೆ ಅರಮನೆಯ ಗಜಪಡೆ ಶಿಬಿರದ ಆವರಣದಲ್ಲಿ ಅಭಿಮನ್ಯುವಿಗೆ ಚಾಪು, ಗಾದಿ ಮತ್ತು ನಮ್ದಾ ಅಳವಡಿಸಲಾಯಿತು. ನಂತರ ಕುಮ್ಕಿ ಆನೆಗಳ ಜೊತೆಗೆ ಅರಮನೆಯ ರಾಜವಂಶಸ್ಥರ ನಿವಾಸದ ಎದುರು ಕರೆತರಲಾಯಿತು. ಬಳಿಕ ಮರದ ಅಂಬಾರಿಯನ್ನು ತಂದು ಪೂಜಾ ವಿಧಿವಿಧಾನ ನೆರವೇರಿಸಲಾಯಿತು. ನಂತರ ಇಡೀ ಗಜಪಡೆಯ ಎಲ್ಲಾ ಆನೆಗಳನ್ನು ಕರೆತಂದು ಅವುಗಳ ಹಣೆ ಮೇಲೆ ಸೇವಂತಿಗೆ ಹೂವು ಹಾಕಿ, ಬಾಳೆ ಹಣ್ಣು ಹಾಗೂ ಕಬ್ಬು ತಿನ್ನಿಸಲಾಯಿತು. ಈ ವೇಳೆ ಎಲ್ಲಾ ಆನೆಗಳು ಸೊಂಡಿಲು ಮೇಲೆತ್ತಿ ಗೀಳಿಡುವ ಮೂಲಕ ನೆರೆದಿದ್ದವರನ್ನು ಆಕರ್ಷಿಸಿದವು.

ಮರದ ಅಂಬಾರಿಯಲ್ಲಿ ಗಣಪತಿ ಮೂರ್ತಿ ಇಟ್ಟು ಅರ್ಚಕ ಪ್ರಹ್ಲಾದ್‌ರಾವ್, ಶಕ್ತಿ ಗಣಪತಿ ಪೂಜೆ ನೆರವೇರಿಸಿದರು. ಬಳಿಕ ಕ್ರೇನ್ ಮೂಲಕ ಮರದ ಅಂಬಾರಿಯನ್ನು ಮೇಲೆತ್ತಿ ಅಭಿಮನ್ಯು ಬೆನ್ನಿನ ಮೇಲೆ ಕೂರಿಸಿ ಬಿಗಿಯಾಗಿ ಹಗ್ಗಗಳಿಂದ ಕಟ್ಟಲಾಯಿತು. ನಂತರ ಸೂಕ್ತವಾಗಿ ಮರದ ಅಂಬಾರಿ ಕಟ್ಟಿರುವುದನ್ನು ಖಾತ್ರಿಪಡಿಸಿಕೊಂಡು ಹಿರಣ್ಯ ಹಾಗೂ ಲಕ್ಷ್ಮಿ ಆನೆಗಳನ್ನು ಅಭಿಮನ್ಯು ಪಕ್ಕದಲ್ಲಿ ನಿಲ್ಲಿಸಿ ತಾಲೀಮಿಗೆ ಚಾಲನೆ ನೀಡಲಾಯಿತು. ಬಳಿಕ ಅಭಿಮನ್ಯು ಮುಂದಕ್ಕೆ ಹೆಜ್ಜೆ ಹಾಕುತ್ತಿದ್ದರೆ, ನೆರೆದಿದ್ದವರು ಕ್ಯಾಮರಾ ಹಾಗೂ ಮೊಬೈಲ್ ಕ್ಯಾಮರಾಗಳಲ್ಲಿ ಫೋಟೋ ಕ್ಲಿಕಿಸಿ ಸಂಭ್ರಮಿಸಿದರು. ಅಭಿಮನ್ಯು ಸೇರಿದಂತೆ ಇಡೀ ಗಜಪಡೆಯನ್ನು ಅರಮನೆಯಲ್ಲಿ ಒಂದು ಸುತ್ತು ಹಾಕಿಸಲಾಯಿತು. ಸಂಜೆ 6ರ ವೇಳೆಗೆ ಅರಮನೆ ಉತ್ತರ ದ್ವಾರದ ಮೂಲಕ ನಿರ್ಗಮಿಸಿದ ಇಡೀ ಗಜಪಡೆ, ರಾತ್ರಿ 7.35ರ ವೇಳೆಗೆ ಬನ್ನಿಮಂಟಪದ ಪಂಜಿನ ಕವಾಯತು ಮೈದಾನ ತಲುಪಿದವು.

ಇದಕ್ಕೂ ಮುನ್ನ ಅರಮನೆ ಆವರಣದಲ್ಲಿ ಪೂಜಾ ವಿಧಿವಿಧಾನದ ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಮೈಸೂರು ಉಪಅರಣ್ಯ ಸಂರಕ್ಷಣಾಧಿಕಾರಿ (ವನ್ಯಜೀವಿ ವಿಭಾಗ) ಡಾ.ಐ.ಬಿ.ಪ್ರಭುಗೌಡ, ಪ್ರತಿವರ್ಷದಂತೆ ಈ ಬಾರಿಯೂ ದಸರಾದಲ್ಲಿ ಪಾಲ್ಗೊಳ್ಳುವ ಗಜಪಡೆಗೆ ವಿವಿಧ ಹಂತದಲ್ಲಿ ತಾಲೀಮು ನೀಡಲಾಗುತ್ತಿದೆ. ಅದೇ ರೀತಿ ಇಂದು ಮರದ ಅಂಬಾರಿ ಹೊರಿಸುವ ತಾಲೀಮು ನಡೆಯುತ್ತಿದ್ದು, ಅಂಬಾರಿ ತೂಕಕ್ಕೂ ಹೆಚ್ಚಿನ ಭಾರವನ್ನು ಇಂದು ಅಭಿಮನ್ಯುವಿಗೆ ಹೊರಿಸಲಾಗುತ್ತಿದೆ. ಅಭಿಮನ್ಯು ತುಂಬ ವರ್ಷದ ಅನುಭವ ಹೊಂದಿದೆ. ಪರ್ಯಾಯವಾಗಿ ಇನ್ನು ಐದು ಆನೆಗಳಿಗೂ ಮಾರನೆ ದಿನದಿಂದ ಮರದ ಅಂಬಾರಿ ಹೊರುವ ತರಬೇತಿ ನೀಡಲಾಗುವುದು. ಮಹೇಂದ್ರ, ಧನಂಜಯ, ಸುಗ್ರೀವ, ಗೋಪಿ ಮತ್ತು ಭೀಮ ಆನೆಗಳು ಮರದ ಅಂಬಾರಿ ಹೊರುವ ತರಬೇತಿ ಪಡೆಯುವ ಪರ್ಯಾಯ ಆನೆಗಳಾಗಿವೆ ಎಂದು ತಿಳಿಸಿದರು.

ನಿಶಾನೆ ಆನೆ ಹಾಗೂ ಶ್ರೀರಂಗಪಟ್ಟಣ ದಸರಾಗೆ ಕಳುಹಿಸುವ ಆನೆಗಳು ಯಾವುವೆಂದು ಎರಡು ದಿನಗಳಲ್ಲಿ ಪ್ರಕಟಿಸಲಾಗುವುದು. ಸಿಡಿಮದ್ದು ತಾಲೀಮು ಸಂಬಂಧ ಪೊಲೀಸ್ ಇಲಾಖೆಯಿಂದ ಸದ್ಯ ದಿನಾಂಕ ನಿಗದಿಯಾಗಿಲ್ಲ. ಅವರಿಂದ ದಿನಾಂಕ ನಿಗದಿಯಾಗುತ್ತಿದ್ದಂತೆ ನಾವು ಅಗತ್ಯ ಕ್ರಮ ವಹಿಸಲಿದ್ದೇವೆ ಎಂದು ಪ್ರಶ್ನೆಯೊಂದಕ್ಕೆ ಅವರು ಉತ್ತರಿಸಿದರು. ವಲಯ ಅರಣ್ಯಾಧಿಕಾರಿ ಸಂತೋಷ್ ಹೂಗಾರ್ ಸೇರಿದಂತೆ ಅರಣ್ಯ ಇಲಾಖೆ ಸಿಬ್ಬಂದಿ ಮತ್ತಿತರರು ಹಾಜರಿದ್ದರು.

ದಸರಾ ಚಲನಚಿತ್ರೋತ್ಸವಕ್ಕೆ 10 ಕಿರುಚಿತ್ರ ಆಯ್ಕೆ

ಮೈಸೂರು, ಸೆ.18(ಎಂಕೆ)– ಮೈಸೂರು ದಸರಾ ಚಲನಚಿತ್ರೋತ್ಸವ–2024ರ ಅಂಗವಾಗಿ ಅಂತಿಮವಾಗಿ ಚಿತ್ರಮಂದಿರದಲ್ಲಿ ಪ್ರದರ್ಶನಗೊಳ್ಳಲು 9 ಕಿರುಚಿತ್ರಗಳು ಸ್ಪರ್ಧೆಯಲ್ಲಿ ಆಯ್ಕೆಯಾಗಿವೆ. ಅಭಿಜಿತ್ ಪುರೋಹಿತ್ ನಿರ್ದೇಶನದ 'ಲಕ್ಷ್ಮಿ(ಕನ್ನಡ)', ಅಶೋಕ್ ರಾಜ್ ನಿರ್ದೇಶನದ 'ಯಾರೇ ನೀ ಯಾರೆ (ಕನ್ನಡ)', ಎಸ್.ಪಿ.ಪವನ್ ನಿರ್ದೇಶನದ 'ಅನ್ವಾಂಟೆಡ್ ಕಿಡ್(ಕನ್ನಡ)', ದಿಲೀಪ್ ಕುಮಾರ್ ನಿರ್ದೇಶನದ 'ಫ್ರೊಲಾರ್ (ಕನ್ನಡ)', ಸ್ಟ್ಯಾನಿ ಜೊಯ್ಸನ್ ನಿರ್ದೇಶನದ 'ತ್ರೀ ಕಾಲಂ (ಕನ್ನಡ)', ಕೃತಾರ್ಥ ಮಂಡೆಕುಟ್ಟಂಡ ನಿರ್ದೇಶನದ 'ವರ್ತ ಕಳ್ಳಿ(ಕನ್ನಡ)', ಸೂರಜ್ ಆರ್. ಶಂಕರ್ ನಿರ್ದೇಶನದ 'ತ್ರೀಸ್ ಆಫ್ ಡೆಸ್ಟಿನಿ.. ಎ ಹ್ಯಾಪಿ ಡಿಸ್ಕವರಿ(ಕನ್ನಡ)', ಜೀವನ್ ಗೌಡ ನಿರ್ದೇಶನದ 'ರಾಜ್ ಅಮ್ಮ (ಕನ್ನಡ)', ರಘು ನಾಯಕ್ ನಿರ್ದೇಶನದ 'ಷಟ್ಪಥ(ಕನ್ನಡ)' ಹಾಗೂ ಕನಕ ರಾಜ್ ಬಾಲಸುಬ್ರಮಣ್ಯಂ ನಿರ್ದೇಶನದ '99'(ತಮಿಳು) ಚಿತ್ರಗಳು ಪ್ರದರ್ಶನಗೊಳ್ಳಲಿದೆ ಎಂದು ದಸರಾ ಚಲನಚಿತ್ರ ಉಪ ಸಮಿತಿಯ ಕಾರ್ಯದರ್ಶಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಟಿ.ಕೆ.ಹರೀಶ್ ತಿಳಿಸಿದ್ದಾರೆ.

ಬಿಜೆಪಿ ಬಲವರ್ಧನೆಗೆ ಎನ್.ಆರ್.ಕ್ಷೇತ್ರದ ಕಾರ್ಯಕರ್ತರ ಕೊಡುಗೆಯೂ ಇರಲಿ

ಮಾಜಿ ಮೇಯರ್ ಸಂದೇಶ್ ಸ್ವಾಮಿ ಕರೆ



ಬಿಜೆಪಿ ಸದಸ್ಯತ್ವ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಎನ್.ಆರ್. ವಿಧಾನಸಭಾ ಕ್ಷೇತ್ರದ ಪ್ರಮುಖರ ಸಭೆಯಲ್ಲಿ ಮಾಜಿ ಮೇಯರ್ ಸಂದೇಶಸ್ವಾಮಿ ಮಾತನಾಡಿದರು.

ಮೈಸೂರು, ಸೆ.18(ಎಸ್‌ಪಿಎನ್)– ರಾಷ್ಟ್ರೀಯ ವಿಚಾರಧಾರೆ, ತತ್ವ–ಸಿದ್ಧಾಂತದ ಮೇಲೆ ನರಸಿಂಹರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈ ಬಾರಿ ಅತೀ ಹೆಚ್ಚು ಸದಸ್ಯತ್ವ ನೋಂದಣಿ ಮಾಡಿಸಲು ಕಾರ್ಯಕರ್ತರು ಮುಂದಾಗಬೇಕು ಎಂದು ಮಾಜಿ ಮೇಯರ್ ಸಂದೇಶಸ್ವಾಮಿ ಮನವಿ ಮಾಡಿದರು.

ಮೈಸೂರಿನ ನಜರ್‌ಬಾದ್‌ನಲ್ಲಿರುವ ವಿ.ಕೆ.ಫಂಕ್ಷನ್ ಹಾಲ್‌ನಲ್ಲಿ ಬಿಜೆಪಿ ಮೈಸೂರು ನಗರ ಘಟಕದ ವತಿಯಿಂದ ಸದಸ್ಯತ್ವ ಅಭಿಯಾನದ ಅಂಗವಾಗಿ ಆಯೋಜಿಸಿದ್ದ ಎನ್.ಆರ್. ವಿಧಾನ ಸಭಾ ಕ್ಷೇತ್ರದ ಪ್ರಮುಖರ ಸಭೆಯನ್ನುದ್ದೇಶಿಸಿ ಮಾತನಾಡಿದರು.

ದೇಶದಲ್ಲೇ ಬಿಜೆಪಿ ಅತಿ ಹೆಚ್ಚು ಸದಸ್ಯರನ್ನು ಹೊಂದಿರುವ ಪಕ್ಷ. ಪ್ರತಿ ಐದು ವರ್ಷಕ್ಕೊಮ್ಮೆ ಸದಸ್ಯತ್ವ ನವೀಕರಣ ಹಾಗೂ ಹೊಸ ಸದಸ್ಯರ ನೋಂದಣಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು. ಹಾಗಾಗಿ ಈ ಬಾರಿ ಎನ್.ಆರ್.ಕ್ಷೇತ್ರದಲ್ಲಿ ಅತಿ ಹೆಚ್ಚು ಸದಸ್ಯರನ್ನು ನೋಂದಣಿ ಮಾಡಿಸುವ ಮೂಲಕ ಸಂಘಟನೆಗೆ ಪ್ರತಿಯೊಬ್ಬರು ಆದ್ಯತೆ ನೀಡಬೇಕು ಎಂದರು.

2018ರ ವಿಧಾನ ಸಭೆ ಚುನಾವಣೆಯಲ್ಲಿ 44 ಸಾವಿರ ಮತಗಳು. 2023ರ ಚುನಾವಣೆಯಲ್ಲಿ 54 ಸಾವಿರ ಮತ ಹಾಗೂ 2024ರ ಲೋಕಸಭಾ ಚುನಾವಣೆಯಲ್ಲಿ 64 ಸಾವಿರ ಮತಗಳು ಎನ್.ಆರ್.ಕ್ಷೇತ್ರದಲ್ಲಿ ನಮ್ಮ ಪಕ್ಷಕ್ಕೆ ಬಂದಿದೆ. ದಿನದಿಂದ ದಿನಕ್ಕೆ ಎನ್.ಆರ್.ಕ್ಷೇತ್ರದಲ್ಲಿ ಪಕ್ಷ ಬಲವರ್ಧನೆಯಾಗುತ್ತಿದೆ. ಇದಕ್ಕೆ ಪಕ್ಷದ ಕಾರ್ಯಕರ್ತರೇ ಕಾರಣ ಎಂದರು.

ಎನ್.ಆರ್.ಕ್ಷೇತ್ರದ ವ್ಯಾಪ್ತಿಯಲ್ಲಿ ಹಿಂದೂಗಳ ಬದುಕು ದಿನೇದಿನೆ ನರಕವಾಗುತ್ತಿದೆ. ಇದರಿಂದ ಮುಕ್ತಿ ಹೊಂದಬೇಕಾದರೆ, ಬಿಜೆಪಿ ಸಂಘಟನೆಯಾಗಬೇಕು. ಇಲ್ಲಿನ ಎಲ್ಲಾ ಮುಖಂಡರು, ತಮ್ಮ ಸದಸ್ಯತ್ವವನ್ನು ನವೀಕರಣ ಮಾಡಿಕೊಂಡು ನಂತರ ಹೊಸಬರಿಗೆ ಸದಸ್ಯತ್ವ ನೀಡಬೇಕು. ಈ ಬಾರಿ ದೇಶದಲ್ಲಿ 18 ಕೋಟಿ ಸದಸ್ಯತ್ವ ನೀಡುವ ಗುರಿಯನ್ನು ಪಕ್ಷ ಹೊಂದಿದ್ದು, ಇದರ ಯಶಸ್ಸಿಗೆ ಎನ್.ಆರ್.ಕ್ಷೇತ್ರದ ಕಾರ್ಯಕರ್ತರ ಕೊಡುಗೆಯೂ ಸೇರಬೇಕು ಎಂದು ತಿಳಿಸಿದರು. ಬಿಜೆಪಿ ನಗರಾಧ್ಯಕ್ಷ ಎಲ್.ನಾಗೇಂದ್ರ ಮಾತನಾಡಿ, ರಾಜ್ಯದಲ್ಲಿ ಪಕ್ಷ ಸದೃಢವಾಗಿ ಬೆಳೆಯಬೇಕಾದರೆ, ಮೈಸೂರು ನಗರದ ಚಾಮರಾಜ, ಕೃಷ್ಣರಾಜ ಹಾಗೂ ಎನ್.ಆರ್.ಕ್ಷೇತ್ರದಲ್ಲಿ ಪಕ್ಷವನ್ನು ಬೂತ್‌ಮಟ್ಟದಲ್ಲಿ ಸಂಘಟಿಸಬೇಕು. ಇದಕ್ಕೆ ಪ್ರತಿ ಬೂತ್‌ನಿಂದ 400ಕ್ಕೂ ಹೊಸ ಸದಸ್ಯರ ನೋಂದಣಿ ಮಾಡಿಸುವಂತೆ ಕಾರ್ಯಕರ್ತರಿಗೆ ಕರೆ ನೀಡಿದರು.

ಅಧಿಕಾರ ಇದ್ದಾಗ ನಾವು ಬೇಡವೇ: 2008 ಮತ್ತು 2018ರಲ್ಲಿ ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದಾಗ ಎನ್.ಆರ್.ಕ್ಷೇತ್ರದ ಕಾರ್ಯಕರ್ತರನ್ನು ಮರೆಯುತ್ತೀರಿ, ಪಕ್ಷ ಅಧಿಕಾರದಲ್ಲಿ ಇಲ್ಲದಾಗ ಸಂಘಟನೆ ಮಾಡುವಂತೆ ಕಾರ್ಯಕರ್ತರಿಗೆ ಸೂಚಿಸುತ್ತೀರಿ. ಅಧಿಕಾರ ಇದ್ದಾಗ ನಮ್ಮನ್ನೂ ಪರಿಗಣಿಸಬೇಕೆಂದು ಕಾರ್ಯಕರ್ತರೊಬ್ಬರು ನಗರ ಘಟಕದ ಅಧ್ಯಕ್ಷ ಎಲ್. ನಾಗೇಂದ್ರರಲ್ಲಿ ಮನವಿ ಮಾಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಅವರು, ಮುಂದಿನ ದಿನಗಳಲ್ಲಿ ಪಕ್ಷ ಅಧಿಕಾರಕ್ಕೆ ಬಂದರೆ, ಎನ್.ಆರ್.ಕ್ಷೇತ್ರದ ಕಾರ್ಯಕರ್ತರಿಗೂ ಆದ್ಯತೆ ನೀಡಲಾಗುವುದು ಎಂದು ಭರವಸೆ ನೀಡಿದರು.

ಸಭೆಯಲ್ಲಿ ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಮಾಜಿ ಅಧ್ಯಕ್ಷ ಬಿ.ಪಿ.ಮಂಜುನಾಥ್, ಬಿಜೆಪಿ ಮುಖಂಡರಾದ ಡಾ.ಅನಿಲ್ ಥಾಮಸ್, ಮಂಜುನಾಥ್, ನಗರ ಪ್ರಧಾನ ಕಾರ್ಯದರ್ಶಿಗಳಾದ ಹೆಚ್.ಜಿ.ಗಿರಿಧರ್, ಸು.ಮುರುಳಿ, ಮಂಜು.ಸಿ.ಗೌಡ, ಸ್ಮಾರ್ಟ್ ಮಂಜು, ಎಸ್.ಆನಂದ್ ಸೇರಿದಂತೆ ಇತರಿದ್ದರು.

ಮೈಸೂರು ಮಿತ್ರ 45
ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
–ಜಾಹೀರಾತು ವ್ಯವಸ್ಥಾಪಕರು

ಮಾನ್ಯ ಉಪವಿಭಾಗಾಧಿಕಾರಿಗಳ ನ್ಯಾಯಾಲಯ, ಮೈಸೂರು ಜಿಲ್ಲೆ.
ಆರ್.ಎ.ಸಂಖ್ಯೆ : 136/2024

ಮೇಲ್ಮನವಿದಾರರು : ಶ್ರೀ. ಶ್ರೀಕಾಂತ್ ದಾಸ್ ಬಿನ್ ಲೇಟ್ ಶ್ರೀ. ಅಶ್ವಥ್ ನಾರಾಯಣ ರಾವ್, ವಯಸ್ಸು 47 ವರ್ಷ, ಮಾಲೀಕರು, ಮೆ. ಸಾಹಾ ಡೆವಲಪರ್ಸ್ ಅಂಡ್ ಪ್ರಮೋಟರ್ಸ್, ನಂಬರ್ 1112, 2ನೇ ಫ್ಲೋರ್, ಜಿ ಅಂಡ್ ಹೆಚ್ ಬ್ಲಾಕ್, ಗಗನಚುಂಬಿ ಜೋಡಿ ರಸ್ತೆ, ಕುವೆಂಪುನಗರ, ಮೈಸೂರು.

ವಿರುದ್ಧ

ಎದುರುದಾರರು : ತಹಶೀಲ್ದಾರ್ ಮತ್ತು ಇತರರು
2. ಶ್ರೀ. ಬಸವರಾಜು ಬಿನ್ ಲೇಟ್ ರಂಗಯ್ಯ, ಮನೆ ನಂಬರ್ 1321, 1 ನೇ ಕ್ರಾಸ್, ಕುರುಬಾರಹಳ್ಳಿ ಗ್ರಾಮ, ಸಿದ್ಧಾರ್ಥನಗರ, ಮೈಸೂರು ಸಿಟಿ.
3. ಶ್ರೀಮತಿ ಪ್ರಮೀಳ ಎಂ. ಕೋಂ ಲೇಟ್ ಟಿ ಶಿವಣ್ಣ, ಮನೆ ನಂಬರ್ 40 ಎ, 7ನೇ ಕ್ರಾಸ್, ಶಿವಾನಂದ ನಗರ, ನಾಗರಬಾವಿ, ಬೆಂಗಳೂರು.
4. ಶ್ರೀಮತಿ ಅನುಷ ಬಿನ್ ಲೇಟ್ ಟಿ ಶಿವಣ್ಣ, ಮನೆ ನಂಬರ್ 40ಎ, 7ನೇ ಕ್ರಾಸ್, ಶಿವಾನಂದ ನಗರ, ನಾಗರಬಾವಿ, ಬೆಂಗಳೂರು.

2 ರಿಂದ 4 ನೇ ಎದುರುದಾರರಿಗೆ ನೋಟೀಸು

ಮೇಲ್ಮನವಿದಾರರು ಮೇಲ್ಕಂಡ ಅಪೀಲನ್ನು ಮೈಸೂರು ತಾಲ್ಲೂಕು, ವರುಣಾ ಹೋಬಳಿ, ಜಂತಗಳ್ಳಿ ಗ್ರಾಮದ ಸರ್ವೆ ನಂಬರ್ 127/1 ರ 01 ಎಕರೆ ವಿಚಾರವಾಗಿ ಸಲ್ಲಿಸಿದ್ದು ಸದರಿ ಅಪೀಲು **ದಿನಾಂಕ 25/09/2024** ರಂದು ಇರುತ್ತದೆ ಸದರಿ ದಿನಾಂಕದಂದು ಮೇಲ್ಕಂಡ 2 ರಿಂದ 4 ನೇ ಎದುರುದಾರರು **ದಿನಾಂಕ 25/09/2024 ರಂದು ಮಧ್ಯಾಹ್ನ 3 ಗಂಟೆಗೆ** ನ್ಯಾಯಾಲಯಕ್ಕೆ ಖುದ್ದಾಗಿ ಅಥವಾ ಅವರ ವಕೀಲರ ಮೂಲಕ ಹಾಜರಾಗತಕ್ಕದ್ದು ಮತ್ತು ಅವರ ತಕರಾರು ಇದ್ದ ಪಕ್ಷದಲ್ಲಿ ಸಲ್ಲಿಸತಕ್ಕದ್ದು ಇಲ್ಲವಾದ ಪಕ್ಷದಲ್ಲಿ ನಿಮ್ಮ ಅನುಪಸ್ಥಿತಿಯಲ್ಲಿ ಮೇಲ್ಕಂಡ ಅಪೀಲನ್ನು ತೀರ್ಮಾನ ಮಾಡಲಾಗುವುದು.

ಮೇಲ್ಮನವಿದಾರರ ಪರ ವಕೀಲರು
ಸುಬ್ರಮಣ್ಯ ಎಸ್. ಉಡುಪಿ, ಬಿ.ಎ., ಎಲ್ಎಲ್.ಬಿ.
ವಕೀಲರು, (KAR 1933/2017)
1317, 1ನೇ ಮಹಡಿ, 5ನೇ ಅಡ್ಡ ರಸ್ತೆ, ಲಲಿತಾದ್ರಿ ರಸ್ತೆ, ಕುವೆಂಪು ನಗರ, ಮೈಸೂರು– 570023
ಮೊಬೈಲ್ ನಂಬರ್. 9538988586
ಸ್ಥಳ : ಮೈಸೂರು
ದಿನಾಂಕ : 17/09/2024

ತಹಶೀಲ್ದಾರ್
ಉಪವಿಭಾಗಾಧಿಕಾರಿಗಳ ಕಛೇರಿ
ಮೈಸೂರು ಉಪವಿಭಾಗ, ಮೈಸೂರು

ಹಾಸನ ನಿರ್ಮಿತಿ ಕೇಂದ್ರ
ಪ್ಲಾಟ್ ನಂ: 3 & 4, ಕೈಗಾರಿಕಾ ಪ್ರದೇಶ, ಬಿ.ಕಾಟೀಹಳ್ಳಿ, ಹಾಸನ–573201

ಪ್ರಕಟಣೆ

ಹಾಸನ ನಿರ್ಮಿತಿ ಕೇಂದ್ರದಲ್ಲಿ ಕಾಮಗಾರಿಗಳನ್ನು ನಿರ್ವಹಿಸಲು ನಿರ್ಮಿತಿ ಕೇಂದ್ರದ Empanel ಪಟ್ಟಿಯಲ್ಲಿ ನೊಂದಣಿಯಾಗಲು ಆಸಕ್ತಿಯುಳ್ಳ ನೊಂದಾಯಿತ ಸಾಮಗ್ರಿ ಸರಬರಾಜುದಾರರು (GST Dealers) ಹಾಗು ಕೂಲಿಗಾರರು (Labour Group Leaders) ರನ್ನು ಆಹ್ವಾನಿಸಲಾಗಿದೆ. ಪ್ರಕಟಣೆ ನೀಡಿದ ದಿನದಿಂದ 15 ದಿನಗಳವರೆಗೆ ಕಾಲಾವಕಾಶ ನೀಡಲಾಗಿದೆ. ಸದರಿ ಸಾಮಗ್ರಿ ಹಾಗು ಕೂಲಿಗಾರರ ದರಪಟ್ಟಿಯನ್ನು ನೀಡುವ ನಮೂನೆಯನ್ನು ಹಾಗು ಹೆಚ್ಚಿನ ವಿವರಗಳನ್ನು ಕಛೇರಿ ಸಮಯದಲ್ಲಿ ಈ ಕೆಳಕಂಡ ವಿಳಾಸದಲ್ಲಿ ಪಡೆಯಬಹುದಾಗಿದೆ. ನೊಂದಣಿ ಶುಲ್ಕ: ರೂ. 5,000–00 (ರೂ. ಐದು ಸಾವಿರಗಳು ಮಾತ್ರ) ಕಛೇರಿ ವಿಳಾಸ:ಹಾಸನ ನಿರ್ಮಿತಿ ಕೇಂದ್ರ, ಪ್ಲಾಟ್ ಸಂಖ್ಯೆ: 3 & 4, ಕೈಗಾರಿಕಾ ಪ್ರದೇಶ, ಬಿ.ಕಾಟೀಹಳ್ಳಿ, ಹಾಸನ–573201 ಸಮಯ: ಬೆಳಗ್ಗೆ 10.00 ರಿಂದ ಸಂಜೆ 5.30 ರವರೆಗೆ.

ಸಹಿ–ವಿಶೇಷಾಧಿಕಾರಿಗಳು, ಹಾಸನ ನಿರ್ಮಿತಿ ಕೇಂದ್ರ, ಹಾಸನ

ವಾಸಾಸಂಇ/ಹಿಸನಿ/ಹಾಸನ/453/ಕೆಎಸ್‌ಎಂಸಿಎ/2024–25